ಸಂಪುಟ: 21, ಸಂಚಿಕೆ: 141, ಪುಟಗಳು: 8, ಗುರುವಾರ, 29 ಫೆಬ್ರವರಿ 2024 RNI NO. KARKAN/2002/08054
epaper: www.sanjemugilu.com

ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ



ವೇಣು ಸಾರಥ್ಯದಲ್ಲಿ...

**ಸುಭಾಷಿತ**

ಸ್ವಲ್ಪ ಉಳ್ಳವನು ಬಡವನಲ್ಲ;
ಇನ್ನೂ ಬೇಕೆನ್ನುವವನು ಬಡವ

। ಸೆಬೇಕಾ

## ಪಂಚಾಂಗ

(ಗುರುವಾರ 29, ಫೆಬ್ರವರಿ -2024)

- ಸಂವತ್ಸರ- ಶೋಭಕೃತ್, ಋತು-ಶಿಶಿರ
- ಅಯನ-ಉತ್ತರಾಯಣ, ಮಾಸ- ಮಾಘ
- ಪಕ್ಷ- ಕೃಷ್ಣ, ತಿಥಿ- ನವಮಿ
- ನಕ್ಷತ್ರ- ಹುಬ್ಬಾ
- ರಾಹುಕಾಲ- 01:57 PM 03:28 PM
- ಗುಳಿಕಕಾಲ - 09:24 AM 10:55 AM
- ಯಮಗಂಡಕಾಲ - 06:22 AM 07:53 AM

# ಬಿಜೆಪಿಗೆ ಪಾಕಿಸ್ತಾನ ಶತ್ರು ದೇಶವೇ ಹೊರತು ನಮಗಲ್ಲ



**ಬೆಂಗಳೂರು:** ಬಿಜೆಪಿಗೆ ಪಾಕಿಸ್ತಾನ ಶತ್ರು ರಾಷ್ಟ್ರ ಇರಬಹುದು. ಆದರೆ, ನಮಗಲ್ಲ ಎಂದು ಕಾಂಗ್ರೆಸ್ ಎಂಎಲ್ ಸಿ ಬಿಕೆ ಹರಿಪ್ರಸಾದ್ ಹೇಳಿದ್ದಾರೆ. ಅಂದಹಾಗೆ, ಇವರದ್ದೇ ಪಕ್ಷದವರಾದ ಮಾಜಿ ಪ್ರಧಾನಿ ದಿವಂಗತ ಇಂದಿರಾಗಾಂಧಿ ಅವರು ಪಾಕಿಸ್ತಾನದ ವಿರುದ್ಧ ಯುದ್ಧ ಮಾಡಿದ್ದರು. ಮತ್ತೆ, ಪಾಕ್ ವಿರುದ್ಧ ಯುದ್ಧ ಮಾಡಿದ ಇಂದಿರಾಗಾಂಧಿ ಪಕ್ಷದವರು ನಾವು ಎಂದು ಶಾಸಕ ಎಸ್ ಎನ್ ನಾರಾಯಣಸ್ವಾಮಿ ಅವರು ವಿಧಾನಸೌಧದಲ್ಲಿ ಪಾಕ್ ಪರ ಘೋಷಣೆ ವಿಚಾರವಾಗಿ ಸದನದಲ್ಲಿ ನಡೆದ ಚರ್ಚೆ ವೇಳೆ ಎದೆ ತಟ್ಟಿಕೊಂಡು ಹೇಳಿದ್ದರು. ಗೃಹ ಸಚಿವ ಪರಮೇಶ್ವರ್ ಕೂಡ ಪಾಕ್ ಯುದ್ಧದ ಬಗ್ಗೆ ಪ್ರಸ್ತಾಪಿಸಿದ್ದರು.

ವಿಧಾನ ಪರಿಷತ್ ಕಪಾಲದಲ್ಲಿ ವಿಧಾನಸೌಧದಲ್ಲಿ ಪಾಕಿಸ್ತಾನ ಪರ ಘೋಷಣೆ ಕೂಗಿದ ಆರೋಪದ ಮೇಲಿನ ಚರ್ಚೆಯ ವೇಳೆ ಮಾತನಾಡಿದ ಬಿಕೆ ಹರಿಪ್ರಸಾದ್ ಅವರು ಈ ವಿವಾದಾತ್ಮಕ ಹೇಳಿಕೆ ನೀಡಿದ್ದಾರೆ. ಕಾಂಗ್ರೆಸ್‌ಗೆ ಪಾಕಿಸ್ತಾನ ಶತ್ರು ರಾಷ್ಟ್ರವಲ್ಲ ಎಂದು ಹೇಳಿದ್ದಾರೆ.

ಸೋಮವಾರ ನಡೆದ ರಾಜ್ಯಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ನಾಯಕ ನಾಸೀರ್ ಹುಸೇನ್ ವಿಜಯಶಾಲಿ ಎಂದು ಘೋಷಿಸಿದ ನಂತರ ವಿಧಾನಸೌಧದಲ್ಲಿ ಜಮಾಯಿಸಿದ ಕಾಂಗ್ರೆಸ್ ಕಾರ್ಯಕರ್ತರಲ್ಲಿ ಒಬ್ಬ ಪಾಕಿಸ್ತಾನದ ಪರ ಘೋಷಣೆಗಳನ್ನು ಕೂಗಿದ್ದ. ಈ ಸಂಬಂಧ ಆರೋಪಿ ವಿರುದ್ಧ ಕ್ರಮಕ್ಕೆ ಒತ್ತಾಯಿಸಿ ಬಿಜೆಪಿ ಬುಧವಾರ ಉಭಯ ಸದನಗಳಲ್ಲಿ ಗದ್ದಲ ಪುಟ 2

### ಪಾಕಿಸ್ತಾನ ಶತ್ರು ರಾಷ್ಟ್ರವಲ್ಲವೆಂಬ ಬಿಕೆ ಹರಿಪ್ರಸಾದ್ ಹೇಳಿಕೆ

# ಶೋಭಾ ಕರಂದ್ಲಾಜೆ ಆಕ್ರೋಶ



**ಬೆಂಗಳೂರು:** ಪಾಕಿಸ್ತಾನ ಶತ್ರು ರಾಷ್ಟ್ರವಲ್ಲ ಎಂಬ ಕಾಂಗ್ರೆಸ್ ನಾಯಕ ಬಿಕೆ ಹರಿಪ್ರಸಾದ್ ಹೇಳಿಕೆಗೆ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಹರಿಪ್ರಸಾದ್ ಹೇಳಿಕೆ ಸಂಪೂರ್ಣ ನಾಚಿಕೆಗೇಡು ಎಂದು ಅವರು ಟೀಕಿಸಿದ್ದಾರೆ. ಕಾಂಗ್ರೆಸ್ ಎಂಎಲ್ ಸಿ ಹೇಳಿಕೆಗೆ ಆಕ್ಷೇಪ ವ್ಯಕ್ತಪಡಿಸಿ ಸಾಮಾಜಿಕ ಮಾಧ್ಯಮ ಎಕ್ಸ್ ನಲ್ಲಿ ಸಂದೇಶ ಪ್ರಕಟಿಸಿರುವ ಅವರು, ಪ್ರಸಾದ್ ಅವರ ಈ ಹೇಳಿಕೆಯಿಂದ ಕಾಂಗ್ರೆಸ್ ಪಕ್ಷದ ನಿಜ ಬಣ್ಣ ಬದಲಾಗಿದೆ ಎಂದಿದ್ದಾರೆ.

ಶತ್ರು ರಾಷ್ಟ್ರ ಪಾಕಿಸ್ತಾನವು ಭಾರತದ ವಿರುದ್ಧ 4 ಯುದ್ಧಗಳನ್ನು ಮಾಡಿದೆ. ಕದನ ವಿರಾಮ ಉಲ್ಲಂಘನೆಯಲ್ಲಿ ಸದಾ ತೊಡಗಿಕೊಂಡಿದ್ದು, ನಮ್ಮ ಯೋಧರ ಮೇಲೆ ದಾಳಿ ನಡೆಸುತ್ತಿದೆ. ಕಾಶ್ಮೀರ ವಿಚಾರದಲ್ಲಿ ಪಟ್ಟುಬಿಡದೆ ಹಟ ಸಾಧಿಸುತ್ತಿದೆ. ಭಯೋತ್ಪಾದನೆಗೆ ನಿರಂತರವಾಗಿ ಕುಮ್ಮಕ್ಕು ನೀಡುತ್ತಿದೆ. ಇಷ್ಟಾಗಿಯೂ ಬಿಕೆ ಹರಿಪ್ರಸಾದ್ ಅವರು ಪಾಕಿಸ್ತಾನವನ್ನು ಶತ್ರು ರಾಷ್ಟ್ರವೆಂದು ಪರಿಗಣಿಸುವುದಿಲ್ಲ. ಇದು ಸಂಪೂರ್ಣವಾಗಿ ನಾಚಿಕೆಗೇಡಿನ ಸಂಗತಿ ಎಂದು ಶೋಭಾ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಪಾಕಿಸ್ತಾನದ ಬೆದರಿಕೆ ಮತ್ತು ಆಕ್ರಮಣದಿಂದ ಭಾರತ ಮತ್ತು ಅದರ ಸಾರ್ವಭೌಮತ್ವವನ್ನು ರಕ್ಷಿಸಲು ಮಾಡಬೇಕಾಗಿ ಬಂದಿದ್ದ ತ್ಯಾಗ ಅಷ್ಟಿಷ್ಟಲ್ಲ. ಅದಕ್ಕಾಗಿ ತ್ಯಾಗ ಮಾಡಿದವರನ್ನು ಕೀಳಾಗಿ ಕಾಣುವುದು ಬೇಡ. ನಮ್ಮ ನೆಮ್ಮದಿಯ ನಿದ್ದೆಗೆ ಆ ಧೈರ್ಯಶಾಲಿ ಆತ್ಮಗಳ ತ್ಯಾಗ ಕಾರಣವಾಗಿದೆ. ಇದೀಗ ಮುಖವಾಡ ಕಳಚಿದೆ. ಕಾಂಗ್ರೆಸ್‌ನ ನಿಜವಾದ ಬಣ್ಣ ಬಯಲಾಗಿದೆ ಎಂದು ಶೋಭಾ ಹೇಳಿದ್ದಾರೆ. ಪುಟ 2

## ಸಂಕ್ಷಿಪ್ತ ಸುದ್ದಿ

### ಮಹಿಳೆಯನ್ನು ವಿವಸ್ತ್ರಗೊಳಿಸಿ ಮಾರಣಾಂತಿಕ ಹಲ್ಲೆ ಆರೋಪ



**ಬೆಳಗಾವಿ:** ಜಿಲ್ಲೆಯಲ್ಲಿ ಮತ್ತೊಂದು ಅಮಾನವೀಯ ಘಟನೆ ನಡೆದಿರುವ ಬಗ್ಗೆ ಬೆಳಕಿಗೆ ಬಂದಿದೆ. ಮಹಿಳೆಯನ್ನು ವಿವಸ್ತ್ರಗೊಳಿಸುವ ಜೊತೆಗೆ ಆಕೆಯ ಪುತ್ರನ ಮೇಲೂ ಮಾರಣಾಂತಿಕ ಹಲ್ಲೆ ಮಾಡಿರುವ ಆರೋಪವೊಂದು ಕೇಳಿಬಂದಿದೆ. ಬೆಳಗಾವಿ ಜಿಲ್ಲೆಯ ಕಾಗವಾಡದ ಐನಾಪುರ ಗ್ರಾಮದಲ್ಲಿ ಒತ್ತುವರಿ ಪ್ರಶ್ನಿಸಿದ ಬಡ ಕುಟುಂಬದ ಮೇಲೆ ದೌರ್ಜನ್ಯ ಎಸಗಲಾಗಿದೆ. ಪುಟ 2

### ಬೀಟಮ್ಮ ಗ್ಯಾಂಗ್ ದಾಂಧಲೆ; ಲಕ್ಷಾಂತರ ಮೌಲ್ಯದ ಬೆಳೆ ನಾಶ



**ಚಿಕ್ಕಮಗಳೂರು:** ಜಿಲ್ಲೆಯಲ್ಲಿ ಇತ್ತೀಚೆಗೆ ದಾಂಧಲೆ ಎಬ್ಬಿಸಿ ಆತಂಕ ಸೃಷ್ಟಿ ಮಾಡಿದ್ದ ಕಾಡಾನೆ ಬೀಟಮ್ಮ ಗ್ಯಾಂಗ್ ದಿನಕ್ಕೊಂದು ಗ್ರಾಮದಲ್ಲಿ ಕಣಿಸಿಕೊಂಡು ಭಯದ ವಾತಾವರಣ ಸೃಷ್ಟಿ ಮಾಡುತ್ತಿದೆ. ಇದೀಗ ಮೂಡಿಗೆರೆ ತಾಲೂಕಿನಲ್ಲಿ ಬೀಡುಬಿಟ್ಟಿರುವ ಈ ಗ್ಯಾಂಗ್ ನ ದಾಂಧಲೆಗೆ ಲಕ್ಷಾಂತರ ರೂಪಾಯಿ ಮೌಲ್ಯದ ಬೆಳೆ ಪುಟ 2

### ಪಶುಸಂಗೋಪನಾ ಇಲಾಖೆಯ 2 ಎಕರೆ ಜಮೀನು ಅಲ್ಪಸಂಖ್ಯಾತರಿಗೆ ಸರ್ಕಾರದ ನಡೆಗೆ ವಿರೋಧ

**ಬೆಂಗಳೂರು:** ಚಾಮರಾಜಪೇಟೆಯಲ್ಲಿ ಪಶುಸಂಗೋಪನಾ ಇಲಾಖೆಯ 2 ಎಕರೆ ಜಮೀನನ್ನು ಅಲ್ಪಸಂಖ್ಯಾತರಿಗೆ ನೀಡಿದ ಸರ್ಕಾರದ ನಡೆಗೆ ತೀವ್ರ ವಿರೋಧ ವ್ಯಕ್ತವಾಗಿದೆ. ಪುಟ 2

### ಶೇ.60 ರಷ್ಟು ಕನ್ನಡ ಬೋರ್ಡ್ ಅಳವಡಿಕೆ

# ಗಡುವು ವಿಸ್ತರಣೆ



ನಿಗಮ ಮಂಡಳಿ ಕಾರ್ಯಕರ್ತರಿಗೆ ಕಾಂಗ್ರೆಸ್ ಸಿಹಿ ಸುದ್ದಿ

**ಬೆಂಗಳೂರು:** ರಾಜ್ಯದ ಎಲ್ಲಾ ಮಳಿಗೆಗಳಿಗೆ ಅಳವಡಿಸುವ ಬೋರ್ಡ್‌ಗಳಲ್ಲಿ ಶೇ.60 ರಷ್ಟು ಕನ್ನಡ ಇರಬೇಕು ಎಂಬ ನಿಯಮ ಜಾರಿಯಾಗಿದೆ. ಅದರಂತೆ, ಬೋರ್ಡ್ ಗಳ ಬದಲಾವಣೆಗೆ ನೀಡಲಾಗಿದ್ದ ಗಡುವು ನಿನ್ನೆಗೆ ಮುಕ್ತಾಯಗೊಂಡಿದೆ. ಈ ನಡುವೆ ಒಂದಷ್ಟು ವ್ಯಾಪಾರಸ್ತರು ಹಾಗೂ ಕಂಪನಿಗಳು ನಿಯಮಾನುಸಾರ ಬೋರ್ಡ್ ಅಳವಡಿಕೆಗೆ ಮತ್ತಷ್ಟು ಸಮಯಾವಕಾಶ ಕೇಳಿದ್ದರು. ಹೀಗಾಗಿ ಶೇ.60 ರಷ್ಟು ಕನ್ನಡದಲ್ಲಿ ನಾಮಫಲಕ ಅಳವಡಿಕೆಗೆ ಎರಡು ವಾರಗಳ ಕಾಲವಕಾಶ ನೀಡಲಾಗಿದೆ.

ಈ ಬಗ್ಗೆ ಎಕ್ಸ್ ಖಾತೆಯಲ್ಲಿ ಮಾಹಿತಿ ಹಂಚಿಕೊಂಡ ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್, ಬೆಂಗಳೂರಿನ ಎಲ್ಲಾ ಅಂಗಡಿ ಮುಂಗಟ್ಟುಗಳು, ವಾಣಿಜ್ಯ ಮಳಿಗೆಗಳು ಮೊದಲಾದಕಡೆ ಶೇ.60ರಷ್ಟು ಕನ್ನಡ ನಾಮಫಲಕಗಳನ್ನು ಅಳವಡಿಸಲು ಹೆಚ್ಚಿನ ಸಮಯ ಬೇಕೆಂಬುದನ್ನು ಪರಿಗಣಿಸಿ, ಈಗಾಗಲೇ ನೀಡಲಾಗಿದ್ದ ಗಡುವನ್ನು 2 ವಾರಗಳ ಕಾಲ ವಿಸ್ತರಿಸಲಾಗಿದೆ ಎಂದರು.

ಕನ್ನಡ ನಾಡಿನಲ್ಲಿ ಕನ್ನಡವೇ ಸಾರ್ವಭೌಮ, ಹಾಗಾಗಿ ನಮ್ಮ ಹೃದಯದ ಭಾಷೆಯನ್ನು ಎತ್ತಿಹಿಡಿಯುವುದು ಅತಿ ಮುಖ್ಯ. 2 ವಾರಗಳ ನಂತರ ಎಲ್ಲರೂ ಕಾನೂನು ಪಾಲನೆ ಮಾಡುತ್ತಾರೆ ಎಂದು ನಿರೀಕ್ಷಿಸಿದ್ದೇನೆ ಎಂದು ಡಿಕೆ ಶಿವಕುಮಾರ್ ಹೇಳಿದ್ದಾರೆ.

ಬೆಂಗಳೂರಿನ ಎಲ್ಲಾ ಅಂಗಡಿ ಮುಂಗಟ್ಟುಗಳು, ವಾಣಿಜ್ಯ ಮಳಿಗೆಗಳು ಮೊದಲಾದಕಡೆ ಶೇ.60ರಷ್ಟು ಕನ್ನಡ ನಾಮಫಲಕಗಳನ್ನು ಅಳವಡಿಸಲು ಹೆಚ್ಚಿನ ಸಮಯ ಬೇಕೆಂಬುದನ್ನು ಪರಿಗಣಿಸಿ, ಈಗಾಗಲೇ ನೀಡಲಾಗಿದ್ದ ಗಡುವನ್ನು 2 ವಾರಗಳ ಕಾಲ ವಿಸ್ತರಿಸಲಾಗಿದೆ.

ಕನ್ನಡ ನಾಮಫಲಕ ಹಾಕದಿದ್ದರೆ ಅಂಗಡಿಗಳನ್ನು ಬಂದ್ ಮಾಡುತ್ತೇವೆ. ಈಗಾಗಲೇ ಶೇಕಡಾ 90ರಷ್ಟು ಕನ್ನಡ ನಾಮಫಲಕ ಹಾಕಲಾಗಿದೆ. ಇನ್ನು ಉಳಿದಿರುವುದು 3 ಸಾವಿರ ನಾಮಫಲಕ ಮಾತ್ರ . ಮತ್ತಷ್ಟು ಸಮಯ ನೀಡುವಂತೆ ಅಂತಾರಾಷ್ಟ್ರೀಯ ಕಂಪನಿಗಳು, SBI, ಕೆನರಾ ಬ್ಯಾಂಕ್ ಮನವಿ ನೀಡಿವೆ. ಈ ಬಗ್ಗೆ ಇಂದು ಸಂಜೆ ತೀರ್ಮಾನ ಮಾಡುತ್ತೇವೆ ಎಂದು ಬಿಬಿಎಂಪಿ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ಹೇಳಿದ್ದರು. ಪುಟ 2

# 44 ಮಂದಿಗೆ ಅಧ್ಯಕ್ಷ ಸ್ಥಾನ

**ಬೆಂಗಳೂರು:** ತಿಂಗಳ ಹಿಂದಷ್ಟೇ ಶಾಸಕರಿಗೆ ನಿಗಮ ಮಂಡಳಿ ಅಧ್ಯಕ್ಷ ಸ್ಥಾನ ನೀಡಿ ಆದೇಶ ಹೊರಡಿಸಿದ್ದ ಕರ್ನಾಟಕ ಕಾಂಗ್ರೆಸ್ ಸರ್ಕಾರ ಇದೀಗ ಕಾರ್ಯಕರ್ತರಿಗೂ ಶುಭ ಸುದ್ದಿ ನೀಡಿದೆ. ಪಕ್ಷದ 44 ಮಂದಿ ಕಾರ್ಯಕರ್ತರಿಗೆ ನಿಗಮ ಮಂಡಳಿ ಅಧ್ಯಕ್ಷ ಸ್ಥಾನ ನೀಡಿ ಆದೇಶ ಹೊರಡಿಸಿದೆ. ಇದರೊಂದಿಗೆ ಬಹಳಷ್ಟು ಸಮಯದಿಂದ ನನೆಗುದಿಗೆ ಬಿದ್ದಿದ್ದ ನಿಗಮ ಮಂಡಳಿ ನೇಮಕ ಪ್ರಹಸನಕ್ಕೆ ಕೊನೆಗೂ ತೆರೆಬಿದ್ದಂತಾಗಿದೆ. ಪುಟ 2

### ಅವಹೇಳನಕಾರಿ ಸುದ್ದಿ ಪ್ರಕಟಿಸದಂತೆ ಕೋರ್ಟ್‌ನಿಂದ ತಡೆಯಾಜ್ಞೆ ತಂದ

# ಜಗ್ಗೇಶ್

**ಬೆಂಗಳೂರು:** ನಟ, ರಾಜ್ಯಸಭಾ ಸದಸ್ಯ ಜಗ್ಗೇಶ್ ಅವರು ಸಿನಿಮಾ ಕೆಲಸ ಹಾಗೂ ರಾಜಕೀಯ ಎರಡನ್ನೂ ಸರಿದೂಗಿಸಿಕೊಂಡು ಹೋಗುತ್ತಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಹಾಗೂ ಕೆಲವು ಸುದ್ದಿ ಮಾಧ್ಯಮಗಳಲ್ಲಿ ಅವರ ಬಗ್ಗೆ ಅಪಪ್ರಚಾರ ಮಾಡುವ ಕೆಲಸ ಆಗುತ್ತಿದೆ. ಇವರಿಗೆ ಜಗ್ಗೇಶ್ ಬಿಸಿ ಮುಟ್ಟಿಸಿದ್ದಾರೆ. ಇಂಥವರ ವಿರುದ್ಧ ಜಗ್ಗೇಶ್ ಕೋರ್ಟ್ ಮೊರೆ ಹೋಗಿದ್ದಾರೆ.



ತಮ್ಮ ವಿರುದ್ಧ ಅವಹೇಳನಾಕಾರಿ ಸುದ್ದಿ ಪ್ರಕಟ ಮಾಡದಂತೆ ತಡೆಯಾಜ್ಞೆ ತಂದಿದ್ದಾರೆ.

ನಟ ಜಗ್ಗೇಶ್ ಅವರು ಸೋಶಿಯಲ್ ಮೀಡಿಯಾದಲ್ಲಿ ಆ ಯಕ್ಟೀವ್ ಆಗಿದ್ದಾರೆ. ಅವರು ಅಭಿಮಾನಿಗಳ ಪ್ರಶ್ನೆಗೆ ಹಲವು ಬಾರಿ ಉತ್ತರಿಸಿದ್ದಿದೆ. ಇದರ ಜೊತೆಗೆ ಅವರು ತಮ್ಮ ಸಿನಿಮಾಗಳ ಬಗ್ಗೆ, ರಾಜಕೀಯ ವಿಚಾರಗಳ ಬಗ್ಗೆ ಅಭಿಪ್ರಾಯ ಹಂಚಿಕೊಳ್ಳುತ್ತಾ ಇರುತ್ತಾರೆ. ಇದೇ ಸೋಶಿಯಲ್ ಮೀಡಿಯಾದಲ್ಲಿ ಜಗ್ಗೇಶ್ ಬಗ್ಗೆ ಕೆಲವರು ಅಪಪ್ರಚಾರ ಮಾಡಿದ್ದಿದೆ. ಕೆಲವು ಸುದ್ದಿ ಮಾಧ್ಯಮಗಳು ಜಗ್ಗೇಶ್ ನ ಟೀಕಿಸಿದ್ದಿದೆ. ಇದಕ್ಕೆ ಜಗ್ಗೇಶ್ ಅವರು ತಮ್ಮದೇ ರೀತಿಯಲ್ಲಿ ಪ್ರತ್ಯುತ್ತರ ನೀಡಿದ್ದಾರೆ.

ಸಿಟಿ ಸಿವಿಲ್ ಹಾಗೂ ಸೆಷನ್ ನ್ಯಾಯಾಲಯದ ಆದೇಶದ ಪ್ರಕಾರ ಜಗ್ಗೇಶ್ ವಿರುದ್ಧ ಸುದ್ದಿಯನ್ನು ಅಥವಾ ಪ್ರಮಾಣೀಕರಿಸದ ಸುದ್ದಿಯನ್ನು ಮಾನಹಾನಿ ಆಗುವ ರೀತಿಯಲ್ಲಿ, ಅವಹೇಳನಕಾರಿಯಾಗಿ ಬಿತ್ತರಿಸುವಂತಿಲ್ಲ. ಇದು ತಾತ್ಕಾಲಿಕ ಆದೇಶವಾಗಿದೆ. ಏಪ್ರಿಲ್ 25ಕ್ಕೆ ಮುಂದಿನ ವಿಚಾರಣೆ ಇದೆ. ಜಗ್ಗೇಶ್ ಪರ ವಕೀಲರು ಇದನ್ನು ಎಲ್ಲರ ಗಮನಕ್ಕೆ ತಂದಿದ್ದಾರೆ.

ಜಗ್ಗೇಶ್ ಅವರು ಹಲವು ವರ್ಷಗಳಿಂದ ಚಿತ್ರರಂಗದಲ್ಲಿ ಆ ಯಕ್ಟೀವ್ ಆಗಿದ್ದಾರೆ. ಹಾಸ್ಯ ಪಾತ್ರಗಳನ್ನು ಮಾಡಿ ಗಮನ ಸೆಳೆದ ಅವರು ನಂತರ ಹೀರೋ ಆಗಿ ಮಿಂಚಿದರು. ಪುಟ 2

### ಮಹಾರಾಷ್ಟ್ರದ 26 ಲೋಕಸಭಾ ಸ್ಥಾನಗಳಲ್ಲಿ ಪ್ರಕಾಶ್ ಅಂಬೇಡ್ಕರ್ ನೇತೃತ್ವದ

# ಪಕ್ಷ ಸ್ಪರ್ಧೆ



**ಬೆಂಗಳೂರು:** ಪ್ರಕಾಶ್ ಅಂಬೇಡ್ಕರ್ ನೇತೃತ್ವದ ವಂಚಿತ್ ಬಹುಜನ ಅಘಾಡಿ (ವಿಬಿಎ), ಮುಂಬರುವ ಲೋಕಸಭೆ ಚುನಾವಣೆಗೆ ಸೀಟು ಹಂಚಿಕೆಗೆ ಸಂಬಂಧಿಸಿದಂತೆ ಮಹಾ ವಿಕಾಸ್ ಅಘಾಡಿ (ಎಂವಿಎ) ಯೊಂದಿಗೆ ತಮ್ಮ ಅಂತಿಮ ಸಭೆಯನ್ನು ಮುಕ್ತಾಯಗೊಳಿಸಿದೆ. ಮಹಾರಾಷ್ಟ್ರದ ಒಟ್ಟು 48 ಸ್ಥಾನಗಳ ಪೈಕಿ 26 ಸ್ಥಾನಗಳ ಪ್ರಸ್ತಾವನೆಯನ್ನು ಸಲ್ಲಿಸಿದ್ದು, ಅವರು ಸ್ಪರ್ಧಿಸುವ ಗುರಿ ಹೊಂದಿದ್ದಾರೆ.

ಉದ್ಧವ್ ಠಾಕ್ರೆ ಅವರ ಶಿವಸೇನೆ, ಶರದ್ ಪವಾರ್ ಅವರ ಎನ್ ಸಿಪಿ ಮತ್ತು ಕಾಂಗ್ರೆಸ್ ಒಳಗೊಂಡಿರುವ ಎಂವಿಎ ನಾಯಕರು ಸೀಟು ಹಂಚಿಕೆ ಮಾತುಕತೆಯನ್ನು ಅಂತಿಮಗೊಳಿಸಿರುವುದಾಗಿ ಘೋಷಿಸಿದ್ದಾರೆ. ಅವರು ಜಂಟಿ ಹೇಳಿಕೆಯಲ್ಲಿ ಅಂತಿಮ ಸೂತ್ರವನ್ನು ಶೀಘ್ರದಲ್ಲೇ ಪ್ರಕಟಿಸಲಿದ್ದಾರೆ. ಪುಟ 2

### ಶಸ್ತ್ರಚಿಕಿತ್ಸೆಗೊಳಗಾದ ಮಹಿಳೆಯರನ್ನು ನೆಲದ ಮೇಲೆ ಮಲಗಿಸಿ

# ಸಿಬ್ಬಂದಿ

**ವಿಜಯಪುರ:** ಜಿಲ್ಲೆಯ ಮುದ್ದೇಬಿಹಾಳ ತಾಲೂಕು ಆಸ್ಪತ್ರೆಯಲ್ಲಿ ಮೂಲಭೂತ ಸೌಕರ್ಯಗಳಲ್ಲಿ ಒಂದಾಗಿರುವ ಬೆಡ್ ಗಳ ಕೊರತೆಯಿಂದಾಗಿ ಎರಡೆರಡು ಬೆಡ್ ಗಳನ್ನು ಜೋಡಿಸಿ ಸಂತಾನ ಹರಣ ಶಸ್ತ್ರ ಚಿಕಿತ್ಸೆಗೆ ಒಳಗಾದ ಐದಾರು ಮಹಿಳೆಯರನ್ನ ಮಲಗಿಸಲಾಗಿದೆ. ಅಷ್ಟೇ ಅಲ್ಲದೆ, ನೆಲದ ಮೇಲೆ ಚಾಪೆ ಹಾಸಿ ಅದರಲ್ಲಿ ಕೆಲವು ಮಹಿಳೆಯರಿಗೆ ಆರೈಕೆ ಮಾಡಲಾಗುತ್ತಿದೆ.

ಘಟನೆಯ ಕುರಿತು ಮಾತನಾಡಿದ ಆಸ್ಪತ್ರೆಯ ವೈಧ್ಯಾಧಿಕಾರಿ ಡಾಕ್ಟರ್ ಅನಿಲ್ ಕುಮಾರ್ ಶೇಗುಣಸಿ, ಪ್ರತಿ ತಿಂಗಳು ಎರಡು ಬಾರಿ ಮಹಿಳೆಯರಿಗೆ ಸಂತಾನರಣಶಾಸ್ತ್ರ ತೆಗೆಸಿ ಮಾಡಲಾಗುತ್ತದೆ. ಪ್ರತಿ ತಿಂಗಳ ಮೊದಲ ವಾರ ಹಾಗೂ ಕೊನೆಯ ವಾರದಲ್ಲಿ ಶಸ್ತ್ರಚಿಕಿತ್ಸೆ ಮಾಡುತ್ತೇವೆ. ನಿನ್ನೆ ಫೆಬ್ರುವರಿ ತಿಂಗಳ ಎರಡನೇ ಬಾರಿಯ ಶಸ್ತ್ರ ಚಿಕಿತೆಗಳನ್ನ ಮಾಡಿದ್ದೇವೆ ಎಂದರು. ಪುಟ 2

### ಸದನದಲ್ಲಿ ಇಂದು 'ಜಿಂದಾಬಾದ್ ಜಂಗೀಕುಸ್ತಿ' ಸಾಧ್ಯತೆ!

# ಶಾಸಕರಿಗೆ ವಿಪ್ ಜಾರಿ



**ಬೆಂಗಳೂರು:** ಪಾಕ್ ಪರ ಘೋಷಣೆ ಆರೋಪ ಬಿಜೆಪಿಗೆ ಮತ್ತೊಂದು ಅಸ್ತ್ರವಾಗಿದೆ. ಇಂದು ಕೂಡ ಉಭಯ ಸದನಗಳಲ್ಲಿ ಕೋಲಾಹಲ ಸೃಷ್ಟಿಸುವ ಸಾಧ್ಯತೆ ಇದೆ. ಘೋಷಣೆ ಕೂಗಿರುವ ಆರೋಪಿಗಳ ಬಂಧನಕ್ಕೆ ಬಿಜೆಪಿ ಒತ್ತಾಯಿಸಿದೆ. ಇತ್ತ ಕಾಂಗ್ರೆಸ್ ಎಫ್‌ಎಸ್‌ಎಲ್ ಪ್ರತ್ಯಾಸ್ತ್ರ ಬಿಟ್ಟಿದೆ. ಇವತ್ತು ಪರಿಷತ್ ಕಲಾಪ ಆರಂಭವಾಗುತ್ತಿದ್ದಂತೆ ಧರಣಿಗೆ ವಿಪಕ್ಷಗಳು ಸಜ್ಜಾಗಿವೆ. ಇಂದು ಸಿಎಂ ಪರಿಷತ್ ಕಲಾಪದಲ್ಲಿಂದು ಬಜೆಟ್ ಮೇಲಿನ ಚರ್ಚೆಗೆ ಉತ್ತರ ನೀಡಲಿದ್ದಾರೆ. ಸಿಎಂ ಸಿದ್ದರಾಮಯ್ಯ ಉತ್ತರಕ್ಕೆ ವಿಪಕ್ಷಗಳ ಧರಣಿ ಅಡ್ಡಿಯಾಗಲಿದೆ. ಕಾಂಗ್ರೆಸ್ ಶಾಸಕರಿಗೆ ವಿಪ್ ಜಾರಿಗೊಳಸಲಾಗಿದ್ದು ಸದನಕ್ಕೆ ಹಾಜರಾತಿ ಕಡ್ಡಾಯಗೊಳಿಸಲಾಗಿದೆ. ಪುಟ 2

### ಸರ್ಕಾರಿ ಆಸ್ತಿ ಕಾವಲಿಗೆ ತಂತ್ರಜ್ಞಾನದ ಮೂಲಕ ಕಡಿವಾಣ

# ಲ್ಯಾಂಡ್ ಬೀಟ್ ಆ್ಯಪ್ ಸಿದ್ಧ

**ದಾವಣಗೆರೆ:** ನಮ್ಮದಲ್ಲದ ಮೂರಡಿ-ಆರಡಿ ಜಾಗದಲ್ಲಿ ಮಣ್ಣಾಗುವ ಮನುಷ್ಯನಿಗೆ ಊರಲೆಲ್ಲ ಜಾಗ ಖರೀದಿಸುವ ಆಸೆ ಇರುತ್ತೆ. ಹೀಗಾಗಿ ನಾನಾ ಮಾರ್ಗದಿಂದ ಜಾಗ ಒತ್ತುವರಿ ಮಾಡಿಕೊಳ್ಳುವವರೂ ನಮ್ಮಲ್ಲಿದ್ದಾರೆ. ಅಲ್ಲದೆ ಸರ್ಕಾರಿ ಆಸ್ತಿಗಳೆಂದರೆ ಯಾರು ಕೇಳುವವರಿರಲ್ಲ, ಯಾರು ಬೇಕಾದರೂ ಒತ್ತುವರಿ ಮಾಡಬಹುದು ಎಂಬ ಭಾವನೆ ಇದೆ. ಇದಕ್ಕೆ ಕಡಿವಾಣ ಹಾಕಲು ಸರ್ಕಾರಿ ಆಸ್ತಿಗಳ ಕಾವಲಿಗೆ ಲ್ಯಾಂಡ್ ಬೀಟ್ ವ್ಯವಸ್ಥೆ ಜಾರಿಗೆ ಸರ್ಕಾರ ಮುಂದಾಗಿದೆ. ಸರ್ಕಾರದ ಆಸ್ತಿ ಕಾವಲಿಗೆ ಲ್ಯಾಂಡ್ ಬೀಟ್ ತಂತ್ರಾಂಶ ಬಳಕೆ ಮಾಡಲು ಸರ್ಕಾರ ನಿರ್ಧರಿಸಿದೆ.



ಜಿಲ್ಲಾಧಿಕಾರಿ ಡಾ ವೆಂಕಟೇಶ್ ಎಂ.ವಿ ಅವರು ದಾವಣಗೆರೆ ಕಸಬಾ ಹೋಬಳಿಯ ದೊಡ್ಡಬಾತಿ ಗ್ರಾಮಕ್ಕೆ ಭೇಟಿ ನೀಡಿ ಅಲ್ಲಿನ ಸರ್ವೆ ನಂಬರ್ 34 ರಲ್ಲಿನ ಸರ್ಕಾರಿ ಸ್ಮಶಾನದ ಜಮೀನನ್ನು ಸ್ವತಃ ಆಪ್ ಮೂಲಕ ಸರ್ವೆ ಮಾಡಿ ಒತ್ತುವರಿ ಇಲ್ಲದಿರುವುದನ್ನು ಖಚಿತಪಡಿಸಿಕೊಂಡು ಜಿಯೋ ಫೆನ್ಸಿಂಗ್ ಮಾಡಿಸಿದ್ದಾರೆ. ಸರ್ಕಾರಿ ಆಸ್ತಿಗಳ ಸಂರಕ್ಷಣೆ ಮಾಡಲು ಸರ್ಕಾರ ಹೊಸ ತಂತ್ರಾಂಶವನ್ನು ಅಭಿವೃದ್ದಿಪಡಿಸಿದೆ. ಈ ತಂತ್ರಾಂಶದ ಮೂಲಕ ಗ್ರಾಮ ಆಡಳಿತಾಧಿಕಾರಿಗಳು ಸರ್ಕಾರದ ಎಲ್ಲಾ ಜಮೀನುಗಳಿಗೆ ಜಿಯೋಫೆನ್ಸಿಂಗ್ ಮಾಡುತ್ತಾರೆ. ಈ ಆಪ್ ಮೂಲಕ ಜಿಯೋ ಫೆನ್ಸಿಂಗ್ ಮಾಡಿ, ಒತ್ತುವರಿ ಮಾಡಿದ್ದಲ್ಲಿ ಅಂತಹ ಆಸಿಗಳ ವಿವರ ಲಭ್ಯವಾಗುತ್ತದೆ. ಪುಟ 2

### ಇಂದಿನಿಂದ ಬೆಂಗಳೂರು ಚಿತ್ರೋತ್ಸವ

# ಸಿಎಂ ಚಾಲನೆ

**ಬೆಂಗಳೂರು:** ಇಂದಿನಿಂದ ನಡೆಯಲಿರುವ ಬೆಂಗಳೂರು 15ನೇ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವವನ್ನು ವಿಧಾನಸೌಧದ ಮೆಟ್ಟಿಲುಗಳ ಮೇಲೆ ಸಂಜೆ 5ಕ್ಕೆ ಸಿಎಂ ಸಿದ್ಧರಾಮಯ್ಯ ಉದ್ಘಾಟಿಸಲಿದ್ದಾರೆ.



ಸಿಂಹಾಸನ, ಸಾಮ್ನಾ ಮತ್ತು ಡಾ. ಬಾಬಾಸಾಹೇಬ್ ಅಂಬೇಡ್ಕರ್ ಮುಂತಾದ ಚಿತ್ರಗಳ ಖ್ಯಾತಿಯ ಡಾ.ಜಬ್ಬಾರ್ ಪಟೇಲ್, ಖ್ಯಾತ ನಟರಾದ ಶಿವರಾಜ್ ಕುಮಾರ್, ಇತ್ತೀಚೆಗೆ ವಿಶಾಲ್ ಭಾರದ್ವಾಜ್ ನಿರ್ದೇಶನದ ''ಖುಫಿಯಾ'' ಚಿತ್ರದಲ್ಲಿ ನಟಿಸಿದ ಬಾಂಗ್ಲಾದೇಶದ ಖ್ಯಾತ ನಟಿ ಅಜಮೇರಿ ಬಂದೋನ್, ಜೆಕ್ ರಿಪಬ್ಲಿಕ್‌ನ ಚಲನಚಿತ್ರ ಶಿಕ್ಷಣ ತಜ್ಞೆ, ವಿಮರ್ಶಕಿ ವಿಯರಾ ಲ್ಯಾಂಗರೋವಾ ಗೌರವಾನ್ವಿತ ಅತಿಥಿಗಳಾಗಿ ಪಾಲ್ಗೊಳಲಿದ್ದಾರೆ. ಮೂರು ಬಾರಿ ಗ್ರಾಮಿ ಪ್ರಶಸ್ತಿ ವಿಜೇತ ರಿಕಿ ಕೇಜ್ ಅವರಿಂದ ಉದ್ಘಾಟನೆಗೆ ಮೊದಲು ಸಾಂಸ್ಕೃತಿಕ ಕಾರ್ಯಕ್ರಮ ಆಯೋಜಿಸಲಾಗಿದೆ.

ಉದ್ಘಾಟನಾ ಚಿತ್ರವಾಗಿ ಸ್ವಿಸ್ ಚಲನಚಿತ್ರ, ಪೀಟರ್ ಲೂಸಿ ನಿರ್ದೇಶನದ, 88 ನಿಮಿಷಗಳ ಅವಧಿಯ 'ಬೋಂಜೂರ್ ಸ್ವಿಟ್ಜರ್ಲೆಂಡ್' ಪ್ರದರ್ಶನವಾಗಲಿದೆ. ಪುಟ 2

# 13 ವರ್ಷಗಳ ಬಳಿಕ ತಾಯಿ ಮಡಿಲು ಸೇರಿದ ಮಕ್ಕಳು

**ಆಗ್ರಾ:** ಅದು 2010ರ ಜೂನ್ ತಿಂಗಳು ಬೇಸಿಗೆ ಮುಗಿದು ಮಳೆಗಾಲ ಶುರುವಾಗುವ ಕಾಲ. ಪೋಷಕರು ಹೊಡೆದರೆಂದು ಕೋಪಗೊಂಡು ಮನೆಬಿಟ್ಟು ಹೋಗಿದ್ದ ಇಬ್ಬರು ಮಕ್ಕಳು ಅಂತೂ ತಾಯಿಯ ಮಡಿಲು ಸೇರಿದ್ದಾರೆ. 11 ವರ್ಷದ ರಾಖಿ ಹಾಗೂ 7 ವರ್ಷದ ಬಬ್ಲು ಕೋಪ ಮಾಡಿಕೊಂಡು ಕೇವಲ 1 ಕಿ.ಮೀ ದೂರದಲ್ಲಿದ್ದ ಅಜ್ಜಿ ಮನೆಗೆ ಹೋಗಬೇಕು ಎಂದುಕೊಂಡಿದ್ದರು. ಇದು ಆಗ್ರಾದಲ್ಲಿ ನಡೆದ ಘಟನೆಯಾಗಿದೆ.

ಆದರೆ ಕೋಪದಲ್ಲಿ ಹೊರಟಿದ್ದ ಅವರಿಗೆ ಅಜ್ಜಿ ಮನೆಗೆ ಹೋಗುವ ದಾರಿಯೂ ತಿಳಿಯಲಿಲ್ಲ, ವಾಪಸ್ ಬರುವ ದಾಳಿಯೂ ತಿಳಿಯಲಿಲ್ಲ. ಆದರೆ ಅವರ ತಾಯಿ ಮಕ್ಕಳನ್ನು ಹುಡುಕಲು ನಿತ್ಯ ಪ್ರಯತ್ನ ಮಾಡುತ್ತಲೇ ಇದ್ದರು. ಮಕ್ಕಳ ಹಕ್ಕುಗಳ ಹೋರಾಟಗಾರರ ಬಳಿ ಮನವಿ ಮಾಡಿದ್ದರು. ಆದರೆ ಮಕ್ಕಳನ್ನು ಹುಡುಕಿಸಲು 13 ವರ್ಷಗಳೇ ಹಿಡಿಯಿತು.



ಅನಾಥಾಶ್ರಮದಲ್ಲಿ ಬೆಳೆದ ಬಬ್ಲು ಮಾತನಾಡಿ, ನಾನು ನನ್ನ ತಾಯಿಯನ್ನು ಮಿಸ್ ಮಾಡಿಕೊಳ್ಳದ್ ದಿನವೇ ಇಲ್ಲ, ಈಗ ನಾನು ನನ್ನ ಕುಟುಂಬಕ್ಕೆ ಮರಳಿದ್ದೇನೆ ತುಂಬಾ ಸಂತೋಷವಾಗಿದೆ ಎಂದಿದ್ದಾನೆ. ರಾಖಿ ಕೂಡ ಮನೆಗೆ ಮರಳಿದ್ದಾಳೆ, ಕೆಲವು ವರ್ಷಗಳಿಂದ ಇಬ್ಬರೂ ಸಂಪರ್ಕದಲ್ಲಿದ್ದರೂ, ಹತ್ತು ವರ್ಷದ ಬಳಿಕ ಒಬ್ಬರನ್ನೊಬ್ಬರು ಭೇಟಿ ಮಾಡಿದ್ದರು. ಪುಟ 2

# ನಾನು ಆಕಾಂಕ್ಷಿಯಲ್ಲ, ಆರ್ಥಿಕ ಪರಿಸ್ಥಿತಿ ಚೆನ್ನಾಗಿಲ್ಲ

**ಮೈಸೂರು:** ಲೋಕಸಭಾ ಕ್ಷೇತ್ರದ ಅಭ್ಯರ್ಥಿಯಾಗಿ ಸಾರಾ ಮಹೇಶ್ ಕಣಕ್ಕೆ ಇಳಿಯುತ್ತಾರೆ ಎಂಬ ಮಾತು ಕಳೆದ ನಾಲ್ಕು ದಿನಗಳಿಂದ ದಟ್ಟವಾಗಿ ಶುರುವಾಗಿತ್ತು. ಈ ಹಬ್ಬಿದ ವೇಗದಲ್ಲೇ ಈ ಮಾತನ್ನು ಖುದ್ದು ಸಾರಾ ಮಹೇಶ್ ಕಡಿಮೆ ಮಾಡುವ ಮಾತಾಡಿದ್ದಾರೆ. ಅಷ್ಟು ಮಾತ್ರವಲ್ಲ ತಮಗೆ ಚುನಾವಣಾ ರಾಜಕೀಯವೇ ಸಾಕಾಗಿದೆ ಎಂಬ ರೀತಿ ವೈರಾಗ್ಯದ ಮಾತನ್ನು ಹೇಳಿ ಅಚ್ಚರಿ ಮೂಡಿಸಿದ್ದಾರೆ.



ನಾನು ಲೋಕಸಭಾ ಚುನಾವಣೆಯ ಆಕಾಂಕ್ಷಿಯಲ್ಲ. ನಾನು ಆರ್ಥಿಕವಾಗಿ, ದೈಹಿಕವಾಗಿ, ಮಾನಸಿಕವಾಗಿ ಕುಸಿದಿದ್ದೇನೆ. ನನಗೆ ರೆಸ್ಟ್ ಬೇಕಿದೆ. ಹೀಗಾಗಿ ನಾನು ಟಿಕೆಟ್ ಆಕಾಂಕ್ಷಿಯಲ್ಲ ಎಂದು ಸ್ಪಷ್ಟವಾಗಿ ಹೇಳುವ ಮೂಲಕ ವಿಧಾನಸಭಾ ಚುನಾವಣೆಯ ಸೋಲು ತಮ್ಮನ್ನು ಮಾನಸಿಕವಾಗಿ ಕುಗ್ಗಿಸಿದೆ ಎಂಬುದನ್ನು ಬಹಿರಂಗವಾಗಿಯೆ ಒಪ್ಪಿಕೊಂಡಿದ್ದಾರೆ. ಇದೇ ವೇಳೆ ನರೇಂದ್ರ ಮೋದಿ ಮತ್ತೊಮ್ಮೆ ಪಿಎಂ ಆಗಬೇಕು. ಸಂಸದ ಪ್ರತಾಪ್ ಸಿಂಹ 10 ವರ್ಷ ಉತ್ತಮವಾಗಿ ಕೆಲಸ ಮಾಡಿದ್ದಾರೆ. ಬಿಜೆಪಿ ಮುಖಂಡರು ನನ್ನ ಅಭ್ಯರ್ಥಿಯಾಗುವ ವಿಚಾರದಲ್ಲಿ ಸಂಪರ್ಕಿಸಿದ್ದಾರೆ ಎಂಬುದೆಲ್ಲಾ ಊಹಾಪೋಹ ಎನ್ನುವ ಮೂಲಕ ಪ್ರತಾಪ್ ಸಿಂಹ ಪರವೂ ಬ್ಯಾಟ್ ಬೀಸಿದ್ದಾರೆ. ಸದ್ಯಕ್ಕೆ ಮೈಸೂರು ಲೋಕಸಭಾ ಕ್ಷೇತ್ರದ ಬಿಜೆಪಿ ಟಿಕೆಟ್ ವಿಚಾರದಲ್ಲಿ ಊಹಾಪೋಹಗಳದ್ದೇ ಕಾರುಬಾರು. ಆದ್ರೆ ಸಾರಾ ಮಹೇಶ್ ಬ್ರೇಕ್ ಹಾಕಿ ಗಾಸಿಪ್‌ಗಳು ಹುಟ್ಟುವುದನ್ನು ಕಡಮೆ ಮಾಡಿದ್ದಾರೆ.

# ಪಾಕ್ ಪರ ಘೋಷಣೆ;ಹುಸೇನ್ ಬೆಂಬಲಿಗನ ವಿಚಾರಣೆ

**ಹಾವೇರಿ:** ವಿಧಾನಸೌಧದಲ್ಲಿ ಸಂಭ್ರಮಾಚರಣೆ ವೇಳೆ 'ಪಾಕಿಸ್ತಾನ ಜಿಂದಾಬಾದ್' ಘೋಷಣೆ ಕೂಗಿದ ಆರೋಪ ಪ್ರಕರಣಕ್ಕೆ ಸಂಬಂಧಿಸಿದಂತೆ ರಾಜ್ಯಸಭಾ ಸದಸ್ಯ ನಾಸೀರ್ ಹುಸೇನ್ ಬೆಂಬಲಿಗನನ್ನು ಪೊಲೀಸರು ವಿಚಾರಣೆಗೆ ಕರೆದೊಯ್ದಿದ್ದಾರೆ. ಪ್ರಕರಣ ಗಂಭೀರ ಸ್ವರೂಪ ಪಡೆದುಕೊಳ್ಳುತ್ತಿದ್ದಂತೆ ವಿಧಾನಸೌಧ ಪೊಲೀಸರು ತನಿಖೆ ತೀವ್ರಗೊಳಿಸಿದ್ದಾರೆ. ನಿನ್ನೆ ತಡರಾತ್ರಿ ಮಹಮ್ಮದ್ ಶಫಿ ನಾಶಿಪುಡಿ ಎಂಬ ವ್ಯಕ್ತಿಯನ್ನು ಧ್ವನಿ ಪರೀಕ್ಷೆಗಾಗಿ ಪೊಲೀಸರು ಕರೆದೊಯ್ದಿದ್ದಾರೆ. ಮಹಮ್ಮದ್ ಶಫಿ ನಾಶಿಪುಡಿ ರಾಜ್ಯಸಭಾ ಸದಸ್ಯ ನಾಸೀರ್ ಹುಸೇನ್ ಅವರ ಬೆಂಬಲಿಗ. ಬ್ಯಾಡಗಿ ಮೆಣಸಿಕಾಯಿ ವರ್ತಕರಾಗಿದ್ದಾರೆ. ಬ್ಯಾಡಗಿ ತಾಲೂಕು ಮೋಟೆಬೆನ್ನೂರ ಬಳಿಯಿರುವ ತಮ್ಮ SAN ಕೋಲ್ಡ್ ಸ್ಟೋರೇಜ್‌ನಲ್ಲಿದ್ದರು. ಅಲ್ಲಿಂದ ಪೊಲೀಸರು ವಿಚಾರಣೆಗೆ ಕರೆತಂದಿದ್ದಾರೆ. ಧ್ವನಿ ಹೋಲಿಕೆ ವಿಚಾರಣೆ ಹಿನ್ನೆಲೆಯಲ್ಲಿ ವಿಚಾರಣೆ ನಡೆಸಲಾಗುತ್ತಿದೆ. ಪಾಕಿಸ್ತಾನದ ಪರ ಘೋಷಣೆ ಕೂಗಿದ್ದಾರೆಂದು ಮಹಮ್ಮದ್ ಶಫಿ ವಿರುದ್ಧ ಬ್ಯಾಡಗಿ ಬಿಜೆಪಿ ಮುಖಂಡರು ಆರೋಪ ಮಾಡಿದ್ದರು. ಪ್ರಕರಣ ಸಂಬಂಧ ಸ್ಪಷ್ಟನೆ ನೀಡಿರುವ ಮಹಮ್ಮದ್ ಶಫಿ, ನಾನು ನಾಸೀರ್ ಸಾಬ್ ಜಿಂದಾಬಾದ್ ಎಂದು ಕೂಗಿದ್ದೇನೆ. ನನ್ನ ತಾಯಾಣೆಗೂ ಆ ರೀತಿ ದೇಶದ್ರೋಹಿ ಘೋಷಣೆ ಕೂಗಿಲ್ಲ. ಯಾವ ತನಿಖೆಗೂ ಸಿದ್ಧನಿದ್ದೇನೆ ಎಂದು ತಿಳಿಸಿದ್ದರು.



# ವಿಧಾನಸೌಧದಲ್ಲಿ ಪಾಕ್ ಪರ ಘೋಷಣೆ ಆರೋಪ ಬಿಜೆಪಿ ನಾಯಕರ ವಿರುದ್ಧ ನಲಪಾಡ್ ದೂರು

**ಬೆಂಗಳೂರು:** ವಿಧಾನಸೌಧದಲ್ಲಿ ಪಾಕಿಸ್ತಾನ ಪರ ಘೋಷಣೆ ಆರೋಪ ಹೊರಿಸಿದ ಹಿನ್ನೆಲೆ ಬಿಜೆಪಿ ನಾಯಕರ ವಿರುದ್ಧ ಕಾಂಗ್ರೆಸ್ ಯುವ ಅಧ್ಯಕ್ಷ ಮೊಹಮ್ಮದ್ ನಲಪಾಡ್ ದೂರು ನೀಡಿದ್ದಾರೆ.



ಪ್ರಚೋದನಾಕಾರಿ ಹೇಳಿಕೆ ಕೊಟ್ಟು ಸಮಾಜ ಒಡೆಯಲು ಯತ್ನಿಸುತ್ತಿರುವ ಬಿಜೆಪಿ ನಾಯಕರ ಮೇಲೆ ಕಾನೂನು ಕ್ರಮ ಕೈಗೊಳ್ಳುವಂತೆ ನಲಪಾಡ್ ಕಮೀಷನರ್ ಕಚೇರಿಯಲ್ಲಿ ದೂರು ನೀಡಿದ್ದಾರೆ. ವಕೀಲ ಶತಬೀಷ್ ಶಿವಣ್ಣ ಜೊತೆ ಆಗಮಿಸಿ ಸತ್ಯಾಂಶ ಹೊರಬರುವ ಮುನ್ನವೇ ಸುಳ್ಳು ಹಬ್ಬಿಸಿದ್ದಾರೆ ಎಂದು ನಲಪಾಡ್ ದೂರು ಕೊಟ್ಟಿದ್ದಾರೆ.

ಆರ್ ಅಶೋಕ್, ಅಶ್ವಥ್ ನಾರಾಯಣ್, ವಿಜಯೇಂದ್ರ, ಯಡಿಯೂರಪ್ಪ ವಿರುದ್ಧ ದೂರು ಕೊಡಲು ಬಂದಿದ್ದೇವೆ. ನಾಸೀರ್ ಹುಸೇನ್ ಜಿಂದಾಬಾದ್ ಎಂಬುದನ್ನು ತಿರುಚಿ ಹೇಳಲಾಗುತ್ತಿದೆ. ಅದನ್ನು ಪಾಕಿಸ್ತಾನ ಜಿಂದಾಬಾದ್ ಎಂದು ತಿರುಚಿ ಹೇಳಿ ಸಮಾಜ ಒಡೆದುಹಾಕುವ ಹೇಳಿಕೆ ನೀಡಿದ್ದಾರೆ. ಕಮ್ಯೂನಲ್ ವಿಚಾರದ ಬಗ್ಗೆ ದಂಗೆ ಹಚ್ಚಲು ಈ ರೀತಿ ಮಾಡಲಾಗುತ್ತಿದೆ. ರಾಜಕೀಯ ಮಾಡಿ ಈ ರೀತಿ ಹಬ್ಬಿಸಲಾಗುತ್ತಿದೆ. ಒಂದೇ ಒಂದು ಸಮಾಜವನ್ನು ಟಾರ್ಗೆಟ್ ಮಾಡಲಾಗುತ್ತಿದೆ ಎಂದು ಕಿಡಿಕಾರಿದ್ದಾರೆ.

ನಾವೆಲ್ಲಾ ಭಾರತೀಯರು, ಕನ್ನಡಿಗರು. ಒಂದು ಸಮಾಜವನ್ನು ಟಾರ್ಗೆಟ್ ಮಾಡಿ ಅವನನ್ನು ಜೀವನ ಮಾಡಲು ಬಿಡುತ್ತಿಲ್ಲ. ಒಬ್ಬ ಸಂಸದ ಗೆದ್ದಾಗ ಜಿಂದಾಬಾದ್ ಹಾಕೋಕು ಬಿಟ್ಟಿಲ್ಲ. ಪ್ರಚೋದನಕಾರಿ ಹೇಳಿಕೆ ಕೊಟ್ಟವರ ವಿರುದ್ಧ ಎಫ್‌ಐಆರ್ ದಾಖಲಿಸಲು ಮನವಿ ಮಾಡಿದ್ದೇವೆ. ಮೂರು ಸೀಟ್ ಗೆದ್ದಿರುವುದನ್ನು ಅವರಿಗೆ ಅರಗಿಸಿಕೊಳ್ಳಲು ಆಗುತ್ತಿಲ್ಲ. ಅದಕ್ಕೆ ಉರ್ಕೊಂಡು ಈ ರೀತಿ ಮಾಡುತ್ತಿದ್ದಾರೆ. ಕಾಂಗ್ರೆಸ್ ಶಾಸಕರನ್ನು ಖರೀದಿ ಮಾಡೋಕೆ ಆಗಲ್ಲ. ಸಿದ್ದರಾಮಯ್ಯ, ಡಿಕೆಶಿ ಇರೋವರೆಗೂ ನಮ್ಮ ಶಾಸಕರನ್ನು ಖರೀದಿ ಮಾಡಲು ಆಗಲ್ಲ. ಎಷ್ಟೇ ಕೋಟಿ ಕೊಡುತ್ತೇನೆ ಅಂದರೂ ನಮ್ಮ ಶಾಸಕರು ಸೋತಿಲ್ಲ ಎಂದು ಹರಿಹಾಯ್ದರು.

# ರಾಜ್ಯದಲ್ಲಿ ವಿದ್ಯುತ್ ದರ ಇಳಿಕೆ

**ಬೆಂಗಳೂರು:** 100 ಯೂನಿಟ್‌ಗಿಂತ ಹೆಚ್ಚು ವಿದ್ಯುತ್ ಬಳಸುವ ಗ್ರಾಹಕರಿಗೆ ಕರ್ನಾಟಕ ವಿದ್ಯುಚಕ್ತಿ ನಿಯಂತ್ರಣ ಆಯೋಗ ಗುಡ್‌ನ್ಯೂಸ್ ನೀಡಿದೆ.

ಗೃಹ ಬಳಕೆ ವಿದ್ಯುತ್‌ಗೆ ಪ್ರತಿ ಯೂನಿಟ್‌ಗೆ 1.10 ರೂ. ಇಳಿಕೆ ಮಾಡಿದ್ದು, 100 ಯೂನಿಟ್‌ಗಳಿಗಿಂತ ಹೆಚ್ಚಿನ ಬಳಕೆಗೆ ಪ್ರತಿ ಯೂನಿಟ್‌ಗೆ 1.10 ರೂ ಇಳಿಕೆ ಮಾಡಲಾಗಿದೆ. ವಾಣಿಜ್ಯ ಬಳಕೆದಾರರಿಗೂ ಗುಡ್‌ನ್ಯೂಸ್ ಸಿಕ್ಕಂತಾಗಿದೆ. ಇಂಧನ ಬಳಕೆ ಶುಲ್ಕ ಪ್ರತಿ ಯೂನಿಟ್‌ಗೆ 1.25 ರೂ. ಇಳಿಕೆಯಾಗಿದ್ದು, ಡಿಮ್ಯಾಂಡ್ ಶುಲ್ಕ ಪ್ರತಿ ಕೆವಿಎಗೆ 10 ರೂ. ಇಳಿಸಲಾಗಿದೆ.

ವಿದ್ಯುತ್ ದರ ಪರಿಷ್ಕರಣೆ ಮಾಡಿ ಆದೇಶ ಹೊರಡಿಸಿದ್ದು, ಏಪ್ರಿಲ್‌ನಿಂದ ನೂತನ ದರ ಅನ್ವಯವಾಗಲಿದೆ. 5 ಹೆಸ್ಕಾಂಗಳ ದರ ಪರಿಷ್ಕರಣೆ ಮಾಡಿ ಆದೇಶ ಹೊರಡಿಸಲಾಗಿದೆ. ವಾಣಿಜ್ಯ ಕೈಗಾರಿಕಾ ಗೃಹ ಬಳಕೆ ವಿದ್ಯುತ್ ದರದಲ್ಲಿ 100 ಯೂನಿಟ್‌ಗಳ ಹೆಚ್ಚಿನ ಬಳಕೆಗೆ ದರ ಇಳಿಕೆ ಮಾಡಲಾಗಿದೆ. ಹೆಚ್.ಟಿ ಕೈಗಾರಿಕೆಯಲ್ಲಿ ಇಂಧನ ಬಳಕೆ ಶುಲ್ಕ 50 ಪೈಸೆ ಇಳಿಸಿದ್ದು, ಡಿಮಾಂಡ್ ಶುಲ್ಕ ಪ್ರತಿ ಕೆವಿಎಗೆ 10 ರೂ. ಇಳಿಕೆ ಮಾಡಿದೆ. ಅಲ್ಲದೇ ಹೆಚ್.ಟಿ ಆಸ್ಪತ್ರೆ ಮತ್ತು ಶಿಕ್ಷಣ ಸಂಸ್ಥೆಗಳ ಇಂಧನ ಬಳಕೆ ಶುಲ್ಕ ಪ್ರತಿ ಯೂನಿಟ್‌ಗೆ



40 ಪೈಸೆ ಇಳಿಸಿದ್ದು, ಡಿಮ್ಯಾಂಡ್ ಶುಲ್ಕ ಪ್ರತಿ ಕೆವಿಎಗೆ 10 ರೂ. ಇಳಿಸಲಾಗಿದೆ. ಹೆಚ್.ಟಿ ಖಾಸಗಿ ಏತ ನೀರಾವರಿಯಲ್ಲಿ ಇಂಧನ ಬಳಕೆ ಶುಲ್ಕ ಪ್ರತಿ ಯೂನಿಟ್‌ಗೆ 200 ಪೈಸೆ ಇಳಿಕೆ ಮಾಡಲಾಗಿದೆ. ಹೆಚ್.ಟಿ ನಿವಾಸ ಅಪಾರ್ಟ್ಮೆಂಟ್‌ಗಳಲ್ಲಿ ಇಂಧನ ಬಳಕೆ ಶುಲ್ಕ ಪ್ರತಿ ಕೆವಿಎಗೆ ಡಿಮಾಂಡ್ ಶುಲ್ಕವನ್ನು 10 ರೂ. ಇಳಿಕೆ ಮಾಡಲಾಗಿದೆ. ಎಲ್.ಟಿ. ಖಾಸಗಿ ಆಸ್ಪತ್ರೆ ಮತ್ತು ಶಿಕ್ಷಣ ಸಂಸ್ಥೆಗಳಲ್ಲಿ ಇಂಧನ ಬಳಕೆ ಶುಲ್ಕ ಪ್ರತಿ ಯೂನಿಟ್‌ಗೆ 50 ಪೈಸೆ ಇಳಿಸಲಾಗಿದೆ. ಎಲ್.ಟಿ.ಕೈಗಾರಿಕಾ ಸ್ಥಾವರಗಳಲ್ಲಿ ಇಂಧನ ಬಳಕೆ ಶುಲ್ಕ ಪ್ರತಿ ಯೂನಿಟ್‌ಗೆ 100 ಪೈಸೆ ಇಳಿಸಲಾಗಿದೆ.

# ಸಿನಿಮೋತ್ಸವಕ್ಕೆ ಡಾಲಿ ಧನಂಜಯ್ ರಾಯಭಾರಿ

**ಬೆಂಗಳೂರು:** ಬೆಂಗಳೂರಿನ 15ನೇ ಅಂತರಾಷ್ಟ್ರೀಯ ಚಲನಚಿತ್ರೋತ್ಸವ ಇಂದಿನಿಂದ ಮಾರ್ಚ್ 7ರವರೆಗೆ ನಡೆಯಲಿದೆ. ಈ ಚಿತ್ರೋತ್ಸವದ ಕುರಿತು ಹೆಚ್ಚಿನ ಪ್ರಚಾರಕ್ಕಾಗಿ ಸರ್ಕಾರ ಕನ್ನಡ ಚಿತ್ರರಂಗದ ಖ್ಯಾತ ನಟ ಡಾಲಿ ಅವರನ್ನು ಚಲನಚಿತ್ರೋತ್ಸವದ ರಾಯಭಾರಿಯನ್ನಾಗಿ ನೇಮಿಸಿ ಆದೇಶ ಹೊರಡಿಸಿದೆ. ಅಷ್ಟೇ ಅಲ್ಲದೇ, ಡಾ.ಬಾಬು ಜಗಜೀವನ ರಾಮ್ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ (ಲಿಡ್ಕರ್)ಕ್ಕೆ ಇದೇ ಮೊದಲ ಬಾರಿಗೆ ರಾಯಭಾರಿಯನ್ನ ಆಯ್ಕೆ ಮಾಡಿದೆ. ನಟರಾಕ್ಷಸ ಡಾಲಿ ಧನಂಜಯ್ ಲಿಡ್ಕರ್ ಗೆ ರಾಯಭಾರಿ ಆಗಿದ್ದಾರೆ. ಸ್ಯಾಂಡಲ್‌ವುಡ್ ನಟ, ನಿರ್ಮಾಪಕನಾಗಿ ಡಾಲಿ ಸಿಕ್ಕಾಪಟ್ಟೆ ಬ್ಯುಸಿ ಇರುವ ಸ್ಟಾರ್. ನಟನೆ, ನಿರ್ಮಾಣದ ಜೊತೆಗೀಗ ಧನಂಜಯ ಜಾಹೀರಾತು ಕ್ಷೇತ್ರಕ್ಕೂ ಕಾಲಿಟ್ಟಿದ್ದಾರೆ. ಮೊದಲ ಬಾರಿಗೆ ಡಾಲಿ ಸರ್ಕಾರದ ಜಾಹೀರಾತಿನಲ್ಲಿ ಮಿಂಚುವ ಮೂಲಕ ಲಿಡ್ಕರ್ ಬ್ರಾಂಡ್ ಪ್ರಮೋಟ್ ಮಾಡುತ್ತಿದ್ದಾರೆ.

ಲಿಡ್ಕರ್ ನಲ್ಲಿ 50 ಸಾವಿರಕ್ಕೂ ಹೆಚ್ಚು ಚರ್ಮ ಕುಶಲಕರ್ಮಿಗಳ ಕುಟುಂಬವಿದೆ. ಚರ್ಮ ಕೈಗಾರಿಕೆಯನ್ನು ಮತ್ತಷ್ಟು ಅಭಿವೃದ್ಧಿ ಪಡಿಸಲು ಮುಂದಾಗಿರುವ ಸರ್ಕಾರ ಧನಂಜಯ್ ಅವರನ್ನು ರಾಯಾಭಾರಿಯಾಗಿ ನೇಮಕಮಾಡಿದೆ. ಮಾತುಕತೆಯಾಗಿದ್ದು ಧನಂಜಯ ಕೂಡ ಗ್ರೀನ್



ಸಿಗ್ನಲ್ ನೀಡಿದ್ದಾರೆ. ಅಧಿಕೃತ ಪ್ರಕಟಣೆಯೊಂದೆ ಬಾಕಿ ಇದೆ. ಈ ಬಗ್ಗೆ ಪ್ರತಿಕ್ರಿಯೆ ನೀಡಿರುವ ಲಿಡ್ಕರ್ ವ್ಯವಸ್ಥಾಪಕ ನಿರ್ದೇಶಕಿ ಕೆ.ಎಂ.ಎಸ್ ವಸುಂಧರಾ, ಧನಂಜಯ್ ಅವರು ರಾಯಭಾರಿಯಾಗಿದ್ದು ತುಂಬಾ ಖುಷಿ ಇದೆ. ಅವರು ಸ್ಯಾಂಡಲ್‌ವುಡ್‌ನ ಲೀಡಿಂಗ್ ನಟ ಎಲ್ಲಾ ವರ್ಗದ ಜನರಿಗೆ ತಲುಪುವ ಕಲಾವಿದ ಹಾಗಾಗಿ ಅವರನ್ನ ಆಯ್ಕೆ ಮಾಡಿದ್ದೇವೆ ಸಚಿವರು ಕೂಡ ಇದಕ್ಕೆ ಒಪ್ಪಿಗೆ ಸೂಚಿಸಿದ್ದು ಆದಷ್ಟು ಬೇಗ ಜಾಹೀರಾತಿನ ಚಿತ್ರೀಕರಣ ನಡೆಯಲಿದೆ ಎಂದಿದ್ದಾರೆ. ಧನಂಜಯ ಸದ್ಯ ಸಾಲು ಸಾಲು ಸಿನಿಮಾಗಲ್ಲಿ ಬ್ಯುಸಿಯಾಗಿದ್ದಾರೆ. ಕನ್ನಡದ ಜೊತೆಗೆ ತೆಲುಗಿನ ಪುಷ್ಪ-2 ಸಿನಿಮಾದಲ್ಲೂ ಕಾಣಿಸಿಕೊಂಡಿದ್ದಾರೆ ಈ ನಡುವೆ ಜಾಹೀರಾತು ಲೋಕಕ್ಕೆ ಡಾಲಿ ಲಗ್ಗೆ ಇಟ್ಟಿರುವುದು ಅವರ ಅಭಿಮಾನಿ ಬಳಗಕ್ಕೆ ಸಂತಸ ತಂದಿದೆ.

## ಚಲನಚಿತ್ರ ಅಕಾಡೆಮಿಗೆ ಸಾಧು ಕೋಕಿಲಾ ಅಧ್ಯಕ್ಷರಾಗಿ ನೇಮಕ

**ಬೆಂಗಳೂರು:** ಕರ್ನಾಟಕ ಚಲನಚಿತ್ರ ಅಕಾಡೆಮಿಗೆ ಅಧ್ಯಕ್ಷರಾಗಿ ಹಾಸ್ಯ ನಟ, ಸಂಗೀತ ನಿರ್ದೇಶಕ ಸಾಧು ಕೋಕಿಲಾರನ್ನು ಸರ್ಕಾರ ನೇಮಕ ಮಾಡಿ ಆದೇಶ ಹೊರಡಿಸಿದೆ. ನಿಗಮ ಮಂಡಳಿಗೆ 44 ಜನರನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ನೇಮಕ ಮಾಡಿದ್ದು, ಅದರಲ್ಲಿ ಚಲನಚಿತ್ರ ಅಕಾಡೆಮಿಯು ಸೇರಿದೆ. ಹಲವು ದಿನಗಳಿಂದ ಅಧ್ಯಕ್ಷ ಗಾದೆಗೆ ಹಲವಾರು ಹೆಸರುಗಳು ಕೇಳಿ ಬಂದಿದ್ದವು, ಅದರಲ್ಲಿ ಸಾಧು ಕೋಕಿಲಾ ಹೆಸರೂ ಇತ್ತು. ಸಿದ್ದರಾಮಯ್ಯನವರಿಗೆ ಆಪ್ತರಾಗಿರುವ ಮತ್ತು ಕಾಂಗ್ರೆಸ್ ಪಕ್ಷದೊಂದಿಗೆ ಗುರುತಿಸಿಕೊಂಡಿರುವ ಸಾಧು ಕೋಕಿಲಾ ಅವರನ್ನೇ ಅಧ್ಯಕ್ಷರನ್ನಾಗಿ ಮಾಡುತ್ತಾರೆ ಎನ್ನುವ ಮಾತೂ ಕೇಳಿ ಬಂದಿತ್ತು. ಅದೇ ನಿಜವಾಗಿದೆ.

# ಪ್ರಿಯಾಂಕ್ ಖರ್ಗೆ ಹಿಟ್ ಅಂಡ್ ರನ್ ಮಾಸ್ಟರ್

**ಕಲಬುರಗಿ:** ಕಲಬುರಗಿ ಜಿಲ್ಲೆಯ ಕಮಲಾಪೂರ ಬಳಿ ಮಧ್ಯರಾತ್ರಿ ನಡೆದ ನಾಟಕೀಯ ಪ್ರಹಸನದಲ್ಲಿ ಯುವ ಬ್ರಿಗೇಡ್ ಸಂಸ್ಥಾಪಕ ಚಕ್ರವರ್ತಿ ಸೂಲಿಬೆಲೆ ಅವರನ್ನು ಪೊಲೀಸರು ತಡೆದಿದ್ದಾರೆ. ಬೀದರ್ ನಿಂದ ಹೊರಟಿದ್ದ ಸೂಲಿಬೆಲೆಯನ್ನು ಮಧ್ಯರಾತ್ರಿ 1 ಗಂಟೆಗೆ ತಡೆದ ಪೊಲೀಸರು ವಾಪಾಸ್ ಕಳುಹಿಸಿದ್ದಾರೆ. ಮತ್ತೊಂದೆಡೆ, ಕಲಬುರಗಿ ಪ್ರವೇಶಿಸಲು ಪೊಲೀಸರು ಅನುಮತಿ ನಿರಾಕರಿಸಿದ ಬೆನ್ನಲ್ಲೇ ಸಚಿವ ಪ್ರಿಯಾಂಕ್ ಖರ್ಗೆ ವಿರುದ್ಧ ವಾಗ್ದಾಳಿ ನಡೆಸಿದ ಚಕ್ರವರ್ತಿ ಸೂಲಿಬೆಲೆ, ಅವರೊಬ್ಬ ಹಿಟ್ ಅಂಡ್ ರನ್ ಮಾಸ್ಟರ್ ಎಂದು ಲೇವಡಿ ಮಾಡಿದ್ದಾರೆ. ಚಕ್ರವರ್ತಿ ಸೂಲಿಬೆಲೆ ಬೀದರ್ ಜಿಲ್ಲೆಯ ಬಾಲ್ಕಿಯಿಂದ ಕಲಬುರಗಿಗೆ ತೆರಳುತ್ತಿದ್ದರು. ಇಂದು (ಗುರುವಾರ) ಕಲಬುರಗಿಯ ಚಿತ್ತಾಪುರದ ಬಾಪೂ ರಾವ್ ಕಲ್ಯಾಣ ಮಂಟಪದಲ್ಲಿ ನಡೆಯಬೇಕಿದ್ದ ನಡೆಯಬೇಕಿದ್ದ ನಮೋ ಬ್ರಿಗೇಡ್ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲು ಅವರು ಪ್ರಯಾಣಿಸುತ್ತಿದ್ದರು. ಪ್ರಧಾನಿ ನರೇಂದ್ರ ಮೋದಿಯವರ 10 ವರ್ಷಗಳ ಸಾಧನೆ ಆಡಳಿತದ ಬಗ್ಗೆ ನಡೆಯಬೇಕಿದ್ದ ಕಾರ್ಯಕ್ರಮ ಇದಾಗಿತ್ತು. ಆದರೆ, ಕಾರ್ಯಕ್ರಮಕ್ಕೆ ಅನುಮತಿ ನಿರಾಕರಣೆ ಮಾಡಲಾಗಿದೆ. ಚಿತ್ತಾಪುರ ತಹಸೀಲ್ದಾರ್ ಹಾಗೂ ಪೊಲೀಸ್ ಇಲಾಖೆಯಿಂದ ಅನುಮತಿ ನಿರಾಕರಿಸಲಾಗಿದೆ. ಏಕಾಏಕಿ ತಾಲೂಕು ದಂಡಾಧಿಕಾರಿಗಳು ಹಾಗೂ ಪೊಲೀಸ್ ಅಧಿಕಾರಿಗಳಿಂದ ಅನುಮತಿ ನಿರಾಕರಣೆ ಮಾಡಲಾಗಿದೆ. ಇದೇ ತಿಂಗಳು 8 ನೇ ತಾರೀಕಿನಂದು ಚಿಕ್ಕಮಗಳೂರು ಹಾಗೂ ಜನವರಿ 18 ರಂದು ರಾಯಚೂರಿನಲ್ಲಿ ಮಲ್ಲಿಕಾರ್ಜುನ ಖರ್ಗೆ ಬಗ್ಗೆ ಅವಹೇಳನಾಕಾರಿಯಾಗಿ ವೈಯಕ್ತಿಕ ನಿಂದನೆ ಮಾಡಿದ ಆರೋಪ ಮತ್ತು ದೂರನ್ನು ಉಲ್ಲೇಖಿಸಿ ಕಾರ್ಯಕ್ರಮಕ್ಕೆ ನಿಷೇಧ ಹೇರಲಾಗಿದೆ. ಈ ಮಧ್ಯೆ, ಚಕ್ರವರ್ತಿ ಸೂಲಿಬೆಲೆ ಅವರಿಗೆ ಕಲಬುರಗಿ ಜಿಲ್ಲೆಗೆ ಪ್ರವೇಶ ನಿರ್ಭಂಧ ವಿಧಿಸಿ ಉಪ ವಿಭಾಗಾಧಿಕಾರಿ ರೂಪೇಂದ್ರ ಕೌರ್ ಆದೇಶ ಹೊರಡಿಸಿದ್ದಾರೆ. ಚಕ್ರವರ್ತಿ ಸೂಲಿಬಲೆ ಪ್ರಚೋದನಾಕಾರಿ ಭಾಷಣದಿಂದ ಶಾಂತಿ ಧಕ್ಕೆ ಬರುವ ಸಾಧ್ಯತೆ ಎನ್ನುವ ಕಾರಣಕ್ಕೆ ಪ್ರವೇಶ ನಿರ್ಭಂಧ ಹೇರಲಾಗಿದೆ. ಹೀಗಾಗಿ ಚಕ್ರವರ್ತಿ ಸೂಲಿಬೆಲೆ ಜಿಲ್ಲೆಯೊಳಗೆ ಆಗಮಿಸಲು ಪೊಲೀಸರು ಬಿಡಲಿಲ್ಲ. ಅವರನ್ನು ಮರಳಿ ಬೀದರ್ ಕಡೆಗೆ ಪೊಲೀಸರು ಕಳುಹಿಸಿದ್ದಾರೆ. ಇದೇ ವೇಳೆ, ಪೊಲೀಸರು, ಚಕ್ರವರ್ತಿ ನಡುವೆ ತೀವ್ರ ವಾಗ್ವಾದ ನಡೆಯಿತು.



## ಮೊದಲನೇ ಪುಟದಿಂದ...

# ದೇಶವೇ ಹೊರತು ನಮಗಲ್ಲ

ಸೃಷ್ಟಿಸಿತು. ಪರಿಷತ್ತಿನಲ್ಲಿ ನಡೆದ ಚರ್ಚೆಯ ವೇಳೆ ಹರಿಪ್ರಸಾದ್ ಅವರು ಬಿಜೆಪಿ ವಿರುದ್ಧ ವಾಗ್ದಾಳಿ ನಡೆಸಿದರು. ಶತ್ರು ದೇಶ ಎಂದರೆ ನಿಮ್ಮ (ಬಿಜೆಪಿ) ಪ್ರಕಾರ ಅದು ಪಾಕಿಸ್ತಾನ. ಆದರೆ, ನಮಗೆ ಅದು ಶತ್ರು ದೇಶವಲ್ಲ, ನೆರೆಯ ದೇಶ ಮಾತ್ರ ಎಂದಿದ್ದಾರೆ. ಈ ಹೇಳಿಕೆ ಹೊರಬೀಳುತ್ತಿದ್ದಂತೆ ಹಲವಾರು ಬಿಜೆಪಿ ಸದಸ್ಯರು ವಾಗ್ದಾಳಿ ನಡೆಸಿದ್ದಾರೆ. ಕಾಂಗ್ರೆಸ್ ಪಾಕಿಸ್ತಾನದ ಬಗ್ಗೆ ಮೃದುತ್ವವನ್ನು ತೋರಿಸುತ್ತಿದೆ ಎಂದು ಆರೋಪಿಸಿದ್ದಾರೆ.

ಮಂಗಳವಾರ ರಾಜ್ಯಸಭಾ ಚುನಾವಣೆ ಮುಗಿದ ಬಳಿಕ ಚುನಾವಣಾಧಿಕಾರಿಗಳು ಫಲಿತಾಂಶ ಪ್ರಕಟಿಸಿದರು. ಇದರಲ್ಲಿ ಮೂವರು ಕಾಂಗ್ರೆಸ್ ಮತ್ತು ಒಬ್ಬ ಬಿಜೆಪಿ ನಾಯಕ ವಿಜಯಿಗಳಾಗಿದ್ದಾರೆ. ಗೆದ್ದವರಲ್ಲಿ ಕಾಂಗ್ರೆಸ್ ರಾಜ್ಯಸಭಾ ಸಂಸದ ನಾಸೀರ್ ಹುಸೇನ್ ಕೂಡ ಒಬ್ಬರು. ವಿಧಾನಸೌಧದಲ್ಲಿ ಅವರ ಬೆಂಬಲಿಗರು ಹಲವು ಘೋಷಣೆಗಳನ್ನು ಕೂಗಿದರು. ಕಾಂಗ್ರೆಸ್ ಕಾರ್ಯಕರ್ತರೊಬ್ಬರು 'ಪಾಕಿಸ್ತಾನ್ ಜಿಂದಾಬಾದ್' ಘೋಷಣೆ ಕೂಗಿದ್ದಾರೆ.

ಎರಡು ಬಾರಿ ಪಾಕ್ ಘೋಷಣೆ ಕೂಗುತ್ತಿದ್ದಂತೆ ಎಚ್ಚೆತ್ತ ಗುಂಪಿನಲ್ಲಿದ್ದ ವ್ಯಕ್ತಿಯೊಬ್ಬ, ಘೋಷಣೆ ಕೂಗುತ್ತಿದ್ದವನ ಬಾಯಿ ಮುಚ್ಚಿ ಘೋಷಣೆ ಕೂಗದಂತೆ ತಡೆದಿದ್ದಾನೆ. ಬೆಂಬಲಿಗನ ದೇಶ ದ್ರೋಹದ ಘೋಷಣೆ ಬಗ್ಗೆ ಪ್ರಶ್ನಿಸಿದ ಮಾಧ್ಯಮದವರ ಮೇಲೆ ನಾಸೀರ್ ಹುಸೇನ್ ಏಯ್ ನಡಿಯಯ್ಯಾ ಎಂದೆಲ್ಲಾ ಆಕ್ರೋಶ ಹೊರಹಾಕಿದ್ದರು.

ಕಾಂಗ್ರೆಸ್ ಕಾರ್ಯಕರ್ತರೊಬ್ಬರು ಪಾಕ್ ಪರ ಘೋಷಣೆ ಕೂಗಿದ ವಿಚಾರ ತಿಳಿಯುತ್ತಿದ್ದಂತೆ ವಿಪಕ್ಷ ಬಿಜೆಪಿ ಕಾಂಗ್ರೆಸ್ ವಿರುದ್ಧ ಮುಗಿಬಿದ್ದಿದೆ. ಕಾರ್ಯಕರ್ತರು ಅಲ್ಲಲ್ಲಿ ಪ್ರತಿಭಟನೆ ನಡೆಸಿದ್ದು, ವಿಧಾನಸಭೆ, ಪರಿಷತ್ ನಲ್ಲಿ ಬಿಜೆಪಿ ಸದಸ್ಯರು ತೀವ್ರ ಗದ್ದಲ ಸೃಷ್ಟಿಸಿದ್ದರು. ವಿಪಕ್ಷಗಳ ತರಾಟೆಗೆ ಉತ್ತರಿಸಲಾಗದೆ ಆಡಳಿತ ಪಕ್ಷ ಕಾಂಗ್ರೆಸ್ ನಾಯಕರು ಪರದಾಡಿದರು. ಬಳಿಕ ಪಾಕ್ ಪರ ಘೋಷಣೆ ಕೂಗಿಲ್ಲ ನಾಸೀರ್ ಸಾಬ್ ಜಿಂದಾಬಾದ್ ಹೇಳಿದ್ದಾರೆ ಎಂದು ಸ್ಪಷ್ಟನೆ ನೀಡಿದರು. ಇದಕ್ಕೆ ತೃಪ್ತರಾಗದ ವಿಪಕ್ಷ ಕಾಂಗ್ರೆಸ್ ವಿರುದ್ಧ ವಾಗ್ದಾಳಿ ಮುಂದುವರಿಸಿದೆ.

## ಶೋಭಾ ಕರಂದ್ಲಾಜೆ ಆಕ್ರೋಶ

**ಬಿವೈ ವಿಜಯೇಂದ್ರ ವಾಗ್ದಾಳಿ:** ಬಿಕೆ ಹರಿಪ್ರಸಾದ್ ಹೇಳಿಕೆಗೆ ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ಸಹ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಪಾಕಿಸ್ತಾನವನ್ನು ಶತ್ರು ರಾಷ್ಟ್ರವೆಂದು ಒಪ್ಪಿಕೊಳ್ಳಲು ಕಾಂಗ್ರೆಸ್ ನಿರಾಕರಿಸುತ್ತಿರುವುದು ಹಿಂದಿನಿಂದಲೂ ತಿಳಿದಿರುವ ವಿಚಾರ. ಆದರೆ, ಸತ್ಯವನ್ನು ಸದಾ ಕಾಲ ಮುಚ್ಚಿಡಲು ಸಾಧ್ಯವಿಲ್ಲ. ಕೊನೆಗೂ ಇಂದು ವಿಧಾನಪರಿಷತ್ ನಲ್ಲಿ ಸತ್ಯವನ್ನು ಬಹಿರಂಗಪಡಿಸಿದ್ದಕ್ಕಾಗಿ ರಾಹುಲ್ ಗಾಂಧಿಯವರ ನಂಬಿಕಸ್ಥ ಮಿತ್ರರಾದ ಹಿರಿಯ ಕಾಂಗ್ರೆಸ್ ನಾಯಕ ಹರಿಪ್ರಸಾದ್ ಬಿಕೆ ಅವರಿಗೆ ಅಭಿನಂದನೆಗಳು ಎಂದು ವಿಜಯೇಂದ್ರ ವ್ಯಂಗ್ಯವಾಡಿದ್ದಾರೆ.

ಈ ಹೇಳಿಕೆಯು ಪಾಕಿಸ್ತಾನದ ಬಗೆಗಿನ ಕಾಂಗ್ರೆಸ್‌ನ ಮೃದು ಧೋರಣೆಯ ಮೇಲೆ ಬೆಳಕು ಚೆಲ್ಲುತ್ತದೆ. ಇದು ಕಾಂಗ್ರೆಸ್ ಆಡಳಿತದ ಅವಧಿಯಲ್ಲಿ ನಡೆದ ಹಲವಾರು ಭಯೋತ್ಪಾದಕ ಘಟನೆಗಳೊಂದಿಗೆ ಪರಸ್ಪರ ಸಂಬಂಧ ಹೊಂದಿದೆ. ಪಾಕ್ ಆಕ್ರಮಿತ ಕಾಶ್ಮೀರದಿಂದ ಆರ್ಟಿಕಲ್ 370 ವರೆಗೆ, ಅವರ ಧೋರಣೆ ಸ್ಪಷ್ಟವಾಗಿದೆ. ಪ್ರಧಾನಿ ಮೋದಿಯವರನ್ನು ಪಾಕಿಸ್ತಾನಿಗಳು ವಿರೋಧಿಸುವುದರಲ್ಲಿ ಆಶ್ಚರ್ಯವಿಲ್ಲ ಮತ್ತು ಕಾಂಗ್ರೆಸ್ ನೇತೃತ್ವದ ಭಾರತವನ್ನು ಬಯಸುವುದರಲ್ಲಿ ವಿಶೇಷವಿಲ್ಲ ಎಂದು ವಿಜಯೇಂದ್ರ ಟೀಕಿಸಿದ್ದಾರೆ.

## ಗಡುವು ವಿಸ್ತರಣೆ

ಡೆಡ್ ಲೈನ್ ಮುಕ್ತಾಯ ಹಿನ್ನೆಲೆ ಇಂದು ನಾಮಫಲಕ ಪರಿಶೀಲನೆ ನಡೆಸಲು ಮುಂದಾದ ಪಾಲಿಕೆ ಅಧಿಕಾರಿಗಳು, ಶೇಕಡಾ 60ರಷ್ಟು ಕನ್ನಡ ನಾಮಫಲಕ ಅಳವಡಿಸದಿದ್ದರೆ ಪರವಾನಗಿ ರದ್ದು ಮಾಡಿ ಬೀಗ ಜಡಿಯುವುದಾಗಿ ಬಿಬಿಎಂಪಿ ಆರೋಗ್ಯ ವಿಭಾಗದ ವಿಶೇಷ ಆಯುಕ್ತ ವಿಕಾಸ್ ಕಿಶೋರ್ ಅವರು ಈಗಾಗಲೇ ಆದೇಶ ಹೊರಡಿಸಿದ್ದಾರೆ.

## 44 ಮಂದಿಗೆ ಅಧ್ಯಕ್ಷ ಸ್ಥಾನ

ಶಾಸಕರಿಗೆ ಹಾಗೂ ಕಾರ್ಯಕರ್ತರನ್ನು ನಿಗಮ ಮಂಡಳಿಗೆ ನೇಮಕ ಮಾಡುವ ವಿಚಾರವಾಗಿ ಬಹಳಷ್ಟು ಸಮಸ್ಯೆಗಳನ್ನು ಕಾಂಗ್ರೆಸ್ ಸರ್ಕಾರ ಎದುರಿಸಿತ್ತು.

**ಯಾರಿಗೆ ಯಾವ ನಿಗಮ ಮಂಡಳಿ ಅಧ್ಯಕ್ಷ ಸ್ಥಾನ**

- ಕಾಂತಾ ನಾಯ್ಕ ಕೌಶಲ್ಯಾಭಿವೃದ್ಧಿ ನಿಗಮ ಅಧ್ಯಕ್ಷೆ
- ಮುಂಡರಗಿ ನಾಗರಾಜು ಬಾಬು ಜಗಜೀವನ್ ರಾಮ್ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ
- ವಿನೋದ್ ಕೆ. ಅಸೂಟಿ ಕರ್ನಾಟಕ ಕ್ರೀಡಾ ಪ್ರಾಧಿಕಾರ ಉಪಾಧ್ಯಕ್ಷ
- ಬಿ.ಹೆಚ್ .ಹರೀಶ್ ಕೃಷಿ ಉತ್ಪನ್ನ ಸಂಸ್ಕರಣೆ ಮತ್ತು ರಫ್ತು ನಿಗಮ ಅಧ್ಯಕ್ಷ
- ಡಾ.ಅಂಶುಮಂತ್ ಭದ್ರಾ ಕಾಡಾ ಅಧ್ಯಕ್ಷ
- ಜೆ.ಎಸ್ .ಆಂಜನೇಯಲು ಬಳ್ಳಾರಿ ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ
- ಡಾ.ಬಿ.ಯೋಗೇಶ್ ಬಾಬು ಕರ್ನಾಟಕ ದ್ರಾಕ್ಷಾರಸ ಮಂಡಳಿ ಅಧ್ಯಕ್ಷ
- ಮರೀಗೌಡ ಯಾದಗಿರಿ ರಾಜ್ಯ ತೊಗರಿ ಅಭಿವೃದ್ಧಿ ಮಂಡಳಿ ಅಧ್ಯಕ್ಷ
- ದೇವೇಂದ್ರಪ್ಪ ವರ್ತೂರು ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ಅಧ್ಯಕ್ಷ
- ರಾಜಶೇಖರ್ ರಾಮಸ್ವರಂ ಕರ್ನಾಟಕ ಜೈವಿಕ ಇಂಧನ ಮಂಡಳಿ ಅಧ್ಯಕ್ಷ
- ಕೆ.ಮರೀಗೌಡ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ
- ಎಸ್ .ಮನೋಹರ್ ಮೈಸೂರು ಎಲೆಕ್ಟ್ರಿಕಲ್ ಇಂಡಸ್ಟ್ರೀಸ್ ಲಿಮಿಟೆಡ್
- ಅಯೂಬ್ ಖಾನ್ ಬಣ್ಣ ಮತ್ತು ಅರಗು ಕಾರ್ಖಾನೆ ಅಧ್ಯಕ್ಷ
- ಮಮತಾ ಗಟ್ಟಿ ಗೇರು ಅಭಿವೃದ್ಧಿ ನಿಗಮ ಅಧ್ಯಕ್ಷೆ
- ಜಿ.ಪಲ್ಲವಿ ಸಾಂಬಾರು ಪದಾರ್ಥಗಳ ಅಭಿವೃದ್ಧಿ ಮಂಡಳಿ ಅಧ್ಯಕ್ಷೆ
- ಹೆಚ್.ಸಿ.ಸುಧೀಂದ್ರ ತೆಂಗು ಅಭಿವೃದ್ಧಿ ಮಂಡಳಿ ಅಧ್ಯಕ್ಷ
- ಜಯಸಿಂಹ ಬ್ರಾಹ್ಮಣ ಅಭಿವೃದ್ಧಿ ಮಂಡಳಿ ಅಧ್ಯಕ್ಷ
- ವಿಜಯ್ ಕೆ.ಮುಳುಗುಂದ್ ಉಪನಗರ ವರ್ತುಲ ರಸ್ತೆ ಯೋಜನಾ ಪ್ರಾಧಿಕಾರ
- ಮರಿಸ್ವಾಮಿ ಚಾಮರಾಜನಗರ ಕಾಡಾ ಅಧ್ಯಕ್ಷ
- ಸದಾಶಿವ ಉಲ್ಲಾಳ್ ಮಂಗಳೂರು ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ
- ರಘುನಂದನ್ ರಾಮಣ್ಣ ಬಿಎಂಐಸಿಎಪಿಎ ಅಧ್ಯಕ್ಷ
- ಬಸವರಾಜ್ ಜಾಬಶೆಟ್ಟಿ ಬೀದರ್ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ

ಸಾಧು ಕೋಕಿಲ ಕರ್ನಾಟಕ ಚಲನಚಿತ್ರ ಅಕಾಡೆಮಿ ಅಧ್ಯಕ್ಷ

ಎನ್.ಎ.ಹ್ಯಾರಿಸ್, ಕೆಎಂ ಶಿವಲಿಂಗೇಗೌಡ, ವಿನಯ್ ಕುಲಕರ್ಣಿ ಸೇರಿದಂತೆ ಒಟ್ಟು 32 ಶಾಸಕರಿಗೆ ನಿಗಮ ಮಂಡಳಿ ಅಧ್ಯಕ್ಷ ಸ್ಥಾನ ನೀಡಿ ಜನವರಿ 26ರಂದು ರಾಜ್ಯ ಸರ್ಕಾರ ನೇಮಕ ಮಾಡಿತ್ತು. ಒಂದು ಹಂತದಲ್ಲಿ ನಿಗಮ ಮಂಡಳಿ ನೇಮಕ ವಿಚಾರವಾಗಿ ಹೈಕಮಾಂಡ್ ಜತೆಗೂ ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿಕೆ ಶಿವಕುಮಾರ್ ಸಂಘರ್ಷಕ್ಕೆ ಇಳಿದಿದ್ದರು. ಅಂತಿಮವಾಗಿ ಎಲ್ಲ ಸಮಸ್ಯೆಗಳನ್ನು ಬಗೆಹರಿಸಿಕೊಂಡು ನೇಮಕ ಮಾಡುವಲ್ಲಿ ಸರ್ಕಾರ ಯಶಸ್ವಿಯಾಗಿತ್ತು. ಇದೀಗ ಕಾರ್ಯಕರ್ತರಿಗೂ ನಿಗಮ ಮಂಡಳಿ ಅಧ್ಯಕ್ಷ ಸ್ಥಾನ ನೀಡಿ ಸಮಾಧಾನ ಪಡಿಸುವ ಯತ್ನ ಮಾಡಿದೆ.

## ಜಗ್ಗೇಶ್

ನಿರ್ದೇಶಕನಾಗಿ, ಗಾಯಕನಾಗಿಯೂ ಅವರು ಹೆಸರು ಮಾಡಿದ್ದಾರೆ. ಕಳೆದ ವರ್ಷ ಅವರ ನಟನೆಯ 'ರಾಘವೇಂದ್ರ ಸ್ಟೋರ್ಸ್', 'ತೋತಾಪುರಿ 2' ಸಿನಿಮಾಗಳು ರಿಲೀಸ್ ಆಗಿವೆ. ಈಗ 'ರಂಗನಾಯಕ' ಸಿನಿಮಾ ಬರುತ್ತಿದೆ. ಈ ಚಿತ್ರಕ್ಕೆ 'ಮಠ' ಖ್ಯಾತಿಯ ಗುರುಪ್ರಸಾದ್ ನಿರ್ದೇಶನ ಮಾಡಿದ್ದಾರೆ.

## ಶಾಸಕರಿಗೆ ವಿಪ್ ಜಾರಿ

ವಿಧಾನಸೌಧದಲ್ಲಿ ಪಾಕಿಸ್ತಾನ ಪರ ಘೋಷಣೆ ಆರೋಪ ಸಂಬಂಧ ಪ್ರಕರಣದ ತನಿಖೆಯನ್ನ ಪೊಲೀಸರು ತೀವ್ರಗೊಳಿಸಿದ್ದಾರೆ. ಘೋಷಣೆ ಕೂಗಿದ್ದಾರೆ ಎನ್ನಲಾದ ಆರೇಳು ವಿಡಿಯೋಗಳನ್ನ ಈಖಬಿಗೆ ರವಾನಿಸಿದ್ದಾರೆ. ಎಲ್ಲಾ ವಿಡಿಯೋಗಳನ್ನ ಮಡಿವಾಳ ಈಖಬಿಕೇಂದ್ರಕ್ಕೆ ರವಾನಿಸಿದ್ದು ವಿಧಾನಸೌಧ ಪೊಲೀಸ್ ಠಾಣೆ ಇನ್ಸ್‌ಪೆಕ್ಟರ್ ಕುಮಾರಸ್ವಾಮಿ ಖುದ್ದು ತೆರಳಿಸಿದ್ದಾರೆ.

ಇನ್ನೆರಡು ದಿನದಲ್ಲಿ ಎಫ್‌ಎಸ್‌ಎಲ್ ವರದಿ ಪೊಲೀಸರ ಕೈ ಸೇರಲಿದೆ. ವರದಿ ಬಂದ ಬಳಿಕ ಪ್ರಕರಣದ ತನಿಖೆ ಮರು ಆರಂಭ ಮಾಡಲಾಗುತ್ತೆ. ಹಾಗೂ ಮತ್ತೊಂದು ಆಯಾಮದ ತನಿಖೆ ನಡೆಯುತ್ತಿದೆ. ವಿಡಿಯೋದಲ್ಲಿರುವ ಕೆಲವು ವ್ಯಕ್ತಿಗಳ ಐಡೆಂಟಿಟಿ ಪತ್ತೆ ಹಚ್ಚಿದ್ದಾರೆ. ಕೆಲ ವ್ಯಕ್ತಿಗಳ ಮಾಹಿತಿ ಕಲೆ ಹಾಕಿ ವಿವರ ಸಂಗ್ರಹಿಸಿದ್ದಾರೆ. ಗೌಪ್ಯ ಸ್ಥಳದಲ್ಲಿ ಕೆಲವರ ವಿಚಾರಣೆ ನಡೆಸಿದ್ದಾರೆ. ಈಖಬಿ ವರದಿ ಬಂದ ನಂತರ ಕಾನೂನು ಕ್ರಮ ಕೈಗೊಳ್ಳಲಾಗುವುದು ಅಂತಾ ಪೊಲೀಸರು ತಿಳಿಸಿದ್ದಾರೆ.

## ಸಿಬ್ಬಂದಿ

ಐವತ್ತು ಬೆಡ್ ಗಳ ಆಸ್ಪತ್ರೆಯಲ್ಲಿ 25 ಮಹಿಳೆಯರಿಗೆ ಮಾತ್ರ ಸಂತಾನ ಹರಣ ಶಸ್ತ್ರಚಿಕಿತ್ಸೆ ಮಾಡಲಾಗುತ್ತದೆ. ನಿನ್ನೆ ಸುಮಾರು 48 ಜನ ಮಹಿಳೆಯರು ಸಂತಾನ ಹರಣ ಶಸ್ತ್ರ ಚಿಕಿತ್ಸೆಗೆ ಆಗಮಿಸಿದ್ದರು. ನಾವು ಕೇವಲ 25 ಮಹಿಳೆಯರಿಗೆ ಮಾತ್ರ ಶಸ್ತ್ರಚಿಕಿತ್ಸೆ ಮಾಡುವುದಾಗಿ ಹೇಳಿದ್ದೆವು. ಬೇರೆ ಬೇರೆ ಊರುಗಳಿಂದ ಬಂದಿದ್ದೇವೆ ನಮ್ಮೆಲ್ಲರಿಗೂ ಶಸ್ತ್ರ ಸಿಗುತ್ತೆ ಮಾಡಬೇಕೆಂದು ಮಹಿಳೆಯರು ಮನವಿ ಮಾಡಿದ್ದರು ಎಂದರು. ಬೆಡ್ ಕೊರತೆ ಅವರಿಗೆ ಮೊದಲೇ ಹೇಳಿದ್ದೇವು. ಆಸ್ಪತ್ರೆಯಲ್ಲಿರುವ ಬೆಡ್ ಗಳಲ್ಲೇ ಹೊಂದಾಣಿಕೆ ಮಾಡಿಕೊಳ್ಳುವುದಾಗಿ ಮಹಿಳೆಯರು ಹೇಳಿದ್ದರು. ಹೀಗಾಗಿ ಮಾನವೀಯತೆ ಆಧಾರದ ಮೇಲೆ 48 ಜನ ಮಹಿಳೆಯರಿಗೂ ನಿನ್ನೆ ಸಂತಾನ ಹರಣ ಶಸ್ತ್ರ ಚಿಕಿತ್ಸೆ ಮಾಡಲಾಗಿದೆ. ಬೆಡ್ ನೀಡಬಾರದು ಎಂಬ ಉದ್ದೇಶದಿಂದ ನಾವು ಮಾಡಿಲ್ಲ. ಮುಂದಿನ ಬಾರಿ 25 ಮಹಿಳೆಯರಿಗೆ ಮಾತ್ರ ಶಸ್ತ್ರ ಚಿಕಿತ್ಸೆ ಮಾಡುತ್ತೇವೆ ಎಂದರು.

ಮುದ್ದೇಬಿಹಾಳ ತಾಲೂಕು ಆಸ್ಪತ್ರೆಯಲ್ಲಿ ನಿನ್ನೆ ನಡೆದ ಘಟನೆ ಕುರಿತು ಮಾಹಿತಿ ಪಡೆದಿದ್ದೇನೆ. ಈ ಕುರಿತು ಇನ್ನು ಹೆಚ್ಚಿನ ಮಾಹಿತಿಯನ್ನು ಕಲೆಹಾಕಿ ಕ್ರಮ ತೆಗೆದುಕೊಳ್ಳಲಾಗುತ್ತದೆ. ಶಸ್ತ್ರ ಚಿಕಿತ್ಸೆಗೆ ಬಂದ ಮಹಿಳೆಯರ ಮನವಿ ಮೇರೆಗೆ ಹೆಚ್ಚಿನ ಜನರಿಗೆ ಸಂತಾನ ಹರಣ ಶಸ್ತ್ರಚಿಕಿತ್ಸೆ ಮಾಡಲಾಗಿದೆ. ಮುಂದಿನ ದಿನಗಳಲ್ಲಿ ಬೆಡ್ ಗಳ ಸಂಖ್ಯೆಯನ್ನು ಹೆಚ್ಚಿಸಲಾಗುವುದು ಅಥವಾ 25 ಜನ ಮಹಿಳೆಯರಿಗೆ ಮಾತ್ರ ಶಾಸ್ತ್ರ ಹರಣ ಚಿಕಿತ್ಸೆ ಮಾಡಲಾಗುತ್ತದೆ ಎಂದು ಜಿಲ್ಲಾ ಆರೋಗ್ಯ ಅಧಿಕಾರಿ ಡಾ. ಶಿವಾನಂದ್ ಹುಬ್ಬಳ್ಳಿ ಹೇಳಿದ್ದಾರೆ.

## ಮಡಿಲು ಸೇರಿದ ಮಕ್ಕಳು

ಬಬ್ಲು ಮತ್ತು ರಾಖಿ ಅವರ ಹೆತ್ತವರಾದ ನೀತು ಕುಮಾರಿ ಮತ್ತು ಸಂತೋಷ್ ಅವರೊಂದಿಗೆ ಉತ್ತರದ ಆಗ್ರಾ ನಗರದಲ್ಲಿ ವಾಸಿಸುತ್ತಿದ್ದರು, ಅವರು ದಿನಗೂಲಿ ಕಾರ್ಮಿಕರಾಗಿ ಕೆಲಸ ಮಾಡುತ್ತಿದ್ದರು. 16 ಜೂನ್ 2010 ರಂದು, ಆ ದಿನ ಕೆಲಸ ಸಿಗದಿದ್ದಕ್ಕೆ ನೀತು, ರಾಖಿಯ ಮೇಲಿನ ಹತಾಶೆಯನ್ನು ಹೊರಹಾಕಿದಳು.

ಅಡುಗೆಗೆ ಬಳಸುತ್ತಿದ್ದ ಸಾಮಗ್ರಿಗಳಿಂದ ರಾಖಿಗೆ ಹೊಡೆದಿದ್ದರು. ರಾಖಿ ಮತ್ತು ಬಬ್ಲು ಅವರ ತಾಯಿ ಕೆಲಸಕ್ಕಾಗಿ ಹೊರಗೆ ಹೋದ ನಂತರ ಮನೆ ಬಿಟ್ಟು ಹೋಗಿದ್ದರು. ನಾನು ಸರಿಯಾಗಿ ಓದದಿದ್ದರೆ ನನ್ನ ತಂದೆಯೂ ಕೆಲವೊಮ್ಮೆ ಹೊಡೆಯುತ್ತಿದ್ದರು, ಹಾಗಾಗಿ ರಾಖಿ ನನ್ನ ಬಳಿಗೆ ಬಂದು ಅಜ್ಜಿ ಮನೆಗೆ ಹೋಗೋಣ ಎಂದು ಹೇಳಿದಾಗ ನಾನು ಒಪ್ಪಿದೆ ಎಂದು ಬಬ್ಲು ಹೇಳಿದ್ದಾನೆ. ಅವರು ದಾರಿ ತಪ್ಪಿದ ನಂತರ, ರಿಕ್ಷಾ ಚಾಲಕರೊಬ್ಬರು ರೈಲ್ವೆ ನಿಲ್ದಾಣಕ್ಕೆ ಕರೆದೊಯ್ದರು. ರೈಲು ಅವರ ಮನೆಯಿಂದ 250 ಕಿ.ಮೀ ದೂರದಲ್ಲಿದ್ದ ಮೀರತ್ ಗೆ ತಲುಪಿತ್ತು, ರೈಲಿನಲ್ಲಿದ್ದ ಮಹಿಳೆಯೊಬ್ಬರು ಅವರನ್ನು ಕರೆದುಕೊಂಡು ಹೋಗಿ ಸರ್ಕಾರಿ ಅನಾಥಾಶ್ರಮಕ್ಕೆ ಸೇರಿಸಿದ್ದರು.

ಒಂದು ವರ್ಷದ ಬಳಿಕ ಒಡಹುಟ್ಟಿದವರೂ ಕೂಡ ಪೇರ್ಪಟ್ಟರು. ರಾಖಿಯಲ್ಲಿ ದೆಹಲಿಯಲ್ಲಿ ಎನ್ ಜಿಒ ನಡೆಸುತ್ತಿದ್ದ ಅನಾಥಾಶ್ರಮಕ್ಕೆ ಸೇರಿಸಲಾಯಿತು. ಒಂದೆರಡು ವರ್ಷಗಳ ಬಳಿಕ ಉತ್ತರ ಪ್ರದೇಶಕ್ಕೆ ಬಬ್ಲುವನ್ನು ಕರೆದೊಯ್ಯಲಾಯಿತು. ಇದೀಗ ಅಂತೂ ಇಬ್ಬರು ಮನೆಗೆ ಮರಳಿದ್ದಾರೆ.

## ಸಿಎಂ ಚಾಲನೆ

ಕನ್ನಡ ಭಾರತೀಯ ಮತ್ತು ಏಷ್ಯನ್ ಸಿನಿಮಾಗಳಲ್ಲಿ ಸ್ಪರ್ಧಾತ್ಮಕ ವಿಭಾಗಗಳು, ಸಮಕಾಲೀನ ವಿಶ್ವ ಸಿನೆಮಾ, ದೇಶಕೇಂದ್ರಿ, ವಿಮರ್ಶಕರ ವಾರ, ಪುನರ್ವಲೋಕನ, ವಿಷಯಾಧಾರಿತ ಸಾಕ್ಷ್ಯಚಿತ್ರ ವಿಭಾಗ, ಜೀವನಚರಿತ್ರೆ, ಸ್ಮರಣೆ, ಗೌರವ, ಮಹಿಳಾ ಶಕ್ತಿ, ಹೀಗೆ ವಿವಿಧ ವಿಭಾಗಗಳಲ್ಲಿ 50 ಕ್ಕೂ ಹೆಚ್ಚು ದೇಶಗಳ. 180 ಚಲನಚಿತ್ರಗಳು ಈ ಉತ್ಸವದಲ್ಲಿ ಪ್ರದರ್ಶನವಾಗಲಿವೆ.

ಕನ್ನಡ ಚಿತ್ರರಂಗ 90 ವರ್ಷಗಳನ್ನು ಪೂರೈಸಿದ ಸಂದರ್ಭದಲ್ಲಿ ಮತ್ತು ಕರ್ನಾಟಕದ 50 ವರ್ಷಗಳ ಸಂಭ್ರಮದಲ್ಲಿ ಕನ್ನಡ ವಿಶೇಷ ವಿಭಾಗದಲ್ಲಿ 30 ಚಲನಚಿತ್ರಗಳನ್ನು ಪ್ರದರ್ಶಿಸಲಾಗುವುದು. ಏಷ್ಯನ್ ಸಿನಿಮಾ ಸ್ಪರ್ಧೆಗೆ ಅಂತಾರಾಷ್ಟ್ರೀಯ ತೀರ್ಪುಗಾರರು, ಭಾರತೀಯ ಸಿನಿಮಾ ಸ್ಪರ್ಧೆಗಾಗಿ ಅಂತರಾಷ್ಟ್ರೀಯ ವಿಮರ್ಶಕ ತೀರ್ಪುಗಾರರು ಮತ್ತು ರಾಷ್ಟ್ರೀಯ ತೀರ್ಪುಗಾರರು ಕನ್ನಡ ಸಿನಿಮಾ ಸ್ಪರ್ಧೆಗಾಗಿ ಅಂತರಾಷ್ಟ್ರೀಯ ವಿಮರ್ಶಕ ತೀರ್ಪುಗಾರರು ಮತ್ತು ರಾಷ್ಟ್ರೀಯ ತೀರ್ಪುಗಾರರು ಸೇರಿದಂತೆ ಚಿತ್ರೋತ್ಸವದಲ್ಲಿ ಐದು ತೀರ್ಪುಗಾರ ತಂಡಗಳಿರುತ್ತವೆ. ವಿದೇಶದಿಂದ ದೃಢಪಡಿಸಿದ ಅಂತಾರಾರಾಷ್ಟ್ರೀಯತೀರ್ಪುಗಾರರಸದಸ್ಯರಲ್ಲಿರಷ್ಯಾದಿಂದನೀನಾ ಕೊಚೆಲೆವಾ, ಸ್ಪೇನ್‌ನ ರೊಸಾನ್ನಾ ಜಿ ಅಲೋನ್ಸೆ, ಬಾಂಗ್ಲಾದೇಶದ ಆರಿ ಹಕ್ ಬಾಂಧೋನ್, ಯುಕೆಯಿಂದ ಕ್ಯಾರಿ ರಾಜಿಂದರ್ ಸಾಹಿ, ಪ್ಲೋವಾಕಿಯಾದ ವೈರಾ ಲಾಂಗರೋವಾ, ತೈವಾನ್‌ನಿಂದ ಹ್ಯಾನ್ ಟಿಯೆನ್, ಆಸ್ಟೇಲಿಯಾದಿಂದ ಮ್ಯಾಕ್ಸಿ ವಿಲಿಯಮ್ಮನ್ ಮತ್ತು ಬಿಲ್ಗೇರಿಯಾದ ಆಂಡೋನಿಕಾ ಮಾರ್ಟೊನೊವಾ ಸೇರಿದ್ದಾರೆ. ರಾಷ್ಟ್ರೀಯ ತೀರ್ಪುಗಾರರ ಸದಸ್ಯರಲ್ಲಿ ಒರಿಸ್ಸಾದಿಂದ ವಿಜಯಾ ಜೆನಾ, ಮಣಿಪುರದಿಂದ ಮೇಘಚಂದ್ರ ಕೊಂಗ್ರಾಮ್, ಕೊಲ್ಕೋತಾದಿಂದ ಶೇಖರ್ ದಾಸ್, ಮಹಾರಾಷ್ಟ್ರದಿಂದ ಸಂಜಯ್ ಕೃಷ್ಣಾಜಿ ಪಾಟೀಲ್, ಅಸ್ಸಾಂನಿಂದ ಜಾದುಮೋನಿ ದತ್ತಾ ಸೇರಿದ್ದಾರೆ. ಇವರೆಲ್ಲ ಹೆಸರಾಂತ ನಿರ್ದೇಶಕರು ಇಲ್ಲವೇ ವಿಮರ್ಶಕರು. ಸ್ಥಳೀಯ ಚಿತ್ರನಿರ್ದೇಶಕರು, ವಿಮರ್ಶಕರು, ಪತ್ರಕರ್ತರು ಕೆಲವರು ರಾಷ್ಟ್ರೀಯ, ಅಂತಾರಾಷ್ಟ್ರೀಯ ತೀರ್ಪುಗಾರ ತಂಡದ ಭಾಗವಾಗಿರುತ್ತಾರೆ.

## ಲ್ಯಾಂಡ್ ಬೀಟ್ ಆಯಪ್ ಸಿದ್ಧ

ಈ ಸ್ಥಳಗಳಿಗೆ ನಿಗದಿತ ಅವಧಿಯಲ್ಲಿ ಭೇಟಿ ನೀಡಲು ಯಾವ ರೀತಿ ಪೊಲೀಸ್ ಬೀಟಿಂಗ್ ವ್ಯವಸ್ಥೆ ಇರುತ್ತದೆ, ಅದೇ ರೀತಿ ಸರ್ಕಾರಿ ಆಸ್ತಿಗಳ ಸಂರಕ್ಷಣೆ ಮಾಡಲು ಬೀಟಿಂಗ್ ವ್ಯವಸ್ಥೆಯನ್ನು ಆಪ್‌ನಲ್ಲಿ ಕಲ್ಪಿಸಲಾಗಿದೆ ಎಂದು ಜಿಲ್ಲಾಧಿಕಾರಿ ಡಾ ವೆಂಕಟೇಶ್ ಮಾಹಿತಿ ನೀಡಿದರು.

ಈ ಆಪ್ ಮೂಲಕ ಪ್ರಾಯೋಗಿಕ ಸರ್ವೆಯನ್ನು ದೊಡ್ಡಬಾತಿಯಲ್ಲಿ ಜಿಲ್ಲಾಧಿಕಾರಿಯವರು ಖುದ್ದು ಕೈಗೊಂಡು ಸರ್ವೆ ನಂಬರ್ 34 ರಲ್ಲಿ ಸರ್ಕಾರಿ ಸ್ಮಶಾನ ಭೂಮಿ ಒತ್ತುವರಿಯಾಗಿದೆಯೋ ಇಲ್ಲವೋ ಎಂಬ ಮಾಹಿತಿಯನ್ನು ಖಚಿತ ಪಡಿಸಿಕೊಂಡರು. ಈ ಭೂಮಿಯು ಒತ್ತುವರಿಯಾಗಿರುವುದಿಲ್ಲ ಎಂಬುದು ಇದರಿಂದ ಮಾಹಿತಿ ಲಭ್ಯವಾಗಿದೆ. ಆಪ್ ಮೂಲಕ ಎಲ್ಲಾ ಸರ್ಕಾರಿ ಜಮೀನು, ಜಾಗಗಳನ್ನು ಸರ್ವೆ ಮಾಡಿ ಜಿಯೋ ಫೆನ್ಸಿಂಗ್ ಮಾಡುವ ಮೂಲಕ ದತ್ತಾಂಶ ಸಂಗ್ರಹಕ್ಕೆ ಸೂಚನೆ ನೀಡಲಾಗಿದೆ.

## ಪಕ್ಷ ಸ್ಪರ್ಧೆ

ಪ್ರಸ್ತಾವಿತ 26 ಸ್ಥಾನಗಳ ಪೈಕಿ ಸೀಟು ಹಂಚಿಕೆ ಕುರಿತು ಮಾತುಕತೆ ನಡೆಸಲು ಪಕ್ಷ ಸಿದ್ಧವಿದೆ ಎಂದು ವಿಬಿಎ ನಾಯಕ ಧೈರ್ಯವರ್ಧನ್ ಪುಂಡ್ಕರ್ ಹೇಳಿದ್ದಾರೆ. ಪ್ರಕಾಶ್ ಅಂಬೇಡ್ಕರ್ ಅವರು ಜೂನ್-ಜುಲೈನಿಂದ ತಮ್ಮ ಪಕ್ಷವು ಯಾವುದೇ ಮೈತ್ರಿಕೂಟದ ಭಾಗವಾಗಿಲ್ಲದ ಹಲವಾರು ಲೋಕಸಭಾ ಕ್ಷೇತ್ರಗಳಲ್ಲಿ ತಯಾರಿ ನಡೆಸುತ್ತಿದೆ ಎಂದು ಹೇಳಿದ್ದಾರೆ.

ಮರಾಠಾ ಕೋಟಾ ಕಾರ್ಯಕರ್ತ, ಜಲ್ನಾದಿಂದ ಮನೋಜ್ ಜರಂಗೆ ಪಾಟೀಲ್ ಮತ್ತು ಪುಣೆ ಲೋಕಸಭಾ ಕ್ಷೇತ್ರದಿಂದ ಅಭಿಜಿತ್ ವೈದ್ಯ ಅವರನ್ನು ಎಂವಿಎ ಅಭ್ಯರ್ಥಿಗಳಾಗಿ ವಿಬಿಎ ಪ್ರಸ್ತಾಪಿಸಿದೆ. ಪಕ್ಷವು ಕನಿಷ್ಠ 15 ಒಬಿಸಿ ಮತ್ತು ಮೂವರು ಅಲ್ಪಸಂಖ್ಯಾತ ಅಭ್ಯರ್ಥಿಗಳನ್ನು ಕಣಕ್ಕಿಳಿಸಲು ಒತ್ತಾಯಿಸಿದೆ ಎಂದು ಪುಂಡ್ಕರ್ ಹೇಳಿದರು. ಚುನಾವಣೆಯ ಮೊದಲು ಅಥವಾ ನಂತರ ಯಾವುದೇ ಪಕ್ಷಗಳು ಅಥವಾ ಅಭ್ಯರ್ಥಿಗಳು ಬಿಜೆಪಿಗೆ ಸೇರಬಾರದು ಎಂಬ ಲಿಖಿತ ಭರವಸೆಯನ್ನು ಪಕ್ಷಕ್ಕೆ ನೀಡುವಂತೆ ಒತ್ತಾಯಿಸಲಾಗಿದೆ ಎಂದು ಅವರು ಹೇಳಿದರು.

ಎಂವಿಎ ಪ್ರಸ್ತಾಪಿಸಿದ ಸ್ಥಾನಗಳಲ್ಲಿ ಅಕೋಲಾ, ಅಮರಾವತಿ, ನಾಗ್ಪುರ, ಭಂಡಾರಾ-ಗೊಂಡಿಯಾ, ಚಂದ್ರಾಪುರ್, ಹಿಂಗೋಲಿ, ಉಸ್ಮಾನಾಬಾದ್, ಔರಂಗಾಬಾದ್, ಬೀಡ್, ಸೋಲಾಪುರ್, ಸಾಂಗ್ಲಿ, ಮಾಧಾ, ರೇವರ್, ದಿಂಡೋರಿ, ಶಿರಡಿ, ಮುಂಬೈ ದಕ್ಷಿಣ-ಮಧ್ಯ, ಮುಂಬೈ ಉತ್ತರ-ಮಧ್ಯ, ಮುಂಬೈ ಸೇರಿವೆ. ಈಶಾನ್ಯ, ರಾಮ್ಟೆಕ್, ಸತಾರಾ, ನಾಸಿಕ್, ಮಾವಲ್, ಧುಲೆ, ನಾಂದೇಡ್, ಬುಲ್ಡಾನ ಮತ್ತು ವಾರ್ಧಾ.

ಎಂವಿಎ ಮೈತ್ರಿಕೂಟಕ್ಕೆ ಸೀಟು ಹಂಚಿಕೆ ಸೂತ್ರವನ್ನು ಅಂತಿಮಗೊಳಿಸಿದೆ ಎಂದು ಶಿವಸೇನೆ (ಯುಬಿಟಿ) ನಾಯಕ ಸಂಜಯ್ ರಾವುತ್ ಹೇಳಿದ್ದಾರೆ. ನಾವು ವಿಬಿಎಯನ್ನು ಮಂಡಳಿಯಲ್ಲಿ ತರಲು ಉತ್ಸುಕರಾಗಿದ್ದೇವೆ ಮತ್ತು ನೀಡಬಹುದಾದ ವಾಸ್ತವಿಕ ಸಂಖ್ಯೆಯ ಸೀಟುಗಳೊಂದಿಗೆ ಮತ್ತಷ್ಟು ಮಾತುಕತೆ ನಡೆಸುತ್ತೇವೆ ಎಂದು ಅವರು ಹೇಳಿದರು.

## ಆರೋಪ

ರಾಮಪ್ಪಗೆ ಎಂಬವರಿಗೆ 1991ರಲ್ಲಿ ಸರ್ಕಾರ 3 ಎಕರೆ ಜಮೀನು ನೀಡಿತ್ತು. ಆ ಬಳಿಕದಿಂದ ರಾಮಪ್ಪ ಇದೇ ಜಮೀನಿನಲ್ಲಿ ಉಳುಮೆ ಮಾಡಿಕೊಂಡು ಜೀವನ ನಡೆಸುತ್ತಿದ್ದರು. ಆದರೆ ಕೆಲ ದಿನಗಳ ಬಳಿಕ ರಾಮಪ್ಪಗೆ ಸೇರಿದ ಜಮೀನಿನ 20 ಗುಂಟೆಯನ್ನು ಒತ್ತುವರಿ ಮಾಡಿದ್ದಾರೆ. ಐನಾಪುರದ ಸುಭಾ?ಶ್ ದಾನೊಳ್ಳಿ, ಸುರೇಶ ದಾನೊಳ್ಳಿ, ಮಾಯಪ್ಪ ಹಳ್ಯಾಳ ವಿರುದ್ಧ ಒತ್ತುವರಿ ಆರೋಪ ಕೇಳಿಬಂದಿದೆ.

ನಮಗೆ ರಾಜಕೀಯ ನಾಯಕರ ಸಂಪರ್ಕ ಇದೆ ಎಂದು ಹೇಳಿ ದಬ್ಬಾಳಿಕೆ ಮಾಡುತ್ತಿದ್ದಾರೆ. ಜಮೀನು ಜೊತೆ ರಸ್ತೆಗೆ ಮೀಸಲಿಟ್ಟ ಜಾಗವೂ ಒತ್ತುವರಿ ಮಾಡಿದ್ದಾರೆ. ಈ ಒತ್ತುವರಿ ಪ್ರಶ್ನಿಸಲು ಹೋಗಿದ್ದ ಪತ್ನಿ ಜಯಶ್ರೀ ಜೊತೆಗೆ ಅಸಭ್ಯ ವರ್ತನೆ ತೋರಿದ್ದಾರೆ. ಅಲ್ಲದೇ ಅವಾಚ್ಯ ಶಬ್ಧಗಳಿಂದ ನಿಂದಿಸುವ ಜೊತೆಗೆ ವಿವಸ್ತಗೊಳಿಸಿ ವಿಕೃತಿ ಮೆರೆಯುವುದರ ಜೊತೆಗೆ ಪುತ್ರ ಮುರಾರಿ ಮೇಲೂ ಮಾರಣಾಂತಿಕ ಹಲ್ಲೆಗೈದಿರುವ ಆರೋಪವನ್ನು ರಾಮಪ್ಪ ಮಾಡಿದ್ದಾರೆ.

ಈ ಹಿಂದೆಯೂ ನಡೆದಿತ್ತು ಇಂಥದ್ದೇ ಘಟನೆ: ಎರಡು ತಿಂಗಳ ಹಿಂದೆಯಷ್ಟೇ ಇಂಥದ್ದೇ ಒಂದು ಘಟನೆ ಬೆಳಗಾವಿಯಲ್ಲಿ ನಡೆದಿತ್ತು. ಅದುಕೂಡ ಜಮೀನು ವಿಚಾರವಾಗಿತ್ತು. ಜಮೀನು ಒತ್ತುವರಿ ಮಾಡಿದ್ದನ್ನು ಪ್ರಶ್ನಿಸಿ ಮಹಿಳೆ ಕೋರ್ಟ್ ಮೆಟ್ಟಿಲೇರಿದ್ದರು. ಮಹಿಳೆಯ ಮಾವ ಜಮೀನಿನಲ್ಲಿ ಮೇವಿನ ಬಣವಿ ಒಟ್ಟಲು ನೀಡಿದ್ದರು. 6 ಎಕರೆ ಭೂಮಿ ಆಕೆಯ ಮಾವನ ಹೆಸರಿನಲ್ಲಿತ್ತು. ಬೆಳಗಾವಿ ಜಿಲ್ಲೆಯ ಬೈಲಹೊಂಗಲ ತಾಲೂಕಿನ ತಿಗಡಿ ಗ್ರಾಮದಲ್ಲಿ ಈ ಜಮೀನು ಹೊಂದಿದ್ದರು. ಮಹಿಳೆಯನ್ನು ಆರೋಪಿಗಳೆಲ್ಲ ಸೇರಿ ಹೊಡೆದು ಜೀವ ಬೆದರಿಕೆ ಹಾಕಿರುವ ಆರೋಪ ಕೇಳಿಬಂದಿತ್ತು.

## ನಾಶ

ನಾಶಗೊಂಡಿದೆ. ಹೀಗಾಗಿ ಸಾರ್ವಜನಿಕರು ಅರಣ್ಯ ಇಲಾಖೆ ವಿರುದ್ಧ ಆಕ್ರೋಶ ಹೊರಹಾಕಿದ್ದಾರೆ.

ಹಾಸನ ಚಿಕ್ಕಮಗಳೂರು ಗಡಿ ಭಾಗದಲ್ಲಿ ಬೀಡುಬಿಟ್ಟಿರುವ ಬೀಟಮ್ಮ ತನ್ನ 20ಕ್ಕೂ ಹೆಚ್ಚು ಕಾಡಾನೆಗಳೊಂದಿಗೆ ದಾಂಧಲೆ ನಡೆಸುತ್ತಿದ್ದಾಳೆ. ಕಳೆದ ನಾಲ್ಕು ದಿನಗಳಲ್ಲಿ ಮೂಡಿಗೆರೆ ತಾಲೂಕಿನ ಐದು ಗ್ರಾಮಗಳಿಗೆ ಈ ಗ್ಯಾಂಗ್ ಲಗ್ಗೆ ಇಟ್ಟಿದ್ದು, ಲಕ್ಷಾಂತರ ಮೌಲ್ಯದ ಕಾಫಿ, ಮೆಣಸು, ಬಾಳೆ ಬೆಳೆ ನಾಶಗೊಂಡಿದೆ.

ಕಾರ್ ಬೈಲು, ನಂದಿಪುರ, ಮಾಕೋನಹಳ್ಳಿ, ಚಂದ್ರಾಪುರದಲ್ಲಿ ಸಂಚಾರ ಮಾಡುತ್ತಿರುವ ಬೀಟಮ್ಮ ಗ್ಯಾಂಗ್, ಮಾಕೋನಹಳ್ಳಿ ಹಾಗೂ ಕಾರ್ ಬೈಲು ಗ್ರಾಮಗಳಲ್ಲಿ 10 ಎಕರೆಗೂ ಅಧಿಕ ಪ್ರದೇಶದಲ್ಲಿ ಕಾಫಿ ತೋಟ ನಾಶಗೊಳಿಸಿದೆ. ಈ ಬಗ್ಗೆ ಅರಣ್ಯ ಇಲಾಖೆಯ ವಿರುದ್ಧ ಗ್ರಾಮಸ್ಥರು ಆಕ್ರೋಶ ಹೊರಹಾಕಿದ್ದಾರೆ. ಕಾಡಾನೆ ಹಿಂಡನ್ನು ಕಾಡಿಗಟ್ಟುವಂತೆ ಆಗ್ರಹಿಸಿದ್ದಾರೆ.

## ವಿರೋಧ

ರಾಜ್ಯ ವಕ್ಫ್ ಬೋರ್ಡ್‌ನ ನೂರಾರು ಎಕರೆ ಜಮೀನು ಬೆಂಗಳೂರಿನಲ್ಲಿ ಇದೆ. ಆದರೂ ಪಶುಸಂಗೋಪನಾ ಇಲಾಖೆಯ ಜಮೀನನ್ನು ಅಲ್ಪಸಂಖ್ಯಾತರಿಗೆ ನೀಡಿರುವ ಸರ್ಕಾರದ ಕ್ರಮ ಸರಿಯಲ್ಲ ಎಂದು ಹಿಂದೂಪರ ಸಂಘಟನೆಗಳು ಅಸಮಾಧಾನ ಹೊರಹಾಕಿವೆ.ಚಾಮರಾಜಪೇಟೆಯ 2 ಎಕರೆ ಪಶುಸಂಗೋಪನೆ ಇಲಾಖೆಯ ಜಮೀನು ಅಲ್ಪಸಂಖ್ಯಾತ ಇಲಾಖೆಯ ಅಲ್ಪಸಂಖ್ಯಾತ ಶಾಲೆ ನಿರ್ಮಾಣ ಮಾಡಲು ನೀಡುವುದು ಖಂಡನೀಯವಾಗಿದೆ. ಇದು ಒಂದು ರೀತಿಯ ಲ್ಯಾಂಡ್ ಜಿಹಾದ್. ನಾಗರಿಕರು ಜಾಗೃತರಾಗಿ. ನಗರದಲ್ಲಿ ಬಿಡಾಡಿ ದನಗಳ ಚಿಕಿತ್ಸೆಗೆ ಯೋಗ್ಯ ಚಿಕಿತ್ಸಾಲಯ ಇಲ್ಲ. ಪಶು ಇಲಾಖೆಯ ಚಿಕಿತ್ಸಾಲಯ ಉಳಿಸಿ, ಒಂದೇ ಸಮುದಾಯದ ಶಾಲೆಯನ್ನು ವಿರೋಧಿಸಿ ಎಂದು ಹಿಂದೂ ಸಂಘಟನೆಯ ಮೋಹನ್ ತಿಳಿಸಿದ್ದಾರೆ.

ಸರ್ಕಾರದ ನಡೆಗೆ ವಿಪಕ್ಷಗಳು ಸಹ ವಿರೋಧ ವ್ಯಕ್ತಪಡಿಸಿವೆ. ಈ ಕುರಿತು ಮಾತನಾಡಿರುವ ವಿಪಕ್ಷ ನಾಯಕ ಆರ್.ಅಶೋಕ್, ಛಲವಾದಿ ಪಾಳ್ಯದ 2 ಎಕರೆ ಭೂಮಿ ಅಲ್ಪಸಂಖ್ಯಾತರ ಇಲಾಖೆಗೆ ವರ್ಗಾವಣೆ ಪ್ರಕರಣವು ಅಲ್ಪಸಂಖ್ಯಾತರ ಓಲೈಕೆಯನ್ನು ಸರ್ಕಾರ ಮುಂದುವರಿಸಿದೆ. ಸರ್ಕಾರದ ಬೇರೆ ಬೇರೆ ಇಲಾಖೆಗಳ ಜಾಗವನ್ನು ಅಲ್ಪಸಂಖ್ಯಾತರಿಗೆ ಸರ್ಕಾರ ಕೊಡುತ್ತಿದೆ. ಸರ್ಕಾರ ಮತ್ತೊಂದು ಎಡವಟ್ಟು ಮಾಡಿಕೊಂಡಿದೆ ಎಂದು ಕಿಡಿಕಾರಿದ್ದಾರೆ.

# ಸಮಾಜ ಬೆಳೆಸಲು ಹೋರಾಡಿದ ವೀರ ಯೋಧ ಸೇವಾಲಾಲ್



**ಮೈಸೂರು :** ಸೇವಾಲಾಲ್ ಅವರು ಸಮಾಜವನ್ನು ಬೆಳೆಸಲು ಮತ್ತು ಪ್ರತಿಯೊಬ್ಬರಿಗೂ ಸ್ಥಾನಮಾನವನ್ನು ದೊರಕಿಸಿಕೊಡಲು ಜೀವನ ಪೂರ್ತಿ ಹೋರಾಟಗಳನ್ನು ಮಾಡಿಕೊಂಡು ಬಂದ ವೀರ ಯೋಧ ಎಂದು ಅಂತಾರಾಷ್ಟ್ರೀಯ ಸಂಪನ್ಮೂಲ ತಜ್ಞರು, ಕಲಾವಿದರು ಹಾಗೂ ಸಾಹಿತಿಗಳಾದ ಡಾ. ಎ. ಆರ್ ಗೋವಿಂದ ಸ್ವಾಮಿ ಅವರು ಹೇಳಿದರು.

ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಕರ್ನಾಟಕ ಕಲಾಮಂದಿರದಲ್ಲಿ ಆಯೋಜಿಸಲಾಗಿದ್ದ ಶ್ರೀ ಸಂತ ಸೇವಾಲಾಲ್ ಜಯಂತಿಯ ಮುಖ್ಯ ಭಾಷಣಕಾರರಾಗಿ ಮಾತನಾಡಿದ ಅವರು, ವಿವಿಧತೆಯಲ್ಲಿ ಏಕತೆ ಇರುವ ನಮ್ಮ ದೇಶದ ಕಲ್ಯಾಣಕ್ಕಾಗಿ ಹಲವಾರು ಸಂಸ್ಕೃತಿಕ ನಾಯಕರು, ದಾರ್ಶಣಿಕರು ಹೋರಾಟ ಮಾಡಿದ್ದಾರೆ ಅಂತಹವಾರಲ್ಲಿ ಸೇವಾಲಾಲ್ ಕೂಡ ಒಬ್ಬರು ಎಂದರು.

ಸೇವಾಲಾಲ್ ಅವರು ಪರಿಸರ, ಪ್ರಾಣಿ -ಪಕ್ಷಿ ಪ್ರಿಯ. ಬುಡಕಟ್ಟು ಹಾಗೂ ಅಲೆಮಾರಿ ಜನಾಂಗದ ಜನರ ಬೆಳವಣಿಗೆಗೆ ಹಾಗೂ ಅವರಿಗೆ ನೆಲೆ ಕಟ್ಟುಕೊಡಲು ಮುಂದಾದವರು. ಎಲ್ಲರಿಗೂ ವಿದ್ಯೆ ಸಿಗಬೇಕು ಎಂದು ವಿದ್ಯೆಗೆ ಹೆಚ್ಚಿನ ಮಹತ್ವವನ್ನು ನೀಡಿ ಕೋಶ ಓದಿ ಜ್ಞಾನವನ್ನು ಬೆಳೆಸಿಕೊ ಎಂಬ ತತ್ವವನ್ನು ಅಳವಡಿಸಿಕೊಂಡಿದ್ದವರು ಎಂದು ತಿಳಿಸಿದರು.

ಬಂಜರ ಸಮುದಾಯದ ಜನರಲ್ಲಿ ಒಗ್ಗಟ್ಟನ್ನು ಮೂಡಿಸಿ ಪ್ರತಿಯೊಬ್ಬ ವ್ಯಕ್ತಿಯೂ ಸಮಾಜದಲ್ಲಿ ಉನ್ನತ ಸ್ಥಾನದಲ್ಲಿ ಇರಬೇಕು ಎಂಬ ಕನಸನ್ನು ಕಂಡವರು ಸೇವಾಲಾಲ್ ಅವರು. ಆದರೆ ಇಂದು ನಮ್ಮ ಸಮುದಾಯದಲ್ಲಿ ಒಗ್ಗಟ್ಟಿನ ಪರಸ್ಪರ ನಂಬಿಕೆ, ಪ್ರೀತಿ, ಸಹಬಾಳ್ವೆಯ ಕೊರತೆಯಿಂದಾಗಿ ಸೌಲಭ್ಯಗಳಿಂದ ವಂಚಿತರಾಗಿದ್ದೇವೆ. ಹಾಗಾಗಿ ಮುಂದಿನ ದಿನಗಳಲ್ಲಿ ಎಲ್ಲರೂ ಒಗ್ಗಟ್ಟಾಗಿ ಸಂತ ಸೇವಾಲಾಲರ ಆದರ್ಶ ಹಾಗೂ ಅವರ ನಡೆಯನ್ನು ಅನುಸರಿಸಿ ಅವರು ಕಂಡ ಕನಸನ್ನು ನನಸು ಮಾಡುವ ನಿಟ್ಟಿನಲ್ಲಿ ಹೋರಾಡೋಣ ಎಂದರು.

ಕಾರ್ಯಕ್ರಮದಲ್ಲಿ ತಿ.ನರಸೀಪುರದ ಪಿಂಜರಾಪೋಲ್ ಗೋ ಶಾಲೆಯ ಶ್ರೀ 1008 ಚೇತನಗಿರಿ ಸ್ವಾಮೀಜಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಮೈಸೂರು ವಿಭಾಗೀಯ ಜಂಟಿ ನಿರ್ದೇಶಕರಾದ ವಿ ಎನ್ ಮಲ್ಲಿಕಾರ್ಜುನ ಸ್ವಾಮಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಎಂ ಡಿ ಸುದರ್ಶನ್, ಬಂಜಾರ್ ಸೇವಾ ಸಂಘದ ಅಧ್ಯಕ್ಷರಾದ ಸುಂದರ್, ಉಪಾಧ್ಯಕ್ಷರಾದ ಓಂಕಾರ್ ನಾಯಕ್, ಕಾರ್ಯದರ್ಶಿಗಳಾದ ಚಂದ್ರನಾಯಕ್, ಜಂಟಿ ಕಾರ್ಯದರ್ಶಿಗಳಾದ ಕೃಷ್ಣ ನಾಯಕ್, ಖಜಾಂಚಿಗಳಾದ ಮುನಿಸ್ವಾಮಿ, ಸಂತ ಸೇವಾಲಾಲ್ ಸಮುದಾಯದ ಮುಖಂಡರು ಹಾಗೂ ಜಿಲ್ಲೆಯ ವಿವಿಧ ಸಂಘ ಸಂಸ್ಥೆಗಳ ಮುಖಂಡರು ಉಪಸ್ಥಿತರಿದ್ದರು.

# ನಾಳೆಯಿಂದ ಪಿಯು ಪರೀಕ್ಷೆ

**ಮೈಸೂರು :** ಜಿಲ್ಲೆಯಲ್ಲಿ ಮಾರ್ಚ್ 1 ರಿಂದ ಮಾರ್ಚ್ 22ರವರೆಗೆ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆ 49 ಕೇಂದ್ರಗಳಲ್ಲಿ ಜರುಗಲಿದ್ದು ಯಾವುದೇ ಲೋಪದೋಷಗಳವಾಗದಂತೆ ಪರೀಕ್ಷೆ ನಡೆಸಬೇಕು ಎಂದು ಅಪರ ಜಿಲ್ಲಾಧಿಕಾರಿ ಪಿ.ಶಿವರಾಜು ಅವರು ತಿಳಿಸಿದರು.

ಅವರು ಇಂದು ಜಿಲ್ಲಾಧಿಕಾರಿಕಗಳ ಕಛೇರಿಯಲ್ಲಿ ನಡೆದ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಗಳ ಸುಗಮ ಸಂಚಾಲನೆಗಾಗಿ ಪೂರ್ವಭಾವಿ ಸಭೆ ನಡೆಸಿ ಮಾತನಾಡಿದ ಅವರು, ಮೈಸೂರು ನಗರದಲ್ಲಿ 26 ಪರೀಕ್ಷಾ ಕೇಂದ್ರಗಳಲ್ಲಿ ಹಾಗೂ ಗ್ರಾಮಾಂತರ ವ್ಯಾಪ್ತಿಯಲ್ಲಿ 23 ಪರೀಕ್ಷಾ ಕೇಂದ್ರಗಳಲ್ಲಿ 31,628 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದು ಎಲ್ಲಾ ಪರೀಕ್ಷಾ ಕೇಂದ್ರಗಳ ಮೇಲೆ ತೀವ್ರ ನಿಗಾ ವಹಿಸಬೇಕು ಎಂದರು. ಪರೀಕ್ಷಾ ಕೇಂದ್ರಗಳಲ್ಲಿ ವಿದ್ಯಾರ್ಥಿಗಳಿಗೆ ಸೂಕ್ತ ಆಸನ ಹಾಗೂ ಪರೀಕ್ಷೆ ಬರೆಯಲು ಡೆಸ್ಕ್ ವ್ಯವಸ್ಥೆ ಮಾಡಬೇಕು. ಕುಡಿಯುವ ನೀರು, ಶೌಚಾಲಯದ ಸೇರಿದಂತೆ ಮೂಲಭೂತ ಸೌಕರ್ಯದ ವ್ಯವಸ್ಥೆಯಾಗಬೇಕು ಎಂದರು. ಕೊಠಡಿಗಳಲ್ಲಿ ಗಡಿಯಾರ, ಸಿ.ಸಿ.ಟಿ.ವಿ ವ್ಯವಸ್ಥೆ ಕಡ್ಡಾಯವಾಗಿ ಇರಬೇಕು. ಎಲ್ಲಾ ಪರೀಕ್ಷಾ ಕೇಂದ್ರಗಳಿಗೆ ಸೂಕ್ತ ಪೊಲೀಸ್ ಬಂದೋಬಸ್ತಾಗಬೇಕು ಎಂದರು. ಪರೀಕ್ಷೆ ನಡೆಯುವ ದಿನಗಳಂದು ಪರೀಕ್ಷಾ ಕೇಂದ್ರಗಳ ಸುತ್ತಲೂ 200 ಮೀ. ಸುತ್ತಳತೆಯಲ್ಲಿ 144 ನೇ ಕಲಂ ಜಾರಿಗೊಳಿಸಲು ಮತ್ತು ಪರೀಕ್ಷಾ ಕೇಂದ್ರಗಳ ಸುತ್ತ ಮುತ್ತಲಿನ ಜೆರಾಕ್ಸ್ ಅಂಗಡಿಗಳನ್ನು ಮುಚ್ಚಿಸಬೇಕು ಎಂದರು.

» **ಪರೀಕ್ಷೆಯಲ್ಲಿ ಯಾವುದೇ ಲೋಪವಾಗದಂತೆ ನೋಡಿಕೊಳ್ಳಿ- ಅಪರ ಜಿಲ್ಲಾಧಿಕಾರಿ ಪಿ. ಶಿವರಾಜು**

ಪರೀಕ್ಷಾ ಕೇಂದ್ರಕ್ಕೆ ಮುಖ್ಯ ಅಧೀಕ್ಷಕರುಗಳನ್ನು ನೇಮಕ ಮಾಡಲಾಗಿದೆ. ಮುಖ್ಯ ಅಧೀಕ್ಷಕರನ್ನು ಹೊರತುಪಡಿಸಿ ಕೊಠಡಿ ಮೇಲ್ವಿಚಾರಕರು, ಇತರೆ ಸಿಬ್ಬಂದಿಗಳು ಮತ್ತು ವಿದ್ಯಾರ್ಥಿಗಳು ಮೊಬೈಲ್ ಇತ್ಯಾದಿ ಎಲೆಕ್ಟ್ರಾನಿಕ್ ಸಾಧನಗಳನ್ನು ಬಳಸುವುದನ್ನು ಕಡ್ಡಾಯವಾಗಿ ನಿಷೇಧಿಸಬೇಕು ಎಂದರು. ಜಿಲ್ಲಾ ಖಜಾನೆಯಿಂದ ಸಂಬಂಧಿಸಿದ ಪರೀಕ್ಷಾ ಕೇಂದ್ರಗಳಿಗೆ ಪ್ರಶ್ನೆ ಪತ್ರಿಕೆ ವಿತರಿಸಲು ಪ್ರಶ್ನೆ ಪತ್ರಿಕೆ ಮಾರ್ಗಾಧಿಕಾರಿ ತಂಡಗಳಿಗೆ ಅಗತ್ಯವಿರುವ ವಾಹನಗಳ ಸೌಕರ್ಯ ಒದಗಿಸಿ ಎಂದರು. ಪರೀಕ್ಷೆಗೆ ಹಾಜರಾದ ವಿದ್ಯಾರ್ಥಿಗಳ ಹಾಜರಾತಿಯನ್ನು online ನಲ್ಲಿ upload (PU exam login portal) ಮಾಡುವುದರಿಂದ ಪರೀಕ್ಷಾ ಸಮಯದಲ್ಲಿ ನಿರಂತರ ವಿದ್ಯುತ್ ಸರಬರಾಜು ಮಾಡಬೇಕು ಎಂದರು. ಪರೀಕ್ಷಾ ದಿನಗಳಂದು ಪ್ರಶ್ನೆ ಪತ್ರಿಕೆ ವಿತರಕರ ತಂಡದ ಬೆಂಗಾವಲಾಗಿ ಸಶಸ್ತ್ರ ಪೊಲೀಸ್ ಸಿಬ್ಬಂದಿಯನ್ನು ನೇಮಿಸಲಾಗುವುದು ಎಂದರು. ಸಭೆಯಲ್ಲಿ ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಎಂ.ಮರಿಸ್ವಾಮಿ ಹಾಗೂ ಕಾಲೇಜಿನ ಪ್ರಾಂಶುಪಾಲರು ಉಪಸ್ಥಿತರಿದ್ದರು.



## ಜಿಲ್ಲಾ ಪಂಚಾಯಿತಿ ಸಿಇಒ ಕೆ.ಎಂ.ಗಾಯಿತ್ರಿ ಸೂಚನೆ

# ನೀರಿಗೆ ಸಮಸ್ಯೆ ಆಗದಿರಲಿ

**ಮೈಸೂರು :** ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಎಲ್ಲೂ ಕುಡಿಯುವ ನೀರಿಗೆ ಸಮಸ್ಯೆಯಾಗದಂತೆ ಅಧಿಕಾರಿಗಳು ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಕೆ.ಎಂ. ಗಾಯಿತ್ರಿ ಅವರು ಸೂಚಿಸಿದರು.

ಬುಧವಾರ ಟಿ.ನರಸೀಪುರ ತಾಲ್ಲೂಕಿನ ಸೋಮನಾಥಪುರ ಗ್ರಾಮ ಪಂಚಾಯಿತಿ ಸಭಾಂಗಣದಲ್ಲಿ ಗ್ರಾಮ ಪಂಚಾಯಿತಿ ಅಧ್ಯಕ್ಷರು ಹಾಗೂ ಸದಸ್ಯರ ಸಮ್ಮುಖದಲ್ಲಿ ನಡೆದ ಸಭೆಯಲ್ಲಿ ಹಲವು ವಿಷಯಗಳ ಕುರಿತು ಚರ್ಚಿಸಿ ಅವರು ಮಾತನಾಡಿದರು.

ಬಾಕಿ ಇರುವ ಜಲ ಜೀವನ್ ಮಿಷನ್ ಕಾಮಗಾರಿಗಳನ್ನು ತ್ವರಿತವಾಗಿ ಮುಂದಿನ ಒಂದು ತಿಂಗಳೊಳಗೆ ಪೂರ್ಣಗೊಳಿಸಲು ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಇಂಜಿನಿಯರ್ ರವರಿಗೆ ತಿಳಿಸಿದರು.

ನರೇಗಾ ಯೋಜನೆಯಡಿ ಬೂದು ನೀರು ನಿರ್ವಹಣಾ ಕಾಮಗಾರಿಗಳನ್ನು ಅತೀ ಶೀಘ್ರದಲ್ಲೇ ಪ್ರಾರಂಭಿಸಬೇಕು ಎಂದು ತಿಳಿಸುತ್ತಾ ಈ ಕಾಮಗಾರಿಗಳಿಂದ ಸಾರ್ವಜನಿಕರಿಗೆ ಆಗುವ ಅನುಕೂಲಗಳ ಬಗ್ಗೆ ಗ್ರಾಮ ಪಂಚಾಯಿತಿ ಅಧ್ಯಕ್ಷರು ಹಾಗೂ ಸದಸ್ಯರುಗಳಿಗೆ ಮಾಹಿತಿಯನ್ನು ನೀಡಿದರು.

ಮಾರ್ಚ್ 3 ರಂದು ನಡೆಯುವ ಪಲ್ಸ್ ಪೋಲಿಯೋ ಕಾರ್ಯಕ್ರಮವನ್ನು ಸಾರ್ವಜನಿಕರಿಗೆ ಜಾಗೃತಿ ಮೂಡಿಸಿ ಕಾರ್ಯಕ್ರಮವನ್ನು ಸಂಪೂರ್ಣವಾಗಿ ಯಶಸ್ವಿಗೊಳಿಸ ಬೇಕೆಂದು ವೈದ್ಯಾಧಿಕಾರಿಗಳಿಗೆ ನಿರ್ದೇಶನ ನೀಡಿದರು.



ನರೇಗಾ ಯೋಜನೆಯಡಿ ಸಮುದಾಯ ಕಾಮಗಾರಿಗಳಿಗೆ ಹೆಚ್ಚಿನ ಒತ್ತು ನೀಡುವ ಮೂಲಕ ಹೆಚ್ಚಿನ ಜನರಿಗೆ ಉದ್ಯೋಗವನ್ನು ಕಲ್ಪಿಸಿಕೊಡುವಂತೆ ಹಾಗೂ ಕಾಮಗಾರಿಗಳಲ್ಲಿ ಮಹಿಳೆಯರು ಹೆಚ್ಚಾಗಿ ಭಾಗವಹಿಸುವಂತೆ ಅರಿವು ಮೂಡಿಸಬೇಕೆಂದು ತಿಳಿಸಿದರು.

ತೆರಿಗೆ ವಸೂಲಾತಿಯನ್ನು ಕಡ್ಡಾಯವಾಗಿ ಪಿ ಓ ಎಸ್ ಮಿಷನ್ ಬಳಸಿ ಸಂಗ್ರಹಿಸಬೇಕು. ಬಾಕಿ ಇರುವ ತೆರಿಗೆಯನ್ನು ಶೇ.100 ರಷ್ಟು ವಸೂಲಾತಿಯನ್ನು ಮಾಡಲು ತಿಳಿಸಿದರು.

ಸಂಜೀವಿನಿ ಸಂಘದವರಿಂದ ತಯಾರಾದ ಸಾಂಬಾರು ಪುಡಿ ಮತ್ತು ಉಪ್ಪಿನಕಾಯಿಗಳನ್ನು ಮಾರಾಟ ಮಾಡಲು ಅನುಕೂಲವಾಗುವಂತೆ ಅಂಗಡಿ ವ್ಯವಸ್ಥೆಯನ್ನು ಮಾಡಿ ಕೊಡುವಂತೆ ಪಿ ಡಿ ಒ ರವರಿಗೆ ಸೂಚಿಸಿದರು.

ಮಹಿಳಾ ಸಂಘದವರು ನಡೆಸುತ್ತಿರುವ ಬಳೆ ಅಂಗಡಿ, ಸೀರೆ ಅಂಗಡಿ, ಗೊಂಬೆ ಅಂಗಡಿ, ಸಿಗಡಿ ಮತ್ತು ಕರಿಮೀನು ಮಾರಾಟ ಮಾಡಲು ಅನುಕೂಲವಾಗುವಂತೆ ಪಿಡಿಒ ರವರಿಗೆ ಮಾಹಿತಿ ನೀಡಲು ಸೂಚನೆ ನೀಡಿದರು. ಗ್ರಂಥಾಲಯಕ್ಕೆ ಭೇಟಿ ನೀಡಿ ಪುಸ್ತಕಗಳು ಹಾಗೂ ರಿಜಿಸ್ಟರ್ ಗಳನ್ನು ಪರಿಶೀಲಿಸಿ ಕಟ್ಟಡವನ್ನು ದುರಸ್ತಿಗೊಳಿಸಲು ಕ್ರಮ ವಹಿಸಬೇಕೆಂದು ತಿಳಿಸಿದರು. ಬೇಸಿಗೆ ಪ್ರಾರಂಭವಾಗಿರುವುದರಿಂದ ಜಾನುವಾರುಗಳಿಗೆ ಕುಡಿಯುವ ನೀರಿನ ಸಮಸ್ಯೆಯಾಗದಂತೆ ಅಗತ್ಯ ಕ್ರಮ ವಹಿಸಬೇಕೆಂದು ತಿಳಿಸಿದರು.

ತಾಲ್ಲೂಕು ಕಾರ್ಯನಿರ್ವಾಹಕ ಅಧಿಕಾರಿಗಳಾದ ಕೃಷ್ಣ. ಸಿ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಎಇಇ ಕೈಲಾಶ್ ಮೂರ್ತಿ, ಎಇ ಮಂಜುನಾಥ್, ಪಿಆರ್ ಇಡಿ ಎಇಇ ಚರಿತ, ಪಿಡಿಒ ಶಶಿಕುಮಾರ್, ಕಾರ್ಯದರ್ಶಿ ಸುಧೀರ್, ಗ್ರಾಮ ಪಂಚಾಯಿತಿ ಅಧ್ಯಕ್ಷರು, ಉಪಾಧ್ಯಕ್ಷರು ಸದಸ್ಯರುಗಳು ಸೇರಿದಂತೆ ಇತರರು ಹಾಜರಿದ್ದರು.

# ಸದ್ದಿಲ್ಲದೆ ನಡೆದ ಮಾಸಿಕ ಶಿವಾನುಭವ ಗೋಷ್ಠಿ

**ವಿಜಯಪುರ:** ಸುದ್ದಿಗಾಗಿ ಸೇವೆ ಮಾಡಬೇಡಿ ಸೇವೆ ಮಾಡಿ ಸುದ್ದಿಯಾಗಬೇಡಿ ಸದ್ದಿಲ್ಲದೆ ಸೇವೆ ಮಾಡಿ. ನಮ್ಮ ನಾಡಿನಲ್ಲಿ ಹಲವಾರು ಶರಣರು ಸಂತರು ದಾಸರು ಆಗಿ ಹೋಗಿದ್ದಾರೆ ಅವರ ಸಾಲಿಗೆ ಶ್ರೀಶಿವಕುಮಾರ ಸ್ವಾಮಿಗಳು, ಶ್ರೀಸಿದ್ದೇಶ್ವರ ಸ್ವಾಮೀಜಿಗಳು ಸೇರುತ್ತಾರೆ. ಅವರ ಜೀವನಾದರ್ಶ ಎಲ್ಲರ ಬಾಳಿನಲ್ಲಿ ದಾರಿ ದೀಪ ಎಂಬುದಾಗಿ ರಾಷ್ಟ್ರ ಪ್ರಶಸ್ತಿ ಪುರಸ್ಕೃತ ಶಿಕ್ಷಕ ಡಾ ಎಂ ಶಿವಕುಮಾರ್ ಅಭಿಪ್ರಾಯ ಪಟ್ಟಿದ್ದಾರೆ. ಶ್ರೀಯುತರು ವಿಜಯಪುರದ ಶ್ರೀವೀರಭದ್ರ ಸ್ವಾಮಿ ಗೋಷ್ಠಿ ಅಕ್ಕನ ಬಳಗದ 348 ನೆಯ ಮಾಸಿಕ ಶಿವಾನುಭವ ಗೋಷ್ಠಿ ಕಾರ್ಯಕ್ರಮ ದಲ್ಲಿ ಕೆ ಸಿ ಶಿವಪ್ಪ ನವರ ಮುದ್ದು ರಾಮನ ಚೌಪದಿಗಳು ಕೃತಿಯ ಕುರಿತು ಉಪನ್ಯಾಸ ನೀಡುತ್ತಾ ಷಟ್ಪದಿ ಎಂದರೆ ಆರು ಸಾಲಿನ ಹಾಗೂ ಚೌಪದಿಗಳು ಎಂದರೆ ನಾಲ್ಕು ಸಾಲಿನ ಪದ್ಯ ಪ್ರಾಕಾರ. ಶಿವಪ್ಪ ನವರು ಚೌಪದಿ ಮುಖಾಂತರ ಎಲ್ಲರ ಮನ ಮುಟ್ಟುವಂತೆ ಸರಳ ಕನ್ನಡದಲ್ಲಿ ಸರ್ವರೂ ಬದುಕಿನಲ್ಲಿ ಅಳವಡಿಸಿಕೊಳ್ಳಲು ಬೇಕಾದ ಸನ್ಮಾರ್ಗವನ್ನು ತೋರಿದ್ದಾರೆ ಎಂಬುದಾಗಿ ಅಭಿಪ್ರಾಯ ವ್ಯಕ್ತಪಡಿಸಿದರು. ಬದುಕಿಗೆ ಆಧ್ಯಾತ್ಮವನ್ನು ಡಿ ವಿ ಜಿ ಅವರು ಮಂಕುತಿಮ್ಮನಕಗ್ಗ ಕೃತಿಯ ಮುಖಾಂತರ ಹಳಗನ್ನಡ ದಲ್ಲಿ ಭೋಧಿಸಿದ್ದಾರೆ ಅದು ಆಧುನಿಕ ಭಗವದ್ಗೀತೆ ಆದರೆ ಕೆ ಸಿ ಶಿವಪ್ಪ ನವರ ಚೌಪದಿಗಳು ಆಧುನಿಕ ವಚನಗಳು. ಜನ ಸಾಮಾನ್ಯರಿಗೂ ಅರ್ಥವಾಗುವ ಹಾಗೆ ಸರಳ ಕನ್ನಡದಲ್ಲಿ ಬಾಳಿಗೆ ಬೇಕಾದ ಹಲವಾರು ಮೌಲ್ಯ ಗಳನ್ನು ಸರಳವಾಗಿ ತಿಳಿಸಿದ್ದಾರೆ ಎಂದು ಅಭಿಪ್ರಾಯಪಟ್ಟರು. ನಂತರ ಬಳಗದ ಉಪಾಧ್ಯಕ್ಷೆ ಅಂಭಾಭವಾನಿ ಅಕ್ಕ ಮಾತನಾಡುತ್ತ ನಮ್ಮ ಅಕ್ಕನ ಬಳಗದ ಸಂಸ್ಥಾಪಕ ಅಧ್ಯಕ್ಷ ಲಿಂಗೈಕ್ಯ ದೊಡ್ಡ ಅಪ್ಪಯ್ಯಣ್ಣ ನಂಜಮ್ಮ ದಂಪತಿಗಳ ಬದುಕು ಎಲ್ಲರಿಗೂ ಆದರ್ಶ ಗುರು ಲಿಂಗ ಜಂಗಮ ಪ್ರೇಮಿಗಳೂ,ಸರ್ವ ಭೂತದಯಾಪರರೂ, ಆಗಿದ್ದು ಹಲವಾರು ದಾನ ಧರ್ಮಗಳನ್ನು ಮಾಡಿ ಅಮರರಾಗಿದ್ದಾರೆ . ಶ್ರೀಯುತರ ಸಾರ್ಥಕ ಬದುಕಿನ ರೀತಿ ಇಂದಿನ ಯುವ ಪೀಳಿಗೆಗೆ ಆದರ್ಶಪ್ರಾಯ ಎಂಬುದಾಗಿ ಅಭಿಪ್ರಾಯ ವ್ಯಕ್ತಪಡಿಸಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಶ್ರೀ ಸಿ ಬಸಪ್ಪ ಮಾತನಾಡುತ್ತಾ ತಾವು ವಾಸಿಸುತ್ತಿದ್ದ ವಾಸದ ಮನೆಯನ್ನೇ ದಾನವಾಗಿ ಬಿಟ್ಟುಕೊಟ್ಟ ಹೆಗ್ಗಳಿಕೆ ಕೀರ್ತಿಶೇಷ ಪುಟ್ಟಣ್ಣಯ್ಯ ದಂಪತಿಗಳಿಗೆ ಸೇರುತ್ತದೆ. ಅವರ ನಿಸ್ವಾರ್ಥ ಬದುಕು ಎಲ್ಲರಿಗೂ ಆದರ್ಶ ಎಂದು ತಿಳಿಸಿದರು. ಬಳಗದ ಸಂಚಾಲಕ ಕವಿ ಮ ಸುರೇಶ್ ಬಾಬು ಕಾರ್ಯಕ್ರಮ ನಿರೂಪಿಸಿದರು. ಶ್ರೀಮತಿ ಭಾರತಿ ಜಗದೀಶ್ ಪ್ರಾರ್ಥನೆ, ಶ್ರೀಮತಿ ರಾಧ ಮನೋಹರ್ ಸ್ವಾಗತಿಸಿದರು. ಶ್ರೀಮತಿ ವಿಮಲಾಂಬ ಅನಿಲ್, ಶ್ರೀಮತಿ ಮಹಾದೇವಮ್ಮ ಸಂಗಡಿಗರು ವಚನಗಳನ್ನು ಹಾಡಿದರು .ನಿಯೋಜಿತ ಅಧ್ಯಕ್ಷ ಶ್ರೀ ಅನಿಲ್ ಕುಮಾರ್ ವಂದನಾರ್ಪಣೆ ಸಲ್ಲಿಸಿದರು . ಕಾರ್ಯಕ್ರಮದಲ್ಲಿ ನಿವೃತ್ತ ರೇಷ್ಮೆ ನೌಕರ ಕೃಷ್ಣಾನಂದ,ಕೆ ಇ ಬಿ ನಿವೃತ್ತ ಅಧಿಕಾರಿ ಬಿ ಪುಟ್ಟ ರಾಜಣ್ಣ, ಹಿರಿಯ ಸಾಹಿತಿ ಬೆ ಕಾ ಮೂರ್ತಿಶ್ವರಯ್ಯ ,ಶ್ರೀ ಕೃಷ್ಣಪ್ಪ ದಾಸರು,ಶರಣ ಜಯದೇವ್ ಇದ್ದರು.



# ಉದ್ಘಾಟನೆಯಾಗದ ಉಪ ತಹಶೀಲ್ದಾರ್ ಕಚೇರಿ ಸುತ್ತಾ ಮುತ್ತಲು ಅನೈತಿಕ ಚಟುವಟಿಕೆ

**ವಿಜಯಪುರ:** ಪಟ್ಟಣದ ಹೊರ ಹೊಲಯದಲ್ಲಿರುವ ಸುಮಾರು 13 ಲಕ್ಷ ಕಾಮಗಾರಿ ಒಳಗೊಂಡ ಉಪ ತಹಶೀಲ್ದಾರ್ ನಾಡಕಚೇರಿಯ ಉದ್ಘಾಟನೆಯಾಗದೆ ಕುಡುಕರ ತಾಣವಾಗಿದೆ ಎಂದು ಸಾರ್ವಜನಿಕರು ಆರೋಪಿಸಿದ್ದಾರೆ. ದೇವನಹಳ್ಳಿ ಮುಖ್ಯರಸ್ತೆಯಲ್ಲಿ ನೂತನವಾಗಿ ಉಪತಹಶೀಲ್ದಾರ್ ಕಚೇರಿಯು ನಿರ್ಮಾಣವಾಗಿ ವರ್ಷವಾಗುತ್ತಿದ್ದರೂ ಇದುವರೆಗೂ ಉದ್ಘಾಟನೆಯಾಗದೇ ಕಚೇರಿಯ ಸುತ್ತಮುತ್ತಲಿನಲ್ಲಿ ಗಿಡಗಂಟೆಗಳು ಬೆಳೆದು ಕಚೇರಿಯು ಕುಡುಕರ ವಾಸಸ್ಥಳವಾಗಿದ್ದು ಕೂಡಲೇ ಅಧಿಕಾರಿಗಳು ಇತ್ತ ಗಮನಹರಿಸಬೇಕು ಎಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ. ಕಳೆದ ಸರಕಾರವಿದ್ದಾಗ ಕಟ್ಟಡ ಕಾಮಗಾರಿ ನಡೆದಿತ್ತು ನಡೆದು ವರ್ಷ ಕಳೆದರು ಇದುವರೆಗೂ ಸಾರ್ವಜನಿಕರ ಪ್ರಯೋಜನಕ್ಕೆ ಬಾರದೇ ಇಲ್ಲಿ ಅನೈತಿಕ ಚಟುವಟಿಕೆಗಳ ತಾಣವಾಗಿ ಮಾರ್ಪಟ್ಟಿದೆ. ಈ ಕಟ್ಟಡದ ಸುತ್ತಮುತ್ತಲಿನಲ್ಲಿ ಯಾವುದೇ ವಿದ್ಯುತ್ ಸಂಪರ್ಕವಿಲ್ಲದೆ ಇಲ್ಲಿ ಕತ್ತಲಿನಲ್ಲಿ ಕಟ್ಟಡವಿದ್ದು ಪ್ರತಿನಿತ್ಯವೂ ಕುಡುಕರು ಹಾಗೂ ಅನೈತಿಕ ಚಟುವಟಿಕೆಗಳು ನಡೆಯುತ್ತಿದ್ದು ಕೂಡಲೇ ಅಧಿಕಾರಿಗಳು ಕಡೆ ಗಮನಹರಿಸಿ ಸಾರ್ವಜನಿಕರ ಅನುಕೂಲಕ್ಕೆ ಕಟ್ಟಡವನ್ನು ಉದ್ಘಾಟನೆ ಮಾಡಬೇಕೆಂದು ಮಾಜಿ ಪುರಸಭಾ ನಾಮಿನಿ ಸದಸ್ಯ ಕನಕರಾಜು ಒತ್ತಾಯಿಸಿದರು. ಪಟ್ಟಣದ ಹಳೆಯ ಪುರಸಭಾ ಕಟ್ಟಡದಲ್ಲಿ ಕಾರ್ಯ ನಿರ್ವಹಿಸುತ್ತಿದ್ದು ಈ ಕಟ್ಟಡವು ಶಿಥಿಲ ವ್ಯವಸ್ಥೆಯಲ್ಲಿ ಇದೆ. ಮಳೆಗಾಲ ಬಂದರೆ ಕಟ್ಟಡವು ಪೂರ್ತಿ ಮಳೆ ಸುರಿಯುತ್ತಿರುತ್ತದೆ. ಅದರೆ ಇಲ್ಲಿನ ಉಪ ತಹಶೀಲ್ದಾರ್ ಕಚೇರಿ ಬೇರೆಕಡೆ ನಿರ್ಮಾಣಗೊಂಡರೂ ವರ್ಗಾಯಿಸಲು ಯಾಕೆ ತಡವಾಗಿದೆ ಎಂಬುದು ಗೊತ್ತಾಗುತ್ತಿಲ್ಲವೆಂದು. ಹೊಸ ಕಟ್ಟಡ ಸುತ್ತಲು ಗಿಡ-ಗಂಟಿಗಳು ಬೆಳೆದು ನಿಂತಿವೆ ಎಂದು ಸ್ಥಳೀಯ ನಿವಾಸಿಗಲಾದ ಗೋಪಲಪ್ಪ ಆರೋಪಿಸಿದರು. ಉಪ ತಹಶೀಲ್ದಾರ್ ಲವ ಕುಮಾರ್ ರವರು ಮಾತನಾಡಿ ವಿಜಯಪುರ ಉಪ ತಹಶೀಲ್ದಾರ್ ಕಚೇರಿಯು ಪಟ್ಟಣದ ಹೊರವಲಯದಲ್ಲಿರುವುದರಿಂದ ಸಾರ್ವಜನಿಕರಿಗೆ ಇಲ್ಲಿ ನೀರಿನ ಸಮಸ್ಯೆಯೊಂದಿಗೆ ಮೂಲ ಭೂತಸೌಕರ್ಯಗಳ ಸಮಸ್ಯೆಗಳು ಎದ್ದು ಕಾಣತ್ತವೆ ಹಾಗೂ ಬೆಸ್ಕಾಂ ಇಲಾಖೆಗೆ ಇಲ್ಲಿ ವಿದ್ಯುತ್ ಸಮಸ್ಯೆ ಇರುವುದರಿಂದ ಸರಿಪಡಿಸಲು ತಿಳಿಸಿದ್ದೇವೆ ಎಂದು ತಿಳಿಸಿದರು.



# ಶ್ರೀಅರ್ಧನಾರೀಶ್ವರಸ್ವಾಮಿ ದೇವಸ್ಥಾನ ಉದ್ಘಾಟನೆ

**ಮೈಸೂರು:** ಮೈಸೂರಿನ ಹೆಬ್ಬಾಳು ಲೋಕನಾಯಕನಗರದಲ್ಲಿನ 8ನೇ ಕ್ರಾಸ್‌ನಲ್ಲಿ ಶ್ರೀಅರ್ಧನಾರೀಶ್ವರಸ್ವಾಮಿ ದೇವಸ್ಥಾನವನ್ನು ಉದ್ಘಾಟಿಸಲಾಯಿತು.

ಶ್ರೀಶಿವಪಾರ್ವತಿ ಸೇವಾ ಟ್ರಸ್ಟ್ ವತಿಯಿಂದ ಶ್ರೀ ಮಹಾಗಣಪತಿ, ಶ್ರೀ ಸುಬ್ರಮಣ್ಯೇಶ್ವರ ಸಹಿತ ನಿರ್ಮಿಸಿರುವ ಶ್ರೀಅರ್ಧನಾರೀಶ್ವರಸ್ವಾಮಿ ದೇವಸ್ಥಾನವನ್ನು ಆದಿಚುಂಚನಗಿರಿ ಶಾಖಾಮಠದ ಶ್ರೀ ಸೋಮೇಶ್ವರನಾಥ ಸ್ವಾಮೀಜಿ ಉದ್ಘಾಟಿಸಿದರು. ಶ್ರೀ ಅರ್ಧನಾರೀಶ್ವರಸ್ವಾಮಿಯ ವಿಗ್ರಹ ಪ್ರತಿಷ್ಠಾಪನೆ ಹಾಗೂ ಕಳಸ ಪ್ರತಿಷ್ಠಾಪನೆ ಹಾಗೂ ವಿಶೇಷ ಪೂಜೆ ನೆರವೇರಿಸುವ ಮೂಲಕ ದೇವಸ್ಥಾನ ಆರಂಭ ನೀಡಲಾಯಿತು.

ಬಳಿಕ ನೂರಾರು ಮಂದಿ ಭಕ್ತರಿಗೆ ಪ್ರಸಾದ ವಿನಿಯೋಗ ಮಾಡಲಾಯಿತು. ಇದೇ ವೇಳೆ ಶ್ರೀ ಕೆಂಡಗಣ್ಣಸ್ವಾಮಿ ಗದ್ದಿಗೆ ಕ್ಷೇತ್ರದ ಕೆಂಡಗಣ್ಣ ಗುಡ್ಡಪ್ಪ, ಹುಣಸೂರು ಕ್ಷೇತ್ರದ ಶಾಸಕ ಜಿ.ಡಿ.ಹರೀಶ್‌ಗೌಡ, ಮಾಜಿ ಶಾಸಕ ಎಲ್.ನಾಗೇಂದ್ರ, ನಗರಪಾಲಿಕೆ ಮಾಜಿ ಸದಸ್ಯರಾದ ಪೈಲ್ವಾನ್ ಶ್ರೀನಿವಾಸ್, ರಮೇಶ್, ಸಂಜೀವಿನಿ ಸಂಘದ ಅಧ್ಯಕ್ಷ ಕುಮಾರ್, ಮಾಣಿಕ್ಯ ಎಂಟರ್‌ಪ್ರೈಸಸ್‌ನ ಅರುಣ್‌ಕುಮಾರ್, ಕೆ.ಆರ್.ಪೇಟೆ ರಮೇಶ್, ಜಯನಗರ ವಸಂತಣ್ಣ, ಹರ್ಷ ಟೆಂಟ್‌ಹೌಸ್ ಮಾಲೀಕ ಶ್ರೀಧರ್, ನಾರಾಯಣಪ್ಪ, ಸಂಬಾಜೀರಾವ್ ಶಾಸ್ತ್ರಿ, ಕೆ.ಜಿ.ಕೊಪ್ಪಲು ರೇವಣ್ಣ, ಶ್ರೀ ಶಿವಪಾರ್ವತಿ ಸೇವಾ ಟ್ರಸ್ಟ್ ಗೌರವಾಧ್ಯಕ್ಷ ಲಾರಿ ಭೈರಪ್ಪ, ಅಧ್ಯಕ್ಷ ಡಿ.ಸಿ.ಶ್ರೀನಿವಾಸ್, ಪ್ರಧಾನ ಕಾರ್ಯದರ್ಶಿ ಜಿ.ಕೆ.ಪಂಚಾಕ್ಷರಿ, ಸಹಕಾರ್ಯದರ್ಶಿ ಡಿ.ಸಿ.ನವೀನ, ಸಂಘಟನಾ ಕಾರ್ಯದರ್ಶಿ ಕೆ.ಕುಮಾರ್, ಖಜಾಂಚಿ ಬಿ.ಪ್ರಕಾಶ್ ಮತ್ತಿತರರು ಉಪಸ್ಥಿತರಿದ್ದರು.



# ಮಹಿಳೆಯರ ಅಭಿವೃದ್ಧಿಗೆ ಸ್ವಯಂ ಉದ್ಯೋಗ



**ಮೈಸೂರು:** ಮಹಿಳೆಯರು ಅಭಿವೃದ್ಧಿಹೊಂದಲು ಸ್ವ-ಉದ್ಯೋಗ ಬ್ಯೂಟಿಷಿಯನ್ ಸಹಕಾರಿಯಾಗಲಿದೆ. ಪ್ರಸ್ತುತ ದಿನಗಳಮಾನಗಳಲ್ಲಿ ಬ್ಯೂಟಿಷಿಯನ್ ಬಹುಬೇಡಿಕೆ ಇದ್ದು, ಈ ಕೆಲಸದಿಂದ ಮಹಿಳೆಯರು ಜೀವನದಲ್ಲಿ ಉತ್ತಮ ಭವಿಷ್ಯ ರೂಪಿಸಿಕೊಳ್ಳಬಹುದು ಎಂದು ನಿಕಟಪೂರ್ವ ನಗರಪಾಲಿಕ ಸದಸ್ಯರಾದ ಪ್ರಮೀಳಾ ಭರತ್ ಹೇಳಿದರು.

ನಗರದ ಶಾರದಾದೇವಿ ನಗರದಲ್ಲಿ ಸಮೃದ್ಧಿ ಸೇವಾ ಸಮಿತಿ ಟ್ರಸ್ಟ್ ವತಿಯಿಂದ ಉಚಿತ 50 ದಿನದ ಬ್ಯೂಟಿಷಿಯನ್ ತರಬೇತಿ ಕಾರ್ಯಗಾರವನ್ನು ದೀಪ ಬೆಳಗಿಸಿ ಉದ್ಘಾಟಿಸಿ ಮಾತನಾಡಿದ ಅವರು, ಸ್ನಾತಕೋತ್ತರ ಪದವೀದದರು ಸಹ ಈ ಬ್ಯೂಟಿಷಿಯನ್ ತರಬೇತಿ ಪಡೆದು ಮದುವೆ ಸಮಾರಂಭಗಳಲ್ಲಿ ತಮದೇ ಆದ ಕೈಚಳಕ ತೋರಿ ಉತ್ತಮ ಆದಾಯ ಪಡೆಯುತ್ತಿದ್ದಾರೆ. ಈ ಹುಡುಗಿಯರು ಬ್ಯೂಟಿಷಿಯನ್ ಆಗಿ ಸ್ವಂತ ದುಡಿಮೆ ಆರಂಭಿಸಿದರೆ ಅವರು ಹೊರಗೆ ಹೋಗಬೇಕಾದ ಅಗತ್ಯವಿಲ್ಲ ಎಂದು ತಿಳಿಸಿದರು.

ಅಲ್ಪ ಅವಧಿಯ ತರಬೇತಿ ಮೂಲಕ ಕಾಲೇಜು ಅವಧಿ ನಂತರ ಮನೆಯಲ್ಲೇ ಕೇಶವಿನ್ಯಾಸ, ಐಬ್ರೋ, ಫೇಷಿಯಲ್, ಬ್ಲೀಚಿಂಗ್ ಸೇರಿದಂತೆ ಅನೇಕ ಸೌಂದರ್ಯ ವೃದ್ಧಿಸುವ ಕೆಲಸ ಮಾಡಿಕೊಳ್ಳಬಹುದಾಗಿದೆ.ಕಲಿಯಲು ಆಸಕ್ತಿ ಇರುವ ಯುವತಿಯರು ಹಾಗೂ ಮಹಿಳೆಯರು 9964874954 ನಂಬರಿಗೆ ಸಂಪರ್ಕಿಸಿ

ಇದೇ ಸಂದರ್ಭದಲ್ಲಿ ಸಮೃದ್ಧಿ ಸೇವಾ ಸಮಿತಿ ಟ್ರಸ್ಟ್ ಅಧ್ಯಕ್ಷರು ಪ್ರಮೀಳಾ ಭರತ್, ಭರತ್ ,ಚರಣ್, ಕೃಷ್ಣ, ರುಕ್ಮಿಣಿ ,ಇಂದು ಕುಮಾರಿ, ದಾಕ್ಷಾಯಿಣಿ, ಇಂದ್ರಾಕ್ಷಿ. ಹಾಗೂ ಇನ್ನಿತರರು ಹಾಜರಿದ್ದರು.

# ಇಂದಿನಿಂದ ಜೆಎಸ್‌ಎಸ್ ಔಷಧಾಲಯ ಸಮ್ಮೇಳನ

**ಮೈಸೂರು:** ನಗರದ ಜೆಎಸ್‌ಎಸ್ ಔಷಧ ವಿಜ್ಞಾನ ಮಹಾವಿದ್ಯಾಲಯದಿಂದ ಕಾಲೇಜಿನ ರಾಜೇಂದ್ರ ಸಭಾಂಗಣದಲ್ಲಿ ಫೆ.29ರಿಂದ ಮಾರ್ಚ್ 2ರವರೆಗೆ ಔಷಧ ವಿಜ್ಞಾನ ವಿದ್ಯಾರ್ಥಿಗಳ ವೈಜ್ಞಾನಿಕ ಸಮ್ಮೇಳನ (ಆವಿಸ್ಕಾನ್) ಆಯೋಜಿಸಲಾಗಿದೆ ಎಂದು ಸಮ್ಮೇಳನ ಅಧ್ಯಕ್ಷ ಅತಿಕ್‌ಉಲ್ಲಾ ಷರೀಫ್ ತಿಳಿಸಿದರು.

ನಗರದಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಫೆ.29ರಂದು ಬೆಳಿಗ್ಗೆ 11ಕ್ಕೆ ಕಾಲೇಜಿನ ಪ್ರಾಂಶುಪಾಲ ಟಿ.ಎಮ್. ಪ್ರಮೋದ್ ಕುಮಾರ್ ಅಧ್ಯಕ್ಷತೆಯಲ್ಲಿ ಸಮ್ಮೇಳನದ ಉದ್ಘಾಟನೆ ನಡೆಯಲಿದೆ. ಜೆಎಸ್‌ಎಸ್ ವೈದ್ಯಕೀಯ ಕಾಲೇಜಿನ ಪ್ರಾಂಶುಪಾಲ ಡಾ. ಎಚ್.ಬಸವನಗೌಡಪ್ಪ, ಜೆಎಸ್ ಎಸ್ ಉನ್ನತ ಶಿಕ್ಷಣ ಮತ್ತು ಸಂಶೋಧನಾ ಸಂಸ್ಥೆ ಸಂಶೋಧನೆ ವಿಭಾಗದ ಡೀನ್ ಪ್ರಶಾಂತ್ ವಿಶ್ವನಾಥ್ ಭಾಗವಹಿಸುವರು ಎಂದು ತಿಳಿಸಿದರು.

ದೇಶದ ವಿವಿಧ ಭಾಗಗಳಿಂದ 25 ಸಂಪನ್ಮೂಲ ವ್ಯಕ್ತಿಗಳು, 750ಕ್ಕೂ ಹೆಚ್ಚು ಪ್ರತಿನಿಧಿಗಳು ಕಾರ್ಯಕ್ರಮದಲ್ಲಿ ಭಾಗವಹಿಸುವರು. ವೈಜ್ಞಾನಿಕ ಕಾರ್ಯಗಾರಗಳು, ವೃತ್ತಿ ಮಾತುಕತೆಗಳು, ವಿಜ್ಞಾನ ಚಲನಚಿತ್ರ, ಮೌಖಿಕ ಮತ್ತು ಭಿತ್ತಿ ಚಿತ್ರಗಳ ಪ್ರಸ್ತುತಿ ನಡೆಯಲಿದೆ. ಯುವ ಔಷಧ ತಜ್ಞರು ಮತ್ತು ಸಂಪನ್ಮೂಲ ವ್ಯಕ್ತಿಗಳ ನಡುವೆ ಸಂವಹನ ವೇದಿಕೆಯನ್ನು ಕಾರ್ಯಕ್ರಮ ಒದಗಿಸಲಿದೆ ಎಂದು ಮಾಹಿತಿ ನೀಡಿದರು. ಕಾಲೇಜಿನ ಸಹ ಪ್ರಾಧ್ಯಾಪಕ ಬಿ.ಆರ್. ಪ್ರಶಾಂತ್ ಕುಮಾರ್, ಸಮ್ಮೇಳನದ ಉಪಾಧ್ಯಕ್ಷ ದೀಕ್ಷಾ, ಸಂಘಟನಾ ಕಾರ್ಯದರ್ಶಿ ಪಿ.ಆರ್.ಹೇಮಂತ್ ವಿಕ್ರಂ ಉಪಸ್ಥಿತರಿದ್ದರು.



# ಪದಾಧಿಕಾರಿಗಳ ಕಾರ್ಯಾಗಾರ

**ಮೈಸೂರು:** ಅಸೋಸಿಯೇಷನ್ ಆಫ್ ಅಲೈಯನ್ಸ್ ಕ್ಲಬ್ ಇಂಟರ್‌ನ್ಯಾಷನಲ್ ಮೈಸೂರು ಜಿಲ್ಲೆ 255 ಮತ್ತು ಮಂಡ್ಯ ಜಿಲ್ಲೆ 268 (ದಕ್ಷಿಣ) ಈ ಎರಡು ಜಿಲ್ಲೆಗಳ ಪದಾಧಿಕಾರಿಗಳಿಗೆ ಶಾಲಾ ಶಿಕ್ಷಣ (ಸ್ಕೂಲಿಂಗ್) ಒಂದು ದಿನದ ಕಾರ್ಯಾಗಾರವನ್ನು ಇತ್ತೀಚೆಗೆ ಮೈಸೂರಿನ ಹೆಬ್ಬಾಳು ರಿಂಗ್ ರೋಡ್‌ನ ಖಾಸಗಿ ಹೋಟೆಲ್‌ನಲ್ಲಿ ಆಯೋಜಿಸಲಾಗಿತ್ತು. ಈ ಕಾರ್ಯಕ್ರಮದ ಉದ್ಘಾಟನೆಯನ್ನು ಅಂತರರಾಷ್ಟ್ರೀಯ ನಿರ್ದೇಶಕರಾದ (ಎಎಸಿಐ) ಡಾ.ಅಲೈ ನಾಗರಾಜ್ ವಿ.ಭೈರಿಯವರು ನೆರವೇರಿಸಿದರು. ಮಾಜಿ ಅಂತಾರಾಷ್ಟ್ರೀಯ ನಿರ್ದೇಶಕರಾದ ಅಲೈ ದಿವಾಕರ್, ಇಂಟರ್‌ನ್ಯಾಷನಲ್ ಕಮಿಟಿ ಚೇರ್‌ಮನ್‌ಗಳಾದ ಅಲೈ ಮುನಿಯಪ್ಪ, ಅಲೈ ಅಜಂತ ರಂಗಸ್ವಾಮಿ, ಮೈಸೂರು ಜಿಲ್ಲೆ 255ರ ರಾಜ್ಯಪಾಲರಾದ ಅಲೈ ನಂಜುಂಡಸ್ವಾಮಿ ಹಾಗೂ ಒಂದನೇ ಉಪ ರಾಜ್ಯಪಾಲರಾದ ಅಲೈ ಸಿರಿಬಾಲು, ಎರಡನೇ ಉಪ ರಾಜ್ಯಪಾಲರಾದ ಎಸ್. ವೆಂಕಟೇಶ್, ಜಿಲ್ಲಾ ಸಂಪುಟ ಕಾರ್ಯದರ್ಶಿ ಎಂ.ಎಸ್. ಸಂತೋಷ್‌ಕುಮಾರ್, ಜಿಲ್ಲಾ ಸಂಪುಟ ಖಜಾಂಜಿ ಎನ್. ಗಂಗಾಧರಪ್ಪ, ಪಿಆರ್‌ಓ ಟಿ.ಎಸ್.ರವೀಂದ್ರನಾಥ್ ಇವರುಗಳು ಉಪಸ್ಥಿತರಿದ್ದರು. ಈ ಕಾರ್ಯಾಗಾರದಲ್ಲಿ ಸುಮಾರು 110ಕ್ಕೂ ಹೆಚ್ಚು ಪದಾಧಿಕಾರಿಗಳು ಪಾಲ್ಗೊಂಡು ಇದರ ಸದುಪಯೋಗವನ್ನು ಪಡೆದರು. ಇದೇ ಸಂದರ್ಭದಲ್ಲಿ ಮಂಡ್ಯ ಜಿಲ್ಲೆಯ 268ರ ರಾಜ್ಯಪಾಲರಾದ ಕೆ.ಟಿ.ಹನುಮಂತು, ಹಾಗೂ ಒಂದನೇ ಉಪರಾಜ್ಯಪಾಲರಾದ ಮಾದೇಗೌಡ, ಎರಡನೇ ಉಪ ರಾಜ್ಯಪಾಲ ಶಶಿಧರ್ ಈಚ್ಗೆರೆ, ಸಂಪುಟ ಕಾರ್ಯದರ್ಶಿ ಆರ್.ರಮೇಶ್, ಸಂಪುಟ ಖಜಾಂಚಿ ಕೆ.ಜಿ.ಚಂದ್ರಶೇಖರ್, ಪಿಆರ್‌ಓ ಅಪ್ಪಾಜಿ ಉಪಸ್ಥಿತರಿದ್ದರು.

# ಕೋರಮಂಗಲ ಡೇರಿ ಅಧ್ಯಕ್ಷ ಚುನಾವಣೆ

**ವಿಜಯಪುರ:** ಹೋಬಳಿಯ ಕೋರಮಂಗಲ ಹಾಲು ಉತ್ಪಾದಕ ಸಹಕಾರ ಸಂಘಕ್ಕೆ ಮಂಗಳವಾರದಂದು ಅಧ್ಯಕ್ಷ ಉಪಾಧ್ಯಕ್ಷ ಸ್ಥಾನಕ್ಕೆ ನಡೆದ ಚುನಾವಣೆಯಲ್ಲಿ ಕಾಂಗ್ರೆಸ್ ಹಾಗೂ ಜೆಡಿಎಸ್ ಪಕ್ಷಗಳ ಮುಖಂಡರುಗಳು ಸೇರಿ ಒಮ್ಮತದಿಂದ ಅಧ್ಯಕ್ಷ ಸ್ಥಾನವನ್ನು ಜೆಡಿಎಸ್ ಬೆಂಬಲಿತ ಕೆ ಮುನಿವೆಂಕಟಪ್ಪ ಅಲಿಯಾಸ್ ಅಪ್ಪಯಣ್ಣರವರಿಗೂ ಉಪಾಧ್ಯಕ್ಷ ಸ್ಥಾನವನ್ನು ಕಾಂಗ್ರೆಸ್ ಬೆಂಬಲಿತ ಕೆ.ರಮೇಶ್ ರವರಿಗೂ ನೀಡಲು ತೀರ್ಮಾನಿಸಿದರು.

ಇದರ ಮೇರೆಗೆ ಅಧ್ಯಕ್ಷ ಉಪಾಧ್ಯಕ್ಷ ಸ್ಥಾನಕ್ಕೆ ಒಬ್ಬೊಬ್ಬರೇ ನಾಮಪತ್ರ ಸಲ್ಲಿಸಿದ್ದು, ಅವಿರೋಧ ಆಯ್ಕೆ ನಡೆಯಿತು. ಜೆಡಿಎಸ್ ಮುಖಂಡರಾದ ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ವೀರಪ್ಪ, ಕೋರಮಂಗಲ ಗ್ರಾಮ ಪಂಚಾಯಿತಿ ಸದಸ್ಯರಾದ ಭೈರೇಗೌಡ, ಕಾಂಗ್ರೆಸ್ನ ಕೋರಮಂಗಲ ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ಕೆಎಂ ಕೃಷ್ಣಪ್ಪ, ಡೇರಿ ಮಾಜಿ ಅಧ್ಯಕ್ಷ ಗೋವಿಂದಪ್ಪ ರವರುಗಳ ನೇತೃತ್ವದಲ್ಲಿ ಮಾತುಕತೆ ನಡೆಸಿ, ಡೇರಿಯ ಅಧ್ಯಕ್ಷ ಉಪಾಧ್ಯಕ್ಷ ಚುನಾವಣೆಯನ್ನು ಯಾವುದೇ ಪೈಪೋಟಿ ಇಲ್ಲದೆ, ಅವಿರೋಧವಾಗಿ ನಡೆಸಲು ತೀರ್ಮಾನಿಸಿದರು.



ಈ ಸಂದರ್ಭದಲ್ಲಿ ಡೇರಿ ನಿರ್ದೇಶಕರುಗಳಾದ ಎಂ ರಮೇಶ್, ಕೆ ಆರ್ ನಟರಾಜು, ಬಿ ನಾರಾಯಣಸ್ವಾಮಿ, ಎ ಮುನಿರಾಜು, ಎಂ ಚೌಡಪ್ಪ, ಎನ್ ಪಿಳ್ಳವೀರಪ್ಪ, ಮುನಿಕೃಷ್ಣಪ್ಪ, ಚಂದ್ರಶೇಖರ್, ಸವಿತಾ, ಜ್ಯೋತಿ, ಸರೋಜಾ ರವರುಗಳು ಉಪಸ್ಥಿತರಿದ್ದರು.

ಚುನಾವಣಾ ಅಧಿಕಾರಿಯಾಗಿ ಶಿವಕುಮಾರ್ ರವರು ಕಾರ್ಯನಿರ್ವಹಿಸಿದ್ದು, ಕಾರ್ಯದರ್ಶಿ ಎಮ್ ಮಂಜುನಾಥ್ ಸಹಾಯಕರಾಗಿದ್ದರು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿ ಸದಸ್ಯರಾದ ಧನಂಜಯ್, ಮಾಜಿ ಸದಸ್ಯರಾದ ಶಿವಾನಂದ್, ಮಾಜಿ ಉಪಾಧ್ಯಕ್ಷ ಕೃಷ್ಣಯ್ಯ, ಮಾಜಿ ಸದಸ್ಯರುಗಳಾದ ವೆಂಕಟಶಾಮಪ್ಪ, ಬಚ್ಚೇಗೌಡ, ಸೊಣ್ಣಪ್ಪ, ಮತ್ತಿತರರು ನೂತನ ಅಧ್ಯಕ್ಷ ಉಪಾಧ್ಯಕ್ಷರುಗಳನ್ನು ಅಭಿನಂದಿಸಿದರು.

# ಮಹರ್ಷಿ ವಾಲ್ಮೀಕಿ ದೇವಾಲಯ ಉದ್ಘಾಟನೆ

**ವಿಜಯಪುರ:** ಪಟ್ಟಣದ ಬಸ್ ನಿಲ್ದಾಣದ ಬಳಿ ಮಂಡಿಬೆಲೆ ರಸ್ತೆಯಲ್ಲಿರುವ ಮಹರ್ಷಿ ವಾಲ್ಮೀಕಿ ಉದ್ಯಾನವನದಲ್ಲಿ ಪುನರುಜ್ಜೀವನಗೊಂಡ ಶ್ರೀ ಮಹರ್ಷಿ ವಾಲ್ಮೀಕಿ ದೇವಾಲಯವನ್ನು ಫೆಬ್ರುವರಿ 29ರಂದು ಗುರುವಾರ ಬೆಳಗ್ಗೆ ಉದ್ಘಾಟನೆಗೊಳ್ಳಲಿದೆ ಎಂದು ಮಹರ್ಷಿ ವಾಲ್ಮೀಕಿ ನಾಯಕ ಸಂಘದ ಅಧ್ಯಕ್ಷರಾದ ಶ್ರೀರಾಮರವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿರುವರು. ಶ್ರೀ ಮಹರ್ಷಿ ವಾಲ್ಮೀಕಿ ಗುರುಪೀಠಾಧ್ಯಕ್ಷರಾದ ಜಗದ್ಗುರು ಶ್ರೀ ಪ್ರಸನ್ನಾನಂದಪುರಿ ಸ್ವಾಮೀಜಿ ರವರು ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸುವುದರೊಂದಿಗೆ, ಆಹಾರ ಮತ್ತು ನಾಗರಿಕ ಸರಬರಾಜು ಗ್ರಾಹಕ ವ್ಯವಹಾರಗಳ ಸಚಿವರಾದ ಕೆಎಚ್ ಮುನಿಯಪ್ಪ ರವರು ಕಾರ್ಯಕ್ರಮವನ್ನು ಉದ್ಘಾಟಿಸಲಿರುವರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪುರಸಭಾ ಅಧ್ಯಕ್ಷರಾದ ವಿಮಲಾ ಬಸವರಾಜುರವರು ವಹಿಸಲಿದ್ದು, ಮಾಜಿ ಸಂಸದರಾದ ವಿಎಸ್ ಉಗ್ರಪ್ಪ, ಮಾಜಿ ಶಾಸಕರಾದ ಎಸ್ ಎಲ್ ಎನ್ ನಿಸರ್ಗ ನಾರಾಯಣಸ್ವಾಮಿ ರವರು, ಕೆಪಿಸಿಸಿ ಸದಸ್ಯರಾದ ವಿ ಮಂಜುನಾಥ್, 18 ನೇ ವಾರ್ಡ್‌ನ ಪುರಸಭಾ ಸದಸ್ಯರಾದ ಎಆರ್ ಹನಿ ಫುಲ್ಲಾ, ಪುರಸಭಾ ಮಾಜಿ ಅಧ್ಯಕ್ಷ ರುಗಳಾದ ಎಂ. ಸತೀಶ್ ಕುಮಾರ್, ಅನುಸೂಯಮ್ಮ ಸಂಪತ್ ಕುಮಾರ್, ಅನ್ನಪೂರ್ಣಮ್ಮ ಟಿಬಿ ಮುನಿಕೃಷ್ಣಪ್ಪ, ದೇವನಹಳ್ಳಿ ತಾಲೂಕು ವಾಲ್ಮೀಕಿ ನಾಯಕ ಸಂಘದ ಅಧ್ಯಕ್ಷರಾದ ನಾಗೇಶ್ ಬಾಬು, ಮಾಜಿ ಅಧ್ಯಕ್ಷರಾದ ವೇಣುಗೋಪಾಲ್ ನಾಯಕ್, ಚಲನಚಿತ್ರ ನಟ ಶಶಿಕುಮಾರ್, ಮಾಜಿ ಶಾಸಕರಾದ ಪಿಳ್ಳ ಮುನಿಶ್ಯಾಮಪ್ಪ, ಪುರಸಭಾ ಉಪಾಧ್ಯಕ್ಷರಾದ ಎಂ ಕೇಶವಪ್ಪ, ಸಂಘದ ಖಜಾಂಚಿ ರವೀಶ್, ಗೌರವಾಧ್ಯಕ್ಷರಾದ ಕೆಎಸ್‌ಆರ್‌ಟಿಸಿ ನಿವೃತ್ತ ನೌಕರರಾದ ಪಿ ನಾರಾಯಣಸ್ವಾಮಿ, ಉಪಾಧ್ಯಕ್ಷ ಓಂ ಶಕ್ತಿ ಮುನಿಕೃಷ್ಣಪ್ಪ, ಪ್ರಧಾನ ಕಾರ್ಯದರ್ಶಿ ಸಿಎಂ ರಾಮು, ಸಂಘಟನಾ ಕಾರ್ಯದರ್ಶಿ ಎಲೆ ಪಾಂಡುರಂಗ,ಹಿರಿಯ ಮುಖಂಡರುಗಳಾದ ಎಲೆ ಮುನಿರಾಜು, ಕೃಷ್ಣ ನಾಯಕ್, ಮತ್ತಿತರರು ಭಾಗವಹಿಸಲಿರುವರು.



## ವಿಜ್ಞಾನ ರಸಪ್ರಶ್ನೆಯಲ್ಲಿ ಕೋಲಾರ ಜಿಲ್ಲೆಗೆ ರಾಜ್ಯದ ಮೂರನೇ ಸ್ಥಾನ

ಕೋಲಾರ: ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿಯು ವಿಜ್ಞಾನ ದಿನಾಚರಣೆ ಅಂಗವಾಗಿ ನಡೆಸಿದ ಐದನೇ ವರ್ಷದ ಸರ್ ಸಿ ವಿ ರಾಮನ್ ವಿಜ್ಞಾನದ ರಸಪ್ರಶ್ನೆ ಸ್ಪರ್ಧೆಯಲ್ಲಿ ಕೋಲಾರ ಜಿಲ್ಲೆಗೆ ರಾಜ್ಯದ ಮೂರನೇ ಸ್ಥಾನ ಲಭಿಸಿದೆ. ಜಿಲ್ಲೆಯ ಬಂಗಾರಪೇಟೆ ತಾಲೂಕಿನ ಕನಮಹಳ್ಳಿ ಸರ್ಕಾರಿ ಪ್ರೌಢಶಾಲೆಯ 10ನೇ ತರಗತಿ ವಿದ್ಯಾರ್ಥಿ ಮಹಾಲಕ್ಷ್ಮಿ' ರಾಜ್ಯ ಪ್ರಶಸ್ತಿ ಪಡೆಯುವ ಗೌರವಕ್ಕೆ ಪತ್ರರಾಗಿದ್ದಾರೆ. ಜಿಲ್ಲೆಯ ಪ್ರಥಮ ಸ್ಥಾನವನ್ನು ಮಾಲೂರು ತಾಲ್ಲೂಕು ಬಸವೇಶ್ವರ ಶಾಲೆಯ ಸಹನಾ, ಶ್ರೀನಿವಾಸಪುರ ಯಲ್ದೂರು ಸರ್ಕಾರಿ ಪ್ರೌಢ ಶಾಲೆಯ 10ನೇ ತರಗತಿಯ ತೇಜಸ್ವಿನಿ ಎರಡನೇ ಸ್ಥಾನವನ್ನು, ವೇಮಗಲ್ ಕರ್ನಾಟಕ ಮಾದರಿ ಹಿರಿಯ ಪ್ರಾಥಮಿಕ ಶಾಲೆಯ ವಿ.ಎ.ಜಯಶ್ರೀ ಮೂರನೇ ಸ್ಥಾನವನ್ನು ಪಡೆದುಕೊಂಡಿದ್ದಾರೆ ಸಮಿತಿಯ ಜಿಲ್ಲಾಧ್ಯಕ್ಷ ಜಿ. ಶ್ರೀನಿವಾಸ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ವಿದ್ಯಾರ್ಥಿಗಳ ಈ ಸಾಧನೆಯನ್ನು ಕರ್ನಾಟಕ ಜ್ಞಾನ ಸಮಿತಿಯ ಜಿಲ್ಲಾ ಮುಖಂಡರುಗಳಾದ ಕೆ.ಸಿ. ಪದ್ಮಾವತಿ, ಸುರೇಶ್, ಶರಣಪ್ಪ ಜಮಾದಾರ್, ಅಮರೇಶ್‌ಬಾಬು, ಮುಕುಂದ, ಕೆ.ವಿ.ಜಗನ್ನಾಥ್ ಮುಂತಾದವರು ಅಭಿನಂದಿಸಿದ್ದಾರೆ.

ವಿಜ್ಞಾನ ರಸಪ್ರಶ್ನೆ ಸ್ಪರ್ಧೆ ವಿಜೇತರು



## ಭಾರತಾಂಬೆಗೆ ಅರ್ಪಣೆ ಮಾಡಿಕೊಂಡ ಮಹಾನ್ ತ್ಯಾಗಿ

**ಚಾಮರಾಜನಗರ:** ಚಂದ್ರಶೇಖರ್ ಆಜಾದ್ ಅಮರ ರಾಷ್ಟ್ರ ಪ್ರೇಮಿ. ಬ್ರಿಟಿಷರಿಗೆ ಎಂದು ಜೀವಂತವಾಗಿ ಸಿಗಲಾರೆ ಎಂಬ ಪ್ರತಿಜ್ಞೆಯಂತೆ ತನ್ನ ಬಂದೂಕಿನಿಂದ ತಾವೇ ಕೊನೆಯ ಗುಂಡನ್ನು ಹಾರಿಸಿಕೊಂಡು ಭಾರತಾಂಬೆಗೆ ಅರ್ಪಣೆ ಮಾಡಿಕೊಂಡ ಮಹಾನ್ ತ್ಯಾಗಿ ಎಂದು ಸಂಸ್ಕೃತಿ ಚಿಂತಕ ಸುರೇಶ್ ಎನ್ ಋಗ್ವೇದಿ ತಿಳಿಸಿದರು. ಅವರು ಜೈ ಹಿಂದ್ ಪ್ರತಿಷ್ಠಾನ ಹಾಗೂ ಋಗ್ವೇದಿ ಯೂತ್ ಕ್ಲಬ್ ಜೈ ಹಿಂದ್ ಕಟ್ಟೆಯಲ್ಲಿ ಹಮ್ಮಿಕೊಂಡಿದ್ದ ಚಂದ್ರಶೇಖರ್ ಆಜಾದ್ ಪುಣ್ಯಸ್ಮರಣೆ ಕಾರ್ಯಕ್ರಮದಲ್ಲಿ ಮಾತನಾಡುತ್ತಾ ಜಲಿಯನ್ ವಾಲಾಬಾಗ್ ದುರಂತದಿಂದ ನೊಂದ ಚಂದ್ರಶೇಖರ್ ಬಾಲ್ಯದಿಂದಲೂ ಅಪ್ಪಟ ದೇಶ ಪ್ರೇಮಿ. ಬ್ರಿಟಿಷರನ್ನು ಯಾವುದೇ ಮಾರ್ಗದಿಂದಲಾದರೂ ಭಾರತದಿಂದ ಓಡಿಸಬೇಕೆಂಬ ದೃಢಸಂಕಲ್ಪದಿಂದ ಕ್ರಾಂತಿಕಾರಿಯಾಗಿ ,ಮೊಟ್ಟಮೊದಲು ಬ್ರಿಟಿಷರ ವಿರುದ್ಧ ಶಸ್ತ್ರಾಸ್ತ್ರ ಹಿಡಿದ ಕ್ರಾಂತಿಕಾರಿ ಎಂದರು. ಕಾರ್ಯಕ್ರಮವನ್ನು ಕನ್ನಡ ಸಾಹಿತ್ಯ ಪರಿಷತ್ತಿನ ನಿರ್ದೇಶಕ ಬಿ ಕೆ ಆರಾಧ್ಯ ಉದ್ಘಾಟಿಸಿದರು. ಬ್ರಿಟಿಷರಿಗೆ ಸಿಂಹ ಸ್ವಪ್ನವಾಗಿದ್ದ ಚಂದ್ರಶೇಖರ್ ಆಜಾದ್ ಭಾರತಕ್ಕಾಗಿ ತಮ್ಮ ಜೀವನವನ್ನು ಸಮರ್ಪಿಸಿದರು ಎಂದರು. ಶ್ರೀಗಂಧ ಕನ್ನಡ ಯುವಕ ಸಂಘದ ರವಿಚಂದ್ರ ಪ್ರಸಾದ್, ಕನ್ನಡ ಸಾಹಿತ್ಯ ಪರಿಷತ್ತಿನ ಸದಸ್ಯರಾದ ಗುರುಲಿಂಗಮ್ಮ, ಜೈಹಿಂದ್ ಪ್ರತಿಷ್ಠಾನದ ಕುಸುಮ ಋಗ್ವೇದಿ, ಋಗ್ವೇದಿ ಯೂತ್ ಕ್ಲಬ್ ಶ್ರಾವ್ಯ ಎಸ್ ಋಗ್ವೇದಿ ಇದ್ದರು.

## ಕೋಲಾರ ಜಿಲ್ಲಾ ಬಿಜೆಪಿ ವತಿಯಿಂದ ಬೃಹತ್ ಪ್ರತಿಭಟನೆ

ಕೋಲಾರ: ರಾಜ್ಯಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ನಾಸಿರ್ ಹಸೇನ್ ಗೆಲುವಿನ ಸಂಭ್ರಮಾಚರಣೆಯಲ್ಲಿ ಭಾಗಿಯಗಿದ್ದ ಕೆಲವು ಬೆಂಬಲಿಗರು ಪಾಕ್ ಪರ ಘೋಷಣೆ ಕೂಗಿದ್ದರು ಈ ಕಾಂಗ್ರೆಸ್ ಕಾರ್ಯಕರ್ತರನ್ನ ಕೂಡಲೇ ಬಂಧಿಸಿ ಗಡಿಪಾರಿಗೆ ಒತ್ತಾಯಿಸಿ ನಗರದ ಕೆ .ಎಸ್.ಆರ್.ಟಿ.ಸಿ. ಮುಂಭಾಗದಲ್ಲಿ ಜಿಲ್ಲಾ ಬಿಜೆಪಿ ವತಿಯಿಂದ ಬುಧವಾರ ಬೃಹತ್ ಪ್ರತಿಭಟನೆ ನಡೆಯಿತು. ಕೋಲಾರ ನಗರದ ಬಸ್ ನಿಲ್ದಾಣ ವೃತ್ತದಲ್ಲಿ ಬಿಜೆಪಿಯ ನೂರಾರು ಕಾರ್ಯಕರ್ತರು ಜಮಾವಣೆಯಾಗಿ ಕಾಂಗ್ರೆಸ್ ವಿರುದ್ದ ರಸ್ತೆ ತಡೆದು ಪ್ರತಿಭಟನೆ ನಡೆಸಿ ಕಾಂಗ್ರೆಸ್ ದೇಶದ್ರೋಹಿಗಳಿಗೆ ಕುಮ್ಮಕ್ಕು ನೀಡುತ್ತಿದ್ದು ಪಾಕಿಸ್ತಾನ ಪರ ಘೋಷಣೆಕೂಗಿದವರನ್ನು ಕೂಡಲೇ ಬಂದಿಸಿ ಶಿಕ್ಷೆ ಕೊಡುವ ಮೂಲಕ ರಾಷ್ಟ್ರದ ರಕ್ಷಣೆ ಮಾಡಬೇಕು ಎಂದು ಆಗ್ರಹಿಸಿದರು , ಪಾಕಿಸ್ತಾನ ಏಜೆಂಟ್, ದೇಶದ್ರೋಹಿ ನಾಸಿರ್ ಹುಸೇನ್ ಎಂದು ಆಕ್ರೋಶ ವ್ಯಕ್ತಪಡಿಸಿ ನಾಸಿರ್ ಭಾವಚಿತ್ರವನ್ನು ಚಪ್ಪಲಿಯಲ್ಲಿ ತುಳಿದು, ಸಿದ್ದರಾಮಯ್ಯ, ಡಿಕೆ ಶಿವಕುಮಾರ್ ಹಿಂದೂ ವಿರೋಧಿನೀತಿಯನ್ನು ತೋರಿಸುತ್ತಿದ್ದಾರೆ ಎಂದು ಆಕ್ರೋಶ ವ್ಯಕ್ತ ಪಡಿಸಿದರು. ಇದೇ ಸಂದರ್ಭದಲ್ಲಿ ಸ್ಥಳದಲ್ಲಿ ಎರಡು ಕೆಎಸ್ ಆರ್ ಟಿ ಸಿ ಬಸ್ ನೊಂದಿಗೆ ಸಜ್ಜಾಗಿ ನಿಂತಿದ್ದ 500 ಕ್ಕೂ ಅಧಿಕ ಪೋಲೀಸರು ಬಿಜೆಪಿ ಕಾರ್ಯಕರ್ತರು ರಾಜ್ಯ ಸಭಾ ಸದಸ್ಯ ನಾಸಿರ್ ಹುಸೇನ್ ಭಾವಚಿತ್ರಕ್ಕೆ ಚಪ್ಪಲಿಯಿಂದ ಹೊಡೆದು ಬೆಂಕಿ ಹಚ್ಚಲು ಮುಂದಾದಾಗ ಪೊಲೀಸರು ತಡೆದರು ಇದರಿಂದ ಕೆಲವು ಕಾಲ ಪೋಲೀಸರು ಮತ್ತು ಪ್ರತಿಭಟನಾಕಾರರ ಮದ್ಯೆ ಮಾತಿನ ಚಕಮಕಿ ನಡೆಯಿತು, ಇದರಿಂದ ಕುಪಿತರಾದ ಬಿಜೆಪಿ ಕಾರ್ಯಕರ್ತರು ಕಾಂಗ್ರೆಸ್ ಕಚೇರಿಗೆ ಮುತ್ತಿಗೆ ಹಾಕಲು ಹೊರಟು ನಿಂತಾಗ ಪೋಲೀಸರು ತಡೆದು 300 ಕ್ಕೂ ಹೆಚ್ಚು ಬಿಜೆಪಿ ಕಾರ್ಯಕರ್ತರನ್ನು ಬಂಧಿಸಿ ಬಸ್ಗಳಲ್ಲಿ ಪೊಲೀಸ್ ಠಾಣೆಗೆ ಕರೆದೊಯ್ದರು. ಈ ಪ್ರತಿಭಟನೆಯ ನೇತೃತ್ವವನ್ನು ಕೋಲಾರ ಗ್ರಾಮಾಂತರ ಅಧ್ಯಕ್ಷ ರಾಮಚಂದ್ರ ವಸಿದ್ದರು ಈ ಪ್ರತಿಭಟನೆಯಲ್ಲಿ ಕೋಲಾರ ನಗರ,ಜಿಲ್ಲೆ ಮತ್ತು ಗ್ರಾಮಾಂತರದ ,ವಿಜಯಕುಮಾರ್ ,ತಿಪಿ ಎಂ ಕೃಷ್ಣಮೂರ್ತಿ ,ಬಾಲಾಜಿ,ನಾರಾಯಣ್ ಕುಟ್ಟಿ,ಕೆಂಬೋಡಿ ನಾರಾಯಣಸ್ವಾಮಿ, ಹೆಚ್ ಶ್ರೀನಿವಾಸಪ್ಪ ,ಕೃಷ್ಣಪ್ಪ ,ಚಂದ್ರಶೇಖ ,ಸಂಪಂಗಿರೆಡ್ಡಿ ,ಸುಬ್ಬರಾಮಪ್ಪ, ನವೀನ್ ,ಮಾಗೇರಿ ನಾರಾಯಣಸ್ವಾಮಿ ,ಸಾಮಾಬಾಬು ,ಮಂಜು ,ಲಾಲ್ಚಂದ್ ,ಮಮತಮ್ಮ ,ಮಾಲಾ ,ಮಂಜುನಾಥ್ , ರಾಮಚಂದ್ರ ,ವೆಂಕಟೇಶ್ ಹಾರೋಹಳ್ಳಿ,ಹೆಚ್ ತೇಜಸ್ ಮತ್ತು ಕಾರ್ಯಕಾರ್ಯರಿದ್ದರು.

# ವಕೀಲರ ಮೂಲಕ ಸೂಕ್ತ ವಾದಕ್ಕೆ ಮುಂದಾಗಬೇಕು

ಚನ್ನಪಟ್ಟಣ: ಬೆಂಗಳೂರು ಜನ ಬಳಸಿ ಬಿಟ್ಟ ಕೊಳಚೆ ನೀರು ಸಹ ನಮ್ಮಗೆ ಸೇರಿದ್ದು ಎಂದು ತಮಿಳುನಾಡು ಸರ್ಕಾರ ಸುಪ್ರಿಂ ಕೋರ್ಟ್‌ನಲ್ಲಿ ದಾವೆ ಹಾಕಿರುವುದು ರಾಜ್ಯದ ಜನಪ್ರತಿನಿಧಿಗಳ ಅಧಿಕಾರದ ದಾಹ ಮತ್ತು ಜನಹಿತ ಕಾಯುವ ಮನಸ್ಥಿತಿ ಇಲ್ಲದಿರುವುದಕ್ಕೆ ಸಾಕ್ಷಿಯಾಗಿದೆ ಎಂದು ಕಸ್ತೂರಿ ಕರ್ನಾಟಕ ಜನಪರ ವೇದಿಕೆಯ ರಾಜ್ಯಾಧ್ಯಕ್ಷ ರಮೇಶ್ ಗೌಡ ವಿಷಾಧಿಸಿದರು.ಮುಂದಿನ ಪೀಳಿಗೆಗೆ ಮೇಕೆದಾಟು ಯೋಜನೆ ಅನಿವಾರ್ಯವಾಗಿದ್ದು, ಯೋಜನೆಯ ಅನುಷ್ಠಾನಕ್ಕೆ ಜನಪ್ರತಿನಿಧಿಗಳು ಪಕ್ಷಾತೀತವಾಗಿ ಪ್ರಾಮಾಣಿಕ ಪ್ರಯತ್ನ ಮಾಡಬೇಕಿದೆ ಎಂದು ನಿವೃತ್ತ ಪ್ರಾಂಶುಪಾಲರಾದ ನಿಂಗೇಗೌಡರು(ಎನ್‌ಜಿ) ಅಭಿಪ್ರಾಯಿಸಿದರು.

ಕಾವೇರಿ ನದಿ ನೀರಿನ ಹಂಚಿಕೆಯಲ್ಲಿ ಸಂಕಷ್ಟ ಸೂತ್ರ ರಚಿಸುವ ಜೊತೆಗೆ ಮೇಕೆದಾಟು ಯೋಜನೆಗೆ ಅಡಿಗಲ್ಲು ಹಾಕುವಂತೆ ಆಗ್ರಹಿಸಿಕಸ್ತೂರಿ ಕರ್ನಾಟಕ ಜನಪರ ವೇದಿಕೆಯ ರಾಜ್ಯಾಧ್ಯಕ್ಷರಾದ ರಮೇಶ್‌ಗೌಡರ ನೇತೃತ್ವದಲ್ಲಿ 2023ರ ಅಕ್ಟೋಬರ್ 5 ರಿಂದ ನಿರಂತರವಾಗಿ ಹೋರಾಟ ಮಾಡುತ್ತಿದ್ದು ಮಂಗಳವಾರ ನಡೆದ 146 ನೇ ದಿನದ ಹೋರಾಟದಲ್ಲಿ ಮಾತನಾಡಿದ ಅವರು ರಾಜ್ಯದಲ್ಲಿ ಮಳೆ ಇಲ್ಲದೆ ಬಡ ಒದ್ದರೂ ಒಂದೆಡೆ ರಾಜ್ಯದ ಜಲಾಶಯಗಳ ನೀರಿನ ಮೇಲೆ ಹಕ್ಕು ಸಾಧಿಸುತ್ತಾ ಬಂದಿರುವ ತಮಿಳುನಾಡು ಸರ್ಕಾರ ಇದೀಗ




ಬೆಂಗಳೂರಿನ ಕೊಳಚೆ ನೀರನ್ನು ಶುದ್ದೀಕರಣ ಮಾಡಿ ಕೋಲಾರ ಜಿಲ್ಲಗೆ ನೀಡುತ್ತಿರುವ ಕೆ.ಸಿ.ವ್ಯಾಲಿ ಯೋಜನೆಗೂ ಅಡ್ಡಗಾಲು ಹಾಕಿದ್ದು, ಬೆಂಗಳೂರಿನ ಜನರು ಉಪಯೋಗಿಸಿ ಬಿಟ್ಟ ಕೊಳಚೆ ನೀರು ಸಹ ನಮಗೆ ಸೇರಿದೆ ಎಂದು ಹಕ್ಕು ಕೇಳುತ್ತಿದ್ದು ಇದಕ್ಕಾಗಿ ಸುಪ್ರಿಂ ಕೋರ್ಟ್‌ನಲ್ಲಿ ದಾವೆ ಹಾಕಿರುವುದು ನಮ್ಮ ರಾಜ್ಯದ ಮೇಲೆ ತಮಿಳುನಾಡು ಸರ್ಕಾರ ಸಂಪೂರ್ಣ ಪಾರುಪಥ್ಯೆ ಸಾಧಿಸಲು ಮುಂದಾಗಿರುವ ಸೂಚನೆಯಾಗಿದೆ ಎಂದರೆ ತಪ್ಪಾಗದು ಎಂದು ಎಚ್ಚರಿಕೆ ನೀಡಿದರು.

ಬೆಂಗಳೂರಿನ ಜನರು ಪ್ರತಿನಿತ್ಯ ಉಪಯೋಗಿಸುವ ನೀರಿನಿಂದ ಉತ್ಪತ್ತಿಯಾಗುವ ಕೊಳಚೆ ನೀರನ್ನು ಶುದ್ಧೀಕರಣ ಮಾಡಿ ಬಳಕೆ ಮಾಡುವ ರಾಜ್ಯ ಸರ್ಕಾರದ ಕೆ.ಸಿ.ವ್ಯಾಲಿ ಯೋಜನೆಗೆ ಈ ಹಿಂದೆಯೇ ತಗಾದೆ ತೆಗೆದ್ದಿದ್ದ ತಮಿಳುನಾಡು ಸರ್ಕಾರ ಕಾವೇರಿ ಜಲಾಶಯದಲ್ಲಿ ಸಂಪೂರ್ಣ ನೀರು ಕಾಲಿಯಾಗುವವರೆಗೆ ಕಾದು ಮತ್ತೆ ಕೆ.ಸಿ.ವ್ಯಾಲಿಗೆ ಸುಪ್ರಿಂ ಕೋರ್ಟ್‌ನಲ್ಲಿ ದಆವೆ ಹಾಕಿದೆ. ರಾಜ್ಯದಲ್ಲಿ ಹೆಚ್ಚು ಮಳೆ ಬಂದಾಗ ಬೆಂಗಳೂರಿನಿಂದ ನೈಸರ್ಗಿಕವಾದ ಮಳೆ ನೀರು ಕೋಲಾರಕ್ಕೆ ಹರಿಸಲು ದಕ್ಷಿಣ ಪಿನಾಕಿನಿ ನದಿಯ ನಾಲೆಗಳಿಂದ ಹರಿಸುವ ನಿಟ್ಟಿನಲ್ಲಿ ಈ ನೀರು ತಮಿಳುನಾಡಿಗೆ ಹರಿಯುತ್ತಿತ್ತು. ಆದರೆ ಬೆಂಗಳೂರಿನಿಂದ ಕೆ.ಸಿ.ವ್ಯಾಲಿ ಯೋಜನೆಯಲ್ಲಿ ಶುದ್ದೀಕರಣವಾಗಿ ಕೋಲಾರಕ್ಕೆ ಹರಿಯುವ ನೀರು ನೈಸರ್ಗಿಕ ನೀರಲ್ಲ. ಈ ನೀರು ಬೆಂಗಳೂರಿನ ಜನತೆ ಉಪಯೋಗಿಸಿ ರೈತರ ಕೃಷಿಗೆ ಉಪಯೋಗವಾಗಲು ಹಾಗೂ ಕುಡಿಯಲು ಕೋಲಾರ ಜಿಲ್ಲೆಗೆ ನೀಡಿರುವ ನೀರಿನ ಮೇಲೂ ತಮಿಳುನಾಡು ಸರ್ಕಾರ ಹಕ್ಕು ಕೇಳುವುದು ಖಂಡನೀಯವಾಗಿದ್ದು, ಈ ಬಗ್ಗೆ ರಾಜ್ಯ ಸರ್ಕಾರ ಅಧಿಕಾರಿಗಳು ಮತ್ತು ವಕೀಲರ ಮೂಲಕ ಸೂಕ್ತ ವಾದಕ್ಕೆ ಮುಂದಾಗಬೇಕು ಎಂದು ರಮೇಶ್‌ಗೌಡರು ಆಗ್ರಹಿಸಿದರು.

ಸರ್ಕಾರಿ ನೌಕರ ಮುಕುಂದ ಮಾತನಾಡಿ ಇಂದು ಬೆಂಗಳೂರಿನ ಜನತೆ ಕಾವೇರಿ ನೀರನ್ನು ಉಪಯೋಗಿಸಿ ಉತ್ಪತ್ತಿಯಾಗುವ ಕೊಳಚೆ ನೀರು ನಮಗೆ ಸೇರಬೇಕು ಎನ್ನುವ ತಮಿಳುನಾಡು ಮುಂದೆ ಕಾವೇರಿ ನೀರನ್ನು ಕುಡಿದು ನೀವನ ಮಾಡುತ್ತಿರುವ ಬೆಂಗಳೂರು ಜನರು ತಮಿಳುನಾಡಿಗೆ ನೀರಿನ ತೆರಿಗೆ ಕಟ್ಟಬೇಕು ಎಂದು ಹಕ್ಕು ಸಾಧಿಸಲು ಮುಂದಾದರೂ ಅಚ್ಚರಿ ಇಲ್ಲ. ಈ ನಿಟ್ಟಿನಲ್ಲಿ ಸರ್ಕಾರದ ಜನಪ್ರತಿನಿಧಿಗಳು ಒಗ್ಗಟ್ಟಿನಿಂದ ಹೋರಾಟ ಮಾಡಲು ಮುಂದಾಗಬೇಕು ಎಂದು ರಮೇಶ್‌ಗೌಡರು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ವೇದಿಕೆ ರಾಜ್ಯ ಉಪಾಧ್ಯಕ್ಷ ಬೆಳಕು ಶ್ರೀಧರ್, ನಿವೃತ್ತ ಜಗದಾಪುರ ಕೃಷ್ಣೇಗೌಡ, ಗ್ರಾ.ಪಂ. ಮಾಜಿ ಸದಸ್ಯ ಬೇವೂರು ಮಧು, ರ್‍ಯಾಂಬೋ ಸೂರಿ, ಶ್ಯಾಮ್ ಇತರರು ಇದ್ದರು.

## ಲೋಕಸಭಾ ಚುನಾವಣೆ ವೆಚ್ಚ ಕುರಿತ

# ದರಪಟ್ಟಿ ನಿಗದಿ ಸಭೆ

**ಚಾಮರಾಜನಗರ:** ಮುಂಬರುವ ಲೋಕಸಭಾ ಸಾರ್ವತ್ರಿಕ ಚುನಾವಣೆ ಸಂಬಂಧ ಚುನಾವಣೆಯಲ್ಲಿ ಸ್ಪರ್ಧಿಸುವ ಅಭ್ಯರ್ಥಿಗಳು ಚುನಾವಣೆಗೆ ಬಳಸಲಾಗುವ ಸಾಮಾಗ್ರಿಗಳಿಗೆ ಭರಿಸಬಹುದಾದ ವೆಚ್ಚಗಳ ಕುರಿತು ದರಪಟ್ಟಿ ನಿಗದಿಪಡಿಸುವ ಸಭೆ ಇಂದು ಜಿಲ್ಲಾಧಿಕಾರಿಗಳಾದ ಶಿಲ್ಪಾ ನಾಗ್ ಅವರ ಅಧ್ಯಕ್ಷತೆಯಲ್ಲಿ ನಡೆಯಿತು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿಂದು ಲೋಕಸಭಾ ಚುನಾವಣೆಯಲ್ಲಿ ಅಭ್ಯರ್ಥಿಗಳು ಚುನಾವಣೆಗೆ ಉಪಯೋಗಿಸುವ ವಿವಿಧ ಸಾಮಗ್ರಿಗಳಿಗೆ ತಗಲುವ ವೆಚ್ಚಗಳ ಕುರಿತ ದರಪಟ್ಟಿ ನಿಗದಿ ಮಾಡುವ ಸಂಬಂಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳೊಂದಿಗೆ ಜಿಲ್ಲಾಧಿಕಾರಿಯವರಾದ ಶಿಲ್ಪಾ ನಾಗ್ ಅವರು ಸಭೆ ನಡೆಸಿದರು.

ಚುನಾವಣಾ ಸಂದರ್ಭದಲ್ಲಿ ಅಭ್ಯರ್ಥಿಗಳು ಚುನಾವಣಾ ಸಭೆ, ಸಮಾರಂಭ, ಪ್ರಚಾರ ಸಾಮಗ್ರಿ, ವಾಹನಗಳ ಬಾಡಿಗೆ, ಸಮಾರಂಭಗಳಲ್ಲಿ ಉಪಯೋಗಿಸಬಹುದಾದ ವಸ್ತುಗಳು, ಶಾಮಿಯಾನ, ಕುರ್ಚಿ, ಧ್ವನಿವರ್ಧಕ, ಬ್ಯಾನರ್, ಕರಪತ್ರ, ಪೋಸ್ಟರ್, ಎಲ್ಇಡಿ ಪರದೆ ಸೇರಿದಂತೆ ಇನ್ನಿತರ ಸಾಮಗ್ರಿಗಳ ದರ ನಿಗದಿ ಸಂಬಂಧ ವಿವರವಾಗಿ ಚರ್ಚಿಸಲಾಯಿತು.

ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಮಾತನಾಡಿ ಪ್ರತಿಯೊಂದು ವೆಚ್ಚವನ್ನು ಅಭ್ಯರ್ಥಿಗಳ ಅಧಿಕೃತ ಖಾತೆಯಿಂದ ನಿರ್ವಹಿಸಬೇಕಾಗುತ್ತದೆ. ಪಾರದರ್ಶಕವಾಗಿ ಚುನಾವಣಾ ಪ್ರಕ್ರಿಯೆ ನಡೆಸುವ ನಿಟ್ಟಿನಲ್ಲಿ ಚುನಾವಾಣ ಆಯೋಗ ನೀಡಿರುವ ಸೂಚನೆ ಮಾರ್ಗದರ್ಶನಗಳನ್ನು ಪಾಲನೆ ಮಾಡಬೇಕಾಗುತ್ತದೆ ಎಂದರು.

ಚುನಾವಣೆ ಸಂಬಂಧ ಮಾಡಲಾಗುವ ಎಲ್ಲ ಖರ್ಚು ವೆಚ್ಚಗಳನ್ನು ಅಭ್ಯರ್ಥಿಗಳು ಇಡಬೇಕಾಗುತ್ತದೆ. ನಿಗದಿತ ವಹಿಯಲ್ಲಿ ಎಲ್ಲವನ್ನು ನಮೂದಿಸಬೇಕಾಗುತ್ತದೆ. ಚುನಾವಣಾ ವೆಚ್ಚ ಅಧಿಕಾರಿಗಳು ಈ ಸಂಬಂಧ ಪರಿಶೀಲಿಸಲಿದ್ದಾರೆ. ಮುಕ್ತ ನ್ಯಾಯಸಮ್ಮತ ಚುನಾವಣಾ ಪ್ರಕ್ರಿಯೆಗೆ ಸಹಕರಿಸಬೇಕಿದೆ ಎಂದು ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ತಿಳಿಸಿದರು. ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾ ಹುಡೇದ, ಜಿಲ್ಲಾ ಪಂಚಾಯತ್ ಮುಖ್ಯ ಲೆಕ್ಕಾಧಿಕಾರಿ ಬಸವರಾಜು, ಲೋಕೋಪಯೋಗಿ ಇಲಾಖೆಯ ಕಾರ್ಯಪಾಲಕ ಎಂಜಿನಿಯರ್ ಎಸ್.ಪಿ. ಮಹೇಶ್, ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳಾದ ಎ.ಎಚ್. ನಜ್ರುಲ್ಲಾ ಖಾನ್, ವೃಷಬೇಂದ್ರಪ್ಪ, ಎನ್. ನಾಗಯ್ಯ, ಮಹದೇವಸ್ವಾಮಿ, ಎಸ್. ಮಹೇಶ್ ಗೌಡ, ಇತರರು ಸಭೆಯಲ್ಲಿ ಉಪಸ್ಥಿತರಿದ್ದರು.



## ಆಹಾರ ವ್ಯಾಪಾರಸ್ಥರಿಗೆ ಸುರಕ್ಷತೆ, ಗುಣಮಟ್ಟ ಪರವಾನಗಿ ನೋಂದಣಿ ಕಡ್ಡಾಯ

**ಚಾಮರಾಜನಗರ:** ಆಹಾರ ಪದಾರ್ಥಗಳ ತಯಾರಿಕೆ, ವಿತರಣೆ, ಶೇಖರಣೆ ಮಾಡುವ ಎಲ್ಲಾ ಆಹಾರ ವ್ಯಾಪಾರಸ್ಥರು ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಕಾಯ್ದೆಯಡಿಯಲ್ಲಿ ಕಡ್ಡಾಯವಾಗಿ ಪರವಾನಗಿ ನೊಂದಣಿ ಪಡೆಯಬೇಕು. ಈ ನಿಟ್ಟಿನಲ್ಲಿ ಹೆಚ್ಚು ಜಾಗೃತಿಗೊಳಿಸಬೇಕೆಂದು ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಅಧಿಕಾರಿಗಳಿಗೆ ಸೂಚಿಸಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿಂದು ಜಿಲ್ಲಾ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಪ್ರಾಧಿಕಾರದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿ, ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಣಾಧಿಕಾರಿಗಳು, ಗ್ರಾಮ ಪಂಚಾಯಿತಿ ಅಧಿಕಾರಿಗಳು, ಆಹಾರ ಉದ್ದಿಮೆಗಳಿಗೆ ಅನುಮತಿ ಉದ್ದಿಮೆ ಪರವಾನಗಿ ನೀಡುವ ಮೊದಲು ಭಾರತೀಯ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಪ್ರಾಧಿಕಾರ (ಎಫ್.ಎಸ್.ಎಸ್.ಎ.ಐ) ಪರವಾನಗಿ, ನೋಂದಣಿ ಕಡ್ಡಾಯಗೊಳಿಸಬೇಕಿದೆ. ಈ ಬಗ್ಗೆ ವ್ಯಾಪಕವಾಗಿ ಅರಿವು ಮೂಡಿಸಬೇಕಿದೆ ಎಂದು ಜಿಲ್ಲಾಧಿಕಾರಿಯವರು ತಿಳಿಸಿದರು.

ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆ ಅಧಿಕಾರಿಗಳು ಅನಧಿಕೃತ ಆಹಾರ ತಯಾರಿಕಾ ಘಟಕಗಳಿಗೆ ಭೇಟಿ ಕೊಡಬೇಕು, ಅಧಿಕೃತ ಆಹಾರ ತಯಾರಿಕಾ ಘಟಕಗಳು, ಅಂಗಡಿಗಳು, ಉಗ್ರಾಣಗಳಿಗೂ ಭೇಟಿ ನೀಡಿ ಪರಿಶೀಲಿಸಬೇಕು. ಆಹಾರ ಮಾದರಿಗಳನ್ನು ಸಂಗ್ರಹಿಸಿ ನೊಂದಾಯಿತ ಆಹಾರ ಪ್ರಯೋಗ ಶಾಲೆಗೆ ಕಳುಹಿಸಿ ವಿಶ್ಲೇಷಣಾ ವರದಿಯನ್ನು ಪಡೆಯಬೇಕು ಎಂದರು.

ರಸ್ತೆ ಬದಿ ವ್ಯಾಪಾರಿಗಳಿಗೆ ನಗರಸಭೆ, ಪುರಸಭೆ, ಸ್ಥಳೀಯ ಪಂಚಾಯಿತಿಗಳಿಂದ ಆರೋಗ್ಯ ತಪಾಸಣೆ, ಸ್ವಚ್ಚತೆ ಮತ್ತು ಗುಣಮಟ್ಟ ಆಹಾರ ಪದಾರ್ಥ ಬಳಕೆ ಮಾಡುವ ಕುರಿತು ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಬೇಕು. ಮಾರ್ಗದರ್ಶನ ಮಾಡುವ ಕಾರ್ಯಗಳು ನಡೆಯಬೇಕು. ಆಹಾರ ಸುರಕ್ಷತೆಗೆ ಹೆಚ್ಚಿನ ಒತ್ತು ನೀಡಬೇಕು ಎಂದು ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ತಿಳಿಸಿದರು.

ಇದೇ ವೇಳೆ ಅತ್ಯುತ್ತಮವಾಗಿ ಸ್ವಚ್ಚತೆ ಕಾಪಾಡಿಕೊಂಡ ಉದ್ದಿಮೆದಾರರಿಗೆ ಪ್ರಮಾಣ ಪತ್ರಗಳನ್ನು ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ವಿತರಿಸಿದರು. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್. ಚಿದಂಬರ, ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆಯ ಅಂಕಿತ ಅಧಿಕಾರಿ ಡಾ. ಶಶಿಧರ್, ತಾಲೂಕು ಆಹಾರ ಸುರಕ್ಷತಾ ಅಧಿಕಾರಿ ಡಾ. ಶ್ರೀನಿವಾಸ್, ಆಹಾರ ಮತ್ತು ನಾಗರಿಕ ಸರಬರಾಜು ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪನಿರ್ದೇಶಕರಾದ ಸವಿತಾ, ಎಪಿಎಂಸಿ ಕಾರ್ಯದರ್ಶಿ ರವಿಕುಮಾರ್, ಸಾರ್ವಜನಿಕ ಶಿಕ್ಷಣ ಇಲಾಖೆಯ ಅಧಿಕಾರಿ ಶಂಕರ್, ಇನ್ನಿತರ ಇಲಾಖೆಗಳ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

## ಕಲೆ, ಸಾಹಿತ್ಯ, ಸಂಸ್ಕೃತಿ ಉಳಿಸಿ ಬೆಳೆಸಿ

**ಚಾಮರಾಜನಗರ:** ಜಿಲ್ಲೆಯ ಜಾನಪದ ಕಲೆ, ಸಾಹಿತ್ಯ, ಸಂಸ್ಕೃತಿಯನ್ನು ಉಳಿಸಿ ಬೆಳೆಸುವುದರ ಜೊತೆಗೆ ಯುವಜನತೆ ಎಲ್ಲಾ ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ಭಾಗವಹಿಸಿ ಜಿಲ್ಲೆಗೆ ಕೀರ್ತಿ ತರಬೇಕು ಎಂದು ನಗರಸಭಾ ಸದಸ್ಯರಾದ ಎಂ. ಮಹೇಶ್ ಅವರು ತಿಳಿಸಿದರು. ನಗರದ ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಂಯುಕ್ತಾಶ್ರಯದಲ್ಲಿ ಆಯೋಜಿಸಲಾಗಿದ್ದ ?ಜಿಲ್ಲಾಮಟ್ಟದ ಯುವಜನ ಮೇಳ? ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಜಿಲ್ಲೆ ಜಾನಪದ ಕಲೆಗಳ ತವರೂರಾಗಿದೆ. ವಿವಿಧ ಸಾಂಸ್ಕೃತಿಕ ಕಲೆಗಳು, ಸಾಹಿತ್ಯಾತ್ಮಕ ಚಟುವಟಿಕೆಗಳನ್ನು ಆಗಿಂದಾಗ್ಗೆ ಅಯೋಜಿಸುತ್ತಿರುವುದು ಯುವಜನತೆ ತಮ್ಮಲ್ಲಿರುವ ಅಗಾಧ ಪ್ರತಿಭೆಗಳನ್ನು ಹೊರಸೂಸಲು ಪ್ರೇರಕವಾಗಿದೆ. ಇಂದಿನ ವಿದ್ಯಾರ್ಥಿಗಳು, ಯುವಕರು ಮೊಬೈಲ್‌ಗೆ ಮಾರುಹೋಗಿ ಸಾಮಾಜಿಕ ಜಾಲತಾಣದಲ್ಲಿ ಸಕ್ರಿಯರಾಗಿದ್ದು, ಇದರಿಂದ ಸಾಂಸ್ಕೃತಿಕ ಚಟುವಟಿಕೆಗಳು ನಶಿಸಿಹೋಗುತ್ತಿವೆ. ಯುವಜನತೆ ಇದನ್ನು ಮನಗಂಡು ಜಿಲ್ಲೆಯ ಕಲೆ, ಸಂಸ್ಕೃತಿಗಳನ್ನು ಉಳಿಸಿ ಬೆಳೆಸಲು ಮುಂದಾಗಬೇಕು ಎಂದರು.

ಜಿಲ್ಲೆಯ ಯುವಕ, ಯುವತಿಯರಿಗೆ ತಮ್ಮಲ್ಲಿರುವ ಸುಪ್ತ ಪ್ರತಿಭೆಗಳನ್ನು ಹೊರತರಲು ಯುವಜನ ಮೇಳ ಸಹಕಾರಿಯಾಗಲಿದೆ. ಜಿಲ್ಲಾಮಟ್ಟದಲ್ಲಿ ಆಯ್ಕೆಯಾದವರು ರಾಜ್ಯ ಹಾಗೂ ರಾಷ್ಟ್ರಮಟ್ಟದಲ್ಲಿ ಜಿಲ್ಲೆಯ ಕೀರ್ತಿ ಪತಾಕೆ ಹಾರಿಸಬೇಕು. ಸಾಕಷ್ಟು ಹಿರಿಯ ಕಲಾವಿದರು ಜಿಲ್ಲೆಯ ಕಲೆ, ಸಾಹಿತ್ಯ, ಸಂಸ್ಕೃತಿಗೆ ಅಪಾರ ಕೊಡುಗೆಗಳನ್ನು ನೀಡಿದ್ದಾರೆ ಎಂದು ಮಹೇಶ್ ಅವರು ತಿಳಿಸಿದರು. ಪ್ರಾಸ್ತಾವಿಕವಾಗಿ ಮಾತನಾಡಿದ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ಶಿವಸ್ವಾಮಿ ಅವರು ಪ್ರತಿವರ್ಷದಂತೆ ಈ ಬಾರಿಯೂ ಜಿಲ್ಲಾಮಟ್ಟದ ಯುವಜನ ಮೇಳವನ್ನು ಆಯೋಜಿಸಲಾಗಿದೆ. ಯುವಜನತೆ ತಮ್ಮ ಪ್ರತಿಭೆಗಳನ್ನು ಅನಾವರಣಗೊಳಿಸಲು ಯುವಜನ ಮೇಳ ಉತ್ತಮ ವೇದಿಕೆಯಾಗಲಿದೆ. ಜಿಲ್ಲೆಯ ಯುವಕ, ಯುವತಿಯರು ಯುವಜನ ಮೇಳವನ್ನು ಸದ್ಬಳಕೆ ಮಾಡಿಕೊಳ್ಳಬೇಕು ಎಂದರು.

ಜಿಲ್ಲಾ ಕ್ರೀಡಾಂಗಣ ಅಭಿವೃದ್ಧಿ ಸಮಿತಿಯ ಸದಸ್ಯರಾದ ಶ್ರೀನಿವಾಸಮೂರ್ತಿ, ಜಿಲ್ಲಾ ಯುವ ಪ್ರಶಸ್ತಿ ಪುರಸ್ಕೃತರಾದ ಜಿ. ಬಂಗಾರು, ಹಿರಿಯ ಜನಪದ ಗಾಯಕರಾದ ಸಿ.ಎಂ. ನರಸಿಂಹಮೂರ್ತಿ, ಕ್ರೀಡಾ ತರಬೇತುದಾರರಾದ ಗಣೇಶ್, ಇತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು. ವೇದಿಕೆ ಕಾರ್ಯಕ್ರಮ ಬಳಿಕ ಜಿಲ್ಲೆಯ ವಿವಿಧ ಭಾಗಗಳಿಂದ ಆಗಮಿಸಿದ್ದ ಯುವಕ, ಯುವತಿಯರು ಕಾರ್ಯಕ್ರಮದಲ್ಲಿ ತಮ್ಮ ಕಲಾ ಪ್ರತಿಭೆಯನ್ನು ಪ್ರದರ್ಶಿಸಿದರು.



## ಕಿಲಗೆರೆ ಗ್ರಾಮದಲ್ಲಿ ಬಸವೇಶ್ವರ ದೇವಸ್ಥಾನ ಸಂಪ್ರೋಕ್ಷಣೆ

**ಚಾಮರಾಜನಗರ:** ಕಿಲಗೆರೆ ಗ್ರಾಮದಲ್ಲಿ ಸೋಮವಾರ ಮುಂಜಾನೆ ಶ್ರೀಬಸವೇಶ್ವರ ದೇವಸ್ಥಾನದ ಸಂಪ್ರೋಕ್ಷಣಾ ಮತ್ತು ಗಣಪತಿ ಹಾಗೂ ದುರ್ಗಾಪರಮೇಶ್ವರಿ ದೇವತಾ ಪ್ರತಿಷ್ಠಾಪನಾ ಕಾರ್ಯಕ್ರಮವು ವಿಜೃಂಭಣೆಯಿಂದ ನಡೆಯಿತು.

ಭಾನುವಾರ ತಡರಾತ್ರಿ ಕಳಸಾ ಪೂಜೆ, ಸೋಮವಾರ ಬೆಳಗಿನ ಜಾವ 4 ಗಂಟೆಗೆ ಹೋಮ ಪೂಜೆ ಸಲ್ಲಿಸಿದ ಬಳಿಕ 4.30 ರ ವೇಳೆಯಲ್ಲಿ ಬಸವೇಶ್ವರ, ಗಣಪತಿ ಹಾಗೂ ದುರ್ಗಾಪರಮೇಶ್ವರಿ ವಿಗ್ರಹಗಳ ಪ್ರತಿಷ್ಠಾಪನೆಯನ್ನು ಮಾಡಲಾಯಿತು.

ದೇವಸ್ಥಾನದ ಸಂಪ್ರೋಕ್ಷಣಾ ಕಾರ್ಯಕ್ರಮದ ಅಂಗವಾಗಿ ಭಾನುವಾರ ಸಂಜೆ ಗಂಗಾಪೂಜೆ ಸಲ್ಲಿಸಿ, ಹೆಣ್ಣು ಮಕ್ಕಳಿಂದ ಗಂಗೆ ತರಲಾಯಿತು. ಈ ವೇಳೆ ಗ್ರಾಮದ ಪ್ರಮುಖ ರಸ್ತೆಗಳಲ್ಲಿ ನೂತನ ವಿಗ್ರಹಗಳನ್ನು ಮಂಗಳವಾದ್ಯ, ವೀರಗಾಸೆ, ಛತ್ರಿ, ಚಾಮರಗಳೊಂದಿಗೆ ಮೆರವಣಿಗೆ ಮಾಡಲಾಯಿತು. ಈ ವೇಳೆ ಬಸವೇಶ್ವರರ ಭಾವಚಿತ್ರಕ್ಕೆ ಗ್ರಾಮಸ್ಥರು ಪೂಜೆ ಸಲ್ಲಿಸಿದರು.

ಸೋಮವಾರ ಮುಂಜಾನೆ ದೇವರ ಪ್ರತಿಷ್ಠಾಪನವಾದ ಬಳಿಕ ವಿವಿಧ ಗ್ರಾಮಗಳಿಂದ ಆಗಮಿಸಿದ್ದ ಭಕ್ತಾದಿಗಳು ದೇವರಿಗೆ ಪೂಜೆ ಸಲ್ಲಿಸಿದರು. ಬಳಿಕ ಪ್ರಸಾದ ವಿನಿಯೋಗ ಮಾಡಲಾಯಿತು. ಈ ಕಾರ್ಯಕ್ರಮಗಳನ್ನು ಕಬ್ಬಹಳ್ಳಿ ಪಟ್ಟದ ಮಠಾಧ್ಯಕ್ಷರಾದ ಗುರುಸಿದ್ದಸ್ವಾಮಿಗಳು ಹಾಗೂ ಕಿಲಗೆರೆ ದಾಸೋಹ ಮಠದ ಕಾಳಿಂಗಸ್ವಾಮಿಗಳು ನೆರವೇರಿಸಿದರು. ಭಾನುವಾರ ರಾತ್ರಿ ದಿಲೀಪ್ ಶಾಸ್ತ್ರೀಯವರು ಶಿವಕಥೆಯನ್ನು ನಡೆಸಿಕೊಟ್ಟರು.



## ಕೃತಕ ಆಭರಣ ತಯಾರಿಕಾ ಉಚಿತ ತರಬೇತಿ

**ರಾಮನಗರ:** ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಶಿಕ್ಷಣ ಟ್ರಸ್ಟ್ ಮತ್ತು ಕೆನರಾ ಬ್ಯಾಂಕ್‌ನ ಸಹಯೋಗದಲ್ಲಿ ರುಡ್‌ಸೆಟ್ ಸಂಸ್ಥೆ ವತಿಯಿಂದ ಹಮ್ಮಿಕೊಂಡಿರುವ ಕೃತಕ ಆಭರಣ ತಯಾರಿಕ ಕುರಿತ 13 ದಿನಗಳ ಉಚಿತ ತರಬೇತಿ 25 ಮಾರ್ಚ್ 2024 ರಿಂದ ಆಯೋಜಿಸಲಾಗಿದ್ದು, ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ, ರಾಮನಗರ ಹಾಗೂ ತುಮಕೂರು ಜಿಲ್ಲಾ ವ್ಯಾಪ್ತಿಯ ಗ್ರಾಮೀಣ ಆಸಕ್ತ ನಿರುದ್ಯೋಗಿ ಯುವತಿಯರು ಅರ್ಜಿ ಸಲ್ಲಿಸಬಹುದಾಗಿದೆ.

ಆಸಕ್ತರು 18 ರಿಂದ 45 ವರ್ಷ ವಯೋಮಾನದವರಾಗಿದ್ದು, ಕನ್ನಡ ಭಾಷೆ ಓದಲು ಮತ್ತು ಬರೆಯಲು ಬಲ್ಲವರಾಗಿರಬೇಕು. ಅಭ್ಯರ್ಥಿಗಳು ಆಧಾರ್ ಕಾರ್ಡ್ನ್ನು ಹೊಂದಿರಬೇಕು ಹಾಗೂ ಬಿಪಿಎಲ್ ಕಾರ್ಡ್ ಅನ್ನು ಹೊಂದಿರುವ ಗ್ರಾಮೀಣ ಪ್ರದೇಶದ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು.

ತರಬೇತಿಯು ಕಡ್ಡಾಯವಾಗಿ ವಸತಿಯುತವಾಗಿದ್ದು, ತರಬೇತಿಯ ಅವಧಿಯಲ್ಲಿ ಉಚಿತವಾಗಿ ಊಟ ಮತ್ತು ವಸತಿ ನೀಡಲಾಗುವುದು ಹಾಗೂ ತರಬೇತಿ ಪೂರ್ಣಗೊಂಡ ನಂತರ ಕೇಂದ್ರ, ಸರ್ಕಾರದ ಗ್ರಾಮೀಣಾಭಿವೃದ್ಧಿ ಸಚಿವಾಲಯದಿಂದ ಪ್ರಮಾಣಪತ್ರವನ್ನು ವಿತರಿಸಲಾಗುವುದು. ಅರ್ಜಿ ಸಲ್ಲಿಸಲು ಮಾರ್ಚ್ 20 ಕೊನೆಯ ದಿನವಾಗಿದೆ.

ಆಸಕ್ತರು ಅರ್ಜಿ ಸಲ್ಲಿಸಲು ಹಾಗೂ ಹೆಚ್ಚಿನ ಮಾಹಿತಿಗಾಗಿ ರುಡ್‌ಸೆಟ್ ಸಂಸ್ಥೆ, ಅರಿಶಿನಕುಂಟೆ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಮೊಬೈಲ್ ಸಂಖ್ಯೆ: 9241482541, 8884554510, 9740982585, 9380162042, 9113880324 ಅನ್ನು ಸಂಪರ್ಕಿಸಬಹುದಾಗಿದೆ ಎಂದು ರುಡ್‌ಸೆಟ್ ಸಂಸ್ಥೆಯ ಬೆಂಗಳೂರು ಶಾಖೆಯ ನಿರ್ದೇಶಕರಾದ ರವಿಕುಮಾರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವೆಂಕಟಗಿರಿಕೋಟೆ ಗ್ರಾಮ ಪಂಚಾಯಿತಿ ಗ್ರಾಮಸಭೆ

**ವಿಜಯಪುರ:** ಹೋಬಳಿಯ ವೆಂಕಟಗಿರಿಕೋಟೆ ಗ್ರಾಮ ಪಂಚಾಯಿತಿ ವತಿಯಿಂದ ಮಂಗಳವಾರ ಚನ್ನಕೇಶವಸ್ವಾಮಿ ಸಮುದಾಯಭವನದಲ್ಲಿ ಅಧ್ಯಕ್ಷೆ ಎಸ್.ಆಶಾ ಅವರ ಅಧ್ಯಕ್ಷತೆಯಲ್ಲಿ 2023-24 ನೇ ಸಾಲಿನ ಮೊದಲನೇ ಹಂತದ ಗ್ರಾಮಸಭೆ ನಡೆಯಿತು.

ವೆಂಕಟಗಿರಿಕೋಟೆ ಗ್ರಾಮದಲ್ಲಿ ಎರಡು ವಿಭಾಗಗಳಿದ್ದು, ಇಲ್ಲಿನ ಜನರಿಗೆ ನಿವೇಶನ ಹಂಚಿಕೆ ಮಾಡಲು, ಭೂಮಿಯನ್ನು ಮಂಜೂರು ಮಾಡಿಸಿಕೊಂಡು ಹಂಚಿಕೆ ಮಾಡಬೇಕು. ಸ್ಮಶಾನಗಳಿಗೆ ಜಾಗಗಳಿಲ್ಲ. ಒಂದೊಂದು ಸ್ಮಶಾನದಲ್ಲಿ ಇಬ್ಬರನ್ನು ಅಂತ್ಯಸಂಸ್ಕಾರ ಮಾಡುವಂತಹ ಪರಿಸ್ಥಿತಿ ನಿರ್ಮಾಣವಾಗಿದೆ. ಈ ಕುರಿತು ವರದಿಯನ್ನು ತಯಾರಿಸಿ, ಸರ್ಕಾರಕ್ಕೆ ಸಲ್ಲಿಸಬೇಕು. ಪಂಚಾಯಿತಿ ವ್ಯಾಪ್ತಿಯಲ್ಲಿನ ಹಳ್ಳಿಗಳಲ್ಲಿರುವ ಸರ್ಕಾರಿ ಶಾಲೆಗಳಲ್ಲಿ ದೈಹಿಕ ಶಿಕ್ಷಕರಿಲ್ಲದೆ ಮಕ್ಕಳು ಕ್ರೀಡಾಚಟುವಟಿಕೆಗಳಿಂದ ಹಿಂದುಳಿಯುತ್ತಿದ್ದಾರೆ.

ಪಠ್ಯಶಿಕ್ಷಣಕ್ಕಿಂತ ಕ್ರೀಡಾ ಚಟುವಟಿಕೆಗಳತ್ತ ಪೋಷಕರು ಒಲವು ತೋರಿಸುತ್ತಿದ್ದಾರೆ. ಸರ್ಕಾರ, ಪಂಚಾಯಿತಿಗೊಬ್ಬ ದೈಹಿಕ ಶಿಕ್ಷಕರನ್ನು ನೇಮಕ ಮಾಡಿ, ಒಂದೊಂದು ದಿನ ಒಂದೊಂದು ಶಾಲೆಯ ಮಕ್ಕಳಿಗೆ ತರಬೇತಿ ನೀಡುವಂತೆ ಕ್ರಮ ಕೈಗೊಳ್ಳಬೇಕು. ಹಿಂದಿ ಶಿಕ್ಷಕರನ್ನೂ ನೇಮಕ ಮಾಡಬೇಕು.

ಪಂಚಾಯಿತಿ ವ್ಯಾಪ್ತಿಯಲ್ಲಿನ ಅಂಗವಿಕಲರಿಗೆ ತ್ರಿಚಕ್ರ ವಾಹನಗಳನ್ನು ವಿತರಣೆ ಮಾಡಲು ಕ್ರಮ ಕೈಗೊಳ್ಳಬೇಕು. ಮನೆಗಳಿಲ್ಲವೆಂದು ಪ್ರತಿಯೊಂದು ಗ್ರಾಮಸಭೆಗಳಲ್ಲೂ ಪದೇ ಪದೇ ಮನವಿಗಳು ಸಲ್ಲಿಸುತ್ತಲೇ ಇದ್ದೇವೆ. ಇದುವರೆಗೂ ಏನೂ ಪ್ರಯೋಜನವಾಗಿಲ್ಲವೆಂದು ಗ್ರಾಮಸಭೆಯಲ್ಲಿ ಹಾಜರಿದ್ದ ನಾಗರಿಕರು ಅಧಿಕಾರಿಗಳು, ಜನಪ್ರತಿನಿಧಿಗಳಿಗೆ ಒತ್ತಾಯಿಸಿದರು. ಸರ್ಕಾರ ತೋಟಗಾರಿಕೆ ಇಲಾಖೆಯ ಮೂಲಕ ತೋಟಗಳಿಗೆ ಔಷಧಿಗಳು ಸಿಂಪಡಣೆ ಮಾಡಲು ಬೂಮರ್ ಗಳನ್ನು ವಿತರಣೆ ಮಾಡುತ್ತಿದ್ದು, ಟ್ರ್ಯಾಕ್ಟರ್ ಗಳನ್ನು ಇಟ್ಟುಕೊಂಡಿರುವ ರೈತರಿಗೆ ಮಾತ್ರವೇ ನೀಡುತ್ತಿದೆ. ಇದರಿಂದ ಏನೂ ಪ್ರಯೋಜನವಾಗುತ್ತಿಲ್ಲ. ಮಿನಿಟ್ರ್ಯಾಕ್ಟರ್ ಗಳನ್ನು ಇಟ್ಟುಕೊಂಡಿರುವ ರೈತರಿಗೆ ಬೂಮರ್ ಗಳು ವಿತರಣೆ ಮಾಡುವ ವ್ಯವಸ್ಥೆಯಾಗಬೇಕು ಎಂದು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ವಿ.ರಾಮಚಂದ್ರಪ್ಪ ಒತ್ತಾಯಿಸಿದರು.

ತಾಲ್ಲೂಕಿನಲ್ಲಿನ ಕೆಲವು ಗ್ರಾಮ ಪಂಚಾಯಿತಿಗಳಿಗೆ ಉತ್ತಮ ಆದಾಯವಿದೆ. ತೆರಿಗೆಯೂ ಹೆಚ್ಚು ವಸೂಲಿಯಾಗುತ್ತಿದ್ದು, ವರ್ಗ-1 ರಲ್ಲಿ ಕೋಟ್ಯಾಂತರ ರೂಪಾಯಿಗಳ ಅನುದಾನ ಖರ್ಚಾಗದೇ ಉಳಿದಿರುತ್ತದೆ. ಇಂತಹ ಅನುದಾನವನ್ನು ಆರ್ಥಿಕವಾಗಿ ಶಕ್ತಿಯಿಲ್ಲದ ಗ್ರಾಮ ಪಂಚಾಯಿತಿಗಳಿಗೆ ವರ್ಗಾಯಿಸಿದರೆ, ಅಭಿವೃದ್ಧಿಗೆ ಸಹಕಾರಿಯಾಗುತ್ತದೆ. ಉಪನೋಂದಣಾಧಿಕಾರಿ ಕಚೇರಿಯಲ್ಲಿ ನೋಂದಣಿಯಾಗುತ್ತಿರುವ ಪಂಚಾಯಿತಿ ವ್ಯಾಪ್ತಿಗೆ ಸೇರಿದ ಭೂಮಿಗಳಿಗೆ ಸಂಬಂಧಿಸಿದ ನೋಂದಣಿ ಶುಲ್ಕದಲ್ಲಿ ಶೇ 2 ರಷ್ಟು ಆಯಾ ಗ್ರಾಮ ಪಂಚಾಯಿತಿಗಳಿಗೆ ವರ್ಗಾಯಿಸುವಂತಹ ವ್ಯವಸ್ಥೆ ಜಾರಿಯಾಗಬೇಕು. ಕೂಸಿನ ಮನೆ ತೆರೆಯಲಾಗುತ್ತಿದ್ದು, ಪ್ರತಿಯೊಂದು ಹಳ್ಳಿಗೊಂದರಂತೆ ತೆರೆಯಬೇಕು. ಪಂಚಾಯಿತಿ ಕೇಂದ್ರ ಸ್ಥಾನದಲ್ಲಿ ಮಾತ್ರ ತೆರೆದರೆ, ಮಕ್ಕಳ ತಾಯಂದಿರಿಗೆ ಕಷ್ಟವಾಗಲಿದೆ ಎಂದು ಸದಸ್ಯ ಆರ್.ಅಮರನಾಥ್ ಒತ್ತಾಯಿಸಿದರು.

ನೋಡಲ್ ಅಧಿಕಾರಿ ಬಿ.ವಿ.ಮಹೇಶ, ಗ್ರಾಮ ಪಂಚಾಯಿತಿ ಉಪಾಧ್ಯಕ್ಷ ವಿಶ್ವನಾಥಾಚಾರ್, ಕಾರ್ಯದರ್ಶಿ ವಿ.ಪ್ರಜ್ವಲ್, ಸದಸ್ಯರಾದ ಹೆಚ್.ಶ್ರೀನಿವಾಸ್, ಮುನಿರತ್ನಮ್ಮ, ಎಂ.ಮಾರಪ್ಪ, ರೋಷನ್ ತಾಜ್, ಸರೋಜಮ್ಮ, ಎಸ್.ನಾಗರಾಜ್, ಸಿ.ಜಗನ್ನಾಥ್, ಪದ್ಮಾವತಿ, ಎಸ್.ಸುನಂದ, ರೇಖಾ, ಅನಸೂಯ ಇದ್ದರು.




## ಜಂತುಹುಳು ನಿವಾರಣೆಗೆ ಉಚಿತ ಮಾತ್ರೆ ವಿತರಣೆ

**ಚಾಮರಾಜನಗರ:** ಜಂತುಹುಳುಗಳಿಂದ ಮಕ್ಕಳ ದೇಹದಲ್ಲಿ ರಕ್ತಹೀನತೆ ಹಾಗೂ ಅಪೌಷ್ಠಿಕತೆ ಉಂಟಾಗಿ ಮಕ್ಕಳ ಬೆಳವಣಿಗೆ ಕುಂಠಿತವಾಗುತ್ತದೆ. ಇದರ ನಿವಾರಣೆಗೆ 1 ರಿಂದ 19 ವರ್ಷದೊಳಗಿನ ಮಕ್ಕಳಿಗೆ ಆಲ್ಬೆಂಡಜೋಲ್ ಮಾತ್ರೆಗಳನ್ನು ಉಚಿತವಾಗಿ ನೀಡಲಾಗುತ್ತಿದೆ ಎಂದು ಆರ್.ಬಿ.ಎಸ್.ಕೆ. ವೈದ್ಯಾಧಿಕಾರಿ ಸುಪ್ರಿಯಾ ತಿಳಿಸಿದರು.

ಚಾಮರಾಜನಗರ ನಗರ ಪಟ್ಟಣದ ಸರ್ಕಾರಿ ಬಾಲಕಿಯರ ಪದವಿ ಪೂರ್ವ ಕಾಲೇಜಿನಲ್ಲಿ ರಾಷ್ಟ್ರೀಯ ಜಂತುಹುಳು ನಿವಾರಣಾ ದಿನಾಚರಣೆ ಅಂಗವಾಗಿ ಮಕ್ಕಳಿಗೆ ಅಲ್ಬೆಂಡಾಜೋಲ್ ಮಾತ್ರೆಗಳನ್ನು ವಿತರಿಸಿ ಅವರು ಮಾತನಾಡಿದರು.

ಸಾಮಾನ್ಯವಾಗಿ ಜಂತುಹುಳುವು 1 ರಿಂದ 19ವರ್ಷ ವಯೋಮಾನದ ಮಕ್ಕಳಲ್ಲಿ ಹೆಚ್ಚಾಗಿ ಕಾಣಿಸಿಕೊಳ್ಳುತ್ತಿದ್ದು, ಅವರಿಗೆ ಹೊಟ್ಟೆನೋವು, ಬೇಧಿ, ಹಸಿವಿಲ್ಲದಿರುವುದು ಹಾಗೂ ಸುಸ್ತು ಮುಂತಾದ ಲಕ್ಷಣಗಳು ಕಂಡುಬರುತ್ತವೆ. ಅಲ್ಲದೇ ರಕ್ತಹೀನತೆ, ಪೌಷ್ಟಿಕ ಆಹಾರದ ಕೊರತೆ ಉಂಟಾಗಿ ದೈಹಿಕ ಹಾಗೂ ಭೌತಿಕ ಬೆಳವಣಿಗೆಯಲ್ಲಿ ತೊಂದರೆ ಕಾಣಿಸಿಕೊಳ್ಳುತ್ತದೆ. ಜಂತುಹುಳು ನಿವಾರಣೆಗೆ ಅಲ್ಬೆಂಡಜೋಲ್ ಮಾತ್ರೆಗಳನ್ನು ವಿತರಿಸಲಾಗುತ್ತದೆ ಎಂದರು.

ನೈರ್ಮಲ್ಯ ಹಾಗೂ ವೈಯಕ್ತಿಕ ಶುಚಿತ್ವದ ಕೊರತೆಯಿಂದ, ಜಂತುಹುಳು ಸೋಂಕಿನ ಮಣ್ಣನ್ನು ಸ್ಪರ್ಶಿಸುವುದರಿಂದ ಜಂತುಹುಳು ಬಾಧೆ ಹರಡುತ್ತದೆ. ಇದರಿಂದ ದೂರವಿರಲು ಉಗುರುಗಳನ್ನು ಚಿಕ್ಕದಾಗಿ ಕತ್ತರಿಸಿ, ಸ್ವಚ್ಛವಾಗಿಟ್ಟುಕೊಳ್ಳಬೇಕು. ಆಹಾರ ಸೇವಿಸುವ ಮೊದಲು ಕೈಗಳನ್ನು ಶುಚಿಗೊಳಿಸಬೇಕು. ಶೌಚಾಲಯಗಳನ್ನು ಬಳಸಿದ ನಂತರ ಸಾಬೂನಿನಿಂದ ಕೈಗಳನ್ನು ತೊಳೆಯಬೇಕು. ಶುದ್ದೀಕರಿಸಿದ ನೀರು ಸೇವನೆ, ಹಣ್ಣು-ಹಂಪಲು ತರಕಾರಿಗಳನ್ನು ಚೆನ್ನಾಗಿ ತೊಳೆದು ಬಳಸುವುದರಿಂದ ಜಂತುಹುಳು ತೊಂದರೆಯಿಂದ ದೂರವಿರಲು ಸಾಧ್ಯ ಎಂದು ವೈದ್ಯಾಧಿಕಾರಿ ಸುಪ್ರಿಯಾ ತಿಳಿಸಿದರು.



ಕಾರ್ಯಕ್ರಮ ಎವಿಡೆನ್ಸ್ ಆಕ್ಷನ್ ಸಂಸ್ಥೆ ಜಿಲ್ಲಾ ಸಂಯೋಜಕ ಟಿ.ಜೆ. ಸುರೇಶ್ ಮಾತನಾಡಿ ಜಂತುಹುಳು ನಿವಾರಣಾ ಮಾತ್ರೆಯನ್ನು ಉಚಿತವಾಗಿ ಸರಕಾರಿ, ಅನುದಾನಿತ, ಖಾಸಗಿ ಶಾಲೆಗಳು, ಅಂಗನವಾಡಿ, ವಸತಿ ಶಾಲೆಗಳು, ಐಟಿಐ, ನರ್ಸಿಂಗ್, ಪದವಿ ಹಾಗೂ ವೃತ್ತಿಶಿಕ್ಷಣ ಕಾಲೇಜುಗಳ ವಿದ್ಯಾರ್ಥಿಗಳಿಗೆ ಶಾಲಾ-ಕಾಲೇಜುಗಳಲ್ಲಿಯೇ ನೀಡಲಾಗುತ್ತದೆ. ಅಂಗನವಾಡಿ ಮಕ್ಕಳಿಗೆ ಹಾಗೂ ಶಾಲೆಯಿಂದ ಹೊರಗುಳಿದ 19 ವರ್ಷದೊಳಗಿನ ಮಕ್ಕಳಿಗೆ ಅಂಗನವಾಡಿಯಲ್ಲಿ ಮಾತ್ರೆಯನ್ನು ವಿತರಿಸಲಾಗುವುದು ಎಂದರು.

ಮಾತ್ರೆ ವಿತರಣೆಗೆ ಶಿಕ್ಷಣ ಸಂಸ್ಥೆಗಳು, ಅಂಗನವಾಡಿ ಕೇಂದ್ರಗಳು ಸೇರಿದಂತೆ ವಿವಿಧ ಇಲಾಖೆಗಳ ಸಮನ್ವಯ ದೊಂದಿಗೆ ಈ ಕಾರ್ಯವನ್ನು ಯಶಸ್ವಿಗೊಳಿಸಲು ಮುಂದಾಗಬೇಕು ಎಂದು ಟಿ.ಜೆ. ಸುರೇಶ್ ಅವರು ತಿಳಿಸಿದರು. ಕಾಲೇಜಿನ ಪ್ರಾಂಶುಪಾಲರಾದ ನಿರ್ಮಲ, ಡಾ. ಚಿದಾನಂದ, ವೈದ್ಯಕೀಯ ಸಿಬ್ಬಂದಿ ಗಂಗಮಣಿ, ಇತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ಜಾನುವಾರುಗಳ ಕಾಲುಗಳ ಮೇಲೆ ಹಲ್ಲೆ

**ಚಾಮರಾಜನಗರ :** ಚಾಮರಾನಗರ. ಜಿಲ್ಲೆಯ ಹನೂರು ತಾಲ್ಲೂಕಿನ ಒಡೆಯರಪಾಳ್ಯದ ಸಿ ವಿಲೇಜ್ ಸಮೀಪ 15 ಕ್ಕೂ ಹೆಚ್ಚು ಜಾನುವಾರುಗಳ ಕಾಲುಗಳಿಗೆ ಕಿಡಿಗೇಡಿಗಳು ಮಚ್ಚಿನಿಂದ ಹಲ್ಲೆ ಮಾಡಿರುವಂತಹ ಘಟನೆ ಬುಧವಾರ ಸಂಜೆ ಬೆಳಕಿಗೆ ಬಂದಿದೆ.

ಹುತ್ತೂರು ಗ್ರಾಪಂ ವ್ಯಾಪ್ತಿಯ ಬಸವರಾಜು, ರಘು,ಸಿದ್ದಪ್ಪ ಎಂಬುವರಿಗೆ ಸೇರಿದಂತಹ ಜಾನುವಾರುಗಳೆ ಹಲ್ಲೆಗೆ ಒಳಗಾಗಿರುವುದು ಎಂದು ತಿಳಿದು ಬಂದಿದೆ.

ಜಾನುವಾರಗಳ ಪಾಲಕರು ಮೇಯಲು ಗುಂಡಿಮಾಳ ಆಸುಪಾಸಿನಲ್ಲಿ ಬಿಟ್ಟಿದ್ದ ಸಂದರ್ಭದಲ್ಲಿ ಜಮೀನುಗಳಿಗೆ ನುಗ್ಗಿದೆ ಎಂದು ತೇಜು ಎಂಬ ಟಿಬೇಟ್ ವ್ಯಕ್ತಿ ಜಾನುವಾರುಗಳ ಮೇಲೆ ಹಲ್ಲೆ ಮಾಡಿದ್ದಾನೆ ಎಂದು ಆರೋಪಿಸಲಾಗಿದ್ದು, ಈ ಕೃತ್ಯವನ್ನು ಕಂಡಂತಹ ಜಾನುವಾರುಗಳ ಪಾಲಕರು ಗೋಳಾಡುತ್ತಿರುವಂತಹ ಪ್ರಸಂಗ ಮನಕಲಕುವಂತಿತ್ತು ಇನ್ನೂ ಘಟನಾ ಸ್ಥಳಕ್ಕೆ ಹನೂರು ಪೋಲಿಸರು ತೆರಳಿ ಮುಂದಿನ ಕ್ರಮಕ್ಕೈಗೊಂಡಿದ್ದಾರೆ.



# ವೈಜ್ಞಾನಿಕ ವಿಚಾರಗಳನ್ನು ಅಳವಡಿಸಿಕೊಳ್ಳಿ

**ಚಿಕ್ಕಬಳ್ಳಾಪುರ:** ಭಾರತೀಯ ಪ್ರಸಿದ್ಧ ಭಾತಶಾಸ್ತ್ರಜ್ಞರಾದ ಚಂದ್ರಶೇಖರ್ ವೆಂಕಟ ರಾಮನ್ ಅವರ ವೈಜ್ಞಾನಿಕ ತತ್ವಗಳನ್ನು, ವಿಚಾರಗಳನ್ನು ಮತ್ತು ಮೌಲ್ಯಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕೆಂದು ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ವಿ.ಧನುರೇಣುಕ ವಿದ್ಯಾರ್ಥಿಗಳಿಗೆ ತಿಳಿಸಿದರು.

ಶಿಡ್ಲಘಟ್ಟ ತಾಲ್ಲೂಕಿನ ನಡಿಪಿನಾಯನಹಳ್ಳಿಯ ನವೋದಯ ವಿದ್ಯಾಲಯ ವಸತಿ ಪ್ರೌಢ ಶಾಲೆಯಲ್ಲಿ ಕರ್ನಾಟಕ ರಾಜ್ಯ ವಿಜ್ಞಾನ ಮತ್ತು ತಂತ್ರಜ್ಞಾನ ಮಂಡಳಿ, ಜಿಲ್ಲಾ ಪಂಚಾಯತ್, ಶಾಲಾ ಶಿಕ್ಷಣ ಇಲಾಖೆ, ಚಿಕ್ಕಬಳ್ಳಾಪುರ ಹಾಗೂ ರಾಷ್ಟ್ರೀಯ ವಿಜ್ಞಾನ ತಂತ್ರಜ್ಞಾನ ಸಂವಹನ ಮಂಡಳಿ, ಬೆಂಗಳೂರು ರವರ ಸಹಯೋಗದೊಂದಿಗೆ ಬುಧವಾರ ನಡೆದ ಡಾ. ಸಿ.ವಿ. ರಾಮನ್ ರವರ ರಾಮನ್ ರ ವಕ್ರಿಭವನ ಪರಿಣಾಮದ ಆವಿಷ್ಕಾರದ ಸ್ಮರಣಾರ್ಥವಾಗಿ ಆಯೋಜಿಸಿದ್ದ ''ರಾಷ್ಟ್ರೀಯ ವಿಜ್ಞಾನ ದಿನ'' ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಪ್ರತಿ ವರ್ಷ ಫೆಬ್ರವರಿ 28 ರಂದು ರಾಷ್ಟ್ರೀಯ ವಿಜ್ಞಾನ ದಿನವನ್ನು ಆಚರಿಸಲಾಗುತ್ತದೆ. ಭಾರತೀಯ ವಿಜ್ಞಾನ ಸಿ.ವಿ.ರಾಮನ್ ರವರು ಫೆಬ್ರವರಿ 28, 1928 ರಂದು ಭೌತಶಾಸ್ತ್ರದ ಸಂಶೋಧನೆಯಲ್ಲಿ ಕ್ರಾಂತಿಕಾರಿ ವಿದ್ಯಮಾನವಾದ ರಾಮನ್ ಪರಿಣಾಮವನ್ನು ಕಂಡುಹಿಡಿದರು. ಆದ್ದರಿಂದ ಈ ದಿನವನ್ನು ರಾಷ್ಟ್ರೀಯ ವಿಜ್ಞಾನ ದಿನವನ್ನಾಗಿ ಆಚರಿಸಲಾಗುತ್ತಿದೆ. ಪ್ರತಿಯೊಬ್ಬರ ಜೀವನದಲ್ಲಿ ವಿಜ್ಞಾನವು ಮುಖ್ಯವಾಗಿದೆ. ಕೆಲವೊಮ್ಮೆ ನಮಗೆ ಅರಿವಿಲ್ಲದೆ ನಾವು ನಮ್ಮ ದೈನಂದಿನ ಜೀವನದಲ್ಲಿ ವಿಜ್ಞಾನ ಮತ್ತು ಅದರ ಅನ್ವಯಗಳನ್ನು ಬಳಸುತ್ತೇವೆ. ನಮ್ಮ ಜೀವನದಲ್ಲಿ ವಿಜ್ಞಾನದ ಮಹತ್ವದ ಬಗ್ಗೆ ಜಾಗೃತಿ ಮೂಡಿಸಲು ಮತ್ತು ನಮ್ಮ ಜೀವನವನ್ನು ಸರಳಗೊಳಿಸುವ ವಿಜ್ಞಾನಿಗಳ ಪ್ರಯತ್ನಗಳನ್ನು ತಿಳಿದುಕೊಳ್ಳುವುದು ಮುಖ್ಯವಾಗಿದೆ. ವಿಜ್ಞಾನ ಕ್ಷೇತ್ರದಲ್ಲಿ ಜಗತ್ತಿನ ದೈತ್ಯ ಪ್ರತಿಭೆಯಾಗಿ ಅಪಾರ ಸಾಧನೆಗೈದ ಭಾರತೀಯ ವಿಜ್ಞಾನಿಗಳಲ್ಲಿ ಅಗ್ರಗಣ್ಯ ವ್ಯಕ್ತಿ ಎಂದರೆ ಸರ್. ಸಿ.ವಿ.ರಾಮನ್ ರವರು. ಇವರು ಮಾಡಿರುವ ಸಾಧನೆಗಳಿಗೆ ನೋಬೆಲ್ ಪ್ರಶಸ್ತಿ, ಭಾರತರತ್ನ ಪ್ರಶಸ್ತಿ, ದೇಶ ವಿದೇಶಗಳ ಹಲವಾರು ಪ್ರತಿಷ್ಠಿತ ವಿಶ್ವವಿದ್ಯಾಲಯಗಳಿಂದ ಗೌರವ ಡಾಕ್ಟರೇಟ್ ಪದವಿಗಳು ಸೇರಿದಂತೆ ಅಸಂಖ್ಯಾತ ಗೌರವಗಳು, ಪ್ರಶಸ್ತಿ-ಪುರಸ್ಕಾರಗಳು ಸಂದಿವೆ. ತಮ್ಮ ಇಡೀ ಜೀವನವನ್ನು ಸಂಪೂರ್ಣವಾಗಿ ವಿಜ್ಞಾನಕ್ಕೆ ಅವರು ಸಮರ್ಪಿಸಿಕೊಂಡಿದ್ದಾರೆ ಎಂದು ತಿಳಿಸಿದರು.



ಶಿಡ್ಲಘಟ್ಟ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಜಿ.ಮುನಿರಾಜು, ಶ್ರೀ ಲೋಕಮಾತಾ ಎಜುಕೇಷನಲ್ ಟ್ರಸ್ಟ್ ಸಂಸ್ಥಾಪಕರಾದ ಎನ್.ಆರ್. ಕೃಷ್ಣಮೂರ್ತಿ, ವಿಷಯ ಪರಿವೀಕ್ಷಕರಾದ ಟಿ.ಜಮೀರ್ ಪಾಷಾ, ಪ್ರಾಜೆಕ್ಟ್ ಅಸೋಸಿಯೇಟ್ ಯೋಜನಾ ಸಂಯೋಜಕಿ ಕುಮಾರಿ ಮಂಜುಳ.ಆರ್.ಚಂದುಗೋಳ್, ವಿಜ್ಞಾನ ಸಂಪನ್ಮೂಲ ಶಿಕ್ಷಕ ಎ.ಶ್ರೀನಿವಾಸ್, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ನೈನಾ ನಿಖ್ಬತ್ ಆರಾ ಮುಂತಾದವರು ಉಪಸ್ಥಿತರಿದ್ದರು.

# ಪಲ್ಸ್ ಪೋಲಿಯೋ ಯಶಸ್ವಿಗೆ ಕರೆ

**ರಾಮನಗರ:** ಮಾರ್ಚ್-03 ರಿಂದ 06 ವರೆಗೆ ನಡೆಯುವ ಪಲ್ಸ್ ಪೋಲಿಯೋ ಕಾರ್ಯಕ್ರಮದಲ್ಲಿ ಅರ್ಹ ಮಕ್ಕಳಿಗೆ ಪೋಲಿಯೋ ಲಸಿಕೆ ನೀಡುವ ಮೂಲಕ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ದಿಗ್ವಿಜಯ್ ಬೋಡ್ಕೆ ತಿಳಿಸಿದರು. ಅವರು ಫೆ. 28ರ ಬುಧವಾರ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಪಲ್ಸ್ ಪೋಲಿಯೋ ಕಾರ್ಯಕ್ರಮ 2024 ರ ಭಿತ್ತಿ ಪತ್ರವನ್ನು ಬಿಡುಗಡೆ ಮಾಡಿ ಮಾತನಾಡಿದರು. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ನಿರಂಜನ್ ಮಾತನಾಡಿ, ಜಿಲ್ಲೆಯಲ್ಲಿ 0-5 ವರ್ಷದೊಳಗಿನ ಮಕ್ಕಳು ಚನ್ನಪಟ್ಟಣ-19,242, ಕನಕಪುರ-22,325, ಮಾಗಡಿ-12,634, ರಾಮನಗರ-22,121 ರಂತೆ ಒಟ್ಟು 76,322 ಮಕ್ಕಳಿಗೆ ಪೋಲಿಯೋ ಲಸಿಕೆ ಹಾಕುವ ಗುರಿ ಹೊಂದಿದ್ದು ಪೋಷಕರು ಹಾಗೂ ಸಾರ್ವಜನಿಕರು ಸಹಕರಿಸುವಂತೆ ತಿಳಿಸಿದರು. ಜಿಲ್ಲಾ ಆರ್.ಸಿ.ಎಚ್. ಅಧಿಕಾರಿ ಡಾ. ರಾಜು ಮಾತನಾಡಿ, ಪಲ್ಸ್ ಪೋಲಿಯೋ ಕಾರ್ಯಕ್ರಮ ಮಾರ್ಚ್-03 ರಿಂದ 06 ವರೆಗೆ ಜಿಲ್ಲೆಯಾದ್ಯಂತ ನಡೆಯಲಿದ್ದು 1ನೇ ದಿನ ಬೂತ್ ಗಳಲ್ಲಿ, ನಂತರದ ದಿನಗಳಲ್ಲಿ ಗ್ರಾಮೀಣ ಪ್ರದೇಶದಲ್ಲಿ 3 ದಿನ ಹಾಗೂ ನಗರ ಪ್ರದೇಶಗಳಲ್ಲಿ 4 ದಿನಗಳವರೆಗೆ ಆರೋಗ್ಯ ಸಿಬ್ಬಂದಿ, ಆಶಾ ?ಅಂಗನವಾಡಿ ಕಾರ್ಯಕರ್ತೆಯರು ಮನೆ-ಮನೆ ಭೇಟಿ ಮಾಡಿ ಬೂತ್‌ಗಳಲ್ಲಿ ಲಸಿಕೆ ಪಡೆಯದೇ ಇರುವ ಮಕ್ಕಳನ್ನು ಗುರುತಿಸಿ ಅರ್ಹ ಮಕ್ಕಳಿಗೆ ಲಸಿಕೆ ನೀಡುತ್ತಾರೆ. ಜೊತೆಗೆ ರೈಲು, ಬಸ್ ನಿಲ್ದಾಣ, ವಲಸೆ ಜನರು ವಾಸಿಸುವ ಪ್ರದೇಶಗಳು, ಇಟ್ಟಿಗೆ ಮತ್ತು ಬ್ರಿಕ್ಸ್ ಫ್ಯಾಕ್ಟರಿ, ಮಾರುಕಟ್ಟೆ ಇನ್ನಿತರೆ ಪ್ರದೇಶಗಳಲ್ಲಿ ವಿಶೇಷ ತಂಡಗಳ ಮೂಲಕ ಅರ್ಹ ಮಕ್ಕಳಿಗೆ ಪೋಲಿಯೋ ಲಸಿಕೆ ನೀಡಲಾಗುವುದು. ಆದ್ದರಿಂದ ಸಾರ್ವಜನಿಕರು, ಪೋಷಕರು, ಸಂಘ ಸಂಸ್ಥೆಗಳು ಸಹಕರಿಸುವಂತೆ ತಿಳಿಸಿದರು. ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಎಸ್. ಗಂಗಾಧರ್, ರೋಟರಿ ಸಂಸ್ಥೆಯ ಅಧ್ಯಕ್ಷ ಕಾಂತರಾಜು, ಡಿ.ಪಿ.ಎಂ. ನಾಗೇಶ್, ಶಿಕ್ಷಣ ಇಲಾಖಾ ಅಧಿಕಾರಿಗಳು, ಆರೋಗ್ಯ ಸಿಬ್ಬಂದಿ ಹಾಜರಿದ್ದರು.

# ಮಹಿಳಾ ದಿನಾಚರಣೆಯ ಪ್ರಯುಕ್ತ ಮಹಿಳಾ ಕ್ರೀಡಾಕೂಟ

**ಮಂಡ್ಯ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ನೆಹರು ಯುವಕೇಂದ್ರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಕಾವೇರಿ ಜಿಲ್ಲಾ ಸ್ತ್ರೀ ಶಕ್ತಿ ಒಕ್ಕೂಟ ಹಾಗೂ ಎಲ್ಲಾ ಮಂಡ್ಯ ತಾಲ್ಲೂಕು ಒಕ್ಕೂಟ, ಜಿಲ್ಲೆಯಲ್ಲಿರುವ ಎಲ್ಲಾ ಮಹಿಳಾ ಸಂಘ ಸಂಸ್ಥೆಗಳು ಇವರ ಸಂಯುಕ್ತಾಶ್ರಯದಲ್ಲಿ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯ ಪ್ರಯುಕ್ತ ಮಾರ್ಚ್ 5 ರಂದು ಬೆಳಿಗ್ಗೆ 9 ಗಂಟೆಗೆ ಮಹಿಳಾ ಕ್ರೀಡಾಕೂಟ ಸ್ಪರ್ಧೆಯನ್ನು ಮಂಡ್ಯ ಸರ್ ಎಂ ವಿಶ್ವೇಶರಯ್ಯ ಒಳಾಂಗಣ ಕ್ರೀಡಾಂಗಣದ ಆವರಣದಲ್ಲಿ ಆಯೋಜಿಸಲಾಗಿದೆ. 18 ವರ್ಷ ಮೇಲ್ಪಟ್ಟ ಮಹಿಳೆಯರು ಹಗ್ಗ ಜಗ್ಗಾಟ (ಒಂದು ಗುಂಪಿಗೆ 10 ಮಂದಿ ಮಾತ್ರ), ಥ್ರೋಬಾಲ್ (ಒಂದು ಗುಂಪಿಗೆ 10 ಮಂದಿ ಮಾತ್ರ), ಜಾನಪದ ಗೀತೆ (ಒಂದು ಗುಂಪಿಗೆ 6 ಮಂದಿ ಮಾತ್ರ), ಮ್ಯೂಸಿಕಲ್ ಚೇರ್, ಸ್ಲೋ ಸ್ಕೂಟರ್ ರೇಸ್, ಬಿಂದಿಗೆ ಹಿಡಿದು ಓಟ, ಲೆಮನ್ ಅಂಡ್ ಸ್ಪೂನ್ ಸ್ಪರ್ಧೆಗಳಲ್ಲಿ ಭಾಗವಹಿಸಲು ಉಚಿತ ಅವಕಾಶವಿರುತ್ತದೆ. ಗುಂಪು ಸ್ಪರ್ಧೆಗಳಿಗೆ ಪ್ರಥಮ ಬಹುಮಾನ ರೂ 5000 ನಗದು, ದ್ವಿತೀಯ ಬಹುಮಾನ ರೂ 4000, ಜಾನಪದ ಸ್ಪರ್ಧೆಗಳಿಗೆ ಪ್ರಥಮ ಬಹುಮಾನ ರೂ 3000, ದ್ವಿತೀಯ ಬಹುಮಾನ ರೂ 2400, ವೈಯಕ್ತಿಕ ಸ್ಪರ್ಧೆಗಳಿಗೆ ಪ್ರಥಮ ಬಹುಮಾನ ರೂ 500, ದ್ವಿತೀಯ ಬಹುಮಾನ ರೂ 400, ತೃತೀಯ ಬಹುಮಾನ ರೂ 300 ಹಾಗೂ ಪ್ರಮಾಣ ಪತ್ರವನ್ನು ನೀಡಲಾಗುತ್ತದೆ. ಹೆಚ್ಚಿನ ಮಾಹಿತಿಗಾಗಿ ದೂ,ಸಂ: 9036801065, 9632872714 ನ್ನು ಸಂಪರ್ಕಿಸಬಹುದು ಎಂದು ಮಂಡ್ಯ ಯುವಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

# ಟೆಂಡರ್ ಆಹ್ವಾನ

**ರಾಮನಗರ:** ಮುಂಬರುವ ಲೋಕಸಭಾ ಸಾರ್ವತ್ರಿಕ ಚುನಾವಣೆ-2024ರ ಸಂಬಂಧ ಚುನಾವಣಾ ಕಾರ್ಯಕ್ಕೆ ಮಾಸಿಕ ಬಾಡಿಗೆ ಆಧಾರದ ಮೇಲೆ ಚಾಲಕರ ಜೊತೆಗೆ ಕಾರುಗಳನ್ನು ಬಾಡಿಗೆಗೆ ಪಡೆಯುವುದು, ವೀಡಿಯೋಗ್ರಾಫರ್ ಮತ್ತು ವೀಡಿಯೋ ಕ್ಯಾಮರಾ ಪೂರೈಕೆ, ಅಡುಗೆ ಸೇವೆಗಳಿಗೆ ಪೂರೈಕೆ ಹಾಗೂ ಚುನಾವಣಾ ವಸ್ತುಗಳು ಮತ್ತು ಲೇಖನ ಸಾಮಗ್ರಿಗಳನ್ನು ಪೂರೈಸಲು ಜಿಲ್ಲಾಧಿಕಾರಿಗಳ ಕಚೇರಿ ವತಿಯಿಂದ ಟೆಂಡರ್ ಕರೆಯಲಾಗಿದೆ. ಹೆಚ್ಚಿನ ಮಾಹಿತಿಗೆ ಜಿಲ್ಲಾಧಿಕಾರಿಗಳ ಕಾರ್ಯಾಲಯ, ರಾಮನಗರ ಜಿಲ್ಲೆ ಈ ಕಚೇರಿಯನ್ನು ಸಂಪರ್ಕಿಸುವಂತೆ ರಾಮನಗರ ಜಿಲ್ಲಾಧಿಕಾರಿಗಳ ಕಚೇರಿಯ ಚುನಾವಣಾ ತಹಶೀಲ್ದಾರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ತಾಲೂಕು ಕಚೇರಿಗೆ ಡಿಸಿ ಭೇಟಿ

**ಮಂಡ್ಯ:** ಜಿಲ್ಲಾಧಿಕಾರಿ ಡಾ: ಕುಮಾರ ಅವರು ಇಂದು ಮಳವಳ್ಳಿ ತಾಲ್ಲೂಕು ಕಚೇರಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಸಾರ್ವಜನಿಕರಿಂದ ಕುಂದು ಕೊರತೆ ಕುರಿತು ಅರ್ಜಿಗಳನ್ನು ಸ್ವೀಕರಿಸಿ ತಾಲ್ಲೂಕು ಕಚೇರಿ ಸಿಬ್ಬಂದಿ ಹಾಗೂ ಅಧಿಕಾರಿಗಳು ಸಾರ್ವಜನಿಕರನ್ನು ಕಚೇರಿಗೆ ಅಲೆದಾಡಿಸದೇ ನಗದಿತ ಸಮಯದಲ್ಲಿ ಪಾರದರ್ಶಕವಾಗಿ ಅರ್ಜಿಗಳನ್ನು ವಿಲೇವಾರಿ ಮಾಡಬೇಕು ಎಂದರು. ಮುಂಬರುವ ಲೋಕಸಭಾ ಸಾರ್ವತ್ರಿಕ ಚುನಾವಣೆಯ ಸಂಬಂಧ ಮತಗಟ್ಟೆಗಳಿಗೆ ಭೇಟಿ ನೀಡಿ ಮೂಲಭೂತ ಸೌಕರ್ಯಗಳು ಹಾಗೂ ಚುನಾವಣಾ ಆಯೋಗ ನೀಡಿರುವ ನಿರ್ದೇಶನದಂತೆ ಸಿದ್ಧತೆಗಳನ್ನು ಮಾಡಿಕೊಂಡಿರುವುದನ್ನು ಪರಿಶೀಲಿಸಿದರು. ಪರಿಶೀಲನೆ ವೇಳೆಮಳವಳ್ಳಿ ತಹಶೀಲ್ದಾರ್ ಲೋಕೇಶ್ ಉಪಸ್ಥಿತರಿದ್ದರು. ಶೇಖ್ ತನ್ವೀರ್ ಆಸಿಫ್ ಮಂಡ್ಯ. ಜಿಲ್ಲಾ ಪಂಚಾಯತ್ ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಶೇಖ್ ತನ್ವೀರ್ ಆಸಿಫ್ ಅವರು ಮಂಗಳವಾರದಂದು ಮಳವಳ್ಳಿ ತಾಲ್ಲೂಕು ಪಂಚಾಯತ್ ಕಚೇರಿಗೆ ಅನಿರೀಕ್ಷಿತ ಭೇಟಿ ನೀಡಿ ಪರಿಶೀಲಿಸಿದರು. ತಾಲ್ಲೂಕು ವ್ಯಾಪ್ತಿಯ ಗ್ರಾಮಗಳಲ್ಲಿ ಜನ-ಜಾನುವಾರುಗಳಿಗೆ ಕುಡಿಯುವ ನೀರಿನ ಸಮಸ್ಯೆ ಬಗ್ಗೆ ಚರ್ಚಿಸಿ, ಕುಡಿಯುವ ನೀರಿನ ಸಮಸ್ಯೆಯಾಗದಂತೆ ಅಗತ್ಯ ಕ್ರಮ ಕೈಗೊಳ್ಳಲು ಅಧಿಕಾರಿಗಳಿಗೆ ನಿರ್ದೇಶಿಸಿದರು. ಮಳವಳ್ಳಿ ತಾಲ್ಲೂಕು ಬೆಳಕವಾಡಿ ಮತ್ತು ಇತರೆ 04 ಗ್ರಾಮಗಳ ಬಹುಗ್ರಾಮ ಕುಡಿಯುವ ನೀರಿನ ಯೋಜನೆಯ ಪುನಶ್ಚೇತನ ಕಾಮಗಾರಿಯು ಪ್ರಗತಿಯಲ್ಲಿದ್ದು, ಕಾಮಗಾರಿಯ ಸ್ಥಳವನ್ನು ಪರಿಶೀಲಿಸಿದರು.

# ಮಾ.9ರ ಲೋಕ್ ಅದಾಲತ್

**ಚಿಕ್ಕಬಳ್ಳಾಪುರ:** ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ನಿರ್ದೇಶನದ ಮೇರೆಗೆ ನ್ಯಾಯಾಲಯಗಳಲ್ಲಿ ಬಾಕಿ ಇರುವ ಪ್ರಕರಣಗಳನ್ನು ಮತ್ತು ವ್ಯಾಜ್ಯ ಪೂರ್ವ ಪ್ರಕರಣಗಳನ್ನು ಇತ್ಯರ್ಥಪಡಿಸುವ ಸಲುವಾಗಿ ಜಿಲ್ಲೆಯಾದ್ಯಂತ ಮಾರ್ಚ್ 9 ರಂದು ಜಿಲ್ಲೆಯಲ್ಲಿನ ಎಲ್ಲ ನ್ಯಾಯಾಲಯಗಳಲ್ಲಿ ರಾಷ್ಟ್ರೀಯ ಲೋಕ್ ಅದಾಲತ್ ನ್ನು ಹಮ್ಮಿಕೊಳ್ಳಲಾಗಿದೆ ಇದರ ಸದುಪಯೋಗವನ್ನು ಸಾರ್ವಜನಿಕರು ಪಡೆದುಕೊಳ್ಳಬೇಕು ಎಂದು ಪ್ರಧಾನ ಮತ್ತು ಜಿಲ್ಲಾ ಸತ್ರ ನ್ಯಾಯಾಧೀಶರಾದ ನೇರಳೆ ವೀರಭದ್ರಯ್ಯ ಭವಾನಿ ಮಾಡಿದರು.

ಬುಧವಾರ ನಗರದ ಜಿಲ್ಲಾ ನ್ಯಾಯಾಲಯದ ಸಭಾಂಗಣದಲ್ಲಿ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡುತ್ತಾ, ರಾಷ್ಟ್ರ, ರಾಜ್ಯ, ಜಿಲ್ಲೆ ಹಾಗೂ ತಾಲ್ಲೂಕು ಮಟ್ಟದಲ್ಲಿ ಏಕ ಕಾಲದಲ್ಲಿ ಮಾರ್ಚ್ 9 ರಂದು ರಾಷ್ಟ್ರೀಯ ಲೋಕ ಅದಾಲತ್ ನಡೆಯಲಿದೆ. ಅದರಂತೆ ಚಿಕ್ಕಬಳ್ಳಾಪುರ ಜಿಲ್ಲೆಯ ಎಲ್ಲಾ ನ್ಯಾಯಾಲಯಗಳಲ್ಲಿ ಘೋರ ಅಪರಾಧಿಕ ಕೃತ್ಯದ ಪ್ರಕರಣಗಳನ್ನು ಹೊರತುಪಡಿಸಿ ಉಳಿದಂತಹ ಚಿಕ್ಕ ಪುಟ್ಟ ಅಪರಾದಿಕ ಪ್ರಕರಣಗಳನ್ನು ಇತ್ಯರ್ಥ ಪಡಿಸಲು ಯೋಜಿಸಲಾಗಿದೆ. ಈ ಅದಾಲತ್ ನಲ್ಲಿ ಭಾಗವಹಿಸುವುದರಿಂದ ನ್ಯಾಯಾಲಯದ ಸಮಯ ಉಳಿಯುವುದರ ಜೊತೆಗೆ ವ್ಯಾಜ್ಯದಾರರ ಹಣ, ಸಮಯ ಉಳಿಯಲಿದೆ. ಜೊತೆಗೆ ನೆಮ್ಮದಿಯುತ ಜೀವನ ಎರಡೂ ವ್ಯಾಜ್ಯದಾರರಿಗೆ ದೊರಕುವುದರಿಂದ ಇಲ್ಲಿ ಯಾರು ಗೆಲ್ಲಲ್ಲ ಯಾರೂ ಸೋಲುವುದು ಇಲ್ಲ. ಹಾಗಾಗಿ ಎಲ್ಲರೂ ಖುಷಿಯಾಗಿ ತಮ್ಮ ವ್ಯಾಜ್ಯಗಳನ್ನು ಪರಿಹರಿಸಿಕೊಳ್ಳಲು ಇದೊಂದು ಸುವರ್ಣ ಅವಕಾಶವಾಗಲಿದೆ ಎಂದು ತಿಳಿಸಿದರು.

ಜಿಲ್ಲಾಡಳಿತ ಹಾಗೂ ಪೊಲೀಸ್ ಇಲಾಖೆಯ ಸಹಕಾರದೊಂದಿಗೆ ಈ ಬಾರಿ ಲೋಕ್ ಅದಾಲತ್ ನಲ್ಲಿ 40 ಸಾವಿರಕ್ಕೂ ಹೆಚ್ಚು ಪ್ರಕರಣಗಳನ್ನು ಇತ್ಯರ್ಥಪಡಿಸುವ ಗುರಿಯನ್ನು ಹೊಂದಿದ್ದೇವೆ ಎಂದು ಮಾಹಿತಿ ನೀಡಿದರು. ಅದೇ ರೀತಿ ಪ್ರಸ್ತುತ ನ್ಯಾಯಲಯಗಳಲ್ಲಿ ಬಾಕಿ ಇರುವ 2,468 ಹಾಗೂ 39,617 ವ್ಯಾಜ್ಯ ಪೂರ್ವ ಪ್ರಕರಣಗಳು ಸೇರಿದಂತೆ ಒಟ್ಟು 40 ಸಾವಿರಕ್ಕೂ ಹೆಚ್ಚು ಪ್ರಕರಣಗಳನ್ನು ಇತ್ಯರ್ಥಪಡಿಸಲು ಪ್ರಯತ್ನ ಮಾಡಲಾಗುವುದು. ನ್ಯಾಯಾಲಯದಲ್ಲಿ ರಾಜಿ ಮಾಡಿಕೊಂಡರೆ ಮನಸ್ ಶಾಂತಿ ಮತ್ತು ನೆಮ್ಮದಿ ವಾತಾವರಣ ಮೂಡಲಿದೆ. ಕಕ್ಷಿದಾರರು ಅಮೂಲ್ಯವಾದ ಸಮಯದ ವ್ಯರ್ಥವಿಲ್ಲದೆ ಉಚಿತವಾಗಿ ಕಾನೂನು ನೆರವು ಪಡೆಯಬಹುದು. ಸಾರ್ವಜನಿಕರು ಈ ಅವಕಾಶವನ್ನು ಸದುಪಯೋಗಪಡಿಸಿಕೊಂಡು ತಮ್ಮ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಬೇಕು ಎಂದು ಮನವಿ ಮಾಡಿದರು.




ಲೋಕ್ ಅದಾಲತ್‌ನಲ್ಲಿ ನ್ಯಾಯಾಲಯಗಳಲ್ಲಿ ಬಾಕಿ ಇರುವ ಪ್ರಕರಣಗಳು, ಮೋಟಾರ್ ವಾಹನ, ಅಪಘಾತ ಪರಿಹಾರದ ಸ್ವಾಧೀನ ಪ್ರಕರಣಗಳು, ವಿದ್ಯುತ್ ಮಂಡಳಿ ಪ್ರಕರಣಗಳು, ಬ್ಯಾಂಕ್ ಸಂಬಂಧಿಸಿದ ಪ್ರಕರಣಗಳು, ಚೆಕ್ ಅಮಾನ್ಯ ಪ್ರಕರಣಗಳು, ವೈವಾಹಿಕ ಅಥವಾ ಜೀವನಾಂಶ ಪ್ರಕರಣಗಳು ಸೇರಿದಂತೆ ಕಾನೂನಿನನ್ವಯ ರಾಜಿ ಆಗಬಹುದಾದ ಕ್ರಿಮಿನಲ್ ಪ್ರಕರಣಗಳು ಮತ್ತು ಪ್ರಕರಣಗಳನ್ನು ಲೋಕ್ ಅದಾಲತ್ ನಲ್ಲಿ ಬಗೆಹರಿಸಿಕೊಳ್ಳಲು ಅವಕಾಶವಿದ್ದು, ಸದುಪಯೋಗಪಡಿಸಿಕೊಳ್ಳಬೇಕು ಎಂದು ಸಾರ್ವಜನಿಕರಲ್ಲಿ ಮನವಿ ಮಾಡಿದರು.

ಸಾರ್ವಜನಿಕರು ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಅಥವಾ ತಾಲ್ಲೂಕು ಕಾನೂನು ಸೇವಾ ಸಮಿತಿಯ ಸದಸ್ಯ ಕಾರ್ಯದರ್ಶಿಯವರನ್ನು ಅಥವಾ ಸಹಾಯವಾಣಿ ಸಂಖ್ಯೆ 1800 425-9090 ಅನ್ನು ಸಂಪರ್ಕಿಸಬಹುದು ಎಂದು ಅವರು ತಿಳಿಸಿದರು. ಹಿರಿಯ ಸಿವಿಲ್ ನ್ಯಾಯದಿಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಕಾರ್ಯದರ್ಶಿ ಎ. ಅರುಣ ಕುಮಾರಿ ಇದ್ದರು.

# ಭಾರತೀಯ ಸಂಸ್ಕೃತಿ ಶ್ರೇಷ್ಠ

## ವೈದ್ಯಕೀಯ ಮಹಾವಿದ್ಯಾಲಯದ ವಿಶ್ರಾಂತ ನಿರ್ದೇಶಕ ಪುತ್ತೂರಾಯ ಅಭಿಮತ

**ಚನ್ನಪಟ್ಟಣ:** ನಮ್ಮ ಹೆತ್ತವರನ್ನು ನಾವು ಹೇಗೆ ನೋಡಿಕೊಳ್ಳುತ್ತೇವೆಯೋ, ಅದೇ ರೀತಿ ನಮ್ಮ ಮಕ್ಕಳು ಸಹ ವೃದ್ಧಾಪ್ಯದ ದಿನಗಳಲ್ಲಿ ನಮ್ಮನ್ನು ನೋಡಿಕೊಳ್ಳುತ್ತಾರೆ ಎಂಬುದನ್ನು ನಾವು ಅರಿಯಬೇಕು. ಪೋಷಕರನ್ನು ವೃದ್ಧಾಪ್ಯದ ದಿನದಲ್ಲಿ ಪ್ರೀತಿಯಿಂದ ನೋಡಿಕೊಳ್ಳುವ ಮೂಲಕ ನಮ್ಮ ಮಕ್ಕಳಿಗೂ ಅದೇ ಪಾಠವನ್ನು ನಾವು ಕಲಿಸಬೇಕು ಎಂದು ಭಾರತೀಯ ವೈದ್ಯಕೀಯ ಮಹಾವಿದ್ಯಾಲಯದ ವಿಶ್ರಾಂತ ನಿರ್ದೇಶಕ ಹಾಗೂ ವಾಗ್ಮಿ ಡಾ.ಕೆ.ಪಿ.ಪುತ್ತೂರಾಯ ತಿಳಿಸಿದರು.

ನಗರದ ಶತಮಾನೋತ್ಸವ ಭವನದಲ್ಲಿ ಬುದ್ಧ ಬಸವ ಗಾಂಧಿ ಸಾಂಸ್ಕೃತಿಕ ಟ್ರಸ್ಟ್ ಹಾಗೂ ಭಾರತ ವಿಕಾಸ ಪರಿಷತ್ ಕಣ್ವ ಶಾಖೆ ವತಿಯಿಂದ ಹಮ್ಮಿಕೊಂಡಿದ್ದ ತಿಟ್ಟಮಾರನಹಳ್ಳಿ ಗೌರಮ್ಮ-ವೆಂಕಟಗಿರಿಗೌಡ ಸ್ಮಾರಕ ದತ್ತಿ ಸಮಾರಂಭ ಹಾಗೂ ವಿವಿಧ ಕ್ಷೇತ್ರಗಳ ಸಾಧಕರಿಗೆ ಸೇವಾ ಗೌರವ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಎಲ್ಲ ಸಂಸ್ಕೃತಿ ಗಿಂತ ನಮ್ಮ ಭಾರತೀಯ ಸಂಸ್ಕೃತಿ ಶ್ರೇಷ್ಠವಾದದ್ದು, ಆದ್ದರಿಂದ ಮಕ್ಕಳಿಗೆ ವಿದ್ಯೆಯ ಜತೆಗೆ ಸಂಸ್ಕಾರವನ್ನು ಕಲಿಸಿ. ಉತ್ತಮ ಸಂಸ್ಕಾರವಂತ ಮಕ್ಕಳು ಯಾರೂ ತಮ್ಮ ಪೋಷಕರನ್ನು ವೃದ್ಧಾಶ್ರಮಕ್ಕೆ ಕಳುಹಿಸುವುದಿಲ್ಲ. ಮಕ್ಕಳೇ ಮನೆಯ ನಂದಾದೀಪ, ನೀವು ಚಿನ್ನದ ಪದಕ ಗಳಿಸದಿದ್ದರೂ ಪರವಾಗಿಲ್ಲ. ಆದರೆ, ಪೋಷಕರನ್ನು, ಕಲಿತ ಶಾಲೆ, ಕಲಿಸಿದ ಶಿಕ್ಷಕರನ್ನು ಗೌರವಿಸುವುದನ್ನು ಕಲಿಯಿರಿ ಎಂದು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.

ಪೋಷಕರು ಬದುಕಿದ್ದಾಗಲೇ ಮಕ್ಕಳು ಅವರನ್ನು ನೋಡಿಕೊಳ್ಳುವುದಿಲ್ಲ. ಇನ್ನು ಅವರು ಮೃತರಾದ ಮೇಲೆ ಅವರನ್ನು ಮರತೆಬಿಡುತ್ತಾರೆ. ಗಳಿಸಿದ್ದನ್ನು ಬಿಟ್ಟು ಹೋಗುವುದಕ್ಕಿಂತ ಕೊಟ್ಟು ಹೋಗುವುದು ಶ್ರೇಷ್ಠ. ಇದನ್ನು ಅರಿತಿರುವ ವಕೀಲ ಟಿ.ವಿ.ಗಿರೀಶ್ ತಮ್ಮ ತಂದೆ-ತಾಯಿ ಹೆಸರಿನಲ್ಲಿ ದತ್ತಿ ಸ್ಥಾಪಿಸಿ ಸಾಮಾಜಿಕ ಸೇವೆಗಳನ್ನು ಮಾಡುತ್ತಿರುವುದು ಶ್ಲಾಘನೀಯ. ಅವರ ಈ ಸಾಮಾಜಿಕ ಕಾರ್ಯ ಹೀಗೆಯೇ ಮುಂದುವರಿಯಲಿ ಎಂದು ಆಶಿಸಿದರು.

ಬಿಎಂಶ್ರೀ ಪ್ರತಿಷ್ಠಾನದ ಅಧ್ಯಕ್ಷ ಬೈರಮಂಗಲ ರಾಮೇಗೌಡ ಮಾತನಾಡಿ,



ಇಂದು ಪೋಷಕರನ್ನು ವೃದ್ಧಾಶ್ರಮಕ್ಕೆ ಸೇರಿಸುವ ಪರಿಪಾಠ ಹೆಚ್ಚಾಗುತ್ತಿದೆ. ಎಷ್ಟೋ ಕಡೆ ವೃದ್ಧರಾದವರನ್ನು ಮನೆಯಲ್ಲಿಟ್ಟುಕೊಂಡರು ಅದು ಅವರಿಗೆ ಸೆರೆಮನೆಯಂತಾಗಿದೆ. ಮನಷ್ಯ ಸಂಬಂಧಗಳು ಇಂದು ಮುರಿದುಹೋಗುತ್ತಿದ್ದು ಅರ್ಥಹೀನವಾಗುತ್ತಿದೆ ಎಂದು ಬೇಸರ ವ್ಯಕ್ತಪಡಿಸಿದರು.

ಪೋಷಕರು ಮಕ್ಕಳು ಹೆಚ್ಚು ಅಂಕ ಗಳಿಸಿದರೆ ಮಾತ್ರ ಅವರ ಭವಿಷ್ಯ ಉತ್ತಮವಾಗುತ್ತದೆ ಎಂದು ಭಾವಿಸಿದಾರೆ. ಆದರೆ ಉನ್ನತ ಸಾಧನೆ ಮಾಡಿರುವ ಬಹಳಷ್ಟು ಮಂದಿ ರ್ಯಾಂಕ್ ಪಡೆದವರಲ್ಲ ಎಂಬುದನ್ನು ಮನಗಾಣಬೇಕು. ವಿದ್ಯಾರ್ಥಿಗಳು ಸಂಸ್ಕೃತಿ ಕಲೆ ಸೇರಿದಂತೆ ಎಲ್ಲ ವಿಚಾರಗಳಲ್ಲೂ ಆಸಕ್ತಿ ಬೆಳೆಸಿಕೊಳ್ಳಬೇಕು. ಈ ಕ್ಷೇತ್ರಗಳಲ್ಲೂ ಸಾಧನೆ ಮಾಡಬಹುದು ಎಂಬುದನ್ನು ಅರಿಯಬೇಕು ಎಂದು ಸಲಹೆ ನೀಡಿದರು. ಗೌಡಗೆರೆಯ ಶ್ರೀ ಚಾಮುಂಡೇಶ್ವರಿ ಬಸವಪ್ಪನವರ ಪುಣ್ಯಕ್ಷೇತ್ರದ ಧರ್ಮದರ್ಶಿ ಮಲ್ಲೇಶ್ ಗುರೂಜಿ ಮಾತನಾಡಿ, ಇಂದು ಹಣ, ಆಸ್ತಿಗೆ ನೀಡುವ ಬೆಲೆಯನ್ನು ಹಿರಿಯರಿಗೆ ನೀಡಲಾಗುತ್ತಿಲ್ಲ. ಮಕ್ಕಳಿಗೆ ತಂದೆ ತಾಯಿಯ ಆಸ್ತಿ , ಒಡವೆ ಬೇಕು ಆದರೆ ವಯ್ಯಸ್ಸಾದ ಮೇಲೆ ಅವರು ಬೇಡ ಎಂಬ ಮನಸ್ಥಿತಿ ಇದೆ ಇದು ದೂರವಾಗಬೇಕು. ನಮ್ಮನ್ನು ಹೆತ್ತುವರು ಹೇಗೆ ನೋಡಿಕೊಳ್ಳುತ್ತಾರೋ ಅವರನ್ನು ಸಹ ನಾವು ವೃದ್ಧಾಪ್ಯದ ಕಾಲದಲ್ಲಿ ಹಾಗೇಯೇ ಪ್ರೀತಿಯಿಂದ ನೋಡಿಕೊಂಡು ಸೇವೆ ಮಾಡಬೇಕು ಎಂದರು.

ವಕೀಲರ ಸಂಘದ ಅಧ್ಯಕ್ಷ ಹಾಗೂ ದತ್ತಿದಾನಿ ಟಿ.ವಿ.ಗಿರೀಶ್ ಮಾತನಾಡಿ, ಇಂದು ನಾನು ಏನಾದರೂ ಸಾಧಿಸಿದ್ದರೆ, ಅದಕ್ಕೆ ನನ್ನ ಪೋಷಕರು ಹಾಗೂ ಕುಟುಂಬದವರೇ ಕಾರಣ. ಸಮಾಜಕ್ಕೆ ನನ್ನ ಕೈಲಾದ ಸೇವೆ ಮಾಡಬೇಕು ಎಂಬ ನಿಟ್ಟಿನಲ್ಲಿ ನಮ್ಮ ತಂದೆ-ತಾಯಿ ಹೆಸರಿನಲ್ಲಿ ಸೇವೆ ಮಾಡುತ್ತಿದ್ದೇನೆ. ಇಂದಿನ ಕಾರ್ಯಕ್ರಮಕ್ಕೆ ಸಾಕಷ್ಟು ಜನ ಪ್ರತ್ಯಕ್ಷ ಹಾಗೂ ಪರೋಕ್ಷವಾಗಿ ಸಹಕರಿಸಿದ್ದು, ಎಲ್ಲರಿಗೂ ಧನ್ಯವಾದ ತಿಳಿಸಿದರು.

ಕಾರ್ಯಕ್ರಮದಲ್ಲಿ ವಿವಿಧ ಸಾಧಕರಿಗೆ ಸೇವಾ ಪ್ರಶಸ್ತಿ ಹಾಗೂ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಲಾಯಿತು.

ಕಾರ್ಯಕ್ರಮದಲ್ಲಿ ರಾಜ್ಯ ಕುಕ್ಕುಟ ಮಹಾಮಂಡಳದ ಮಾಜಿ ಅಧ್ಯಕ್ಷ ಡಿ.ಕೆ. ಕಾಂತರಾಜು, ಚನ್ನಪಟ್ಟಣ ಯೋಜನಾ ಪ್ರಾಧಿಕಾರದ ಮಾಜಿ ಅಧ್ಯಕ್ಷ ಎ.ಸಿ.ವೀರೇಗೌಡ, ಪೌರಾಯುಕ್ತ ಪುಟ್ಟಸ್ವಾಮಿ, ಸಮಾಜ ಸೇವಕ ಉದಯ್‌ಸಿಂಗ್, ಬುದ್ಧ ಬಸವ ಗಾಂಧಿ ಟ್ರಸ್ಟ್‌ನ ಅಧ್ಯಕ್ಷ ರಾಮಲಿಂಗೇಶ್ವರ (ಶಿಶಿರ), ನಗರಸಭೆ ಸದಸ್ಯರಾದ ಸತೀಶ್ ಬಾಬು, ವಾಸೀಲ್ ಅಲಿಖಾನ್, ಭಾವಿಪದ ವಸಂತ್ ಕುಮಾರ್, ಗುರುಮಾದಯ್ಯ, ಡಾ.ರಾಜಶ್ರೀ ಇತರರು ಉಪಸ್ಥಿತರಿದ್ದರು.

# ಪತ್ರಕರ್ತರ ಮೇಲೆ ನಾಸೀರ್ ಹುಸೇನ್ ತೋರಿದ ವರ್ತನೆ ಖಂಡನೀಯ

**ಚನ್ನಪಟ್ಟಣ:** ಪತ್ರಕರ್ತರ ಮೇಲೆ ದರ್ಪ ತೋರಿದ ರಾಜ್ಯಸಭಾ ಸದಸ್ಯ ನಾಸೀರ್ ಹುಸೇನ್ ಸದಸ್ಯತ್ವ ವಜಾಮಾಡುವಂತೆ ಹಾಗೂ ನಾಸೀರ್ ಹುಸೇನ್ ಕ್ಷಮೆಗೆ ಆಗ್ರಹಿಸಿ ಚನ್ನಪಟ್ಟಣ ತಾಲೂಕು ಪತ್ರಕರ್ತರು ತಾಲೂಕು ಕಚೇರಿ ಎದುರು ಪ್ರತಿಭಟನೆ ನಡೆಸಿದರು.

ತಾಲೂಕು ಕಚೇರಿ ಆವರಣದಲ್ಲಿ ಜಮಾಯಿಸಿದ ತಾಲೂಕು ಪತ್ರಕರ್ತರು ನಾಸಿರ್ ಹುಸೇನ್ ಪತ್ರಕರ್ತರೊಂದಿಗೆ ನಡೆದುಕೊಂಡು ರೀತಿಯನ್ನು ಖಂಡಿಸಿ ಅವರ ವಿರುದ್ಧ ಘೋಷಣೆ ಕೂಗಿದರು.

ಪತ್ರಕರ್ತರ ಮೇಲೆ ನಾಸೀರ್ ಹುಸೇನ್ ತೋರಿದ ವರ್ತನೆ ಖಂಡನೀಯ. ಇತ್ತೀಚಿನ ದಿನಗಳಲ್ಲಿ ಪತ್ರಕರ್ತರ ಮೇಲೆ ಇಂಥ ಘಟನೆಗಳು ಮರುಕಳಿಸುತಿದ್ದು, ಇದು ಪ್ರಜಾಪ್ರಭುತ್ವ ವ್ಯವಸ್ಥೆಗೆ ಮಾರಕವಾಗಿದೆ. ಈ ನಿಟ್ಟಿನಲ್ಲಿ ಪತ್ರಕರ್ತರಿಗೆ ಸೂಕ್ತ ರಕ್ಷಣೆ ನೀಡುವಂತೆ ಒತ್ತಾಯಿಸಿದರು. ಇದೇ ವೇಳೆ ನಾಸೀರ್ ಹುಸೇನ್ ಕ್ಷಮೆಗೆ ಆಗ್ರಹಿಸಿ ಹಾಗೂ ಅವರ ರಾಜ್ಯಸಭಾ ಸದಸ್ಯತ್ವ ವಜಾಗೊಳಿಸುವಂತೆ ಒತ್ತಾಯಿಸಿ ತಹಸೀಲ್ದಾರ್ ಮೂಲಕ ರಾಜ್ಯಪಾಲರಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಹಿರಿಯ ಪತ್ರಕರ್ತ ಸು.ತ.ರಾಮೇಗೌಡ, ಕಾರ್ಯನಿರತ ಪತ್ರಕರ್ತರ ಸಂಘದ ರಾಷ್ಟ್ರೀಯ ಮಂಡಳಿ ಸದಸ್ಯ ಲಕ್ಷ್ಮೀಪತಿ, ಜಿಲ್ಲಾ ಉಪಾಧ್ಯಕ್ಷ ಶಿವಮಾದು, ಚನ್ನಪಟ್ಟಣ ತಾಲೂಕು ಪತ್ರಕರ್ತರ ಸಂಘದ ಅಧ್ಯಕ್ಷ ಮಂಜುನಾಥ್, ಕಾರ್ಯದರ್ಶಿ ಅಭಿಲಾಷ್ ತಿಟ್ಟಮಾರನಹಳ್ಳಿ, ಖಜಾಂಚಿ ಮಹೇಶ್ ಮೆಂಗಳ್ಳಿ, ಬಿ.ಟಿ ನಾಗೇಶ್, ಗುರುಮೂರ್ತಿ, ಅಕ್ಕೂರು ರಮೇಶ್ ಇತರರು ಉಪಸ್ಥಿತರಿದ್ದರು.

# ಕಂದಿಕೆರೆಯಲ್ಲಿ ಹಾಲು ಕರೆಯುವ ಸ್ಪರ್ಧೆ

**ಹುಳಿಯಾರು:** ಚಿಕ್ಕನಾಯಕನಹಳ್ಳಿ ತಾಲೂಕಿನ ಕಂದಿಕೆರೆಯಲ್ಲಿ ಪಶುಪಾಲನಾ ಮತ್ತು ಪಶು ವೈದ್ಯ ಸೇವಾ ಇಲಾಖೆಯಿಂದ ತಾಲೂಕು ಮಟ್ಟದ ಹಾಲು ಕರೆಯುವ ಸ್ಪರ್ಧೆ ಮತ್ತು ಕರುಗಳ ಪ್ರದರ್ಶನವನ್ನು ಫೆ.29 ರ ಗುರುವಾರ ಹಾಗೂ ಮಾ.1 ರ ಶುಕ್ರವಾರ ಹಮ್ಮಿಕೊಳ್ಳಲಾಗಿದೆ.

ಹಾಲು ಕರೆಯುವ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಪ್ರಥಮ ಬಹುಮಾನವಾಗಿ 20 ಸಾವಿರ ರೂ.ಮೌಲ್ಯದ ಹಾಲು ಕರೆಯುವ ಯಂತ್ರ, ದ್ವಿತೀಯ ಬಹುಮಾನವಾಗಿ 15 ಸಾವಿರ ರೂ ಮೌಲ್ಯದ ಹಸುಗಳ ಮೈ ತೊಳೆಯುವ ಯಂತ್ರ, ತೃತೀಯ ಬಹುಮಾನವಾಗಿ 6 ಸಾವಿರ ರೂ. ಮೌಲ್ಯದ 2 ಹಸುವಿನ ನೆಲಹಾಸು ಹಾಗೂ ಸ್ಪರ್ಧೆಯಲ್ಲಿ ಭಾಗವಹಿಸಿದ ರಾಸುಗಳಿಗೆ ಸಮಾಧಾನಕರ ಬಹುಮಾಣ ನೀಡಲಾಗುವುದು.

ಸ್ಪರ್ಧೆಯಲ್ಲಿ ಭಾಗವಹಿಸುವ ರಾಸು ದಿನವೊಂದಕ್ಕೆ 20 ಲೀ.ಹಾಲು ನೀಡಬೇಕು, ಫೆ.29 ರ ಸಂಜೆ 5 ಗಂಟೆಗೆ ಮಾ.1 ರ ಬೆಳಗ್ಗೆ 7 ಗಂಟೆಗೆ 2 ಬಾರಿ ಹಾಲು ಕರೆದು ಪ್ರದರ್ಶಿಸಬೇಕು. ಬೇರೆ ಊರುಗಳಿಂದ ಬರುವ ರಾಸುಗಳಿಗೆ ನೀರು ಮತ್ತು ನೆರಳಿನ ವ್ಯವಸ್ಥೆ ಮಾಡಲಾಗುವುದು. ಮೇವಿನ ವ್ಯವಸ್ಥೆಯನ್ನು ರಾಸುಗಳ ಮಾಲೀಕರೇ ಮಾಡಿಕೊಳ್ಳಬೇಕು.


ಸಂಗ್ರಹ ಚಿತ್ರ

ಕರುಗಳ ಪ್ರದರ್ಶನಕ್ಕೆ ಒಂದು ವರ್ಷದ ಒಳಗಿನ ವಯಸ್ಸಿನ ಕರುಗಳನ್ನು ಮಾತ್ರ ಪ್ರದರ್ಶನಕ್ಕೆ ತರಬೇಕು. ಉತ್ತಮವಾಗಿ ಸಾಕಿದ ಕರುಗಳಿಗೆ ವಯಸ್ಸಿಗನುಗುಣವಾಗಿ ಅಥವಾ ತಳಿವಾರು 15 ಬಹುಮಾನಗಳನ್ನು ನೀಡಲಾಗುವುದು. ಭಾಗವಹಿಸಿದ ಪ್ರತಿ ಕರುವಿಗೆ ಜಂತುನಾಶಕ ಔಷಧಿ ಕುಡಿಸಿ ಆರೋಗ್ಯ ವರ್ಧಕ ಚುಚ್ಚುಮದ್ದುಗಳನ್ನು ನೀಡಲಾಗವುದು.

ಹೆಚ್ಚಿನ ಮಾಹಿತಿಯನ್ನು ಡಾ.ರೆ. ಮ.ನಾಗಭೂಷಣ್ 9740569898, ಡಾ.ಶಾಂತೇಶ್ 7760994036, ಕೆಂಪಣ್ಣ 9901768223, ಬಾಬುಶ್ರೀನಿವಾಸ್ 9483648389 ಸಂಪರ್ಕಿಸಲು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

# ಮಾ.2, 3ರಂದು ಬೂದನೂರು ಉತ್ಸವ

**ಮಂಡ್ಯ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಪ್ರವಾಸೋದ್ಯಮ ಇಲಾಖೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆರವರ ಸಂಯುಕ್ತಾಶ್ರಯದಲ್ಲಿ ಮಾರ್ಚ್ 02 ಮತ್ತು 03 ರಂದು ಬೂದನೂರು ಉತ್ಸವ ಕಾರ್ಯಕ್ರಮವು ಮಂಡ್ಯ ತಾಲ್ಲೂಕಿನ ಹೊಸಬೂದನೂರು ಗ್ರಾಮದ ಶ್ರೀ ಕಾಶಿವಿಶ್ವನಾಥಸ್ವಾಮಿ ದೇವಾಲಯದ ಹಿಂಭಾಗ ಸಂಜೆ 5.00 ಗಂಟೆಗೆ ನಡೆಯಲಿದೆ.

ಕೃಷಿ ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಎನ್. ಚಲುವರಾಯಸ್ವಾಮಿ ಅವರು ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದು, ಮಂಡ್ಯ ವಿಧಾನಸಭಾ ಕ್ಷೇತ್ರದ ಶಾಸಕ ಪಿ. ರವಿಕುಮಾರ್ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ. ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಇಲಾಖೆ ಸಚಿವ ಹೆಚ್. ಕೆ. ಪಾಟೀಲ್, ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವ ಶಿವರಾಜ್ ಎಸ್. ತಂಗಡಗಿ ಹಾಗೂ ಶ್ರೀರಂಗಪಟ್ಟಣ ವಿಧಾನಸಭಾ ಕ್ಷೇತ್ರದ ಶಾಸಕ ಹಾಗೂ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮದ ಅಧ್ಯಕ್ಷರು ಎ.ಬಿ. ರಮೇಶ ಬಂಡಿಸಿದ್ದೇಗೌಡ ಅವರು ಘನ ಉಪಸ್ಥಿತಿಯನ್ನು ವಹಿಸಲಿದ್ದಾರೆ.

ಕಾರ್ಯಕ್ರಮಕ್ಕೆ ಮುಖ್ಯ ಅಥಿತಿಗಳಾಗಿ ಲೋಕಸಭಾ ಸಂಸದೆ ಸುಮಲತಾ ಅಂಬರೀಶ್, ವಿಧಾನಪರಿಷತ್ ಶಾಸಕರಾದ ಮರಿತಿಬ್ಬೇಗೌಡ, ಮಧು ಜಿ. ಮಾದೇಗೌಡ, ದಿನೇಶ್ ಗೂಳಿಗೌಡ, ವಿಧಾನಸಭಾ ಶಾಸಕ ಪಿ. ಎಂ. ನರೇಂದ್ರಸ್ವಾಮಿ, ಮೇಲುಕೋಟೆ ಶಾಸಕ ದರ್ಶನ್ ಪುಟ್ಟಣ್ಣಯ್ಯ, ಕೆ.ಆರ್. ಪೇಟೆ ಶಾಸಕ ಎಚ್. ಟಿ. ಮಂಜು, ಮದ್ದೂರು ಶಾಸಕ ಕೆ. ಎಂ. ಉದಯ, ಬೂದನೂರು ಗ್ರಾಮ ಪಂಚಾಯಿತಿ ಅಧ್ಯಕ್ಷೆ ಮಾನಸ, ಉಪಾಧ್ಯಕ್ಷೆ ಜಯಲಕ್ಷ್ಮೀ ಭಾಗವಹಿಸಲಿದ್ದಾರೆ.

## ಬೂದನೂರು ಉತವ ಕಾರ್ಯಕ್ರಮಗಳ ವಿವರ

**ಮಾರ್ಚ್ 02 ರಂದು ಸಂಜೆ 5.00 ಗಂಟೆಗೆ ಹೊಸಬೂದನೂರು ಗ್ರಾಮದ ಪ್ರವೇಶ ದ್ವಾರದಿಂದ ಶ್ರೀ ಕಾಶಿವಿಶ್ವನಾಥ ಮತ್ತು ಅನಂತಪದ್ಮನಾಭ ದೇವಾಲಯದವರೆಗೆ ಮೆರವಣಿಗೆ ನಡೆಯಲಿದೆ. ಸಂಜೆ 6.00 ಗಂಟೆಗೆ ಶ್ರೀ ಕಾಶಿವಿಶ್ವನಾಥ ಮತ್ತು ಅನಂತಪದ್ಮನಾಭ ದೇವಾಲಯದಲ್ಲಿ ಪೂಜೆ ನಡೆಯಲಿದೆ. ಸಂಜೆ 6.15 ಗಂಟೆಗೆ ಕಾರ್ಯಕ್ರಮದ ಮುಖ್ಯ ವೇದಿಕೆ ಬಳಿ ಗಂಗಾರತಿ ನಡೆಯಲಿದೆ. ಸಂಜೆ 6.30 ಕ್ಕೆ ಮುಖ್ಯ ವೇದಿಕೆಯಲ್ಲಿ ಕಾರ್ಯಕ್ರಮದ ಅಧಿಕೃತ ಉದ್ಘಾಟನೆ ಹಾಗೂ ಸಭಾ ಕಾರ್ಯಕ್ರಮಗಳು ನಡೆಯಲಿವೆ. ಸಂಜೆ 7.30 ಗಂಟೆಗೆ ಸಾಧು ಕೋಕಿಲಾ ಮತ್ತು ತಂಡದವರಿಂದ ರಸಮಂಜರಿ ಕಾರ್ಯಕ್ರಮವು ನಡೆಯಲಿದೆ. ಮಾರ್ಚ್ 03 ರಂದು ಸಂಜೆ 5.00 ಗಂಟೆಗೆ ಸಾಂಸ್ಕೃತಿಕ ಕಾರ್ಯಕ್ರಮಗಳ ಉದ್ಘಾಟನೆ ನಡೆಯಲಿದೆ. 6 ಗಂಟೆಗೆ ಶಾಲಾ ಮಕ್ಕಳ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿದೆ. 6.15 ಕ್ಕೆ ಸ್ಥಳೀಯ ಕಲಾ ತಂಡದವರಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿದೆ. 7.30 ಗಂಟೆಗೆ ಅರ್ಜುನ್ ಜನ್ಯ ಮತ್ತು ತಂಡದವರಿಂದ ರಸಮಂಜರಿ ಕಾರ್ಯಕ್ರಮ ನಡೆಯಲಿದೆ.**

# ರಾಜ್ಯ ಸರ್ಕಾರ ಭೂ-ಸ್ವಾಧೀನ ಮಾಡಿಕೊಟ್ಟರೆ ಶೀಘ್ರದಲ್ಲೇ ಕುಶಾಲನಗರದ ರೈಲ್ವೆ ಕಾಮಗಾರಿ ಆರಂಭ

**ಪಿರಿಯಾಪಟ್ಟಣ:** ರಾಜ್ಯ ಸರ್ಕಾರ ಕೂಡಲೇ ಭೂಮಿಯನ್ನು ಸ್ವಾಧೀನ ಮಾಡಿಕೊಟ್ಟರೆ ಶೀಘ್ರದಲ್ಲೇ ಮೈಸೂರು ಕುಶಾಲನಗರ ನಡುವಿನ ರೈಲ್ವೆ ಸಂಚಾರದ ಕಾಮಗಾರಿ ಆರಂಭಿಸಲಾಗುವುದು ಎಂದು ಸಂಸದ ಪ್ರತಾಪ್ ಸಿಂಹ ತಿಳಿಸಿದರು.

ಪಟ್ಟಣದ ಭಾರತೀಯ ಜನತಾ ಪಕ್ಷದ ಕಚೇರಿಯಲ್ಲಿ ಸಂಸದರಾಗಿ ಕಳೆದ 10 ವರ್ಷಗಳಲ್ಲಿ ತಾವು ತಂದಿರುವ ಹಾಗೂ ಕಾರ್ಯಗತಗೊಳಿಸಿರುವ ಪ್ರಮುಖ ಯೋಜನೆಗಳ ರಿಪೋರ್ಟ್ ಕಾರ್ಡ್ ಬಿಡುಗಡೆಗೊಳಿಸಿ ಮಾತನಾಡಿದ ಅವರು. ನಾನು ಸಂಸದನಾಗಿ ಆಯ್ಕೆಯಾದ ನಂತರ 11 ರೈಲುಗಳನ್ನು ತಂದಿದ್ದೇನೆ. ಶೀಘ್ರದಲ್ಲೇ 12ನೇ ರೈಲು ಬರಲಿದೆ. ಕೊಡಗು ಜಿಲ್ಲೆ ಹೊರತುಪಡಿಸಿ ಉಳಿದೆಲ್ಲಾ ಜಿಲ್ಲೆಗಳಲ್ಲಿ ರೈಲು ಸಂಚರವಿದ್ದು, ಕೊಡಗು ಜಿಲ್ಲೆಗೆ ಈ ಕೊರಗನ್ನು ನೀಗಿಸಲು ಮೈಸೂರು - ಕುಶಾಲನಗರದ ವರೆಗೆ ರೈಲ್ವೆ ಸಂಪರ್ಕ ಕಲ್ಪಿಸಲು ರೂ.3097 ವೆಚ್ಚದಲ್ಲಿ ಈ ಯೋಜನೆಗೆ ಕೇಂದ್ರದ ಅನುಮೋದನೆ ದೊರೆತಿದ್ದು, ರಾಜ್ಯ ಸರ್ಕಾರ ಭೂ ಸ್ವಾಧೀನ ಮಾಡಿಕೊಟ್ಟರೆ ಶೀಘ್ರದಲ್ಲೇ ಕಾಮಗಾರಿ ಆರಂಭಿಸಲಾಗುವುದು, ನನ್ನ ಅವಧಿಯಲ್ಲಿ ಪಿರಿಯಾಪಟ್ಟಣ ತಾಲೂಕಿನ 303 ಗ್ರಾಮಗಳಿಗೆ ರೂ.239 ಕೋಟಿ ವೆಚ್ಚದಲ್ಲಿ ಜಲ ಜೀವನ್ ಮಿಷನ್ ಯೋಜನೆಯಡಿ ಕಾವೇರಿ ಕುಡಿಯುವ ನೀರು ಪೂರೈಸಲು ಶಂಕುಸ್ಥಾಪನೆ ಮಾಡಿ ಕಾಮಗಾರಿ ಪ್ರಗತಿಯಲ್ಲಿದೆ, ಪಿರಿಯಾಪಟ್ಟಣದ ಶ್ರೀ ಮಸಣಿಕಮ್ಮ ದೇವಾಲಯದ ಅಭಿವೃದ್ಧಿಗೆ ರೂ.9.19 ಕೋಟಿ ಹಣವನ್ನು ಮಂಜೂರು ಮಾಡಲಾಗಿದೆ, ಕೇಂದ್ರ ಸರ್ಕಾರದ 15 ನೇ ಹಣಕಾಸು ಯೋಜನೆಯಡಿ 34 ಗ್ರಾಮ ಪಂಚಾಯಿತಿಗಳಿಗೂ ಕಸ ವಿಲೇವಾರಿ ವಾಹನಗಳನ್ನು ವಿತರಿಸಿರುವುದರ ಜೊತೆಗೆ ಪ್ರತಿ ಗ್ರಾಮ ಪಂಚಾಯಿತಿಗೂ ನೂತನ ಕಟ್ಟಡ ನಿರ್ಮಾಣ ಮಾಡಲಾಗಿದ್ದು, ಅನಧಿಕೃತ ತಂಬಾಕು ಬೆಳೆಗಾರರಿಗೂ ಯಾವುದೇ ದಂಡ ಶುಲ್ಕವಿಲ್ಲದೇ ಮುಕ್ತವಾಗಿ ತಂಬಾಕು ಮಾರಾಟ ಮಾಡಲು ಅವಕಾಶ ಕಲ್ಪಿಸಲಾಗಿದ್ದು, ನಾನು ಸಂಸದರಾದ ನಂತರ ಚುನಾವಣೆಗೆ ಹೋಗಬೇಕಾದರೆ ಏನು ಮಾಡುತ್ತೇವೆ. ಅಧಿಕಾರದಲ್ಲಿ ಇದ್ದಾಗ ಏನು ಮಾಡಿದ್ದೇವೆ ಎಂಬುದನ್ನು ಜನತೆಗೆ ತಿಳಿಸಲು 10 ವರ್ಷದಲ್ಲಿ ನಾನು ಕೆಲಸ ಮಾಡಿದ ಕೆಲಸಗಳ ಮಾಹಿತಿ ಕುರಿತ ರಿಪೋರ್ಟ್ ಕಾರ್ಡ್ ನೀಡಿದ್ದೇನೆ. ಮೈಸೂರಿಗೆ ಪ್ರಧಾನಿ ನರೇಂದ್ರ ಮೋದಿ ಕೊಟ್ಟಿದ್ದೇನು. ಪ್ರತಾಪ್ ಸಿಂಹ ತಂದಿದ್ದೇನು ಎನ್ನುವುದು ಈ ಬುಕ್‌ಲೆಟ್‌ನಲ್ಲಿ ಇದೆ. ಮುಂಬರುವ ಚುನಾವಣೆಯಲ್ಲಿ ನಾನು ಮತ್ತೊಮ್ಮೆ ಆಶೀರ್ವಾದ ಕೇಳುತ್ತಿದ್ದೇನೆ ಎಂದರು.



ಈ ಸಂದರ್ಭದಲ್ಲಿ ಮಾಜಿ ಶಾಸಕ ಬಸವರಾಜು, ಬಿಜೆಪಿ ತಾಲ್ಲೂಕು ಘಟಕದ ಅಧ್ಯಕ್ಷ ರಾಜೇಗೌಡ, ಪ್ರಧಾನ ಕಾರ್ಯದರ್ಶಿ ಬೆಮ್ಮತ್ತಿ ಚಂದ್ರು, ಜಿಪಂ ಮಾಜಿ ಸದಸ್ಯ ಪಿ.ರಾಜೇಂದ್ರ, ಮುಖಂಡರಾದ ಮೈ.ವಿ. ರವಿಶಂಕರ್, ಆರ್.ಟಿ.ಸತೀಶ್, ವಸಂತಕುಮಾರ್, ಸವಿತಾ ಚೌಹಾಣ್, ಸೋಮಶೇಖರ್, ರಾಘವೇಂದ್ರ, ಶುಭಾ, ಲೋಕಪಾಲಯ್ಯ ಸೇರಿದಂತೆ ಪಕ್ಷದ ಮುಖಂಡರು ಉಪಸ್ಥಿತರಿದ್ದರು.

# ಸಂಜೆ ಟಿಪ್ಸ್



## ಆಕ್ಸಿಸ್ ಬ್ಯಾಂಕ್ ಶಾಖೆಗಳ ಉದ್ಘಾಟಿಸಿದ ಡಿಕೆಶಿ

ಭಾರತದ ಅತಿದೊಡ್ಡ ಖಾಸಗಿ ವಲಯದ ಬ್ಯಾಂಕ್ಗಳಲ್ಲಿ ಒಂದಾದ ಆಕ್ಸಿಸ್ ಬ್ಯಾಂಕ್ ಕರ್ನಾಟಕದಲ್ಲಿ 21 ಹೊಸ ಶಾಖೆಗಳನ್ನು ಉದ್ಘಾಟಿಸಿದೆ. ಈ ಶಾಖೆಗಳನ್ನು ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಕರ್ನಾಟಕ ರಾಜ್ಯದ ಗೌರವಾನ್ವಿತ ಉಪ ಮುಖ್ಯಮಂತ್ರಿಗಳಾದ ಡಿ ಕೆ ಶಿವಕುಮಾರ್ ಅವರು ಉದ್ಘಾಟಿಸಿದರು. ಈ ಸಂದರ್ಭದಲ್ಲಿ ರಾಜ್ಯ ಸರ್ಕಾರದ ಗೌರವಾನ್ವಿತ ಐಟಿ, ಬಿಟಿ ಮತ್ತು ವಿಜ್ಞಾನ ಮತ್ತು ತಂತ್ರಜ್ಞಾನದ ಸಂಪುಟ ಸಚಿವರಾದ ಪ್ರಿಯಾಂಕ್ ಖರ್ಗೆ, ಆಕ್ಸಿಸ್ ಬ್ಯಾಂಕ್ನ ವ್ಯವಸ್ಥಾಪಕ ನಿರ್ದೇಶಕ ಮತ್ತು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಅಮಿತಾಭ್ ಚೌಧರಿ, ಕಾರ್ಯನಿರ್ವಾಹಕ ನಿರ್ದೇಶಕ - ಬ್ಯಾಂಕಿಂಗ್ ಕಾರ್ಯಾಚರಣೆಗಳು ಮತ್ತು ರೂಪಾಂತರ ಶ್ರೀ ಸುಬ್ರತ್ ಮೊಹಂತಿ ಮತ್ತು ಗ್ರೂಪ್ ಎಕ್ಸಿಕ್ಯೂಟಿವ್ ಮತ್ತು ಹೆಡ್ - ಶಾಖೆ ಬ್ಯಾಂಕಿಂಗ್, ಚಿಲ್ಲರೆ ಹೊಣೆಗಾರಿಕೆಗಳು ಮತ್ತು ಉತ್ಪನ್ನಗಳು ರವಿ ನಾರಾಯಣ್ ಇವರು ಉಪಸ್ಥಿತರಿದ್ದರು. ಈ ಹೊಸ ಶಾಖೆಗಳು ರಾಜ್ಯದ ವಿವಿಧ ಪ್ರದೇಶಗಳಾದ ಬೆಂಗಳೂರು, ಉಡುಪಿ, ವಿಜಯಪುರ, ಹಾವೇರಿ, ಹಾಸನ, ಕೊಪ್ಪಳ, ತುಮಕೂರು, ಶಿವಮೊಗ್ಗ ಮತ್ತು ವಿಜಯನಗರಗಳಲ್ಲಿ ಕಾರ್ಯತಂತ್ರವಾಗಿ ನೆಲೆಗೊಂಡಿವೆ. ಇವುಗಳಲ್ಲಿ, 9 ಶಾಖೆಗಳು ಮಹಾನಗರಗಳಲ್ಲಿ, 4 ನಗರ ಕೇಂದ್ರಗಳಲ್ಲಿ, 3 ಅರೆ-ನಗರ ಪ್ರದೇಶಗಳಲ್ಲಿ, 2 ಗ್ರಾಮೀಣ ಪ್ರದೇಶಗಳಲ್ಲಿ ಮತ್ತು 3 ಗ್ರಾಮೀಣ ಪ್ರದೇಶಗಳಲ್ಲಿ ಬ್ಯಾಂಕಿಲ್ಲದ ಪ್ರದೇಶಗಳಲ್ಲಿ ನೆಲೆಗೊಂಡಿವೆ. ಹೊಸದಾಗಿ ಉದ್ಘಾಟನೆಗೊಂಡ ಶಾಖೆಗಳು ಅತ್ಯಾಧುನಿಕ ಸೌಲಭ್ಯಗಳು ಮತ್ತು ತಂತ್ರಜ್ಞಾನ-ಚಾಲಿತ ಬ್ಯಾಂಕಿಂಗ್ ಪರಿಹಾರಗಳನ್ನು ಹೊಂದಿದ್ದು, ಗ್ರಾಹಕರ ಅನುಕೂಲತೆ ಮತ್ತು ದಕ್ಷತೆಯನ್ನು ಹೆಚ್ಚಿಸುವ ಗುರಿಯನ್ನು ಹೊಂದಿದೆ. ಈ ಸಂದರ್ಭದಲ್ಲಿ ಮಾತನಾಡಿದ ಆಕ್ಸಿಸ್ ಬ್ಯಾಂಕ್ ವ್ಯವಸ್ಥಾಪಕ ನಿರ್ದೇಶಕ ಮತ್ತು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಅಮಿತಾಭ್ ಚೌಧರಿ ಅವರು ಕರ್ನಾಟಕದ ಅದ್ಭುತ ಬೆಳವಣಿಗೆ ಮತ್ತು ಅಭಿವೃದ್ಧಿ ಪಯಣದ ಭಾಗವಾಗಿರಲು ಆಕ್ಸಿಸ್ ಬ್ಯಾಂಕ್ ಹೆಮ್ಮೆಪಡುತ್ತದೆ.

## ಕುಲ್ಫಿ ಐಸ್ಕ್ರೀಂ

### ಪಾಕ ಶಾಲೆ



### ಬೇಕಾಗಿರುವ ಪದಾರ್ಥ

ಕೆನೆಭರಿತ ಹಾಲು - 1/2ಲೀಟರ್, ಸಕ್ಕರೆ - 1/4 ಕಪ್, ಜೋಳದ ಹಿಟ್ಟು - 1 ಟಿಸ್ಪೂನ್, ಕೇಸರಿ ದಳಗಳು,
ಕನ್ಡೆನ್ಸ್ಡ ಮಿಲ್ಕ್ - 1/4 ಕಪ್

### ಮಾಡುವ ವಿಧಾನ

ಒಂದು ಪ್ಯಾನ್ಗೆ ಅರ್ಧ ಲೀಟರ್ ಹಾಲನ್ನು ಮುಕ್ಕಾಲು ಭಾಗವಾಗುವಷ್ಟು ಚೆನ್ನಾಗಿ ಕುದಿಸಿ ಅದಕ್ಕೆ 1 ಟಿಸ್ಪೂನ್ ಜೋಳದ ಹಿಟ್ಟನ್ನು ನೀರಿನಲ್ಲಿ ಕಲಸಿ ಹಾಲಿಗೆ ಮಿಕ್ಸ್ ಮಾಡಿ ತಿರುಗಿಸಿ. ಹಾಲು ಸ್ವಲ್ಪ ಗಟ್ಟಿ ಆಗಲು ಆರಂಭಿಸುತ್ತದೆ. ಗಟ್ಟಿಯಾದ ಹಾಲಿಗೆ 1/4 ಕಪ್ ಸಕ್ಕರೆ ಸೇರಿಸಿ ಕೇಸರಿ ದಳಗಳನ್ನು ಹಾಕಿ ತಿರುಗಿಸಿ ಸ್ಟವ್ ಆಫ್ ಮಾಡಿ.

ಹಾಲು ಆರಿದಮೇಲೆ ಒಂದು ಬೌಲ್ಗೆ ಹಾಕಿಕೊಂಡು ಅದಕ್ಕೆ 1/4 ಕಪ್ ಕನ್ಡೆನ್ಸ್ಡ್ ಮಿಲ್ಕ್ ಸೇರಿಸಿ ಬ್ಲೇಂಡ್ ಮಾಡಿ. ಎಲ್ಲವೂ ಸಮ ಪ್ರಮಾಣದಲ್ಲಿ ಮಿಕ್ಸ್ ಆಗೋವರೆಗೂ ಬ್ಲೇಂಡ್ ಮಾಡಿ.

ಬಳಿಕ ಅದಕ್ಕೆ ಸಣ್ಣಗೆ ಹೆಚ್ಚಿದ ಗೋಡಂಬಿ, ಪಿಸ್ತಾ, ಬಾದಾಮಿ ಚೂರುಗಳನ್ನು ಮಿಕ್ಸ್ ಮಾಡಿ. ಒಂದು ಪ್ಲಾಸ್ಟಿಕ್ ಕಪ್ ಅಥವಾ ಮೌಲ್ಡ್ಗೆ ವರ್ಗಾಯಿಸಿ ಐಸ್ಕ್ರೀಂ ಕಡ್ಡಿ ಇಟ್ಟು 20 ನಿಮಿಷ ಫ್ರೀಜ್ ಮಾಡಿದರೆ ಕುಲ್ಫಿ ಐಸ್ಕ್ರೀಂ ರೆಡಿ.

# ಜಯಪ್ರದಾಗೆ ಬಂಧನದ ಭೀತಿ



ಮಾಜಿ ಸಂಸದೆ ಮತ್ತು ನಟಿ ಜಯಪ್ರಧಾ ನಾಪತ್ತೆಯಾಗಿದ್ದಾರೆ. ಅವರನ್ನು ಬಂಧಿಸಬೇಕು ಎಂದು ಕೋರ್ಟ್ ಆದೇಶ ನೀಡಿದೆ. ಜಯಪ್ರದಾ ವಿರುದ್ಧ 2 ಪ್ರಕರಣಗಳು ದಾಖಲಾಗಿದ್ದು, ಮಾರ್ಚ್ 6ರೊಳಗೆ ಇವರನ್ನು ಬಂಧಿಸಿ, ಕೋರ್ಟ್ಗೆ ಹಾಜರುಪಡಿಸಬೇಕು ಎಂದು ಉತ್ತರಪ್ರದೇಶ ನ್ಯಾಯಾಲಯ ಆದೇಶ ನೀಡಿದೆ. ಲೋಕಸಭಾ ಚುನಾವಣೆ ಸಂದರ್ಭದಲ್ಲಿ ನೀತಿ ಉಲ್ಲಂಘನೆ ಮಾಡಿದ ಆರೋಪ ಜಯಪ್ರದಾ ಮೇಲಿತ್ತು. ಹಾಗಾಗಿ ಪ್ರಕರಣ ದಾಖಲಾಗಿತ್ತು. ಈ ಪ್ರಕರಣ ಸಾಬೀತಾಗುತ್ತಿದ್ದಂತೆ, ಜಯಪ್ರದಾ ಎಸ್ಕೇಪ್ ಆಗಿದ್ದಾರೆ. ಅಲ್ಲದೇ, ಪ್ರಕರಣಕ್ಕೆ ಸಂಬಂಧಿಸಿದಂತೆ, ಕೋರ್ಟ್ಗೆ ವಿಚಾರಣೆಗೆ ಹಾಜರಾಗಬೇಕು ಎಂದು ಹೇಳಿದರೂ ಕೂಡ, ಜಯಪ್ರದಾ ಇದುವರೆದೂ ಒಂದು ಸಾರಿಯೂ ವಿಚಾರಣೆಗೆ ಹಾಜರಾಗಿಲ್ಲ. ಅಲ್ಲದೇ, 7 ಬಾರಿ ವಾರೆಂಟ್ ರಹಿತ ಜಾಮೀನು ನೀಡಲಾಗಿದ್ದು, ಇದುವರೆಗೂ ಪೊಲೀಸರು ಆಕೆಯನ್ನು ಕೋರ್ಟ್ ಮುಂದೆ ತರಲಾಗಿಲ್ಲ. ಹಾಗಾಗಿ ಮಾರ್ಚ್ 6ರೊಳಗೆ ಜಯಪ್ರದಾರನ್ನು ಹುಡುಕಿ ಅರೆಸ್ಟ್ ಮಾಡಿ, ಕೋರ್ಟ್ ಮುಂದೆ ಹಾಜರುಪಡಿಸಲೇಬೇಕು ಎಂದು ಉತ್ತರಪ್ರದೇಶದ ಕೋರ್ಟ್ ಆದೇಶ ನೀಡಿದೆ. ಇನ್ನನು ಜಯಪ್ರದಾ ತಮ್ಮ ಫೋನ್ ಸ್ವಿಚ್ ಆಫ್ ಮಾಡಿಕೊಂಡಿದ್ದು, ಯಾರ ಸಂಪರ್ಕಕ್ಕೂ ಸಿಗುತ್ತಿಲ್ಲ. ಹಾಗಾಗಿ ಕೋರ್ಟ್ ಆಕೆ ಭೂಗತರಾಗಿದ್ದಾರೆಂದು ಘೋಷಿಸಿದ್ದಾರೆ. ಜಯಪ್ರದಾ ಸಿಕ್ಕಿ, ಅವರನ್ನು ಕೋರ್ಟ್ಗೆ ಹಾಜರುಪಡಿಸಿದಾಗ, ಕಠಿಣ ಶಿಕ್ಷೆ ನೀಡಲು ಕೋರ್ಟ್ ನಿರ್ಧರಿಸಿದೆ. 1970 ಮತ್ತು 80ರ ದಶಕದಲ್ಲಿ ಜಯಪ್ರದಾ ತಮ್ಮ ಸೌಂದರ್ಯ ಮತ್ತು ನಟನೆಯಿಂದ ಕೋಟಿ ಕೋಟಿ ಅಭಿಮಾನಿಗಳನ್ನು ಗಳಿಸಿದ್ದರು. ಸತತವಾಗಿ ಹಿಟ್ ಸಿನಿಮಾಗಳನ್ನು ನೀಡುತ್ತಿರುವಾಗಲೇ ನಟಿ ಮದುವೆಯಾದರು. ಆದರೆ ತನ್ನ ವೃತ್ತಿ ಜೀವನದಲ್ಲಿ ಅನುಭವಿಸಿದ ಸಂತೋಷ ಮತ್ತು ಯಶಸ್ಸು ಅವಳ ವೈಯಕ್ತಿಕ ಜೀವನದಲ್ಲಿ ಸಾಧಿಸಲಿಲ್ಲ. ಪ್ರೀತಿಸಿ ಮದುವೆಯಾಗಿ ಹೆಂಡತಿಯಾದ ಈ ನಟಿಗೆ ಮದುವೆಯ ನಂತರ ಸಿಗಬೇಕಾದ ಗೌರವ ಸಿಗಲಿಲ್ಲ..

ಜಯಪ್ರದಾ ಅವರು ಆಂಧ್ರಪ್ರದೇಶದ ರಾಜಮಂಡ್ರಿಯಲ್ಲಿ ತೆಲುಗು ಕುಟುಂಬದಲ್ಲಿ ಜನಿಸಿದರು. ನಿಜವಾದ ಹೆಸರು ಲಲಿತಾ ರಾಣಿ. ಆಕೆಯ ತಂದೆ ಕೃಷ್ಣರಾವ್ ತೆಲುಗು ಚಿತ್ರರಂಗದ ಫೈನಾನ್ಶಿಯರ್ ಮತ್ತು ತಾಯಿ ನೀಲವೇಣಿ ಗೃಹಿಣಿ. ಜಯಪ್ರದಾ ಅವರು ತಮ್ಮ 13 ನೇ ವಯಸ್ಸಿನಲ್ಲಿ ನಟನೆಗೆ ಪಾದಾರ್ಪಣೆ ಮಾಡಿದರು. ಆಗ ಆಕೆ ತನ್ನ ಮೊದಲ ಚಿತ್ರಕ್ಕೆ ಪಡೆದ ಸಂಭಾವನೆ (ಸಂಭಾವನೆ) ಕೇವಲ 10 ರೂ.ತೆಲುಗು ಸಿನಿಮಾದ ಮೂಲಕ ಟಾಪ್ ಹೀರೋಯಿನ್ ಆಗಿ ಪಾದಾರ್ಪಣೆ ಮಾಡಿದ ಜಯಪ್ರದಾ ನಂತರ ಬಾಲಿವುಡ್ ಪ್ರವೇಶಿಸಿದರು. ಬಳಿಕ ಅವರು ಆ ಸಮಯದಲ್ಲಿ ಅತಿ ಹೆಚ್ಚು ಸಂಭಾವನೆ ಪಡೆಯುವ ನಟಿಯಾದರು. ಜಯಪ್ರದಾ ತಮ್ಮ ವೃತ್ತಿ ಜೀವನದಲ್ಲಿ ಅಮಿತಾಭ್ ಬಚ್ಚನ್, ಧರ್ಮೇಂದ್ರ, ರಾಕೇಶ್ ರೋಷನ್, ಜೀತೇಂದ್ರ ಅವರಂತಹ ಟಾಪ್ ಬಾಲಿವುಡ್ ನಟರೊಂದಿಗೆ ಕೆಲಸ ಮಾಡಿದ್ದಾರೆ.

# ಗ್ಯಾಸ್ಟ್ರಿಕ್ ಸಮಸ್ಯೆಗೆ ಪರಿಹಾರ

### ಹೆಲ್ತ್ ಟಿಪ್ಸ್



**ಸೌತೆಕಾಯಿ ರಸ:**
ಸೌತೆಕಾಯಿಯು ಅದರ ತಂಪಾಗಿಸುವ ಗುಣಲಕ್ಷಣಗಳಿಂದಾಗಿ ಬೇಸಿಗೆಯಲ್ಲಿ ಇದನ್ನು ಸಲಾಡ್ನಲ್ಲಿ ಹೆಚ್ಚು ಬಳಸುತ್ತಾರೆ. ಸೌತೆಕಾಯಿ ರಸವನ್ನು ಸೇವಿಸುವುದರಿಂದ ಆಸಿಡ್ ರಿಫ್ಲಕ್ಸ್ ಅನ್ನು ನಿವಾರಿಸಲು ನಿಜವಾಗಿಯೂ ಪ್ರಯೋಜನಕಾರಿಯಾಗಿದೆ. ಏಕೆಂದರೆ ಇದು ಹೆಚ್ಚು ಪೌಷ್ಟಿಕವಾಗಿದೆ. ಇದು ಉತ್ತಮ ಜೀರ್ಣಕ್ರಿಯೆಗೆ ಅಗತ್ಯವಿರುವ ಫೈಬರ್ ಮತ್ತು ನೀರು ಎರಡನ್ನೂ ಒದಗಿಸುತ್ತದೆ ಮತ್ತು ಕಡಿಮೆ ಕ್ಯಾಲೋರಿ ಪ್ರಮಾಣವನ್ನು ಹೊಂದಿರುತ್ತದೆ.

**ಲೈಮ್ ಜ್ಯೂಸ್:**
ನಿಂಬೆಯು ನಿಮ್ಮ ದೇಹಕ್ಕೆ ನಾನಾ ರೀತಿಯ ಪ್ರಯೋಜನಗಳನ್ನು ಉಂಟುಮಾಡುತ್ತದೆ. ವಿಟಮಿನ್ ಸಿ ಮತ್ತು ಬಿ ಮತ್ತು ರಂಜಕ, ಕ್ಯಾಲ್ಸಿಯಂ ಮತ್ತು ಮೆಗ್ನೀಸಿಯಮ್ನಂತಹ ಖನಿಜಗಳಲ್ಲಿ ಸಮೃದ್ಧವಾಗಿರುವುದರಿಂದ ನಿಯಮಿತವಾಗಿ ನಿಂಬೆ ಜ್ಯೂಸ್ ಕುಡಿಯುವುದು ಕೊಬ್ಬನ್ನು ಇಳಿಸಲು ಸಹಾಯ ಮಾಡುತ್ತದೆ. ಇದರಿಂದ ಆಮ್ಲೀಯತೆಯಂತಹ ನಿಮ್ಮ ಜೀರ್ಣಕಾರಿ ಸಮಸ್ಯೆಗಳು ಕೂಡ ಪರಿಹಾರವಾಗುತ್ತದೆ. ಇದಲ್ಲದೆ, ನಿಂಬೆ ಜ್ಯೂಸ್ ವಿರೇಚಕ ಗುಣಗಳನ್ನು ಹೊಂದಿದ್ದು ಅದು ನಿಮ್ಮ ಕರುಳಿನ ಚಲನೆಯನ್ನು ಸುಧಾರಿಸಲು ಮತ್ತು ದೇಹದಿಂದ ವಿಷವನ್ನು ತೆರವುಗೊಳಿಸಲು ಸಹಾಯ ಮಾಡುತ್ತದೆ ಹಾಗೂ ನಿಮ್ಮ ದೇಹವನ್ನು ಹೈಡ್ರೀಕರಿಸುತ್ತದೆ.

**ಶುಂಠಿ ನೀರು:** ಶುಂಠಿ ಬಹಳ ಪ್ರಸಿದ್ಧವಾದ ಘಟಕಾಂಶವಾಗಿದೆ. ಇದು ಆಯಸಿಡಿಟಿ ಮತ್ತು ಗ್ಯಾಸ್ ಅನ್ನು ನಿವಾರಿಸಲು ಸಹಾಯ ಮಾಡುತ್ತದೆ. ಅತಿಯಾಗಿ ತಿನ್ನುವುದರಿಂದ ಅಥವಾ ಜೀರ್ಣವಾಗದ ಆಹಾರದಿಂದ ನೀವು ಜೀರ್ಣಕಾರಿ ಸಮಸ್ಯೆಗಳನ್ನು ಎದುರಿಸುತ್ತಿದ್ದರೆ ಶುಂಠಿ ನೀರನ್ನು ಸೇವಿಸುವುದರಿಂದ ನಿಮ್ಮ ಹೊಟ್ಟೆಯನ್ನು ಖಾಲಿ ಮಾಡಲು ಸಹಾಯ ಮಾಡುತ್ತದೆ. ನೀವು ಇದನ್ನು ಸೂಪ್, ಸಬ್ಜಿ ಅಥವಾ ಕರಿ ಮತ್ತು ಚಹಾಕ್ಕೆ ಸೇರಿಸುವ ಮೂಲಕವೂ ಸೇವಿಸಬಹುದು. ಆದರೆ, ಹೆಚ್ಚು ಪ್ರಮಾಣದಲ್ಲಿ ಶುಂಠಿಯನ್ನು ಸೇವಿಸಬೇಡಿ.

**ಎಳನೀರು:** ಹೊಟ್ಟೆ ನೋವು, ಅಜೀರ್ಣ ಮತ್ತು ಆಮ್ಲೀಯತೆಯಂತಹ ನಿರಂತರ ಹೊಟ್ಟೆಯ ಸಮಸ್ಯೆಗಳಿಂದ ನೀವು ಕಿರಿಕಿರಿಗೊಂಡಿದ್ದರೆ, ಎಳನೀರನ್ನು ನಿಯಮಿತವಾಗಿ ಸೇವಿಸುವುದು ಉತ್ತಮ. ಏಕೆಂದರೆ ಇದು ಫೈಬರ್, ಪ್ರೋಟೀನ್, ವಿಟಮಿನ್, ಖನಿಜಗಳು ಮತ್ತು ಕಾರ್ಬೋಹೈಡ್ರೇಟ್ಗಳಿಂದ ಸಮೃದ್ಧವಾಗಿದೆ.

# ಇಂಡಿಯಾ ವುಡ್‌ನಲ್ಲಿ ಐದು ಮರದ ಜಾತಿಗಳ ಪ್ರದರ್ಶಿಸಿದ ಕೆನಡಿಯನ್ ವುಡ್




ಬ್ರಿಟಿಷ್ ಕೊಲಂಬಿಯಾ (ಬಿ.ಸಿ.) ಪ್ರಾಂತೀಯ ಸರ್ಕಾರದ ಕ್ರೌನ್ ಕಾರ್ಪೊರೇಶನ್, ಫಾರೆಸ್ಟ್ರಿ ಇನ್ನೋವೇಶನ್ ಕನ್ಸಲ್ಟಿಂಗ್ ಇಂಡಿಯಾ ಪ್ರೈವೇಟ್ ಲಿಮಿಟೆಡ್ (ಎಫ್ಐಐ ಇಂಡಿಯಾ), ಕೆನಡಿಯನ್ ವುಡ್ ಎಂದು ಜನಪ್ರಿಯವಾಗಿದೆ, ಏಷ್ಯಾದ ಪ್ರಮುಖ ಅಂತರರಾಷ್ಟ್ರೀಯ ವ್ಯಾಪಾರ ಮೇಳದ 13 ನೇ ಆವೃತ್ತಿಯಾದ ಇಂಡಿಯಾ ವುಡ್ 2024 ರಲ್ಲಿ ಭಾಗವಹಿಸಿದೆ. 2024 ರ ಫೆಬ್ರವರಿ 22 ರಿಂದ 26 ರವರೆಗೆ ಬೆಂಗಳೂರು ಇಂಟರ್ನ್ಯಾಷನಲ್ ಎಕ್ಸಿಬಿಷನ್ ಸೆಂಟರ್ ನಲ್ಲಿ ನಡೆದ ವಿಶೇಷ ಕಾರ್ಯಕ್ರಮವು ಅಪಾರ ಯಶಸ್ಸನ್ನು ಗಳಿಸಿತು ಏಕೆಂದರೆ ಇದು ಪ್ರಪಂಚದಾದ್ಯಂತದ ಹೆಸರಾಂತ ಉದ್ಯಮ ತಜ್ಞರು, ವಾಸ್ತುಶಿಲ್ಪಿಗಳು ಮತ್ತು ದಾರ್ಶನಿಕರನ್ನು ಅದರಲ್ಲಿ ಭಾಗವಹಿಸಲು ಆಕರ್ಷಿಸಿತು.

ಇತ್ತೀಚಿಗೆ ಮುಕ್ತಾಯಗೊಂಡ ಮೇಳದಲ್ಲಿ ಕೆನಡಿಯನ್ ವುಡ್ಸ್ ಸ್ಟಾಲ್ ಪ್ರಭಾವಶಾಲಿ 130 ಚದರ ಮೀಟರ್ ಅನ್ನು ವ್ಯಾಪಿಸಿತ್ತು ಮತ್ತು ಸಂದರ್ಶಕರಿಗೆ ಅನನ್ಯ ಮತ್ತು ತಲ್ಲೀನಗೊಳಿಸುವ ಅನುಭವವನ್ನು ನೀಡಿತು. ಪ್ರದರ್ಶನವು ಮರದ ಅನ್ವಯಗಳ ವೈವಿಧ್ಯಮಯ ಶ್ರೇಣಿಯನ್ನು ಒಳಗೊಂಡಿತ್ತು, ವಿವಿಧ ವಿನ್ಯಾಸದಲ್ಲಿ ಜವಾಬ್ದಾರಿಯುತವಾಗಿ ಮೂಲ ಮರದ ಬಹುಮುಖತೆ ಮತ್ತು ಸಮರ್ಥನೀಯತೆಯನ್ನು ಪ್ರದರ್ಶಿಸುತ್ತದೆ. ಇದು ಹೊರಾಂಗಣ ಬಾಲ್ಕನಿಯೊಂದಿಗೆ ಉನ್ನತ-ಮಟ್ಟದ ಐಷಾರಾಮಿ ಹೋಟೆಲ್ ರೂಮ್ ಸೂಟ್ನ ನಿಖರವಾಗಿ ವಿನ್ಯಾಸಗೊಳಿಸಿದ ಮಾದರಿಯನ್ನು ಪ್ರಸ್ತುತಪಡಿಸಿತು. ಮೈಸೂರಿನಿಂದ ಮಾಸ್ ಫರ್ನಿಚರ್ ಮತ್ತು ಬ್ರಾಮ್ ವುಡ್ಕ್ರಾಫ್ಟಿಂಗ್, ಗೋವಾದ ಜೋಸ್ಮೋ ಸ್ಟುಡಿಯೋ ಮತ್ತು ಎಫ್ಜಿಇಜಿ ಬೋರ್ಡ್ಗಳ ಕೆಲವು ಉತ್ಪನ್ನಗಳನ್ನು ಕಲೋನಿಯಲ್ ಲುಂಬರ್ಸ್, ಕಣ್ಣೂರಿನ ಡಿಮಾನ್ಸ್ನಿಂದ ತಯಾರಿಸಿದ ಕೆಲವು ಉತ್ಪನ್ನಗಳ ಸಹಯೋಗದೊಂದಿಗೆ ಆಕಾರ್ ಡಿಸೈನ್ ಕನ್ಸಲ್ಟೆಂಟ್ಗಳ ಹೆಸರಾಂತ ವಾಸ್ತುಶಿಲ್ಪಿ ಗುರುಪ್ರೀತ್ ಸಿಂಗ್ ಅವರು ಈ ವಿನ್ಯಾಸವನ್ನು ರಚಿಸಿದ್ದಾರೆ ಮತ್ತು ಕೆನಡಿಯನ್ ಮರದ ಪ್ರಾಕಾರಗಳೊಂದಿಗೆ ತಮ್ಮ ಪೀಠೋಪಕರಣಗಳ ಕರಕುಶಲತೆಯನ್ನು ಸಾಧಿಸಬಹುದು. ಅನುಭವದ ಬಗ್ಗೆ ಮಾತನಾಡುತ್ತಾ, ಕೆನಡಿಯನ್ ವುಡ್ನ ಕಂಟ್ರಿ ಡೈರೆಕ್ಟರ್ ಪ್ರಾಣೇಶ್ ಛಿಬ್ಬರ್, ಅವರು ಮಾತನಾಡಿ ಕೆನಡಿಯನ್ ವುಡ್ನಲ್ಲಿ, ಸುಸ್ಥಿರತೆ ನಮ್ಮ ಬದ್ಧತೆ ಗಡಿಯನ್ನು ಮೀರಿದೆ. ಕೆನಡಾದ ವುಡ್ ಸಮೂಹದ ಅಡಿಯಲ್ಲಿ ಯಾವುದಾದರೂ ಕಾನೂನುಬದ್ಧವಾಗಿ ಕೊಯ್ಲು ಮತ್ತು ಪ್ರಮಾಣೀಕರಿಸಲಾಗಿರುವುದಷ್ಟೇ ಅಲ್ಲ; ಇದು ಪರಿಸರಕ್ಕೆ ನಮ್ಮ ಸಮರ್ಪಣೆಗೆ ಸಾಕ್ಷಿಯಾಗಿದೆ. ಸೌಹಾರ್ದ ಅಭ್ಯಾಸಗಳು, ನಾವು ಸುಸ್ಥಿರವಾಗಿ ನಿರ್ವಹಿಸಲ್ಪಡುವ ಅರಣ್ಯಗಳಿಂದ ಮೂಲವಾಗಿ, ನವೀಕರಿಸಬಹುದಾದ ಕಚ್ಚಾ ವಸ್ತುವನ್ನು ಖಾತ್ರಿಪಡಿಸಿಕೊಳ್ಳುತ್ತೇವೆ. ಇಂಡಿಯಾ ವುಡ್ನಲ್ಲಿ ನಮ್ಮ ಭಾಗವಹಿಸುವಿಕೆಯು ಉತ್ಪನ್ನಗಳನ್ನು ಪ್ರದರ್ಶಿಸುವುದಷ್ಟೇ ಅಲ್ಲ; ಇದು ನಮ್ಮ ಗುರಿ ಗ್ರಾಹಕರೊಂದಿಗೆ ಸಂಪರ್ಕ ಸಾಧಿಸಲು ಒಂದು ಕಾರ್ಯತಂತ್ರದ ಕ್ರಮವಾಗಿದೆ, ಖರೀದಿದಾರರು ಮತ್ತು ಮಾರಾಟಗಾರರ ನಡುವಿನ ಕೊಂಡಿಯನ್ನು ಸುಗಮಗೊಳಿಸುತ್ತದೆ. ಭಾರತದಲ್ಲಿನ ಟಾಪ್-ಲೈನ್ ತಯಾರಕರೊಂದಿಗೆ, ವಿವಿಧ ಅನ್ವಯಗಳಿಗೆ ಸೂಕ್ತವಾದ ನಮ್ಮ ಐದು ವಿಶಿಷ್ಟ ಮರದ ಜಾತಿಗಳ ಬಗ್ಗೆ ಅವರಿಗೆ ಶಿಕ್ಷಣ ನೀಡುವುದು.ಪ್ರಪಂಚದಲ್ಲಿ ಬೇರೆಲ್ಲಿಯೂ ಕಂಡುಬರದ ನಾಲ್ಕು ಸಾಫ್ಟ್ವುಡ್ ಜಾತಿಗಳ ಮರಗಳು ಕೆನಡಾದ ಸ್ವಾಧೀನದಲ್ಲಿದೆ. ಅವು ವೆಸ್ಟರ್ನ್ ಹೆಮ್ಲಾಕ್, ಡೌಗ್ಲಾಸ್-ಫಿರ್, ಹಳದಿ ಸೀಡರ್, ಸ್ಪ್ರೂಸ್- ಪೈನ್-ಫಿರ್, ಮತ್ತು ವೆಸ್ಟರ್ನ್ ರೆಡ್ ಸೀಡರ್ ಆಗಿವೆ. ಈ ಸೀಡರ್ಗಳು ನೈಸರ್ಗಿಕವಾಗಿ ನಿರೋಧಕ ಹೊರಾಂಗಣ ಅನ್ವಯಿಕೆಗಳಿಂದ ವೆಸ್ಟರ್ನ್ ಹೆಮ್ಲಾಕ್ ಮತ್ತು ಡೌಗ್ಲಾಸ್-ಫಿರ್ನಿಂದ ರಚಿಸಲಾದ ಸೊಗಸಾದ ಒಳಾಂಗಣಗಳವರೆಗೆ, ಕೆನಡಿಯನ್ ವುಡ್ ಗುಣಮಟ್ಟ, ನಾವೀನ್ಯತೆ ಮತ್ತು ಪರಿಸರ ಜವಾಬ್ದಾರಿಗಾಗಿ ಜಾಗತಿಕ ದಾರಿದೀಪವಾಗಿದೆ.

## ಹರ್ಬಲ್ 'ಫೇಸ್ ಪ್ಯಾಕ್'

### ಬ್ಯೂಟಿ ಟಿಪ್ಸ್

ನಾವು ಅದೆಷ್ಟೋ ಬಾರಿ ಜಂಕ್ ಫುಡ್ ಗಳಾದ ಪೇಸ್ಟ್ರೀಸ್, ಪಾನಿ ಪುರಿ , ಪಿಜ್ಜಾ, ಬರ್ಗರ್ ಇವುಗಳನ್ನು ತಿನ್ನಬಾರದೆಂದು ಅಂದುಕೊಂಡಿರುತ್ತೀವಿ. ಯಾಕೆಂದರೆ ನಮ್ಮ ತ್ವಚೆಯ ಮೇಲೆ ಇವುಗಳು ತ್ವರಿತವಾದ ಪರಿಣಾಮ ಬೀರುವುದಲ್ಲದೆ, ಮರುದಿನ ಬೆಳಗ್ಗೆಯೇ ಮೊಡವೆಗಳು ಹಾಗೂ ಇನ್ನಿತರ ಸ್ಕಿನ್ ಅಲರ್ಜಿಗಳಿಗೆ ಕಾರಣವಾಗುತ್ತದೆ. ಆದರೆ ಇವುಗಳಿಂದ ತ್ವಚೆಯನ್ನು ರಕ್ಷಣೆ ಮಾಡುವ ಕೆಲವು ಹರ್ಬಲ್ ವಿಧಾನಗಳನ್ನು ಇಲ್ಲಿ ಹೇಳಲಾಗಿದೆ. ಮೊಡವೆ ಮುಕ್ತ ತ್ವಚೆ ನಿಮ್ಮದಾಗಿಸಿಕೊಳ್ಳಬೇಕೇ, ಹಾಗಿದ್ದರೆ ಈ ಸರಳವಾದ ವಿಧಾನಗಳನ್ನು ಅನುಸರಿಸಿ.

**ನೀಮ್, ಅಲೋವೆರಾ ಮತ್ತು ಸೌತೆಕಾಯಿ ಫೇಸ್ ಪ್ಯಾಕ್:** 4-5 ಬೇವಿನ ಎಲೆಗಳು, 1 ಟೇಬಲ್ ಚಮಚ ಅಲೋವೆರಾ ಜೆಲ್ ಮತ್ತು 1-2 ಸಣ್ಣ ಸೌತೆಕಾಯಿ ಚೂರುಗಳು, ಎಲ್ಲವನ್ನು ಸೇರಿಸಿ ಬ್ಲೆಂಡರ್ ನಲ್ಲಿ ಗ್ರೈಂಡ್ ಮಾಡಿಕೊಳ್ಳಿ. ನಂತರ ಈ ಪೇಸ್ಟನ್ನು ಮುಖಕ್ಕೆ ಲೇಪಿಸಿ. ಇದು ತ್ವಚೆಯ ಮೇಲಿನ ಕಲೆಗಳನ್ನು ಹೋಗಲಾಡಿಸುವುದಲ್ಲದೇ, ಚರ್ಮವನ್ನು ಮೃದುವಾಗಿಸುತ್ತದೆ.

**ಮುಲ್ತಾನಿ ಮಿಟ್ಟಿ:** ರೋಸ್ ವಾಟರ್ ಜೊತೆಗೆ ಈ ಮುಲ್ತಾನಿ ಮಿಟ್ಟಿಯನ್ನು ಮಿಕ್ಸ್ ಮಾಡಿ ಹಚ್ಚುವುದರಿಂದ ಮೊಡವೆ ಮತ್ತು ಅದರಿಂದಾದ ಕಲೆಗಳು ಕಡಿಮೆಯಾಗಿ, ತ್ವಚೆಯು ಹೊಳಪನ್ನು ಪಡೆದುಕೊಳ್ಳುತ್ತದೆ.

**ಆಮ್ಲ ಫ್ರೂಟ್ ಪೌಡರ್:** ಇದರಲ್ಲಿ ವಿಟಮಿನ್ ಸಿ ಅಂಶ ಹೇರಳವಾಗಿದ್ದು, ನಮ್ಮ ತ್ವಚೆಗೆ ಬಹಳ ಪ್ರಯೋಜನಕಾರಿಯಾಗಿದೆ. ಒಂದು ಚಮಚ ಆಮ್ಲ ಪೌಡರ್ ಅನ್ನು ನೀರಿನೊಂದಿಗೆ ಕಲೆಸಿ ಪೇಸ್ಟ್ ತಯಾರಿಸಿಕೊಳ್ಳಿ. ಇದನ್ನು ಮುಖಕ್ಕೆ ಲೇಪಿಸುವುದರಿಂದ ಚರ್ಮದ ಕಾಂತಿಯನ್ನು ಸುಧಾರಿಸಿ, ತ್ವಚೆಯಲ್ಲಿರುವ ಡೆಡ್ ಸೆಲ್ ಗಳನ್ನು ತೆಗೆದುಹಾಕುವಲ್ಲಿ ಸಹಾಯ ಮಾಡುತ್ತದೆ.





ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

## ರಾಶಿ ಭವಿಷ್ಯ

**ಮೇಷ:** ಆರ್ಥಿಕ ಅಡೆತಡೆ, ಪತ್ರ ವ್ಯವಹಾರಗಳಲ್ಲಿ ಅನುಕೂಲ, ಅಧಿಕ ಒತ್ತಡ ಮತ್ತು ಕಿರಿಕಿರಿ, ಸಂಗಾತಿ ಆರೋಗ್ಯದಲ್ಲಿ ವ್ಯತ್ಯಾಸ

**ವೃಷಭ:** ಲಾಭ, ನಷ್ಟ ಸಮ , ಮಾತಿನಿಂದ ಸಮಸ್ಯೆ, ಒತ್ತಡ, ಶತ್ರುಗಳೊಂದಿಗೆ ವಾಗ್ವಾದ

**ಮಿಥುನ:** ವ್ಯಾಪಾರದಲ್ಲಿ ಒತ್ತಡ ಆದರೂ ಲಾಭ, ಕೆಲಸಗಾರರಿಂದ ಅನುಕೂಲ, ಆರೋಗ್ಯದಲ್ಲಿ ವ್ಯತ್ಯಾಸ, ಅಧಿಕಾರಿ ಸಹಕಾರದಲ್ಲಿ ಹಿನ್ನಡೆ

**ಕಟಕ:** ವ್ಯಾಪಾರದಲ್ಲಿ ನಷ್ಟ,ಯತ್ನ ಕಾರ್ಯಗಳಲ್ಲಿ ತೊಂದರೆ,ಉದ್ಯೋಗದಲ್ಲಿ ಅನುಕೂಲ, ಕೌಟುಂಬಿಕ ಸಹಕಾರ

**ಸಿಂಹ:** ಪಿತ್ರಾರ್ಜಿತ ಸ್ವತ್ತಿನಿಂದ ಲಾಭ, ತಂದೆಯ ಸಹಕಾರ, ಆರ್ಥಿಕವಾಗಿ ಚೇತರಿಕೆ, ವಿದ್ಯಾಭ್ಯಾಸದಲ್ಲಿ ಅನುಕೂಲ

**ಕನ್ಯಾ:** ವ್ಯಾಪಾರದಲ್ಲಿ ನಿರಾಸಕ್ತಿ ಮತ್ತು ಅಡೆತಡೆ, ಅವಮಾನ ಅಪವಾದ ಅಪನಿಂದನೆಗಳು, ಕೆಲಸ ಕಾರ್ಯಗಳಲ್ಲಿ ವಿಘ್ನ, ಉದ್ಯೋಗ ಸ್ಥಳದಲ್ಲಿ ಒತ್ತಡ

**ತುಲಾ:** ಲಾಭ, ಅತಿ ಆತ್ಮವಿಶ್ವಾಸದಿಂದ ಸಮಸ್ಯೆ, ಉನ್ನತ ವಿದ್ಯಾಭ್ಯಾಸದ ಚಿಂತೆ, ಉದ್ಯೋಗ ಬದಲಾವಣೆ ಪ್ರಯತ್ನ

**ವೃಶ್ಚಿಕ:** ಅವಮಾನ ಮತ್ತು ಅಪನಿಂದನೆ, ಕೋರ್ಟ್ ಕೇಸ್ ವ್ಯವಹಾರದಲ್ಲಿ ಹಿನ್ನಡೆ, ಕೆಲಸಗಾರರೊಂದಿಗೆ ಮನಸ್ತಾಪ, ಅನಾರೋಗ್ಯ

**ಧನಸ್ಸು:** ಮಕ್ಕಳಿಂದ ಯೋಗ ಫಲ, ಪ್ರೀತಿ ಪ್ರೇಮ ವಿಷಯದಲ್ಲಿ ಯಶಸ್ಸು, ಷೇರು ಮಾರುಕಟ್ಟೆಯಲ್ಲಿ ಅನುಕೂಲ, ಆಕಸ್ಮಿಕ ಲಾಭ, ಉದ್ಯೋಗ ಸ್ಥಳದಲ್ಲಿ ಅನುಕೂಲ

**ಮಕರ:** ಆತುರದ ನಿರ್ಧಾರದಿಂದ ಸಮಸ್ಯೆ, ಆರೋಗ್ಯದಲ್ಲಿ ಏರುಪೇರು, ದಾಂಪತ್ಯದಲ್ಲಿ ಕಲಹ, ಪಾಲುದಾರಿಕೆಯಲ್ಲಿ ನಷ್ಟ

**ಕುಂಭ:** ವ್ಯಾಪಾರದಲ್ಲಿ ಜಿಗುಪ್ಸೆ, ಯತ್ನ ಕಾರ್ಯಗಳಲ್ಲಿ ವಿಘ್ನ, ಬಂಧುಗಳೊಂದಿಗೆ ಉತ್ತಮ ಬಾಂಧವ್ಯ, ಭವಿಷ್ಯದ ತೀರ್ಮಾನ ಮುಂದೂಡಿಕೆ

**ಮೀನ:** ಅನಿರೀಕ್ಷಿತ ಆರ್ಥಿಕ ಧನಾಗಮನ, ಸ್ಥಿರಾಸ್ತಿ ಮತ್ತು ವಾಹನದಿಂದ ಅನುಕೂಲ, ತಾಯಿಯ ಸಹಕಾರ, ಕೋರ್ಟ್ ಕೇಸ್ ವಿಷಯದಲ್ಲಿ ಜಯ

## ಡಿಜಿಟಲ್ ಕಲಿಕಾ ದಿನ



ಡಿಜಿಟಲ್ ಕಲಿಕಾ ದಿನವನ್ನು ವಾರ್ಷಿಕವಾಗಿ ಪ್ರತಿ ಫೆಬ್ರವರಿಯ ಕೊನೆಯ ಗುರುವಾರದಂದು ಆಚರಿಸಲಾಗುತ್ತದೆ. ಈ ವರ್ಷ, ಇದು ಫೆಬ್ರವರಿ 29 ರಂದು ನಡೆಯುತ್ತದೆ. ಈ ದಿನವು ಅಲಯನ್ಸ್ ಫಾರ್ ಎಕ್ಸಲೆಂಟ್ ಎಜುಕೇಶನ್ (ಂಟಟ4ಇಜ) ನೇತೃತ್ವದಲ್ಲಿ ನಡೆಯುತ್ತಿರುವ ಉಪಕ್ರಮವಾಗಿದ್ದು, ಡಿಜಿಟಲ್ ಪರಿಕರಗಳ ಪರಿಣಾಮಕಾರಿ ಬಳಕೆಯ ಮೂಲಕ ವಿದ್ಯಾರ್ಥಿಗಳನ್ನು ತೊಡಗಿಸಿಕೊಳ್ಳಲು ಮತ್ತು ಶಿಕ್ಷಕರನ್ನು ಸಶಕ್ತಗೊಳಿಸಲು. ನಿರ್ದಿಷ್ಟವಾಗಿ ಹೇಳುವುದಾದರೆ, ವಿದ್ಯಾರ್ಥಿಗಳ ಕಲಿಕೆಯ ಅನುಭವಗಳನ್ನು ಬಲಪಡಿಸಲು ನವೀನ ವಿಧಾನಗಳಲ್ಲಿ ತಂತ್ರಜ್ಞಾನವನ್ನು ಬಳಸುವ ಮುಂದಾಲೋಚನೆಯ ಶಿಕ್ಷಕರನ್ನು ಗುರುತಿಸಲು ಮತ್ತು ಗುರುತಿಸಲು ದಿನವು ಪ್ರಯತ್ನಿಸುತ್ತದೆ. ಶಿಕ್ಷಣತಜ್ಞರು ಅಥವಾ ನಿರೀಕ್ಷಿತ ಶಿಕ್ಷಕರಿಗೆ ಕೌಶಲ್ಯವನ್ನು ಹೆಚ್ಚಿಸಲು ಅಥವಾ ಪದವಿಯನ್ನು ಗಳಿಸಲು, ಸ್ಕಾಲರೂನಲ್ಲಿ ಸಾಕಷ್ಟು ಶಿಕ್ಷಣ ವಿದ್ಯಾರ್ಥಿವೇತನಗಳು ಲಭ್ಯವಿದೆ.

ಮೊದಲ ಬಾರಿಗೆ 2012 ರಲ್ಲಿ ಪ್ರಾರಂಭವಾಯಿತು, ಡಿಜಿಟಲ್ ಲರ್ನಿಂಗ್ ಡೇ, ಅಥವಾ ಆಐ ಡೇ, ನವೀನ ಮತ್ತು ಪರಿಣಾಮಕಾರಿ ವಿಧಾನಗಳ ಮೂಲಕ ತಂತ್ರಜ್ಞಾನವನ್ನು ಸಂಯೋಜಿಸುವ ಉನ್ನತ-ಗುಣಮಟ್ಟದ ಸೂಚನೆ ಮತ್ತು ಭವಿಷ್ಯದ-ಕೇಂದ್ರಿತ ವಿದ್ಯಾರ್ಥಿಗಳ ಸಾಧನೆಯನ್ನು ಗುರುತಿಸಲು ಮತ್ತು ಹಂಚಿಕೊಳ್ಳಲು ಮೀಸಲಾಗಿರುವ ರಾಷ್ಟ್ರವ್ಯಾಪಿ ಕಾರ್ಯಕ್ರಮವಾಗಿದೆ. ಇದು ಬೆಳವಣಿಗೆಯನ್ನು ಪ್ರೇರೇಪಿಸುವ, ಶೈಕ್ಷಣಿಕ ಅವಕಾಶಗಳನ್ನು ವಿಸ್ತರಿಸುವ ಮತ್ತು ಇಕ್ವಿಟಿಯನ್ನು ಉತ್ತೇಜಿಸುವ ದಿನವಾಗಿದೆ. ಡಿಜಿಟಲ್ ಕ್ರಾಂತಿಯು ಮಾಹಿತಿಗೆ ಸಾಟಿಯಿಲ್ಲದ ಪ್ರವೇಶವನ್ನು ಒದಗಿಸಿದೆ ಮತ್ತು ಜನರು ತಮ್ಮ ಸಂಶೋಧನೆ, ಶಿಕ್ಷಣ ಮತ್ತು ಕಲಿಕೆಯನ್ನು ಮಾಡಲು ಅಧಿಕಾರವನ್ನು ನೀಡಿದೆ. ಡಿಜಿಟಲ್ ಪರಿಕರಗಳನ್ನು ಉತ್ತಮಗೊಳಿಸುವ ಈ ರೀತಿಯ ಕಲಿಕೆಯು ಆನ್ಲೈನ್, ಮಿಶ್ರಿತ ಅಥವಾ ಹೈಬ್ರಿಡ್ ಕಲಿಕೆ ಮತ್ತು ಸಂಪನ್ಮೂಲಗಳನ್ನು ಒಳಗೊಂಡಂತೆ ವಿದ್ಯಾರ್ಥಿಗಳನ್ನು ಸಶಕ್ತಗೊಳಿಸಲು ಹಲವಾರು ವಿಭಿನ್ನ ಪರಿಕರಗಳು ಮತ್ತು ಅಂಶಗಳನ್ನು ಒಳಗೊಂಡಿದೆ. ಡಿಜಿಟಲ್ ಕಲಿಕೆಯು ವಿಶೇಷವಾಗಿ ಮುಖ್ಯವಾಗಿದೆ, ಏಕೆಂದರೆ ಈಗ ಎಂದಿಗಿಂತಲೂ ಹೆಚ್ಚು, ಇದು ಶಾಲೆ ಅಥವಾ ತರಗತಿಗೆ ಸೀಮಿತವಾಗಿಲ್ಲ. ಕಲಿಕೆಯು ಮೊಬೈಲ್ ಆಗಿದೆ ಮತ್ತು ವಿದ್ಯಾರ್ಥಿಯು ಮನೆಯಲ್ಲಿ, ಕಾಫಿ ಶಾಪ್ನಲ್ಲಿ ಅಥವಾ ಲೈಬ್ರರಿಯಲ್ಲಿದ್ದರೂ ಎಲ್ಲಿ ಬೇಕಾದರೂ ನಡೆಯಬಹುದು. ಮತ್ತು ಆ ಕಲಿಕೆಯು ಉತ್ತಮ ಗುಣಮಟ್ಟದ, ಗ್ರಾಹಕೀಯಗೊಳಿಸಬಹುದಾದ ಮತ್ತು ಪ್ರತಿಯೊಬ್ಬ ವಿದ್ಯಾರ್ಥಿಗೆ ಪ್ರವೇಶಿಸಬಹುದಾದಂತಿರಬೇಕು. ದಿನವು ಕಲಿಕೆಯಲ್ಲಿ ಡಿಜಿಟಲ್ ತಂತ್ರಜ್ಞಾನದ ಬಳಕೆಯನ್ನು ಆಚರಿಸುತ್ತದೆ ಮತ್ತು ನಿರ್ದಿಷ್ಟವಾಗಿ, ತರಗತಿಯಲ್ಲಿ ಕಲಿಕೆಗಾಗಿ ತಂತ್ರಜ್ಞಾನದ ನವೀನ ಮತ್ತು ಮುಂದಾಲೋಚನೆಯ ಬಳಕೆಯನ್ನು ಎತ್ತಿ ತೋರಿಸುತ್ತದೆ.

# ಚಂದ್ರಯಾನ-4 ಉಡಾವಣೆಗೆ ಸಿದ್ಧತೆ



**ನವದೆಹಲಿ:** ಚಂದ್ರಯಾನ -3 ಮಿಷನ್'ನ ಐತಿಹಾಸಿಕ ಯಶಸ್ಸಿನ ನಂತರ, ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ (ಇಸ್ರೋ) ತನ್ನ ಮುಂದಿನ ಚಂದ್ರಯಾನ - ಚಂದ್ರಯಾನ -4 ಗೆ ಸಜ್ಜಾಗುತ್ತಿದೆ.

ಇಸ್ರೋದ ಬಾಹ್ಯಾಕಾಶ ಅಪ್ಲಿಕೇಶನ್ ಕೇಂದ್ರದ ಡಾ.ನಿಲೇಶ್ ದೇಸಾಯಿ ಅವರು ಇಂಡಿಯಾ ಟುಡೇಗೆ ಮುಂದಿನ ಮಿಷನ್ ಚಂದ್ರಯಾನ -4 ಅನ್ನು 2028 ರಲ್ಲಿ ಪ್ರಾರಂಭಿಸಲಾಗುವುದು ಎಂದು ಹೇಳಿದರು.ಚಂದ್ರಯಾನ -4 ಇತ್ತೀಚೆಗೆ ಮುಕ್ತಾಯಗೊಂಡ ಚಂದ್ರಯಾನ -3 ಮಿಷನ್'ನ ಸಾಧನೆಗಳನ್ನ ನಿರ್ಮಿಸುವ ಗುರಿಯನ್ನ ಹೊಂದಿದೆ ಮತ್ತು ಹೆಚ್ಚು ಸಂಕೀರ್ಣ ಉದ್ದೇಶಗಳನ್ನು ಪ್ರಯತ್ನಿಸುತ್ತದೆ. ಚಂದ್ರಯಾನ -4 ಯಶಸ್ವಿಯಾದರೆ, ಚಂದ್ರನ ಮೇಲ್ಮೈಯಿಂದ ಮಾದರಿಗಳನ್ನು ಮರಳಿ ತರುವ ನಾಲ್ಕನೇ ರಾಷ್ಟ್ರ ಎಂಬ ಹೆಗ್ಗಳಿಕೆಗೆ ಭಾರತ ಪಾತ್ರವಾಗಲಿದೆ.

# ಮೇಲ್ಸೇತುವೆಯಿಂದ ಕೆಳಗೆ ಬಿದ್ದ ಬಸ್: 31 ಜನ ದಾರುಣ ಸಾವು

**ಮಾಲಿ:** ನದಿಯ ಮೇಲ್ಸೇತುವೆಯಲ್ಲಿ ಬರುತ್ತಿದ್ದ ಬಸ್ ನಿಯಂತ್ರಣ ತಪ್ಪಿ ಕೆಳಕ್ಕೆ ಉರುಳಿದ ಪರಿಣಾಮ ಅದರಲ್ಲಿದ್ದ 31 ಜನರು ಸಾವನ್ನಪ್ಪಿರುವ ಘಟನೆ ಪಶ್ಚಿಮ ಆಫ್ರಿಕಾದ ಮಾಲಿಯ ಕೆನಿಬಾ ಬಳಿ ನಡೆದಿದೆ. ಮಂಗಳವಾರ ಸಂಜೆ ಸುಮಾರು 5 ಗಂಟೆಗೆ ಬಸ್ ಬುರ್ಕಿನಾ ಫಾಸೊಗೆ ತೆರಳುತ್ತಿದ್ದಾಗ ಈ ಅಪಘಾತ ಸಂಭವಿಸಿದೆ ಎಂದು ಅಲ್ಲಿನ ಸಚಿವಾಲಯ ತಿಳಿಸಿದೆ. ಪಶ್ಚಿಮ ಆಫ್ರಿಕಾದಲ್ಲಿ ರಸ್ತೆ ಅಪಘಾತಗಳು ಹೆಚ್ಚಾಗಿ ಕಂಡುಬರುತ್ತವೆ. ಅಲ್ಲಿನ ಸಾರ್ವಜನಿಕ ಸಾರಿಗೆಯು ವಾಹನಗಳನ್ನು ಸರಿಯಾಗಿ ನಿಯಂತ್ರಿಸುವುದಿಲ್ಲ. ಹಾಗೂ ಓವರ್‌ಲೋಡ್ ನಿಂದಾಗಿ ಅಪಘಾತಗಳು ಹೆಚ್ಚಾಗಿ ಸಂಭವಿಸುತ್ತವೆ.



## ಸಂಸತ್ ಸದಸ್ಯತ್ವಕ್ಕೆ ರಾಜೀನಾಮೆ ನೀಡಿದ ಚೀನಾ ಪದಚ್ಯುತ ಸಚಿವ ಕ್ವಿನ್ಗ್ಯಾಂಗ್

**ಬೀಜಿಂಗ್:** ಚೀನಾದ ವಿದೇಶಾಂಗ ಸಚಿವ ಸ್ಥಾನದಿಂದ ಕಳೆದ ವರ್ಷ ಹಠಾತ್ ಪದಚ್ಯುತಗೊಂಡಿದ್ದ ಕ್ವಿನ್ ಗಾಂಗ್ ಇದೀಗ ತಮ್ಮ ಸಂಸದ್ ಸದಸ್ಯತ್ವಕ್ಕೆ ರಾಜೀನಾಮೆ ನೀಡಿರುವುದಾಗಿ ಸರಕಾರಿ ಸ್ವಾಮ್ಯದ 'ಕ್ಸಿನ್ಹುವಾ' ವರದಿ ಮಾಡಿದೆ. ಚೀನಾದ ತಿಯಾಂಜಿನ್ ಬಂದರು ನಗರವನ್ನು ಪ್ರತಿನಿಧಿಸುತ್ತಿದ್ದ ಕ್ವಿನ್ ನೀಡಿರುವ ರಾಜೀನಾಮೆಯನ್ನು ಸಂಸತ್ ಅಂಗೀಕರಿಸಿದೆ. ಸುಮಾರು 7 ತಿಂಗಳು ವಿದೇಶಾಂಗ ಸಚಿವರಾಗಿ ಕಾರ್ಯನಿರ್ವಹಿಸಿದ್ದ ಕ್ವಿನ್‌ರನ್ನು ಯಾವುದೇ ವಿವರಣೆ ನೀಡದೆ ಜುಲೈಯಲ್ಲಿ ಪದಚ್ಯುತಗೊಳಿಸಲಾಗಿದೆ. ಬಳಿಕ ಅವರನ್ನು ಸಂಪುಟ ಸಮಿತಿಯಿಂದಲೂ ವಜಾಗೊಳಿಸಲಾಗಿತ್ತು. ಅವರ ಸ್ಥಾನದಲ್ಲಿ ವಾಂಗ್ ಯಿ ಅವರನ್ನು ವಿದೇಶಾಂಗ ಸಚಿವರನ್ನಾಗಿ ನೇಮಿಸಲಾಗಿದೆ.



# ಆರ್ಥಿಕತೆ ಸರಿಪಡಿಸುವುದೇ ಪಾಕಿಸ್ತಾನ ಹೊಸ ಸರ್ಕಾರದ ಮೊದಲ ಆದ್ಯತೆ



**ಇಸ್ಲಾಮಾಬಾದ್:** ಪಾಕ್ ಹೊಸ ಸರ್ಕಾರದ ಮೊದಲ ಆದ್ಯತೆ ಆರ್ಥಿಕತೆಯನ್ನು ಸರಿಪಡಿಸುವುದಾಗಿದೆ ಎಂದು ಪಾಕಿಸ್ತಾನದ ಮಾಜಿ ಪ್ರಧಾನಿ ನವಾಜ್ ಷರೀಫ್ ಹೇಳಿದ್ದಾರೆ.

ಬುಧವಾರ ತಮ್ಮ ಪಕ್ಷದ ನೇತೃತ್ವದ ಮುಂಬರುವ ಸರ್ಕಾರದ ಆದ್ಯತೆಯು ಅನಾರೋಗ್ಯದ ಆರ್ಥಿಕತೆಯನ್ನು ಸರಿಪಡಿಸುವುದಾಗಿದೆ.

ಏಕೆಂದರೆ ನಗದು ಕೊರತೆ ರಾಷ್ಟ್ರವನ್ನು ಪೀಡಿಸುವ ಎಲ್ಲಾ ಸಮಸ್ಯೆಗಳು ಆರ್ಥಿಕ ಸಮಸ್ಯೆಗಳೊಂದಿಗೆ ಸಂಬಂಧ ಹೊಂದಿವೆ ಎಂದು ಹೇಳಿದ್ದಾರೆ.

ಸರ್ಕಾರವು ಆರ್ಥಿಕತೆಯನ್ನು ಸರಿಪಡಿಸಲು ಪ್ರಯತ್ನಿಸುತ್ತದೆ., ಅದು ಎಲ್ಲವನ್ನೂ ಸರಿಪಡಿಸುತ್ತದೆ ಎಂದು ಪಾಕಿಸ್ತಾನ್ ಮುಸ್ಲಿಂ ಲೀಗ್-ನವಾಜ್ (ಪಿಎಂಎಲ್-ಎನ್) ನ ಸರ್ವೋಚ್ಚ ನಾಯಕ ಷರೀಫ್ ಫೆಬ್ರವರಿ 8 ರ ಚುನಾವಣೆಯ ನಂತರ ಮೊದಲ ಬಾರಿಗೆ ಸಂಸತ್ ಭವನಕ್ಕೆ ಆಗಮಿಸಿದ ನಂತರ ಮಾಧ್ಯಮಗಳಿಗೆ ತಿಳಿಸಿದರು. .

ಸಮ್ಮಿಶ್ರ ಸರ್ಕಾರದ ಪ್ರಧಾನಿಯಾಗಲು ತಮ್ಮ ಕಿರಿಯ ಸಹೋದರ ಶೆಹಬಾಜ್ ಷರೀಫ್ ಅವರನ್ನು ಆಶ್ಚರ್ಯಕರವಾಗಿ ನಾಮನಿರ್ದೇಶನ ಮಾಡಿದ ಷರೀಫ್, ಪ್ರತಿ ರಾಷ್ಟ್ರೀಯ ಅಸೆಂಬ್ಲಿ, ಸೆನೆಟ್ ಮತ್ತು ಪ್ರಧಾನ ಮಂತ್ರಿಗಳು ತಮ್ಮ ಸಾಂವಿಧಾನಿಕ ಅವಧಿಯನ್ನು ಪೂರ್ಣಗೊಳಿಸಬೇಕೆಂದು ನಾನು ಬಯಸುತ್ತೇನೆ ಎಂದು ಹೇಳಿದರು.

ದಂಗೆ ಪೀಡಿತ ಪಾಕಿಸ್ತಾನದಲ್ಲಿ ಯಾವುದೇ ಪ್ರಧಾನಿ ತನ್ನ ಐದು ವರ್ಷಗಳ ಅವಧಿಯನ್ನು ಪೂರ್ಣಗೊಳಿಸಿಲ್ಲ. ಷರೀಫ್ ಮೂರು ಬಾರಿ ಪ್ರಧಾನಿಯಾದರು. ಆದರೆ, ಮಧ್ಯಾವಧಿಯಲ್ಲಿ ಎಲ್ಲಾ ಮೂರು ಸಂದರ್ಭಗಳಲ್ಲಿ ತೆಗೆದುಹಾಕಲಾಯಿತು. ಇದಕ್ಕೂ ಮುನ್ನ, ಪಿಎಂಎಲ್-ಎನ್ ಸಂಸದೀಯ ಸಭೆಗಾಗಿ ರಾಷ್ಟ್ರೀಯ ಅಸೆಂಬ್ಲಿಗೆ ಆಗಮಿಸಿದ ಅವರನ್ನು ಪ್ರಧಾನಿ ಅಭ್ಯರ್ಥಿ ಶೆಹಬಾಜ್ ಷರೀಫ್ ಮತ್ತು ಅವರ ಪಕ್ಷದ ಇತರ ಸದಸ್ಯರು ಸ್ವಾಗತಿಸಿದರು.

# ಮಾಲ್ಡೀವ್ಸ್ ತಲುಪಿದ ಭಾರತೀಯ ತಾಂತ್ರಿಕ ಸಿಬ್ಬಂದಿ ತಂಡ

ಮಾಲೆ: ಮಾಲ್ದೀವ್ಸ್‌ನ ವಾಯುಯಾನ ವೇದಿಕೆಯನ್ನು ನಿರ್ವಹಿಸುವ ಭಾರತೀಯ ತಾಂತ್ರಿಕ ಸಿಬ್ಬಂದಿಯ ಮೊದಲ ತಂಡ? ಬುಧವಾರ ಮಾಲ್ದೀವ್ಸ್ ತಲುಪಿದೆ. ಮಾರ್ಚ್ 10ರಂದು ಮಾಲ್ದೀವ್ಸ್‌ನಿಂದದ ತೆರಳುವ ಭಾರತದ ಸೇನಾ ಸಿಬ್ಬಂದಿಯ ಪ್ರಥಮ ತಂಡದ ಸ್ಥಾನದಲ್ಲಿ ಈ ತಂಡ ಕಾರ್ಯನಿರ್ವಹಿಸಲಿದೆ. ಮಾಲೆ ಬಳಿಯ ಅದ್ದು ದ್ವೀಪದಲ್ಲಿ ಹೆಲಿಕಾಪ್ಟರ್ ಅನ್ನು ಈ ತಂಡ ನಿರ್ವಹಿಸಲಿದೆ. ಶೀಘ್ರವೇ ಬದಲಿ ಹೆಲಿಕಾಪ್ಟರ್ ಕೂಡಾ ಭಾರತದಿಂದ ಆಗಮಿಸಲಿದೆ. ಭಾರತದ ತಾಂತ್ರಿಕ ಸಿಬ್ಬಂದಿ ತಂಡವು ಹೆಲಿಕಾಪ್ಟರ್ ನಿರ್ವಹಣೆಯ ಬಗ್ಗೆ ತರಬೇತಿ ನೀಡುತ್ತದೆ. ಮಾರ್ಚ್‌ನಿಂದ ಮೇ ಅವಧಿಯಲ್ಲಿ ಮಾಲ್ದೀವ್ಸ್‌ನಿಂದ ಭಾರತದ ಸೇನಾ ಸಿಬ್ಬಂದಿಯನ್ನು ವಾಪಾಸು ಕರೆಸಿಕೊಳ್ಳುವ ನಿರ್ಧಾರಕ್ಕೆ ಈ ತಿಂಗಳ ಆರಂಭದಲ್ಲಿ ಎರಡೂ ದೇಶಗಳು ಬಂದಿವೆ. 'ಭಾರತದ ಸೇನಾ ಸಿಬ್ಬಂದಿಯ ಸ್ಥಾನದಲ್ಲಿ ತಾಂತ್ರಿಕ ಸಿಬ್ಬಂದಿಯ ತಂಡ ಎರಡು ಹೆಲಿಕಾಪ್ಟರ್ ಗಳು ಹಾಗೂ ಒಂದು ಡಾರ್ನಿಯರ್ ಯುದ್ಧವಿಮಾನದ ನಿರ್ವಹಣೆಯನ್ನು ಮುಂದುವರಿಸಲಿದೆ' ಎಂದು ಮಾಲ್ದೀವ್ಸ್ ವಿದೇಶಾಂಗ ಇಲಾಖೆಯ ವಕ್ತಾರರು ಹೇಳಿದ್ದಾರೆ.



# ಗಾಝಾಕ್ಕೆ ನೆರವು ಒದಗಿಸಿದ ಜೋರ್ಡಾನ್

**ಅಮ್ಮಾನ್:** ಮುತ್ತಿಗೆಗೆ ಒಳಗಾಗಿರುವ ಗಾಝಾ ಪಟ್ಟಿಗೆ ಮಾನವೀಯ ನೆರವು ವಿತರಿಸಲಾಗಿದ್ದು ಫ್ರಾನ್ಸ್‌ನ ಯುದ್ಧವಿಮಾನದ ಮೂಲಕ ಆಹಾರ ಮತ್ತಿತರ ಅವಶ್ಯಕ ವಸ್ತುಗಳನ್ನು ಪೂರೈಸಲಾಗಿದೆ ಎಂದು ಜೋರ್ಡಾನ್ ಸೇನೆ ಹೇಳಿದೆ.ಜೋರ್ಡಾನ್ ದೊರೆ ಅಬ್ದುಲ್ಲಾ ಅವರ ನಿರ್ದೇಶನದಡಿ ಫ್ರಾನ್ಸ್‌ನ ಯುದ್ಧವಿಮಾನದ ಮೂಲಕ ನಾಲ್ಕು ಬಾರಿ ಆಹಾರ ಹಾಗೂ ಇತರ ಅಗತ್ಯದ ವಸ್ತುಗಳನ್ನು ಗಾಝಾದ ಜನತೆಗೆ ತಲುಪಿಸಲಾಗಿದೆ. ಅಕ್ಟೋಬರ್ 7ರಂದು ಗಾಝಾ ಯುದ್ಧ ತೀವ್ರಗೊಂಡ ಬಳಿಕ ಇದುವರೆಗೆ ಜೋರ್ಡಾನ್ ವಿಮಾನದ ಮೂಲಕ ಆಹಾರ ಉದುರಿಸುವ 16 ಕಾರ್ಯಾಚರಣೆಯನ್ನು ಯಶಸ್ವಿಯಾಗಿ ನಡೆಸಿದೆ. ನೆದರಲ್ಯಾಂಡ್ಸ್ ಜಂಟಿ ಸಹಯೋಗದಲ್ಲಿ ಈ ಹಿಂದೆ ನಡೆಸಿದ್ದ ಕಾರ್ಯಾಚರಣೆಯಲ್ಲಿ ಉತ್ತರ ಗಾಝಾದಲ್ಲಿ ಜೋರ್ಡಾನ್ ಸ್ಥಾಪಿಸಿರುವ ಆಸ್ಪತ್ರೆಗೆ ವೈದ್ಯಕೀಯ ನೆರವು ಒದಗಿಸಲಾಗಿತ್ತು.



## ಜೈರಾಮ್ ಠಾಕೂರ್ ಸೇರಿ 15 ಮಂದಿ ಶಾಸಕರು ವಿಧಾನಸಭೆಯಿಂದ ಅಮಾನತು



**ನವದೆಹಲಿ:** ಹಿಮಾಚಲ ಪ್ರದೇಶ ವಿಧಾನಸಭೆ ಸ್ಪೀಕರ್ ಕುಲದೀಪ್ ಸಿಂಗ್ ಪಠಾನಿಯಾ ಅವರು ಸ್ಪೀಕರ್ ಚೇಂಬರ್‌ನಲ್ಲಿ ಘೋಷಣೆಗಳನ್ನು ಕೂಗಿದ ಆರೋಪದ ಮೇಲೆ ಪ್ರತಿಪಕ್ಷ ನಾಯಕ ಜೈರಾಮ್ ಠಾಕೂರ್ ಸೇರಿದಂತೆ 15 ಬಿಜೆಪಿ ಶಾಸಕರನ್ನು ಇಂದು(ಫೆ. 28) ಅಮಾನತುಗೊಳಿಸಿದ್ದಾರೆ. ಹಿಮಾಚಲ ಪ್ರದೇಶದಲ್ಲಿ ರಾಜಕೀಯ ಗದ್ದಲ ಮುಂದುವರೆದಿದೆ. ಯಾವುದೇ ಮತದಾನ ಮಾಡುವುದಾದರೆ ಕೇವಲ 10 ಶಾಸಕರು ಮಾತ್ರ ಅಲ್ಲಿರುತ್ತಾರೆ. ಇದೇ ವೇಳೆ ಯಾವುದೇ ಅಡೆತಡೆಯಿಲ್ಲದೆ ಬಜೆಟ್ ಮಂಡನೆಯಾಗಲಿದ್ದು, ಅಧಿವೇಶನವನ್ನು ಅನಿರ್ದಿಷ್ಟಾವಧಿಗೆ ಮುಂದೂಡಲಾಗುತ್ತದೆ. ಜೈರಾಮ್ ಠಾಕೂರ್, ವಿಪಿನ್ ಸಿಂಗ್ ಪರ್ಮಾರ್, ರಣಧೀರ್ ಶರ್ಮಾ,ಲೋಕೇಂದ್ರ ಕುಮಾರ್, ವಿನೋದ್ ಕುಮಾರ್, ಹಂಸರಾಜ್, ಜನಕ್ರಾಜ್, ಬಲ್ಬೀರ್ ವರ್ಮಾ, ತ್ರಿಲೋಕ್ ಜಮ್ವಾಲ್, ಸುರೇಂದ್ರ ಶೋರಿ, ದೀಪ್ರಾಜ್, ಪುರಣ್ ಠಾಕೂರ್, ಇಂದರ್ ಸಿಂಗ್ ಗಾಂಧಿ ಮತ್ತು ದಿಲೀಪ್ ಠಾಕೂರ್ ಸೇರಿದಂತೆ ಬಿಜೆಪಿಯಿಂದ ಉಚ್ಚಾಟಿತ ಶಾಸಕರೂ ಇದ್ದಾರೆ. ಸದನದಲ್ಲಿ ಗದ್ದಲ ಎಬ್ಬಿಸಿದಕ್ಕಾಗಿ ಹಾಗೂ ಘೋಷಣೆಗಳನ್ನು ಕೂಗಿದ್ದಕ್ಕಾಗಿ ಕ್ರಮ ಕೈಗೊಳ್ಳಲಾಗಿದೆ ಎಂದು ಸ್ಪೀಕರ್ ತಿಳಿಸಿದ್ದಾರೆ. ಆದರೆ ಇದು ಅನ್ಯಾಯದ ಕ್ರಮ ಎಂದು ಬಿಜೆಪಿ ಹೇಳುತ್ತಿದ್ದು, ಕಾಂಗ್ರೆಸ್ ಸರ್ಕಾರವನ್ನು ಉಳಿಸಲು ಇಂತಹ ಕ್ರಮ ಕೈಗೊಳ್ಳಲಾಗಿದೆ ಎಂದು ದೂರಿದ್ದಾರೆ.

## ಭೀಕರ ರೈಲು ದುರಂತ: 12 ಮಂದಿ ಸಾವು

**ಜಾರ್ಖಂಡ್:** ಜಾರ್ಖಂಡ್ನ ಜಮ್ತಾರಾ ಬಳಿ ಭೀಕರ ರೈಲು ದುರಂತ ಸಂಭವಿಸಿದ್ದು, ರೈಲಿಗೆ ಸಿಲುಕಿ ಕನಿಷ್ಠ ಹನ್ನೆರಡು ಜನರು ಪ್ರಾಣ ಕಳೆದುಕೊಂಡಿದ್ದರೆ, ಹಲವರು ಗಾಯಗೊಂಡಿದ್ದಾರೆ. ಪ್ರಾಥಮಿಕ ವರದಿಗಳ ಪ್ರಕಾರ, ಈ ಘಟನೆ ಜಮ್ತಾರಾ-ಕರ್ಮಾತಾಂಡ್ನ ಕಲ್ಜಾರಿಯಾ ಬಳಿ ನಡೆದಿದೆ. ರೈಲ್ವೆ ಆಡಳಿತ, ರೈಲ್ವೆ ಪೊಲೀಸರು ಮತ್ತು ಸ್ಥಳೀಯ ಆಡಳಿತವು ಸ್ಥಳಕ್ಕೆ ತಲುಪಿದೆ. ಗಾಯಗೊಂಡವರನ್ನ ಆಸ್ಪತ್ರೆಗಳಿಗೆ ದಾಖಲಿಸಲು ಅಧಿಕಾರಿಗಳು ಸಕ್ರಿಯವಾಗಿ ಕೆಲಸ ಮಾಡುತ್ತಿದ್ದಾರೆ ಎಂದು ವರದಿಯಾಗಿದೆ.



# ವಾಲ್ಟ್ ಡಿಸ್ನಿ ಜತೆ ನಿರ್ಣಾಯಕ ಒಪ್ಪಂದಕ್ಕೆ ಸಹಿ ಮಾಡಿದ ರಿಲಯನ್ಸ್ ಮತ್ತು ವಯಾಕಾಮ್ 18 ಮೀಡಿಯಾ



ಮುಂಬೈ, ರಿಲಯನ್ಸ್ ಇಂಡಸ್ಟ್ರೀಸ್ ಲಿಮಿಟೆಡ್, ವಯಾಕಾಮ್ 18 ಮೀಡಿಯಾ ಪ್ರೈವೇಟ್ ಲಿಮಿಟೆಡ್ ಮತ್ತು ವಾಲ್ಟ್ ಡಿಸ್ನಿ ಕಂಪನಿ ಬುಧವಾರ (ಫೆಬ್ರವರಿ 28) ಜಂಟಿ ಉದ್ಯಮಕ್ಕಾಗಿ ನಿರ್ಣಾಯಕ ಒಪ್ಪಂದಗಳಿಗೆ ಸಹಿ ಮಾಡಿರುವುದಾಗಿ ಘೋಷಣೆ ಮಾಡಿವೆ. ಇದರೊಂದಿಗೆ ವಯಾಕಾಮ್ 18 ಮತ್ತು ಸ್ಟಾರ್ ಇಂಡಿಯಾ ಒಗ್ಗೂಡಿಸಲಾಗುತ್ತದೆ. ವಹಿವಾಟಿನ ಭಾಗವಾಗಿ ವಯಾಕಾಮ್ 18ಗೆ ಸೇರಿದ ಮಾಧ್ಯಮ ಸಂಸ್ಥೆಗಳು ಕೋರ್ಟ್ ಅನುಮೋದಿತ ವ್ಯವಸ್ಥೆಯ ಮೂಲಕವಾಗಿ ಸ್ಟಾರ್ ಇಂಡಿಯಾ ಪ್ರೈವೇಟ್ ಲಿಮಿಟೆಡ್ ನಲ್ಲಿ ವಿಲೀನ ಗೊಳಿಸಲಾಗುತ್ತದೆ. ಬೆಳವಣಿಗೆ ಕಾರ್ಯತಂತ್ರದ ಭಾಗವಾಗಿ ರಿಲಯನ್ಸ್ ನಿಂದ 11,500 ಕೋಟಿ ರೂಪಾಯಿ ಹೂಡಿಕೆ ಮಾಡುವುದಕ್ಕೆ ಒಪ್ಪಿಗೆ ಸೂಚಿಸಲಾಗಿದೆ. ಹಣಕಾಸಿನ ನಂತರದ ಆಧಾರದಲ್ಲಿ ಈ ಜಂಟಿ ಉದ್ಯಮದ ವಹಿವಾಟಿನ ಮೌಲ್ಯ 70,352 ಕೋಟಿ ರೂಪಾಯಿ ಎಂದು ಅಂದಾಜಿಸಲಾಗಿದೆ. ಇದರಲ್ಲಿ ಒಗ್ಗೂಡುವ ಕೆಲವು ಅಂಶಗಳು ಬಿಟ್ಟು ಇಷ್ಟು ಮೌಲ್ಯ ಮಾಡಲಾಗಿದೆ. ಈ ಜಂಟಿ ಉದ್ಯಮದ ಸಂಪೂರ್ಣ ವಹಿವಾಟು ಮುಗಿದ ನಂತರ ರಿಲಯನ್ಸ್ ಇದನ್ನು ನಿಯಂತ್ರಿಸುತ್ತದೆ. ರಿಲಯನ್ಸ್ ಪಾಲು ಶೇ 16.34ರಷ್ಟು, ವಯಾಕಾಮ್ 18 ಪಾಲು ಶೇ 46.82 ಮತ್ತು ಡಿಸ್ನಿ ಪಾಲು ಶೇ 36.84ರಷ್ಟು ಇರುತ್ತದೆ. ಈ ಜಂಟಿ ಉದ್ಯಮಕ್ಕೆ ಡಿಸ್ನಿಯಿಂದ ಇನ್ನೂ ಕೆಲವು ಮಾಧ್ಯಮ ಆಸ್ತಿಗಳನ್ನು ಕೊಡುಗೆ ನೀಡಬಹುದಾಗಿದ್ದು, ಅದು ಮಿಯಂತ್ರಕ ಹಾಗೂ ಥರ್ಡ್ ಪಾರ್ಟಿ ಅನುಮೋದನೆಗೆ ಒಳಪಟ್ಟಿದೆ. ಈ ಜಂಟಿ ಉದ್ಯಮದ ಮುಖ್ಯಸ್ಥರಾಗಿ ನೀತಾ ಅಂಬಾನಿ ಅವರು, ಉಪಾಧ್ಯಕ್ಷರಾಗಿ ಉದಯಶಂಕರ್ ಅವರ ಜತೆಗೆ ಜಂಟಿ ಉದ್ಯಮದ ಕಾರ್ಯತಂತ್ರ ಮಾರ್ಗದರ್ಶನ ಮಾಡಲಿದ್ದಾರೆ. ಈ ಜಂಟಿ ಉದ್ಯಮದ ಮೂಲಕ ಭಾರತದಾದ್ಯಂತ ಎಪ್ಪತ್ತೈದು ಕೋಟಿ ವೀಕ್ಷಕರು ಒಂದು ನೆಲೆಯಲ್ಲಿ ನಿಲ್ಲಲಿದ್ದಾರೆ. ವಿಶ್ವದಾದ್ಯಂತ ಇರುವ ಭಾರತೀಯರಿಗೆ ಇದು ಸೇವೆ ಒದಗಿಸಲಿದೆ. ಈ ಜಂಟಿ ಉದ್ಯಮದ ಮೂಲಕ ಭಾರತದಲ್ಲಿ ಎಕ್ಸ್‌ಕ್ಲೂಸಿವ್ ಆಗಿ ಡಿಸ್ನಿ ಸಿನಿಮಾ ಪ್ರೊಡಕ್ಷನ್ಸ್ ಗೆ ವಿತರಣೆ ಹಕ್ಕು ದೊರೆಯಲಿದೆ. ಮೂವತ್ತು ಸಾವಿರಕ್ಕೂ ಹೆಚ್ಚು ಡಿಸ್ನಿ ಕಂಟೆಂಟ್ ಆಸ್ತಿಗಳಿಗೆ ಲೈಸೆನ್ಸ್ ದೊರೆಯಲಿದೆ. ಈ ಜಂಟಿ ಉದ್ಯಮದ ಕುರಿತು ಮಾತನಾಡಿದ ರಿಲಯನ್ಸ್ ಇಂಡಸ್ಟ್ರೀಸ್‌ನ ಮುಕೇಶ್ ಅಂಬಾನಿ, ''ಇದು ಭಾರತೀಯ ಮನರಂಜನಾ ಉದ್ಯಮದಲ್ಲಿ ಹೊಸ ಯುಗದ ಆರಂಭ ಸೂಚಿಸುವ ಮಹತ್ವದ ಒಪ್ಪಂದವಾಗಿದೆ. ನಾವು ಯಾವಾಗಲೂ ಡಿಸ್ನಿಯನ್ನು ಜಾಗತಿಕವಾಗಿ ಅತ್ಯುತ್ತಮ ಮಾಧ್ಯಮ ಗುಂಪು ಎಂದು ಗೌರವಿಸುತ್ತೇವೆ. ಮತ್ತು ರಾಷ್ಟ್ರದಾದ್ಯಂತ ಪ್ರೇಕ್ಷಕರಿಗೆ ಕೈಗೆಟುಕುವ ಬೆಲೆಯಲ್ಲಿ ಅಮೋಘವಾದ ಕಂಟೆಂಟ್ ತಲುಪಿಸಲು ನಮ್ಮ ವ್ಯಾಪಕ ಸಂಪನ್ಮೂಲಗಳು, ಸೃಜನಶೀಲ ಸಾಮರ್ಥ್ಯ ಮತ್ತು ಮಾರುಕಟ್ಟೆ ಒಳನೋಟಗಳನ್ನು ಒಟ್ಟುಗೂಡಿಸಲು ಸಹಾಯ ಮಾಡುವ ಈ ಕಾರ್ಯತಂತ್ರದ ಜಂಟಿ ಉದ್ಯಮವನ್ನು ರೂಪಿಸಲು ನಾವು ಉತ್ಸುಕರಾಗಿದ್ದೇವೆ. ರಿಲಯನ್ಸ್ ಗುಂಪಿನ ಪ್ರಮುಖ ಪಾಲುದಾರರಾಗಿ ಡಿಸ್ನಿಯನ್ನು ನಾವು ಸ್ವಾಗತಿಸುತ್ತೇವೆ,'' ಎಂದಿದ್ದಾರೆ. ವಾಲ್ಟ್ ಡಿಸ್ನಿ ಕಂಪನಿಯ ಸಿಇಒ ಬಾಬ್ ಐಗರ್ ಮಾತನಾಡಿ, '' ವಿಶ್ವದ ಅತಿ ಹೆಚ್ಚು ಜನಸಂಖ್ಯೆ ಹೊಂದಿರುವ ಮಾರುಕಟ್ಟೆಯಾಗಿದೆ ಮತ್ತು ಕಂಪನಿಗೆ ದೀರ್ಘಾವಧಿಯ ಮೌಲ್ಯವನ್ನು ಸೃಷ್ಟಿಸಲು ಈ ಜಂಟಿ ಉದ್ಯಮ ಒದಗಿಸುವ ಅವಕಾಶಗಳಿಗೆ ಉತ್ಸುಕರಾಗಿದ್ದೇವೆ. ರಿಲಯನ್ಸ್ ಮಾರುಕಟ್ಟೆ ಮತ್ತು ಗ್ರಾಹಕರ ಬಗ್ಗೆ ಅಗಾಧ ತಿಳಿವಳಿಕೆ ಹೊಂದಿದೆ ಮತ್ತು ನಾವು ಒಟ್ಟಾಗಿ ದೇಶದ ಪ್ರಮುಖ ಮಾಧ್ಯಮ ಕಂಪನಿಗಳಲ್ಲಿ ಒಂದನ್ನು ಸೃಷ್ಟಿಸುತ್ತೇವೆ, ಡಿಜಿಟಲ್ ಸೇವೆಗಳು, ಮನರಂಜನೆ ಮತ್ತು ಕ್ರೀಡಾ ಕಂಟೆಂಟ್ ಗಳ ವಿಶಾಲವಾದ ಪೋರ್ಟ್ ಫೋಲಿಯೊದೊಂದಿಗೆ ಗ್ರಾಹಕರಿಗೆ ಉತ್ತಮ ಸೇವೆ ನಮಗೆ ಅವಕಾಶ ಮಾಡಿಕೊಡುತ್ತದೆ,'' ಎಂದಿದ್ದಾರೆ.

# ತೈವಾನ್ ಬಳಿ ಚೀನಾದ 11 ಹಡಗುಗಳು ಪತ್ತೆ

**ತೈಪೆ:** ತೈವಾನ್ ರಾಜಧಾನಿ ತೈಪೆಯ ಬಳಿ ಚೀನಾ ನೌಕಾಸೇನೆಯ 11 ಹಡಗುಗಳು ಪತ್ತೆಯಾಗಿವೆ ಎಂದು ತೈವಾನ್ನ ರಕ್ಷಣಾ ಸಚಿವಾಲಯ ಬುಧವಾರ ಹೇಳಿದೆ. ಫೆಬ್ರವರಿ 14ರಂದು ತೈವಾನ್ನ ಕಿನ್ಮೆನ್ ದ್ವೀಪದ ಬಳಿ 4 ಜನರಿದ್ದ ಚೀನಾದ ದೋಣಿಯನ್ನು ತೈವಾನ್ನ ಕರಾವಳಿ ರಕ್ಷಣಾ ಪಡೆ ಬೆನ್ನಟ್ಟಿದಾಗ ಚೀನಾದ ದೋಣಿ ಮುಳುಗಿ ಅದರಲ್ಲಿದ್ದ ಇಬ್ಬರು ಮೃತಪಟ್ಟಿದ್ದು ಇತರ ಇಬ್ಬರನ್ನು ತಾತ್ಕಾಲಿಕವಾಗಿ ಬಂಧನದಲ್ಲಿರಿಸಲಾಗಿತ್ತು. ಈ ಘಟನೆಗೆ ಚೀನಾ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದು ಪ್ರತಿಕ್ರಮ ಕೈಗೊಳ್ಳುವುದಾಗಿ ಎಚ್ಚರಿಕೆ ನೀಡಿತ್ತು. ಬುಧವಾರ ಬೆಳಿಗ್ಗೆ 6 ಗಂಟೆಯವರೆಗಿನ ಕಳೆದ 24 ಗಂಟೆಗಳಲ್ಲಿ ಚೀನಾವು ತೈವಾನ್ ಜಲಸಂಧಿ ಹಾಗೂ ದ್ವೀಪದ ಸುತ್ತಮುತ್ತ 15 ಯುದ್ಧವಿಮಾನಗಳು, 11 ನೌಕಾಪಡೆಯ ಹಡಗುಗಳು ಹಾಗೂ ಒಂದು ಬಲೂನನ್ನು ರವಾನಿಸಿ ಒತ್ತಡ ಹೆಚ್ಚಿಸಲು ಪ್ರಯತ್ನಿಸುತ್ತಿದೆ. ಸೋಮವಾರ ಚೀನಾದ 1 ಕಡಲ ಕಣ್ಗಾವಲು ಹಡಗು, 4 ಕರಾವಳಿ ರಕ್ಷಣಾ ದೋಣಿಗಳು ಕಿನ್ಮೆನ್ ಬಳಿಯ ನಿಷೇಧಿತ ವಲಯವನ್ನು ಪ್ರವೇಶಿಸಿವೆ ಎಂದು ಅಧಿಕಾರಿಗಳು ಹೇಳಿದ್ದಾರೆ.



# ಪಾಕಿಸ್ತಾನದಿಂದ ಬಂದ ಭಾರೀ ಪ್ರಮಾಣದ ಮಾದಕ ದ್ರವ್ಯ ವಶ

**ಗುಜರಾತ್:** ನಾರ್ಕೋಟಿಕ್ಸ್ ಕಂಟ್ರೋಲ್ ಬ್ಯೂರೋ ಭಾರತೀಯ ನೌಕಾಪಡೆ ಮತ್ತು ಗುಜರಾತ್ ಭಯೋತ್ಪಾದನಾ ನಿಗ್ರಹ ದಳ ಜಂಟಿ ಕಾರ್ಯಾಚರಣೆ ನಡೆಸಿ ಗುಜರಾತ್ ಕರಾವಳಿಯಲ್ಲಿ ಶಂಕಿತ ಪಾಕಿಸ್ತಾನಿ ಸಿಬ್ಬಂದಿ ನಡೆಸುತ್ತಿದ್ದ ದೋಣಿಯಿಂದ ಸುಮಾರು 3,300 ಕೆ.ಜಿ. ಮಾದಕ ವಸ್ತುಗಳನ್ನು ವಶಪಡಿಸಿಕೊಂಡಿದೆ. 3,089 ಕೆ.ಜಿ. ಗಾಂಜಾ, 158 ಕೆ.ಜಿ. ಮೆಥಾಂಫೆಟಮೈನ್ ಮತ್ತು 25 ಕೆ.ಜಿ. ಮಾರ್ಫಿನ್ ಒಳಗೊಂಡಿದ್ದ ಮಾದಕವಸ್ತುಗಳ ಸಂಗ್ರಹದ ಮೇಲೆ ಪಾಕಿಸ್ತಾನದ ಉತ್ಪಾದನೆ ಎಂದು ಬರೆಯಲಾಗಿದೆ. ಇವುಗಳ ಅಂದಾಜು ಮೌಲ್ಯ 2,000 ಕೋಟಿ ರೂ. ಗೂ ಹೆಚ್ಚು. ಭಾರತದಲ್ಲಿ ಈವರೆಗೆ ಸಿಕ್ಕಿರುವ ಮಾದಕ ದ್ರವ್ಯಗಳಲ್ಲಿ ಇದು ಅತೀ ದೊಡ್ಡ ಸಂಗ್ರಹವಾಗಿದೆ. ಎರಡು ದಿನಗಳ ಕಾಲ ಸಮುದ್ರದಲ್ಲಿದ್ದ ಭಾರತೀಯ ನೌಕಾಪಡೆಯ ನಿಯೋಜಿತ ಹಡಗು ಭಾರತೀಯ ಪ್ರಾದೇಶಿಕ ಜಲಪ್ರದೇಶವನ್ನು ಪ್ರವೇಶಿಸಿದಾಗ ಅನುಮಾನಾಸ್ಪದವಾಗಿ ದೋಣಿಯನ್ನು ನಿಲ್ಲಿಸಿತು. ಬಳಿಕ ತನಿಖೆ ವೇಳೆ



ಅಧಿಕಾರಿಗಳು ದೊಡ್ಡ ಪ್ರಮಾಣದಲ್ಲಿದ್ದ ಡ್ರಗ್ಸ್ ಅನ್ನು ಪತ್ತೆ ಹಚ್ಚಿದ್ದಾರೆ.ಪ್ರಕರಣಕ್ಕೆ ಸಂಬಂಧಿಸಿ ಐವರನ್ನು ಬಂಧಿಸಲಾಗಿದೆ. ಹಡಗು ಮತ್ತು ಮಾದಕವಸ್ತುಗಳನ್ನು ವಶಪಡಿಸಿಕೊಂಡು ಗುಜರಾತ್ನ ಪೋರಬಂದರ್ಗೆ ಕೊಂಡೊಯ್ಯಲಾಗಿದೆ. ಶಂಕಿತ ಪಾಕಿಸ್ತಾನಿ ಸಿಬ್ಬಂದಿ ಬಗ್ಗೆ ಹೆಚ್ಚಿನ ಮಾಹಿತಿ ಮತ್ತು ಮಾದಕದ್ರವ್ಯದ ಕುರಿತು ಹೆಚ್ಚಿನ ತನಿಖೆ ನಡೆಸಲಾಗುತ್ತಿದೆ.

ಸಂಜೆ ಮುಗಿಲು

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಡಾಲಿ ನಿರ್ಮಾಣದ ಸಿನಿಮಾದಲ್ಲಿ ಮಲ್ಲೈಕಾ ವಸುಪಾಲ್ ನಾಯಕಿ





ಕಿರುತೆರೆಯ ಜನಪ್ರಿಯ 'ಹಿಟ್ಲರ್ ಕಲ್ಯಾಣ' ಸೀರಿಯಲ್ ನಟಿ ಮಲ್ಲೈಕಾ ವಸುಪಾಲ್ ಇದೀಗ ಬಂಪರ್ ಆಫರ್‌ವೊಂದನ್ನು ಗಿಟ್ಟಿಸಿಕೊಂಡಿದ್ದಾರೆ. 'ಉಪಾಧ್ಯಕ್ಷ' ಚಿತ್ರ ರಿಲೀಸ್ ಆಗಿ ಪ್ರೇಕ್ಷಕರ ಮೆಚ್ಚುಗೆ ಗಿಟ್ಟಿಸಿಕೊಳ್ಳಿದ್ದಂತೆ ಇತ್ತ ಮಲ್ಲೈಕಾಗೆ ಡಾಲಿ ನಿರ್ಮಾಣದ ಸಿನಿಮಾದಲ್ಲಿ ನಟಿಸಲು ಅವಕಾಶ ಸಿಕ್ಕಿದೆ

ವಿದ್ಯಾಪತಿಯಾಗಿರುವ ನಾಗಭೂಷಣ್‌ಗೆ ಜೋಡಿ ಸಿಕ್ಕಾಗಿದೆ. 'ಉಪಾಧ್ಯಕ್ಷ' ಸುಂದರಿ ಈಗ ಡಾಲಿ ಬಳಗ ಸೇರ್ಪಡೆಯಾಗಿದ್ದಾರೆ. ನಟರಾಕ್ಷಸ ಡಾಲಿ ಧನಂಜಯ್ ಒಡೆತನದ ಡಾಲಿ ಪಿಕ್ಚರ್ಸ್ 'ಟಗರು ಪಲ್ಯ' ಸಕ್ಸಸ್ ಬಳಿಕ ಮತ್ತೊಂದು ಸಿನಿಮಾ ಕೈಗೆತ್ತಿಕೊಂಡಿರುವುದು ಗೊತ್ತೇ ಇದೆ. ಮತ್ತೊಮ್ಮೆ ಡಾಲಿ ಹಾಗೂ ನಾಗಭೂಷಣ್ ಕೈ ಜೋಡಿಸಿದ್ದು, ಈ ಚಿತ್ರಕ್ಕೆ ವಿದ್ಯಾಪತಿ ಎಂಬ ಟೈಟಲ್ ಇಡಲಾಗಿದೆ. ಸಂಕ್ರಾಂತಿ ಹಬ್ಬಕ್ಕೆ ಫಸ್ಟ್ ಲುಕ್ ರಿಲೀಸ್ ಮಾಡಿದ್ದ ಚಿತ್ರತಂಡ ನಾಯಕಿಯನ್ನು ಪ್ರೇಕ್ಷಕರಿಗೆ ಪರಿಚಯಿಸಿದೆ. ಹೀರೋ ಆಗಿ ಅದೃಷ್ಟ ಪರೀಕ್ಷೆಗಿಳಿದ ಚಿಕ್ಕಣ್ಣನಿಗೆ 'ಉಪಾಧ್ಯಕ್ಷ' ಸಿನಿಮಾದಲ್ಲಿ ನಾಯಕಿ ಮಿಂಚಿದ್ದ ಮಲ್ಲೈಕಾ ಈಗ ವಿದ್ಯಾಪತಿಗೆ ಜೋಡಿಯಾಗಿದ್ದಾರೆ. 'ಹಿಟ್ಲರ್ ಕಲ್ಯಾಣ' ಧಾರಾವಾಹಿ ಮೂಲಕ ಕಿರುತೆರೆ ಪ್ರೇಕ್ಷಕರನ್ನು ರಂಜಿಸಿದ್ದ ಮಲ್ಲೈಕಾ 'ಉಪಾಧ್ಯಕ್ಷ' ಚಿತ್ರದ ಮೂಲಕ ಬೆಳ್ಳಿಪರದೆಗೆ ಎಂಟ್ರಿ ಕೊಟ್ಟಿದ್ದರು. ಮೊದಲ ಸಿನಿಮಾವೇ ಅವರಿಗೆ ದೊಡ್ಡ ಸಕ್ಸಸ್ ತಂದು ಕೊಟ್ಟಿದೆ. ಉಪಾಧ್ಯಕ್ಷ ಸಿನಿಮಾದಲ್ಲಿ ಇವ್ರ ನಟನೆ ನೋಡಿ ಮೆಚ್ಚಿಕೊಂಡಿರುವ 'ವಿದ್ಯಾಪತಿ' ಟೀಂ ತಮ್ಮ ತಂಡಕ್ಕೆ ಅವರನ್ನು ಸ್ವಾಗತಿಸಿದೆ.

ವಿದ್ಯಾಪತಿ ಸಿನಿಮಾದಲ್ಲಿ ಮಲ್ಲೈಕಾ ವಿದ್ಯಾ ಎಂಬ ಪಾತ್ರಕ್ಕೆ ಬಣ್ಣ ಹಚ್ಚುತ್ತಿದ್ದು, ಸಿಂಪಲ್ ಆಗಿರುವ ಹೋಮ್ಲಿ ಹುಡುಗಿಯಾಗಿ ಕಾಣಿಸಿಕೊಳ್ಳಲಿದ್ದಾರಂತೆ. ಈ ಹಿಂದೆ 'ಇಕ್ಕಟ್' ಸಿನಿಮಾ ಮೂಲಕ ಭರವಸೆ ಹುಟ್ಟಿಸಿದ್ದ ಇಶಾಂ ಮತ್ತು ಹಸೀಂ ಖಾನ್ ವಿದ್ಯಾಪತಿ ಸಿನಿಮಾಕ್ಕೆ ಆಕ್ಷನ್ ಕಟ್ ಹೇಳುತ್ತಿದ್ದಾರೆ. ಜೊತೆಗೆ ಸಿನಿಮಾವನ್ನು ಇವರೆ ಬರೆದು, ಸಂಕಲನದ ಜವಾಬ್ದಾರಿಯನ್ನು ತಾವೇ ಹೊತ್ತುಕೊಂಡಿದ್ದಾರೆ.

ಆಕ್ಷನ್ ಕಾಮಿಡಿ ಕಥಾಹಂದರ ಹೊಂದಿರುವ 'ವಿದ್ಯಾಪತಿ' ಚಿತ್ರದಲ್ಲಿ ನಾಗಭೂಷಣ್ ವಿಭಿನ್ನ ಗೆಟಪ್ ನಲ್ಲಿ ಕಾಣಿಸಿಕೊಳ್ಳಲಿದ್ದಾರೆ. ಲವಿತ್ ಛಾಯಾಗ್ರಹಣ, ಡಾಸ್ಮೋಡ್ ಸಂಗೀತ ನಿರ್ದೇಶನ, ಮುರುಳಿ ನೃತ್ಯ ನಿರ್ದೇಶನ, ಸುಜಿತ್ ವೆಂಕಟರಾಮಯ್ಯ ಸಾಹಿತ್ಯ, ಅರ್ಜುನ್ ಮಾಸ್ಟರ್ ಆಕ್ಷನ್ ವಿದ್ಯಾಪತಿ ಸಿನಿಮಾಕ್ಕಿದೆ. ಮಾರ್ಚ್ ತಿಂಗಳಿನಿಂದ ವಿದ್ಯಾಪತಿ ನಾಯಕಿ ಮಲ್ಲೈಕಾ ಶೂಟಿಂಗ್‌ನಲ್ಲಿ ಭಾಗಿಯಾಗಲಿದ್ದಾರೆ.



# ಶಭ್ಬಾಷ್ ಎರಡನೇ ಹಂತದ ಚಿತ್ರೀಕರಣ ಮುಕ್ತಾಯ!



ರುದ್ರಶಿವ ನಿರ್ದೇಶನದ 'ಶಭ್ಬಾಷ್' ಚಿತ್ರ ಮೊದಲ ಹಂತದ ಚಿತ್ರೀಕರಣ ಮುಗಿಸಿಕೊಂಡ ಸುದ್ದಿ ಇತ್ತೀಚೆಗಷ್ಟೇ ಹೊರಬಿದ್ದಿತ್ತು. ಅದಾಗಲೇ ಚಿತ್ರತಂಡ ಎರಡನೇ ಹಂತದ ಚಿತ್ರೀಕರಣ ಸಹ ಸಾಂಘವಾಗಿ ಮುಕ್ತಾಯಗೊಂಡ ಖುಷಿಯ ಸಂಗತಿಯನ್ನು ಹಂಚಿಕೊಂಡಿದೆ. ಚನ್ನಗಿರಿಯಲ್ಲಿ ಮೊದಲನೇ ಹಂತದ ಚಿತ್ರೀಕರಣ ಮುಗಿಸಿಕೊಂಡಿದ್ದ ಚಿತ್ರತಂಡ ಮಡಿಕೇರಿ ಸುತ್ತಮುತ್ತಲ ಚೆಂದದ ಪರಿಸರದಲ್ಲಿ ಎರಡನೇ ಹಂತದ ಚಿತ್ರೀಕರಣವನ್ನು ಸಮಾಪ್ತಿಗೊಳಿಸಿಕೊಂಡಿದೆ. ಈ ಹಂತದಲ್ಲಾದ ಅಮೋಘ ಅನುಭವಗಳನ್ನೂ ಹಂಚಿಕೊಂಡಿದೆ!

ನಿರ್ದೇಶಕ ರುದ್ರಶಿವ ಅತ್ಯಂತ ಅಚ್ಚುಕಟ್ಟಾಗಿ ಪ್ಲಾನು ಮಾಡಿಕೊಂಡು, ಅದಕ್ಕೆ ತಕ್ಕುದಾಗಿಯೇ ಮುಂದಡಿ ಇಡುತ್ತಿದ್ದಾರೆ. ಅದರ ಭಾಗವಾಗಿಯೇ ಮಡಿಕೇರಿಯ ಗೋಣಿಕೊಪ್ಪ, ಬಿರನಾಣಿ ಮುಂತಾದ ಪ್ರದೇಶಗಳಲ್ಲಿ ಚಿತ್ರೀಕರಣ ನಡೆಸಿದ್ದಾರೆ. ಈ ಭಾಗದ ಟಾಟ ಟೀ ಎಸ್ಟೇಟ್, ಬೆಟ್ಟಗುಡ್ಡ, ಜಲಪಾತ ಮುಂತಾದೆಡೆಗಳಲ್ಲಿ ಬಹುಮುಖ್ಯ ಭಾಗಗಳನ್ನು ಸೆರೆಹಿಡಿಯಲಾಗಿದೆ. ದುರ್ಗಮವಾದ ಪ್ರದೇಶಗಳಲ್ಲಿ ಒಂದಿಡೀ ಚಿತ್ರತಂಡ ಅತ್ಯಂತ ಉತ್ಸಾಹದಿಂದ ಈ ಚಿತ್ರೀಕರಣದಲ್ಲಿ ಭಾಗಿಯಾಗಿದೆ.

ವಿಶೇಷವಾಗಿ, ಎರಡು ಹಾಡುಗಳನ್ನು ಈ ಸಂದರ್ಭದಲ್ಲಿ ಚಿತ್ರೀಕರಿಸಿಕೊಳ್ಳಲಾಗಿದೆ. ಇಲ್ಲಿ ವಾಸವಾಗಿರುವ ಜೇನುಕುರುಬರ ಹಾಡಿಗಳಿಗೆ ಭೇಟಿ ನೀಡಿದ್ದ ಚಿತ್ರತಂಡ, ಆ ಬುಡಕಟ್ಟು ಜನಾಂಗದ ಹಾಡೊಂದನ್ನು ಚಿತ್ರೀಕರಿಸಿಕೊಂಡಿದೆ. ಅದಕ್ಕೆ ಸಾಹಿತ್ಯ, ಸಂಗೀತವೆಲ್ಲ ಆ ಬುಡಕಟ್ಟು ಜನರದ್ದೇ ಎಂಬುದು ಅಸಲೀ ವಿಶೇಷ. ಒಟ್ಟಾರೆ ಶಭ್ಬಾಷ್ ಚಿತ್ರದ ಪ್ರಧಾನ ಆಕರ್ಷಣೆಗಳಲ್ಲಿ ಜೇನುಕುರುಬರ ಆ ಹಾಡೂ ಕೂಡಾ ಪ್ರಧಾನವಾಗಿ ಸೇರಿಕೊಂಡಿದೆ.

ಅಂದಹಾಗೆ, ಆರು ದಿನಗಳ ಕಾಲ ಮಡಿಕೇರಿ ಭಾಗದಲ್ಲಿಯೇ ಚಿತ್ರತಂಡ ಬೀಡುಬಿಟ್ಟಿತ್ತು. ಡ್ಯಾನ್ಸರ್ ಗಳು ಸೇರಿದಂತೆ ಇಡೀ ಚಿತ್ರತಂಡವೇ ಎರಡನೇ ಹಂತರ ಚಿತ್ರೀಕರಣದಲ್ಲಿ ಭಾಗಿಯಾಗಿತ್ತು. ಅದರಲ್ಲಿಯೂ ಒಂದು ದಿನ ಸಂಜೆ ಆರು ಗಂಟೆಯಿಂದ ಮಾರನೇ ದಿನ ಮುಂಜಾನೆ ಆರು ಗಂಟೆಯವರೆಗೂ ಅವ್ಯಾಹತವಾಗಿ ಚಿತ್ರೀಕರಣ ನಡೆಸಲಾಗಿದೆ. ಮಡಿಕೇರಿ ಅಂದಮೇಲೆ ಅಲ್ಲಿನ ಮಂಜು, ಚಳಿಯ ತೀವ್ರತೆ ಎಂಥಾದ್ದೆಂಬುದು ಎಲ್ಲರಿಗೂ ತಿಳಿದಿರುತ್ತೆ. ಅದರ ನಡುವೆಯೂ ಅಹೋರಾತ್ರಿ ಚಿತ್ರೀಕರಣ ನಡೆಸಿದ ರೋಮಾಂಚಕ ಕ್ಷಣಗಳಿಗೆ ಚಿತ್ರತಂಡ ಸಾಕ್ಷಿಯಾಗಿದೆ.

ಓಂ ಸಾಯಿ ಪ್ರಕಾಶ್ ಸೇರಿದಂತೆ ಘಟಾನುಘಟಿ ನಿರ್ದೇಶಕರ ಗರಡಿಯಲ್ಲಿ ಪಳಗಿಕೊಂಡಿರುವ ರುದ್ರಶಿವ ನಿರ್ದೇಶನದ ಮೊದಲ ಚಿತ್ರವಿದು. ಪವೀಂದ್ರ ಮುತ್ತಪ್ಪ ಈ ಚಿತ್ರವನ್ನು ಎಸ್ 22 ಬ್ಯಾನರಿನಡಿಯಲ್ಲಿ ನಿರ್ಮಾಣ ಮಾಡಿದ್ದಾರೆ. ಈಗಾಗಲೇ 'ಕ' ಮತ್ತು 'ಮಳೆಬಿಲ್ಲು' ಸಿನಿಮಾಗಳಲ್ಲಿ ನಟಿಸಿರುವ ಶರತ್ ನಾಯಕನಾಗಿ ನಟಿಸಿದ್ದರೆ, ನಿಸರ್ಗ ನಾಯಕಿಯಾಗಿ ಸಾಥ್ ಕೊಟ್ಟಿದ್ದಾರೆ. ಇದೀಗ ಎರಡನೇ ಹಂತದ ಚಿತ್ರೀಕರಣವನ್ನು ಯಶಸ್ವಿಯಾಗಿ ಮುಗಿಸಿಕೊಂಡಿರುವ ಚಿತ್ರತಂಡ, ಮೂರನೇ ಹಂತದ ಚಿತ್ರೀಕರಣದತ್ತ ಸಾಗುತ್ತಿದೆ.

# 'ಯುವ' ಸಿನಿಮಾದ ಫಸ್ಟ್ ಸಾಂಗ್ 'ಯುವ ರಾಜ್‌ಕುಮಾರ್ ಗುಣಗಾನ



ಯುವರಾಜ್‌ಕುಮಾರ್ ಹಬ್ಬಕ್ಕೆ ಕ್ಷಣ ಗಣನೆ ಶುರುವಾಗಿದೆ. ಇನ್ನೇನು ಕೆಲವೇ ದಿನಗಳಲ್ಲಿ ಯುವ ಸಿನಿಮಾದ ಮೊದಲ ಹಾಡು ಹೊರಬರಲಿದೆ. ಅದಕ್ಕಾಗಿ ಸಕಲ ಸಿದ್ಧತೆ ನಡೆದಿದೆ. ಅಣ್ಣಾವ್ರ ಮೂರನೇ ತಲೆಮಾರಿನ ಹೊಸ ಕುಡಿಯ ಮೊದಲ ಹಾಡು ಹೇಗಿರಲಿದೆ? ಅದ್ಯಾವ ರೀತಿ ಕರುನಾಡಿನಲ್ಲಿ ಮೆರವಣಿಗೆ ಹೊರಡಲಿದೆ? ಅದನ್ನು ಬರೆದಿದ್ದು ಯಾರು? ಯಾವ ದಿನ, ಯಾವ ಕ್ಷಣ ಈ ಮಣ್ಣಿನಲ್ಲಿ ದಿಬ್ಬಣ ಹೊರಡಲಿದೆ? ಅದರ ಎಕ್ಸ್‌ಕ್ಲ್ಯೂಸಿವ್ ಮಾಹಿತಿ ಇಲ್ಲಿದೆ.

ಯುವರಾಜ್‌ಕುಮಾರ್ ದೊಡ್ಡಮನೆಯ ಹೊಸ ಕುಡಿ. ಅಣ್ಣಾವ್ರ ಮೊಮ್ಮಗ. ರಾಘಣ್ಣನ ಎರಡನೇ ಮಗ. ಅಪ್ಪು ಚಿಕ್ಕಪ್ಪನ ಅಕ್ಕರೆಯ ಕೂಸು ಈ ಯುವರಾಜ್‌ಕುಮಾರ್. ಅಪ್ಪು ನಮ್ಮನ್ನು ಬಿಟ್ಟು ಹೋದ ಮೇಲೆ ಯಾರು ಆ ಸ್ಥಾನ ತುಂಬುತ್ತಾರೆ? ಹೇಗೆ ನಮ್ಮನ್ನು ರಂಜಿಸುತ್ತಾರೆ? ಇದನ್ನೇ ಎಲ್ಲರೂ ಕೇಳುತ್ತಿದ್ದರು. ಅದಕ್ಕೆ ಉತ್ತರ ಸಿಗುವ ಸಮಯ ಬಂದಿದೆ. ಮಾರ್ಚ್ 29ಕ್ಕೆ ಯುವ ಸಿನಿಮಾ ಕರುನಾಡಿನಲ್ಲಿ ರಣಕೇಕೆ ಹಾಕಲಿದೆ. ಪ್ರತಿ ಮನೆ ಮನ ಇದಕ್ಕಾಗಿ ಜಪ ಮಾಡುತ್ತಿವೆ.

ಈ ಹೊತ್ತಲ್ಲಿ ಇದರ ಮೊದಲ ಹಾಡು ಹಾಜರಾಗಲಿದೆ. ಅದೇ 'ಒಬ್ಬನೇ ಶಿವ ಒಬ್ಬನೇ ಯುವ' ಈ ಸಾಲನ್ನು ಕೇಳಿದಾಗಲೇ ಜನರು ಹುಚ್ಚೆದ್ದು ಕುಣಿಯುತ್ತಿದ್ದಾರೆ. ಹಾಡು ಬಂದ ಮೇಲೆ ಇನ್ನೇನು ದೀಪಾವಳಿಯೋ? ಒಬ್ಬನೇ ಶಿವ ಒಬ್ಬನೇ ಯುವ ಇದು ಮೊದಲ ಸಾಲು. ಇದರ

ಒಬ್ಬನೇ ಶಿವ ಒಬ್ಬನೇ ಯುವ. ಇದರ ನಂತರ ಇನ್ನೇನು ಬರೆದಿದ್ದಾರೆ ಗೀತ ರಚನೆಕಾರ? ಅದ್ಯಾವ ರೀತಿ ಹೊಸ ಹೀರೋಗೆ ಸಾಲನ್ನು ಹೊಸೆದಿದ್ದಾರೆ? ಅಪ್ಪುವನ್ನು ನೆನೆಸಿಕೊಂಡು ಜನರು ಕೇಕೆ ಹಾಕುವಂತೆ ಮಾಡಲಿದ್ದಾರೆ? ಎಲ್ಲವೂ ಕುತೂಹಲಕಾರಿ. ಅದಕ್ಕಾಗಿ ನಾವು ಕಾಯಬೇಕಷ್ಟೇ?

ಯುವರಾಜ್‌ಕುಮಾರ್ ದೇವರ ಮುಂದೆ ತುಪ್ಪದ ದೀಪ ಹಚ್ಚಿ ಕೈ ಮುಗಿದು ನಿಂತಿದ್ದಾರೆ. ಅಪ್ಪು ಇಲ್ಲ. ಅವರು ಬಿಟ್ಟು ಹೋದ ಸಿಂಹಾಸನದಲ್ಲಿ ನೀವೇ ಕೂಡಬೇಕು. ಹೀಗಂತ ಕರುನಾಡಿನ ಮನಸುಗಳು ಬಯಸುತ್ತಿವೆ. ಕೂಗುತ್ತಿವೆ. ಗರ್ಜಿಸುತ್ತಿವೆ. ಅದನ್ನು ನಿಜ ಮಾಡಬೇಕು. ಅದನ್ನು ಸಾಬೀತು ಪಡಿಸಬೇಕು. ಅದಕ್ಕಾಗಿಯೇ ಯುವ ಎದೆ ಉಬ್ಬಿಸಿ ನಿಂತಿದ್ದಾರೆ. ಸೇಮ್ ಟೈಮ್ ವಿನೀತರಾಗಿ ಬೆಳ್ಳಿ ತೆರೆ ಮೇಲೆ ಬರಲು ಮೈ ಕೊಡವಿದ್ದಾರೆ. ಅಪ್ಪು ಅಲ್ಲಿಂದಲೇ ಎರಡೂ ಕೈಗಳಿಂದ ಆಶೀರ್ವಾದ ಮಾಡಿದ್ದಾರೆ. ಸಂತೋಷ್ ಆನಂದ್‌ರಾಮ್ ಮತ್ತು ಹೊಂಬಾಳೆ ಸಂಸ್ಥೆ ಹೆಗಲು ಕೊಟ್ಟಿದೆ. ಇನ್ನೇನು ಬೇಕು? ಮೆಗಾ ಪವರ್‌ಸ್ಟಾರ್ ದರ್ಬಾರ್ ಹಬ್ಬ ಮಾಡಲಿದೆ.

## ಬಲಿಷ್ಠ ಮುಂಬೈ ವಿರುದ್ಧ ಯುಪಿಗೆ 7 ವಿಕೆಟ್‌ಗಳ ಜಯ

# ಕಿರಣ್ ನವಗಿರೆ ಸ್ಫೋಟಕ ಅರ್ಧಶತಕ





ಬ್ಯಾಟಿಂಗ್ ಮತ್ತು ಬೌಲಿಂಗ್‌ನಲ್ಲಿ ಉತ್ತಮ ಪ್ರದರ್ಶನ ತೋರಿದ ಯುಪಿ ವಾರಿಯರ್ಸ್ ಮುಂಬೈ ಇಂಡಿಯನ್ಸ್ ವಿರುದ್ಧ 7 ವಿಕೆಟ್‌ಗಳ ಭರ್ಜರಿ ಜಯ ಸಾಧಿಸಿ ಡಬ್ಲ್ಯೂಪಿಎಲ್ ಟೂರ್ನಿಯಲ್ಲಿ ಶುಭಾರಂಭ ಮಾಡಿದೆ.

ಗೆಲ್ಲಲು 162 ರನ್‌ಗಳ ಗುರಿಯನ್ನು ಪಡೆದ ಯುಪಿ ಇನ್ನೂ 21 ಎಸೆತ ಬಾಕಿ ಇರುವಂತೆಯೇ 3 ವಿಕೆಟ್ ಕಳೆದುಕೊಂಡು 163 ರನ್ ಹೊಡೆಯುವ ಮೂಲಕ ಜಯಗಳಿಸಿತು.

ಆರಂಭಿಕ ಆಟಗಾರ್ತಿ ಕಿರಣ್ ನವಗಿರೆ ಅವರ ಸ್ಫೋಟಕ ಅರ್ಧಶತಕದ ಜೊತೆ ಕೊನೆಯಲ್ಲಿ ಗ್ರೇಸ್ ಹ್ಯಾರಿಸ್ ಮತ್ತು ದೀಪ್ತಿ ಶರ್ಮಾ ಅವರ ಭರ್ಜರಿ ಬ್ಯಾಟಿಂಗ್ ನೆರವಿನಿಂದ ಯುಪಿ ತಂಡ ವಿಜಯದ ನಗೆ ಬೀರಿತು.

ನಾಯಕಿ ಅಲಿಸ್ಸಾ ಹೀಲಿ 33 ರನ್ (29 ಎಸೆತ, 5 ಬೌಂಡರಿ), ಕಿರಣ್ ನವಗಿರೆ 57 ರನ್ (31 ಎಸೆತ, 6 ಬೌಂಡರಿ, 4 ಸಿಕ್ಸರ್), ಗ್ರೇಸ್ ಹ್ಯಾರಿಸ್ ಔಟಾಗದೇ 38 ರನ್ (17 ಎಸೆತ, 6 ಬೌಂಡರಿ, 1 ಸಿಕ್ಸರ್), ದೀಪ್ತಿ ಶರ್ಮಾ ಔಟಾಗದೇ 27 ರನ್(20 ಎಸೆತ, 4 ಬೌಂಡರಿ) ಹೊಡೆದರು.

ಒಂದು ಹಂತದಲ್ಲಿ ಯುಪಿ ಗೆಲುವಿಗೆ 54 ಎಸೆತದಲ್ಲಿ 64 ರನ್ ಬೇಕಿತ್ತು. ಈ ಹಂತದಲ್ಲಿ ಗ್ರೇಸ್ ಹ್ಯಾರಿಸ್ ಮತ್ತು ದೀಪ್ತಿ ಶರ್ಮಾ ಬೌಂಡರಿಗಳ ಸುರಿಮಳೆ ಸಿಡಿಸಿದರು.

ಟಾಸ್ ಸೋತು ಮೊದಲು ಬ್ಯಾಟ್ ಮಾಡಿದ ಮುಂಬೈ ಇಂಡಿಯನ್ಸ್ ಪರ ಹೇಲಿ ಮ್ಯಾಥ್ಯೂಸ್ ಮತ್ತು ಯಾಸ್ತಿಕಾ ಭಾಟಿಯಾ ಮೊದಲ ವಿಕೆಟಿಗೆ 50 ರನ್ ಜೊತೆಯಾಟವಾಡಿದರು.

ಯಾಸ್ತಿಕಾ ಭಾಟಿಯಾ 26 ರನ್ (22 ಎಸೆತ, 3 ಬೌಂಡರಿ, 1 ಸಿಕ್ಸರ್) ಹೊಡೆದು ಔಟಾದರೆ ಹೇಲಿ ಮ್ಯಾಥ್ಯೂಸ್ 55 ರನ್ (47 ಎಸೆತ, 9 ಬೌಂಡರಿ, 1 ಸಿಕ್ಸರ್) ಹೊಡೆದು ಔಟಾದರು. ನ್ಯಾಟ್ ಸ್ಕಿವರ್ -ಬ್ರಂಟ್ 19 ರನ್‌ಗಳಿಸದಾಗ ರನೌಟ್ ಆದರೆ ಅಮೆಲಿಯಾ ಕೆರ್ 23 ರನ್ ಹೊಡೆದು ಔಟಾದರು.

ಮೂರು ಪಂದ್ಯವಾಡಿ ಒಂದು ಪಂದ್ಯ ಗೆದ್ದಿರುವ ಯುಪಿ ಅಂಕ ಪಟ್ಟಿಯಲ್ಲಿ ನಾಲ್ಕನೇ ಸ್ಥಾನ ಪಡೆದಿದೆ. ಸತತ ಎರಡು ಪಂದ್ಯಗಳನ್ನು ಗೆದ್ದಿರುವ ಆರ್‌ಸಿಬಿ ಮೊದಲ ಸ್ಥಾನದಲ್ಲಿದ್ದರೆ ಮೂರು ಪಂದ್ಯವಾಡಿ ಎರಡು ಗೆದ್ದಿರುವ ಮುಂಬೈ ಎರಡನೇ ಸ್ಥಾನದಲ್ಲಿದೆ.

# ರಾಯಚೂರು ಶಾಖೋತ್ಪನ್ನ ವಿದ್ಯುತ್ ಕೇಂದ್ರಗಳಿಗೆ ನೀರಿನ ಕೊರತೆ




**ರಾಯಚೂರು:** ಈ ಬಾರಿ ಬೇಸಿಗೆ ಆರಂಭದಲ್ಲೇ ವಿದ್ಯುತ್‌ನ ತೀವ್ರ ಅಭಾವ ಉಂಟಾಗುವ ಲಕ್ಷಣಗಳು ಗೋಚರಿಸುತ್ತಿದೆ. ರಾಯಚೂರಿನ ಶಾಖೋತ್ಪನ್ನ ವಿದ್ಯುತ್ ಕೇಂದ್ರಗಳಿಗೆ ನೀರಿನ ಕೊರತೆ ಉಂಟಾಗುವ ಸಾಧ್ಯತೆಗಳಿದ್ದು, ಕೇವಲ ಒಂದು ವಾರಕ್ಕಾಗುವಷ್ಟು ನೀರಿನ ಸಂಗ್ರಹ ಮಾತ್ರ ಇದೆ. ಈಗಿರುವ ತಾಂತ್ರಿಕ ಸಮಸ್ಯೆಗಳ ನಡುವೆ ನೀರಿನ ಅಭಾವ ಲೋಡ್ ಶೆಡ್ಡಿಂಗ್ ಭೀತಿ ಹೆಚ್ಚಿಸಿದೆ.

ರಾಜ್ಯದ ಬಹುಪಾಲು ವಿದ್ಯುತ್ ಬೇಡಿಕೆಯನ್ನ ಪೂರೈಸುವ ರಾಯಚೂರಿನ ಶಾಖೋತ್ಪನ್ನ ವಿದ್ಯುತ್ ಕೇಂದ್ರಗಳಾದ RTPS ಹಾಗೂ YTPS ಈಗ ನೀರಿನ ಸಮಸ್ಯೆ ಎದುರಿಸುತ್ತಿವೆ. ಸದಾ ತಾಂತ್ರಿಕ ಸಮಸ್ಯೆಗಳಿಂದಾಗಿ ವಿದ್ಯುತ್ ಘಟಕಗಳು ಆಗಾಗ್ಗೆ ಬಂದ್ ಆಗುತ್ತಲೇ ಇದ್ದು, ಈಗ ನೀರಿನ ಸಮಸ್ಯೆಯೂ ಶುರುವಾಗಿರುವುದರಿಂದ ವಿದ್ಯುತ್ ಉತ್ಪಾದನೆಯಲ್ಲಿ ಗಣನೀಯವಾಗಿ ಇಳಿಕೆಯಾಗುವ ಆತಂಕ ಎದುರಾಗಿದೆ.

ಈ ಬಾರಿ ಮುಂಗಾರು ಮತ್ತು ಹಿಂಗಾರು ಮಳೆ ಕೈಕೊಟ್ಟಿದ್ದರಿಂದಾಗಿ ಕೃಷ್ಣಾ ನದಿ ಸಂಪೂರ್ಣ ಬತ್ತಿಹೋಗಿದೆ. ವಿದ್ಯುತ್ ಕೇಂದ್ರಗಳಿಗಾಗಿಯೇ ನಿರ್ಮಿಸಲಾದ ಗುರ್ಜಾಪುರ ಬ್ರಿಡ್ಜ್ ಕಂ ಬ್ಯಾರೇಜ್ ನಲ್ಲೂ ಡೆಡ್ ಸ್ಟೋರೇಜ್ ಮಾತ್ರಯಿದ್ದು, ವಿದ್ಯುತ್ ಕೇಂದ್ರಗಳಿಗೆ ಕೇವಲ ಒಂದು ವಾರಕ್ಕಾಗುವಷ್ಟು ನೀರಿನ ಸಂಗ್ರಹವಿದೆ. ನೀರಿನ ಸಮಸ್ಯೆ ನೀಗದಿದ್ದರೆ ವಿದ್ಯುತ್ ಪೂರೈಕೆಯಲ್ಲೂ ಅಭಾವ ಎದುರಿಸಬೇಕಾಗುತ್ತದೆ.

1,720 ಮೆಗಾವ್ಯಾಟ್ ಸಾಮರ್ಥ್ಯದ ಆರ್ ಟಿಪಿಎಸ್‌ನಲ್ಲಿ ಈಗಾಗಲೇ 8 ಘಟಕಗಳ ಪೈಕಿ ತಾಂತ್ರಿಕ ಸಮಸ್ಯೆ ಹಾಗೂ ವಾರ್ಷಿಕ ನಿರ್ವಹಣೆ ಹಿನ್ನೆಲೆ 2 ಘಟಕಗಳು ಬಂದ್ ಆಗಿವೆ. ಹಾಗಾಗಿ ಕೇವಲ 844 ಮೆಗಾವ್ಯಾಟ್ ವಿದ್ಯುತ್ ಉತ್ಪಾದನೆಯಾಗುತ್ತಿದೆ. 1,600 ಮೆಗಾವ್ಯಾಟ್ ಸಾಮರ್ಥ್ಯದ ವೈಟಿಪಿಎಸ್‌ನಲ್ಲಿ 1080 ಮೆಗಾವ್ಯಾಟ್ ಉತ್ಪಾದನೆಯಾಗುತ್ತಿದೆ. ನೀರಿನ ಸಮಸ್ಯೆ ಮುಂದುವರಿದರೆ, ಇನ್ನಷ್ಟು ಘಟಕಗಳು ಬಂದ್ ಆಗುವ ಸಾಧ್ಯತೆ ಇದೆ ಎಂದು ಮೂಲಗಳಿಂದ ತಿಳಿದುಬಂದಿದೆ.

ಶಾಖೋತ್ಪನ್ನ ವಿದ್ಯುತ್ ಕೇಂದ್ರದ ಬೇಡಿಕೆಯ ಮೇರೆಗೆ ನಾರಾಯಣಪುರ ಜಲಾಶಯದಿಂದ 6,000 ಕ್ಯೂಸೆಕ್ ನಂತೆ ಎರಡು ದಿನಕಾಲ 1 ಟಿಎಂಸಿ ನೀರನ್ನ ಬಿಡಲು ಅಧಿಕಾರಿಗಳು ಮುಂದಾಗಿದ್ದಾರೆ. ಆದ್ರೆ ನದಿಯಲ್ಲಿ ಸಾಕಷ್ಟು ತಗ್ಗು ಗುಂಡಿಗಳು ಹಾಗೂ ಸುತ್ತ ಮುತ್ತಲಿನ ಪ್ರದೇಶಗಳಲ್ಲಿ ರೈತರು ನೀರು ಬಳಸುತ್ತಿರುವುದರಿಂದ ಬ್ಯಾರೇಜ್‌ಗೆ ನೀರು ತಲುಪುವುದೇ ಅನುಮಾನ ಎನ್ನಲಾಗುತ್ತಿದೆ.

ಮಳೆ ಕೊರತೆಯಿಂದ ಈಗಾಗಲೇ ಜಲವಿದ್ಯುತ್ ಕೇಂದ್ರಗಳ ವಿದ್ಯುತ್ ಉತ್ಪಾದನೆ ಗಣನೀಯ ಕುಸಿತವಾಗಿದೆ. ಶಾಖೋತ್ಪನ್ನ ವಿದ್ಯುತ್ ಕೇಂದ್ರಗಳ ಮೇಲೆ ಹೆಚ್ಚಿನ ಒತ್ತಡ ಬಿದ್ದಿದೆ. ಶಾಖೋತ್ಪನ್ನ ವಿದ್ಯುತ್ ಕೇಂದ್ರಗಳಿಗೆ ತಾಂತ್ರಿಕ ಸಮಸ್ಯೆಯೊಂದಿಗೆ ಮತ್ತು ನೀರಿನ ಸಮಸ್ಯೆಯೂ ಎದುರಾಗುತ್ತಿದ್ದು, ಸರ್ಕಾರ ಇದರತ್ತ ಗಮನ ಹರಿಸಬೇಕಿದೆ ಎಂದು ಸಂಬಂಧಪಟ್ಟ ಅಧಿಕಾರಿಗಳು ಮನವಿ ಮಾಡಿದ್ದಾರೆ.

# ಆರ್‌ಸಿಬಿ ಸ್ಟಾರ್ ಶ್ರೇಯಾಂಕ ಪಾಟೀಲ್‌ಗೆ ಮದುವೆ ಪ್ರಪೋಸಲ್ ಕೊಟ್ಟ ಅಭಿಮಾನಿ





ರಾಯಲ್ ಚಾಲೆಂಜರ್ಸ್ ಬೆಂಗಳೂರು ಹಾಗೂ ಗುಜರಾತ್ ಜೈಂಟ್ಸ್ ನಡುವಿನ ಪಂದ್ಯದ ವೇಳೆ ಆರ್ ಸಿಬಿ ತಂಡದ ಅಭಿಮಾನಿಯೊಬ್ಬರು ಕರ್ನಾಟಕದವರೇ ಆದ ಶ್ರೇಯಾಂಕ ಪಾಟೀಲ್ ಅವರಿಗೆ ಮದುವೆ ಪ್ರಪೋಸಲ್ ಕೊಟ್ಟಿದ್ದಾರೆ.

ಐಪಿಎಲ್ ಆಗಲಿ ಮಹಿಳಾ ಪ್ರೀಮಿಯರ್ ಲೀಗ್ ಆಗಲಿ ಪ್ರತಿ ಮ್ಯಾಚ್ ನಡೆದಾಗಲೂ ಆರ್‌ಸಿಬಿ ಅಭಿಮಾನಿಗಳು ಸುದ್ದಿಯಲ್ಲಿರುತ್ತಾರೆ. ಢಬ್ಲ್ಯೂಪಿಎಲ್‌... ಫಾಕಐ ಮೊದಲ ಆವೃತ್ತಿಯಲ್ಲಿ ಸತತ 5 ಪಂದ್ಯಗಳಲ್ಲಿ ಹೀನಾಯವಾಗಿ ಸೋತು ಲೀಗ್ ಸುತ್ತಿನಲ್ಲೇ ಹೊರಬಿದ್ದಿದ್ದ ಆರ್‌ಸಿಬಿ, 2ನೇ ಆವೃತ್ತಿಯ ಆರಂಭಿಕ ಎರಡು ಪಂದ್ಯಗಳಲ್ಲೂ ಭರ್ಜರಿ ಗೆಲುವು ಸಾಧಿಸಿದೆ. ಆದ್ರೆ ಬುಧವಾರ ಪಂದ್ಯದ ವೇಳೆ ಆರ್‌ಸಿಬಿ ಸ್ಟಾರ್ ಶ್ರೇಯಾಂಕ ಪಾಟೀಲ್ ಅವರಿಗೆ ಅಭಿಮಾನಿಯೊಬ್ಬರು ಸ್ಟೇಡಿಯಂನಲ್ಲೇ ನಿಂತು ಮದುವೆ ಪ್ರಪೋಸಲ್ ನೀಡಿದ್ದಾರೆ. ಅಭಿಮಾನಿ ಪೋಸ್ಟರ್ ಹಿಡಿದಿದ್ದ ಫೋಟೋ ಇದೀಗ ಜಾಲತಾಣದಲ್ಲಿ ಭಾರೀ ಸದ್ದು ಮಾಡುತ್ತಿದೆ.

ಪಂದ್ಯದ ವೇಳೆ ಆರ್‌ಸಿಬಿ ಅಭಿಮಾನಿ ?ನೀವು ನನ್ನನ್ನು ಮದುವೆಯಾಗುತ್ತೀರಾ ಶ್ರೇಯಾಂಕ ಪಾಟೀಲ್?, ನಾನು ಉತ್ತರ ಕರ್ನಾಟಕ? ಎಂದು ಬರೆದುಕೊಂಡಿದ್ದಾರೆ. ಜೊತೆಗೆ ಲವ್ ಸಿಂಬಲ್ ಅನ್ನು ಪೋಸ್ಟರ್‌ನಲ್ಲಿ ಬಿಡಿಸಿದ್ದಾರೆ. ಅಭಿಮಾನಿಯ ಈ ಫೋಟೋ ಜಾಲತಾಣದಲ್ಲಿ ಸದ್ದು ಮಾಡುತ್ತಿದ್ದಂತೆ ಮಿಶ್ರ ಪ್ರತಿಕ್ರಿಯೆ ವ್ಯಕ್ತವಾಗಿದೆ. ಈ ಪೋಸ್ಟ್ ಬಗ್ಗೆ ಶ್ರೇಯಾಂಕ ಪಾಟೀಲ್ ಯಾವುದೇ ಪ್ರತಿಕ್ರಿಯೆ ನೀಡಿಲ್ಲ.

ಅಂಕಪಟ್ಟಿಯಲ್ಲಿ ಆರ್‌ಸಿಬಿ ಟಾಪರ್: ಕಳೆದ ವರ್ಷ ಫಾಕಐನಲ್ಲಿ ಲೀಗ್ ಸುತ್ತಿನಲ್ಲೇ ಹೊರಬಿದಿದ್ದ ಆರ್‌ಸಿಬಿ ಈ ಬಾರಿ ಸತತ ಗೆಲುವಿನೊಂದಿಗೆ ಅಂಕಪಟ್ಟಿಯಲ್ಲಿ ಮೊದಲ ಸ್ಥಾನದಲ್ಲಿ ಮುನ್ನುಗ್ಗುತ್ತಿದೆ. ಮೊದಲ ಎರಡು ಪಂದ್ಯಗಳಲ್ಲಿ ಗೆದ್ದು 4 ಅಂಕ ಮತ್ತು +1.665 ರನ್‌ರೇಟ್‌ನೊಂದಿಗೆ ಅಗ್ರಸ್ಥಾನಕ್ಕೇರಿದೆ. 2 ಪಂದ್ಯಗಳಲ್ಲಿ ಗೆಲುವು ಸಾಧಿಸಿರುವ ಮುಂಬೈ ಇಂಡಿಯನ್ಸ್ ತಂಡ 4 ಅಂಕ ಪಡೆದಿದ್ದರೂ +0.488 ರನ್‌ರೇಟ್‌ನೊಂದಿಗೆ 2ನೇ ಸ್ಥಾನದಲ್ಲಿದೆ.

## ನಾವು ಸೋಮಶೇಖರ್‌ಗೆ ಏನು ಮಾಡಿದ್ದೆವು?

# ಬಿಜೆಪಿ ಶಾಸಕ ಸುರೇಶ್ ಕುಮಾರ್ ಬಹಿರಂಗ ಪತ್ರ





**ಬೆಂಗಳೂರು:** ರಾಜ್ಯಸಭಾ ಚುನಾವಣೆಯಲ್ಲಿ ಯಶವಂತಪುರ ಶಾಸಕ ಎಸ್.ಟಿ. ಸೋಮಶೇಖರ್ ಅಡ್ಡ ಮತದಾನ ಮಾಡಿದ ಹಿನ್ನೆಲೆಯಲ್ಲಿ ಅವರಿಗೆ ರಾಜಾಜಿನಗರ ಬಿಜೆಪಿ ಶಾಸಕ ಸುರೇಶ್ ಕುಮಾರ್ ಬಹಿರಂಗ ಪತ್ರ ಬರೆದಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಬಹಿರಂಗ ಪತ್ರ ಬರೆದಿರುವ ಸುರೇಶ್ ಕುಮಾರ್, ಸೋಮಶೇಖರ್ ನಿಲುವಿನ ಬಗ್ಗೆ ಪ್ರಶ್ನೆ ಮಾಡಿದ್ದಾರೆ. ಜತೆಗೆ ಬಿಜೆಪಿ ಕಾರ್ಯಕರ್ತರ ನೋವಿನ ಬಗ್ಗೆಯೂ ಉಲ್ಲೇಖಿಸಿದ್ದಾರೆ.

ಸುರೇಶ್ ಕುಮಾರ್ ಪತ್ರದಲ್ಲೇನಿದೆ?

'ತಾವು ಬಹಳ ದಿನದ ಕಣ್ಣು ಮುಚ್ಚಾಟದ ನಂತರ ಈಗ ರಾಜ್ಯ ಸಭೆಯ ಚುನಾವಣೆಯಲ್ಲಿ ನಮ್ಮ ಪಕ್ಷದ ಅಭ್ಯರ್ಥಿಯ ವಿರುದ್ಧ ಮತ ಚಲಾಯಿಸಿ ಆತ್ಮಸಾಕ್ಷಿಯ ಹೆಸರಿನಲ್ಲಿ ಆಡಳಿತ ಪಕ್ಷದ ಅಭ್ಯರ್ಥಿಗೆ ತಮ್ಮ ಮತವನ್ನು ನೀಡಿ ಕೃತಾರ್ಥರಾಗಿದ್ದೀರಿ. (ಆತ್ಮಸಾಕ್ಷಿ ಎಂಬುದು ಅತ್ಯಂತ ಅನುಕೂಲಸಿಂಧು ಪದ ಎಂಬುದು ನಿಮಗೂ ಗೊತ್ತು). ಕೆಲವು ದಿವಸಗಳ ಹಿಂದೆ ಪದವೀಧರ ಶಿಕ್ಷಕರ ಕ್ಷೇತ್ರದ ನಮ್ಮ ಎನ್‌ಡಿಎ ಅಭ್ಯರ್ಥಿಯ ವಿರುದ್ಧ ಪ್ರಚಾರ ಮಾಡಿದ್ದು ಸಾಲದೆ ಆಡಳಿತ ಪಕ್ಷದ ಅಭ್ಯರ್ಥಿಗೆ ಬೆಂಬಲ ಸೂಚಿಸಲು ಅನೇಕ ಕಾರ್ಯಕ್ರಮಗಳನ್ನು ಮಾಡಿದ್ದೀರಿ. ನನ್ನ ಪಕ್ಷದ ಸಾಮಾನ್ಯ ಕಾರ್ಯಕರ್ತನಿಗೆ ಒಂದೇ ವೇದನೆ. 'ನಾವು ಸೋಮಶೇಖರ್‌ರಿಗೆ ಏನು ಮಾಡಿದ್ದೆವು? ನಮ್ಮ ಪ್ರೀತಿ ಗೌರವದಲ್ಲಿ ಅವರಿಗೇನು ಕೊರತೆ ಇತ್ತು? ಕಾಂಗ್ರೆಸ್ ಕಾರ್ಯಕರ್ತರು ನಮಗಿಂತ ಹೆಚ್ಚು ಏನು ಕೊಡಬಲ್ಲರು?' ನಮ್ಮ ಪರಿವಾರದ ಪ್ರಮುಖರಿಗೂ ಅದೇ ಬೇಸರ. ನಾವು ಇಷ್ಟು ಚೆನ್ನಾಗಿ ನೋಡಿಕೊಂಡ, ನಂಬಿದ್ದ ಸೋಮಶೇಖರ್ ಹೀಗ್ಯಾಕೆ ಆದರು? ಎಂಬುದು. ದೇವರು ನಿಮಗೆ ಒಳಿತು ಮಾಡಲಿ' ಎಂದು ಸುರೇಶ್ ಕುಮಾರ್ ಪತ್ರದಲ್ಲಿ ಉಲ್ಲೇಖಿಸಲಾಗಿದೆ.

ಮಂಗಳವಾರ ನಡೆದ ರಾಜ್ಯಸಭಾ ಚುನಾವಣೆಯಲ್ಲಿ ಎಸ್‌ಟಿ ಸೋಮಶೇಖರ್ ಕಾಂಗ್ರೆಸ್ ಅಭ್ಯರ್ಥಿ ಪರ ಅಡ್ಡ ಮತದಾನ ಮಾಡಿದ್ದರು. ಆ ಮೂಲಕ ಬಿಜೆಪಿ ಜೆಡಿಎಸ್ ಮೈತ್ರಿಗೆ ಆಘಾತ ನೀಡಿದ್ದರು. ಸೋಮಶೇಖರ್ ಅವರು ಕಳೆದ ಹಲವು ದಿನಗಳಿಂದ ಬಿಜೆಪಿ ನಾಯಕರಿಂದ ಅಂತರ ಕಾಯ್ದುಕೊಳ್ಳುತ್ತಿದ್ದಾರೆ. ಒಂದು ಹಂತದಲ್ಲಿ, ಅವರು ಕಾಂಗ್ರೆಸ್ ಸೇರ್ಪಡೆಯಾಗುತ್ತಾರೆ ಎಂಬ ಬಗ್ಗೆ ಬಲವಾದ ವದಂತಿ ಹಬ್ಬಿತ್ತು. ಬಿಜೆಪಿ ನಾಯಕರ ಕೆಲವು ನಡೆಗಳ ಬಗ್ಗೆ ಸೋಮಶೇಖರ್ ಬಹಿರಂಗವಾಗಿಯೇ ಟೀಕೆ ಮಾಡಿದ್ದರು.

ಅಂತಿಮವಾಗಿ ರಾಜ್ಯಸಭೆ ಚುನಾವಣೆಯಲ್ಲಿ ಅಡ್ಡ ಮತದಾನ ಮಾಡುವ ಮೂಲಕ ಬಿಜೆಪಿ ವಿರುದ್ಧದ ಅಸಮಾಧಾನವನ್ನು ಹೊರಹಾಕಿದ್ದರು. ಬಿಜೆಪಿಯು ಇದೀಗ ಅವರ ವಿರುದ್ಧ ಶಿಸ್ತು ಕ್ರಮಕ್ಕೆ ಮುಂದಾಗಿದೆ.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com